## ಡಾ|| ರಾಜ್‌ಕುಮಾರ್ ಅಕಾಡೆಮಿ ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು



## ❖ ಭಾರತಕ್ಕೆ ಏಷ್ಯಾ ಕಪ್ ಗರಿ ವಿಶ್ವಕಪ್ ಟೂರ್ನಿಗೆ ರಹದಾರಿ

**ಸಂದರ್ಭ:** ರಾಜಗೀರ್, ಬಿಹಾರ (ಪಿಟಿಐ): ಭಾರತ ಪುರುಷರ ಹಾಕಿ ತಂಡವು ಭಾನುವಾರ ಇಲ್ಲಿ ನಡೆದ ಏಷ್ಯಾ ಕಪ್ ಟೂರ್ನಿಯ ಫೈನಲ್‌ನಲ್ಲಿ ದಕ್ಷಿಣ ಕೊರಿಯಾ ಎದುರು ಜಯಿಸಿತು. ಇದರೊಂದಿಗೆ ಮುಂದಿನ ವರ್ಷ ನಡೆಯಲಿರುವ ಟೂರ್ನಿಗೆ ರಹದಾರಿ ಗಿಟ್ಟಿಸಿತು.

- ದಿಲ್‌ಪ್ರೀತ್ ಸಿಂಗ್ ಅವರು ಹೊಡೆದ ಎರಡು ಗೋಲುಗಳ ಬಲದಿಂದ ಭಾರತ ಹಾಕಿ ತಂಡವು ಏಷ್ಯಾ ಕಪ್ ಗೆದ್ದು ಕೊಂಡಿತು. ಇದರೊಂದಿಗೆ ಮುಂದಿನ ವರ್ಷ ನಡೆಯಲಿರುವ ವಿಶ್ವಕಪ್ ಟೂರ್ನಿಗೆ ಅರ್ಹತೆ ಗಳಿಸಿಕೊಂಡಿತು.
- ಇಲ್ಲಿ ನಡೆದ ಫೈನಲ್‌ನಲ್ಲಿ ಭಾರತ ತಂಡವು 4–1ರಿಂದ ಹಾಲಿ ಚಾಂಪಿಯನ್ ದಕ್ಷಿಣ ಕೊರಿಯಾದ ವಿರುದ್ಧ ಗೆದ್ದಿತು. ಇದು ಭಾರತಕ್ಕೆ ನಾಲ್ಕನೇ ಏಷ್ಯನ್ ಟ್ರೋಫಿ ಆಗಿದೆ. ಈ ಟೂರ್ನಿಯ ಇತಿಹಾಸದಲ್ಲಿ ಅತ್ಯಧಿಕ ಟ್ರೋಫಿಗಳನ್ನು ಜಯಿಸಿದ ಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದೆ. ಐದು ಬಾರಿ ಗೆದ್ದಿರುವ ದಕ್ಷಿಣ ಕೊರಿಯಾ ಮೊದಲ ಸ್ಥಾನದಲ್ಲಿದೆ. ಭಾರತ ತಂಡವು 2003 (ಕೌಲಾಲಂಪುರ), 2007 (ಚೆನ್ನೈ) ಮತ್ತು 2017ರಲ್ಲಿ ಢಾಕಾದಲ್ಲಿ ಏಷ್ಯಾ ಕಪ್ ಜಯಿಸಿತ್ತು.
- ಮುಂದಿನ ವರ್ಷದ ಆಗಸ್ಟ್ 14ರಿಂದ 30ರವರೆಗೆ ಬೆಲ್ಜಿಯಂ ಮತ್ತು ನೆದರ್ಲೆಂಡ್ಸ್ ಜಂಟಿ ಆತಿಥ್ಯದಲ್ಲಿ ನಡೆಯಲಿರುವ ಎಫ್‌ಐಎಚ್ ವಿಶ್ವಕಪ್ ಟೂರ್ನಿಗೆ ಭಾರತವು ನೇರಪ್ರವೇಶ ಪಡೆಯಿತು.
- ಭಾರತ ತಂಡದ ದಿಲ್‌ಪ್ರೀತ್ ಅವರು 28ನೇ ನಿಮಿಷ ಮತ್ತು 45ನೇ ನಿಮಿಷದಲ್ಲಿ ಗೋಲು ಗಳಿಸಿದರು. ಸುಖಜೀತ್ ಸಿಂಗ್ ಅವರು ಮೊದಲ ನಿಮಿಷದಲ್ಲಿಯೇ ಗೋಲು ಹೊಡೆದು ತಂಡಕ್ಕೆ ಉತ್ತಮ ಆರಂಭ ನೀಡಿದ್ದರು. ಅಮಿತ್ ರೋಹಿದಾಸ್ (50ನೇ ನಿ) ಒಂದು ಗೋಲು ಹೊಡೆದು ಮುನ್ನಡೆ ಒದಗಿಸಿದರು.
- ಕೊರಿಯಾ ತಂಡದ ಏಕೈಕ ಗೋಲನ್ನು ಡಯಾನ್ ಸನ್ (51ನೇ ನಿ) ದಾಖಲಿಸಿದರು.

## ❖ ಜೊಮಾಟೊ, ಸ್ವಿಗ್ಗಿ ಪ್ಲಾಟ್‌ಫಾರ್ಮ್ ಶುಲ್ಕ ಏರಿಕೆ

**ಸಂದರ್ಭ:** ಊಟ, ತಿಂಡಿಯನ್ನು ಹೋಟೆಲ್‌ಗಳಿಂದ ಗ್ರಾಹಕರ ಮನೆ ಬಾಗಿಲಿಗೆ ತಲುಪಿಸುವ ಜೊಮಾಟೊ, ಸ್ವಿಗ್ಗಿ ಮತ್ತು ಮ್ಯಾಜಿಕ್‌ಪಿನ್ ಪ್ರತಿ ಆರ್ಡರ್ ಮೇಲೆ ವಿಧಿಸುವ ಶುಲ್ಕವನ್ನು (ಪ್ಲಾಟ್‌ಫಾರ್ಮ್ ಫೀ) ಏರಿಕೆ ಮಾಡಿವೆ. ಹಬ್ಬಗಳ ಋತು ಆರಂಭವಾಗಿರುವ ಈ ಹೊತ್ತಿನಲ್ಲಿ ಕಂಪನಿಗಳು ದರ ಹೆಚ್ಚಳ ಮಾಡಿವೆ.

- ಅಲ್ಲದೆ, ಈ ಕಂಪನಿಗಳು ಊಟ, ತಿಂಡಿಯನ್ನು ಮನೆಬಾಗಿಲಿಗೆ ತಲುಪಿಸುವ ಸೇವೆಗೆ ಜಿಎಸ್‌ಟಿ ವ್ಯವಸ್ಥೆಯ ಅಡಿಯಲ್ಲಿ ಶೇಕಡ 18ರಷ್ಟು ತೆರಿಗೆ ಸೆಪ್ಟೆಂಬರ್ 22ರಿಂದ ಜಾರಿ ಬರಲಿರುವ ಕಾರಣಕ್ಕೆ, ಅದರ ಹೊರೆಯೂ ಗ್ರಾಹಕರಿಗೆ ವರ್ಗಾವಣೆ ಆಗುವ ನಿರೀಕ್ಷೆ ಇದೆ.
- ಸ್ವಿಗ್ಗಿ ಕಂಪನಿಯು ತನ್ನ ಪ್ಲಾಟ್‌ಫಾರ್ಮ್ ಶುಲ್ಕವನ್ನು ಆಯ್ದ ನಗರಗಳಲ್ಲಿ ಪ್ರತಿ ಆರ್ಡರ್‌ಗೆ ₹15ಕ್ಕೆ ಹೆಚ್ಚಿಸಿದೆ. ಇದರಲ್ಲಿ ಜಿಎಸ್‌ಟಿ ಸೇರಿದೆ. ಜೊಮಾಟೊ ಜಿಎಸ್‌ಟಿ ಹೊರತುಪಡಿಸಿ ₹12.50ಕ್ಕೆ ಹೆಚ್ಚಿಸಿದೆ. ಮ್ಯಾಜಿಕ್‌ಪಿನ್ ₹10ಕ್ಕೆ ಏರಿಕೆ ಮಾಡಿದೆ.
- ಒಂದು ಅಂದಾಜಿನ ಪ್ರಕಾರ, ಶೇ 18ರಷ್ಟು ಜಿಎಸ್‌ಟಿ ಪರಿಣಾಮವಾಗಿ ಜೊಮಾಟೊ ಮತ್ತು ಸ್ವಿಗ್ಗಿ ಗ್ರಾಹಕರು ಕ್ರಮವಾಗಿ ₹2 ಮತ್ತು ₹2.60 ಹೆಚ್ಚುವರಿ ಶುಲ್ಕವನ್ನು ಪ್ರತಿ ಆರ್ಡರ್‌ಗೆ ನೀಡಬೇಕಾಗುತ್ತದೆ. ದರ ಹೆಚ್ಚಳದ ಬಗ್ಗೆ ಸ್ವಿಗ್ಗಿ ಮತ್ತು ಜೊಮಾಟೊ ಪ್ರತಿಕ್ರಿಯೆ ನೀಡಿಲ್ಲ.

Dr. Rajkumar IAS/KAS Academy

- 'ಆಹಾರ ವಸ್ತುಗಳನ್ನು ಗ್ರಾಹಕರಿಗೆ ತಲುಪಿಸುವ ಸೇವೆಗೆ ನಾವು ಈಗಾಗಲೇ ಶೇ 18ರಷ್ಟು ಜಿಎಸ್‌ಟಿ ಪಾವತಿಸುತ್ತಿದ್ದೇವೆ. ಈಗಿನ ಜಿಎಸ್‌ಟಿ ಪರಿಷ್ಕರಣೆ ನಮ್ಮ ಮೇಲೆ ಪರಿಣಾಮ ಬೀರದು. ಗ್ರಾಹಕರ ಮೇಲೂ ಜಿಎಸ್‌ಟಿ ಪರಿಷ್ಕರಣೆಯು ಪರಿಣಾಮ ಬೀರದು. ನಮ್ಮ ಪ್ಲಾಟ್‌ಫಾರ್ಮ್ ಶುಲ್ಕವು ₹10 ಇದೆ. ಇದು ಇತರೆ ಪ್ರಮುಖ ಕಂಪನಿಗಳ ಶುಲ್ಕಕ್ಕಿಂತ ಕಡಿಮೆ' ಎಂದು ಮ್ಯಾಜಿಕ್‌ಪಿನ್ ಕಂಪನಿಯ ವಕ್ತಾರರು ತಿಳಿಸಿದ್ದಾರೆ.

## ❖ 'ರಾಜ್ಯದ ಎರಡನೇ ಅಧಿಕೃತ ಭಾಷೆ ತುಳು: ಸಂಪುಟದಲ್ಲಿ ಚರ್ಚೆ'

**ಸಂದರ್ಭ:**'ರಾಜ್ಯದ ಎರಡನೇ ಅಧಿಕೃತ ಭಾಷೆ ತುಳು ಎಂದು ಘೋಷಿಸಬೇಕು ಎಂಬ ಬೇಡಿಕೆಯ ಬಗ್ಗೆ ಸಂಪುಟ ಸಭೆಯಲ್ಲಿ ಚರ್ಚೆ ಮಾಡಲಾಗುವುದು' ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದರು.

- ಇಲ್ಲಿ ನಡೆದ ಅಷ್ಟೆಮಿದ ಐಸಿರಿ ತುಳುವ ತರ್ಲ್ ಸಾಸಿರಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.
- 'ಇತ್ತೀಚೆಗೆ ಕುಂದಾಪುರದ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದೆ. ಆ ಕಾರ್ಯಕ್ರಮ, ಈ ಕಾರ್ಯಕ್ರಮದಲ್ಲಿ ಸೇರಿರುವ ಜನ ನೋಡಿದರೆ ಮುಂದೆ ನೀವೆಲ್ಲರೂ ನಮ್ಮನ್ನು ಬೆಂಗಳೂರಿನಿಂದ ಖಾಲಿ ಮಾಡಿಸುತ್ತೀರೇನೋ ಎಂದು ಭಯವಾಗುತ್ತಿದೆ. ನಿಮ್ಮ ಈ ಶಕ್ತಿ, ಉತ್ಸಾಹ ನೋಡಿ ನನಗೆ ಈ ಅನುಮಾನ ಕಾಡುತ್ತಿದೆ' ಎಂದು ಹಾಸ್ಯ ಚಟಾಕಿ ಹಾರಿಸಿದರು.
- 'ಕರಾವಳಿ ಜನ ಇಡೀ ದೇಶಕ್ಕೆ ಕರ್ನಾಟಕದ ಮೂಲಕ ಸಂಸ್ಕೃತಿ ಹಾಗೂ ಶಿಕ್ಷಣ, ಧಾರ್ಮಿಕ ಶಕ್ತಿ, ಬ್ಯಾಂಕಿಂಗ್ ವ್ಯವಸ್ಥೆ ಕೊಟ್ಟಿದ್ದಾರೆ. ಆರೋಗ್ಯ ಕ್ಷೇತ್ರ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಮುಂದೆ ಇದ್ದೀರಿ. ಕರಾವಳಿ ಭಾಗ, ದಕ್ಷಿಣ ಕನ್ನಡದ ಜನ ವಿದ್ಯಾವಂತರು, ಬುದ್ಧಿವಂತರು, ಪ್ರಜ್ಞಾವಂತರು. ನಿಮ್ಮ ಜೊತೆ ನಾನು ಇದ್ದೇನೆ ಎಂದು ಹೇಳಲು ಇಲ್ಲಿಗೆ ಬಂದಿದ್ದೇನೆ. ಡಿ.ಕೆ. ಶಿವಕುಮಾರ್ ನಿಮ್ಮವ ಎಂದು ಭಾವಿಸಿ. ನಾನು ನಿಮ್ಮ ಪರವಾಗಿದ್ದೇನೆ. ನೀವು ನನಗೆ ಬೆಂಬಲವಾಗಿರಿ. ನಾನು ನಿಮ್ಮ ಆಶೀರ್ವಾದವನ್ನಷ್ಟೇ ಕೇಳುತ್ತಿದ್ದೇನೆ' ಎಂದರು.
- 'ಮಂಗಳೂರು, ಉಡುಪಿ ಸೇರಿದಂತೆ ಕರಾವಳಿ ಭಾಗದ ಜನರು ಉದ್ಯೋಗಕ್ಕಾಗಿ ವಲಸೆ ಹೋಗದಂತೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ರೂಪಿಸಲು ಆ ಭಾಗದ ಶಾಸಕರು, ವಿಧಾನಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್ ಅವರ ಜೊತೆ ನಾನು ಚರ್ಚೆ ಮಾಡಿದ್ದೇನೆ' ಎಂದು ತಿಳಿಸಿದರು.

Dr. Rajkumar IAS/KAS Academy




# ಪ್ರೌಢ ಶಿಕ್ಷಣ: ರಾಜ್ಯದಲ್ಲಿ ಶಾಲೆ ತೊರೆಯುತ್ತಿರುವವರು ಹೆಚ್ಚು

| ರಾಜ್ಯದ ಶಾಲೆಗಳಲ್ಲಿ ಮೂಲಸೌಕರ್ಯ | | |
|---|---|---|
| 74,859 | ಒಟ್ಟು ಶಾಲೆಗಳು | |
| 73,669 | ಗ್ರಂಥಾಲಯ ಇರುವ ಶಾಲೆಗಳು | |
| 64,183 | ಆಟದ ಮೈದಾನ ಹೊಂದಿರುವ ಶಾಲೆಗಳು | |
| 74,798 | ಕುಡಿಯುವ ನೀರಿನ ಸೌಲಭ್ಯ ಇರುವ ಶಾಲೆಗಳು | |
| 73,729 | ಬಾಲಕಿಯರು ಬಳಸಬಹುದಾದ ಶೌಚಾಲಯಗಳಿರುವ ಶಾಲೆಗಳು | |
| 70,504 | ಬಾಲಕರ ಬಳಕೆಗೆ ಯೋಗ್ಯವಾಗಿರುವ ಶೌಚಾಲಯ ಇರುವ ಶಾಲೆಗಳು | |
| 74,142 | ವಿದ್ಯುತ್ ಸಂಪರ್ಕ ಹೊಂದಿರುವ ಶಾಲೆಗಳು | |

ಪ್ರಜಾವಾಣಿ ವಾರ್ತೆ

ರಾಷ್ಟ್ರೀಯ ಮಟ್ಟದಲ್ಲಿ ಶಾಲೆಗಳ ಮಾಹಿತಿಯನ್ನು ಸಂಪೂರ್ಣವಾಗಿ ಬದಲಿಸಿ, ಅದಕ್ಕೆ ವ್ಯವಸ್ಥಿತ ರೂಪ ನೀಡುವ ಪ್ರಯತ್ನವೇ ಏಕೀಕೃತ ಜಿಲ್ಲಾವಾರು ಶೈಕ್ಷಣಿಕ ಮಾಹಿತಿ ವ್ಯವಸ್ಥೆ (ಯುಡಿಐಎಸ್‌ಇ ಪ್ಲಸ್). 2022-23ರಲ್ಲಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ಜಾರಿ ಮಾಡಿದ ನಂತರ ಇದಕ್ಕೆ ಮತ್ತಷ್ಟು ಬದಲಾವಣೆಗಳನ್ನು ಮಾಡಲಾಗಿದೆ. ಈ ವ್ಯವಸ್ಥೆಯ ಮೂಲಕ ದೇಶದಲ್ಲಿ ಶಾಲೆ ತೊರೆಯುವ ಮಕ್ಕಳ ಸಂಖ್ಯೆಯನ್ನು ಕೂಡ ಪತ್ತೆ ಹಚ್ಚಲಾಗುತ್ತಿದೆ.

ಜಗತ್ತಿನಲ್ಲಿ ಅತಿ ಹೆಚ್ಚು ಶಾಲೆಗಳನ್ನು ಹೊಂದಿರುವ ರಾಷ್ಟ್ರಗಳಲ್ಲಿ ಒಂದಾಗಿರುವ ಭಾರತದಲ್ಲಿ ಒಟ್ಟು 14.71 ಲಕ್ಷ ಶಾಲೆಗಳಿದ್ದು, 1.01 ಕೋಟಿಗೂ ಅಧಿಕ ಶಿಕ್ಷಕರು, 24.69 ಕೋಟಿ ವಿದ್ಯಾರ್ಥಿಗಳು (ಪ್ರಾಥಮಿಕ, ಮಾಧ್ಯಮಿಕ, ಪ್ರೌಢಶಿಕ್ಷಣ ಮತ್ತು ಪದವಿಪೂರ್ವ ಹಂತಗಳಲ್ಲಿ) ಇದ್ದಾರೆ.

2024-25ರ ಯುಡಿಐಎಸ್‌ಇ ಪ್ಲಸ್ ವರದಿ ಬಿಡುಗಡೆಯಾಗಿದ್ದು, ಅದರಲ್ಲಿ ದೇಶದ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿ ವಿವಿಧ ಹಂತಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮತ್ತು ಶಾಲೆ ತೊರೆದ ಮಕ್ಕಳ ಸಂಖ್ಯೆ ಹಾಗೂ ಪ್ರಮಾಣವನ್ನು ಉಲ್ಲೇಖಿಸಲಾಗಿದೆ. ಕರ್ನಾಟಕದಲ್ಲಿ ಪ್ರಾಥಮಿಕ ಹಂತದಲ್ಲಿ (1ರಿಂದ 5ನೇ ತರಗತಿ) ಈ ಪ್ರಮಾಣ ಶೂನ್ಯ; ಮಾಧ್ಯಮಿಕ ಹಂತದಲ್ಲಿ (6ರಿಂದ 8ನೇ ತರಗತಿ) ಶೇ 2.1ರಷ್ಟಿದೆ. ಆದರೆ, ಪ್ರೌಢಶಿಕ್ಷಣದ 9 ಮತ್ತು 10ನೇ ತರಗತಿಗಳಲ್ಲಿ ಶಾಲೆ ತೊರೆದ ಮಕ್ಕಳ ಸಂಖ್ಯೆಯು ರಾಜ್ಯದಲ್ಲಿ ಜಾಸ್ತಿ ಇದೆ (ಶೇ 18.3); ಅರುಣಾಚಲ ಪ್ರದೇಶದಲ್ಲಿಯೂ ಇಷ್ಟೇ ಪ್ರಮಾಣದ ಮಕ್ಕಳು ಶಾಲೆ ತೊರೆದಿದ್ದಾರೆ. ಈ ಹಂತದಲ್ಲಿ ಶಾಲೆ ತೊರೆಯುವವರ ಪ್ರಮಾಣವು ದೇಶದಲ್ಲಿಯೇ ಪಶ್ಚಿಮ ಬಂಗಾಳದಲ್ಲಿ ಅತಿ ಹೆಚ್ಚಾಗಿದೆ (20).

> ಕರ್ನಾಟಕದಲ್ಲಿ ಪ್ರೌಢಶಿಕ್ಷಣದ ಹಂತದಲ್ಲಿ ಶಾಲೆ ತೊರೆಯುವ ಮಕ್ಕಳ ಪೈಕಿ ಬಾಲಕರ ಪ್ರಮಾಣ ಶೇ 21.9ರಷ್ಟಿದ್ದರೆ, ಬಾಲಕಿಯರ ಪ್ರಮಾಣ ಶೇ 14.6ರಷ್ಟಿದೆ

ರಾಷ್ಟ್ರೀಯ ಮಟ್ಟದಲ್ಲಿ ಈ ಪ್ರಮಾಣ ಶೇ 11.5ರಷ್ಟಿದೆ. ದಕ್ಷಿಣದ ರಾಜ್ಯಗಳ ಪೈಕಿ ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ಶಾಲೆ ತೊರೆಯುವವರ ಸಂಖ್ಯೆ ಹೆಚ್ಚಾಗಿದ್ದರೆ, ಕೇರಳ ಮತ್ತು ತಮಿಳುನಾಡಿನಲ್ಲಿ ಅಂಥ ಮಕ್ಕಳ ಸಂಖ್ಯೆ ಕಡಿಮೆ ಇದೆ.


ಇಷ್ಟಾದರೂ ಕಳೆದ ವರ್ಷಕ್ಕೆ ಹೋಲಿಸಿದರೆ, ರಾಜ್ಯದಲ್ಲಿ ಶಾಲೆ ತೊರೆಯುವವರ ಪ್ರಮಾಣದಲ್ಲಿ ಅಲ್ಪ ಮಟ್ಟದ ಇಳಿಕೆಯಾಗಿದೆ. 2023-24ನೇ ಸಾಲಿನ ಯುಡಿಐಎಸ್‌ಇ ಪ್ಲಸ್ ವರದಿಯಲ್ಲಿ ಪ್ರೌಢಶಿಕ್ಷಣ ಹಂತದಲ್ಲಿ ಶಾಲೆ ತೊರೆಯುವ ಮಕ್ಕಳ ಪ್ರಮಾಣ ರಾಷ್ಟ್ರೀಯ ಮಟ್ಟದಲ್ಲಿ ಶೇ 14.1ರಷ್ಟು ಇದ್ದರೆ, ರಾಜ್ಯದಲ್ಲಿ ಶೇ 22.1ರಷ್ಟಿತ್ತು. ಬಿಹಾರದಲ್ಲಿ ಅತಿ ಹೆಚ್ಚು (ಶೇ 25.6) ಇದ್ದರೆ, ನಂತರದ ಸ್ಥಾನದಲ್ಲಿದ್ದ ಅಸ್ಸಾಂನಲ್ಲಿ ಶೇ 25.1 ಮತ್ತು ಅರುಣಾಚಲ ಪ್ರದೇಶದಲ್ಲಿ ಶೇ 19.3ರಷ್ಟು ಇತ್ತು.


2030ರ ವೇಳೆಗೆ ಎಲ್ಲ ಹಂತಗಳಲ್ಲಿಯೂ ಶಾಲೆ ತೊರೆಯುವವರ ಪ್ರಮಾಣವನ್ನು ಕಡಿಮೆ ಮಾಡುವುದು ಮತ್ತು ಪ್ರತಿಯೊಬ್ಬರಿಗೂ ಶಿಕ್ಷಣ ಲಭ್ಯವಾಗುವಂತೆ ಮಾಡುವುದು ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ (ಎಸ್‌ಡಿಜಿ) ಒಂದಾಗಿದೆ. ಎನ್‌ಇಪಿಯಲ್ಲಿಯೂ ಇದೇ ಆಶಯವನ್ನು ಪ್ರತಿಪಾದಿಸಲಾಗಿದೆ. ಒಂದನೇ ತರಗತಿಗೆ ಪ್ರವೇಶ ಪಡೆದ ಮಕ್ಕಳ ಪೈಕಿ ಎಷ್ಟು ಮಂದಿ ಮುಂದಿನ ಹಂತಗಳಿಗೆ ಸಾಗುತ್ತಿದ್ದಾರೆ ಎನ್ನುವುದರ ಆಧಾರದಲ್ಲಿ ಶಾಲೆ ತೊರೆಯುತ್ತಿರುವವರ ಪ್ರಮಾಣವನ್ನು ಪತ್ತೆ ಮಾಡಲಾಗುತ್ತಿದೆ ಎಂದು ವರದಿಯಲ್ಲಿ ವಿವರಿಸಲಾಗಿದೆ.

**ಏಕೀಕೃತ ಜಿಲ್ಲಾವಾರು ಶೈಕ್ಷಣಿಕ ಮಾಹಿತಿ ವ್ಯವಸ್ಥೆಯ 2024-25ರ ವರದಿಯ ಪ್ರಕಾರ, ಕರ್ನಾಟಕದಲ್ಲಿ 9 ಮತ್ತು 10ನೇ ತರಗತಿಗಳಲ್ಲಿ ಶಾಲೆ ತೊರೆಯುತ್ತಿರುವವರ ಪ್ರಮಾಣವು ಆತಂಕ ಹುಟ್ಟಿಸುವಂತಿದ್ದು, ರಾಜ್ಯವು ದೇಶದಲ್ಲಿ ಎರಡನೇ ಸ್ಥಾನದಲ್ಲಿದೆ. ರಾಜ್ಯದಲ್ಲಿ ಈ ಹಂತದಲ್ಲಿ ಶಾಲೆ ತೊರೆಯುವವರ ಸಂಖ್ಯೆ ಹೆಚ್ಚಾಗಿರಲು ಪ್ರಾಥಮಿಕ ಮತ್ತು ಮಾಧ್ಯಮಿಕ ಹಂತದಲ್ಲಿ ಶಿಕ್ಷಣದ ಗುಣಮಟ್ಟ ಕುಸಿದಿರುವುದು, ಬಾಲ ಕಾರ್ಮಿಕರು ಹೆಚ್ಚಾಗಿರುವುದು ಮುಂತಾದ ಕಾರಣಗಳಿವೆ ಎಂದು ಶಿಕ್ಷಣ ತಜ್ಞರು ಅಭಿಪ್ರಾಯಪಟ್ಟಿದ್ದಾರೆ**



## ಪ್ರೌಢ ಶಿಕ್ಷಣ: ಶಾಲೆ ತೊರೆಯುತ್ತಿರುವ ಮಕ್ಕಳ ಪ್ರಮಾಣ (%)





## ಶಾಲೆ ತೊರೆಯಲು ಕಾರಣ

ಮಕ್ಕಳು ಶಾಲೆ ತೊರೆಯುತ್ತಿರುವ ಪ್ರಮಾಣದ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಶಿಕ್ಷಣ ತಜ್ಞರು, ಹಲವು ಕಾರಣಗಳನ್ನು ಪಟ್ಟಿ ಮಾಡಿದ್ದಾರೆ.

- ಮಕ್ಕಳು ಪ್ರಾಥಮಿಕ ಹಂತದಲ್ಲಿಯೇ ಕಲಿಕೆಯಲ್ಲಿ ಹಿಂದುಳಿಯುತ್ತಿರುವುದು
- 7, 8ನೇ ತರಗತಿಗಳ ನಂತರ ಪಠ್ಯಗಳು ಹೆಚ್ಚಾಗುವುದು ಮತ್ತು ಕಠಿಣವಾಗುವುದು
- ಪ್ರಾಥಮಿಕ, ಮಾಧ್ಯಮಿಕ, ಪ್ರೌಢ ಶಿಕ್ಷಣದ ಶಾಲೆಗಳು ಬೇರೆ ಬೇರೆ ಆಗಿದ್ದರೆ, ಹಲವು ಕಾರಣಗಳಿಂದ ಮುಂದಿನ ಹಂತಕ್ಕೆ ಪ್ರವೇಶ ಪಡೆಯದೇ ಇರುವುದು
- ಬಾಲಕಾರ್ಮಿಕ ಕಾಯ್ದೆ ಪ್ರಕಾರ, 14 ವರ್ಷದ ಒಳಗಿನ ಮಕ್ಕಳು ಮಾತ್ರವೇ ಬಾಲಕಾರ್ಮಿಕರು. ಕೆಲವು ಬಡ ಕುಟುಂಬಗಳು 14ರ ನಂತರದ ಮಕ್ಕಳನ್ನು ದುಡಿಯಲು ಕಳುಹಿಸುತ್ತಿವೆ

## ದತ್ತಾಂಶದ ಬಗ್ಗೆ ಆಕ್ಷೇಪ

2023-24ರ ಯುಡಿಐಎಸ್‌ಇ ಪ್ಲಸ್ ವರದಿಗೆ ಕರ್ನಾಟಕದ ಕೆಲವು ಶಿಕ್ಷಣ ತಜ್ಞರು ಆಕ್ಷೇಪ ವ್ಯಕ್ತಪಡಿಸಿದ್ದರು. ವಿದ್ಯಾರ್ಥಿಗಳ ಪ್ರವೇಶ ಪ್ರಮಾಣದಲ್ಲಿ ದಿಢೀರ್ ಕುಸಿತವಾಗಿರುವುದು ಮತ್ತು ಶಾಲೆ ತೊರೆದವರ ಪ್ರಮಾಣದಲ್ಲಿ ಹೆಚ್ಚಳವಾಗಿರುವುದು ದತ್ತಾಂಶದ ಬಗ್ಗೆಯೇ ಅನುಮಾನ ಮೂಡಿಸುತ್ತಿದೆ; ರಾಜ್ಯದ ವಿದ್ಯಾರ್ಥಿ ಸಾಧನೆ ನಿಗಾ ವ್ಯವಸ್ಥೆ (ಎಸ್‌ಎಟಿಎಸ್) ಅತ್ಯಂತ ನಿಖರವಾಗಿರುತ್ತದೆ. ಈ ದಿಸೆಯಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರದ ಶಿಕ್ಷಣ ಇಲಾಖೆಯು ಪರಸ್ಪರ ಚರ್ಚೆ ನಡೆಸಿ, ಈ ವಿಚಾರದಲ್ಲಿ ಸರಿಯಾದ ಮಾಹಿತಿ, ದತ್ತಾಂಶ ನೀಡಬೇಕು ಎಂದು ಒತ್ತಾಯಿಸಿದ್ದರು. ಈ ಬಾರಿಯೂ ಯುಡಿಐಎಸ್‌ಇ ಪ್ಲಸ್ ದತ್ತಾಂಶದ ಬಗ್ಗೆ ಇಂತಹದ್ದೇ ಆಕ್ಷೇಪ ಕೇಳಿಬಂದಿದೆ.



## ❖ ಅರಿನಾ ಸಬಲೆಂಕಾಗೆ ಸತತ ಎರಡನೇ ಕಿರೀಟ

**ಸಂದರ್ಭ:** ಬೆಲಾರೂಸ್ ದೇಶದ ಅರಿನಾ ಸಬಲೆಂಕಾ ಸತತ ಎರಡನೇ ಬಾರಿ ಅಮೆರಿಕ ಓಪನ್ ಟೆನಿಸ್ ಟೂರ್ನಿಯ ಮಹಿಳಾ ಸಿಂಗಲ್ಸ್ ಕಿರೀಟ ಧರಿಸಿದರು.

- ಆದರೆ ಈ ಸಲ ಅವರಿಗೆ ಕಿರೀಟವು ಸುಲಭವಾಗಿ ಒಲಿಯಲಿಲ್ಲ. ಪ್ರಶಸ್ತಿ ಗೆಲುವಿನಿಂದ ಸಬಲೆಂಕಾ ಎರಡು ಪಾಯಿಂಟ್‌ಗಳಿಂದ ದೂರ ಇದ್ದರು. ಅವರ ಅನುಭವ ಮತ್ತು ಕೌಶಲ್ಯಕ್ಕೆ ಸತತ ಎರಡು ಅಂಕ ಗಳಿಸಿ ಜಯಿಸುವುದು ಕಷ್ಟವೇನೂ ಆಗಿರಲಿಲ್ಲ.
- ಆದರೆ ತಮ್ಮೆದುರಿಗೆ ಬಂದ ಚೆಂಡನ್ನು ಓವರ್ ಹೆಡ್ ಸ್ಮ್ಯಾಷ್ ಮಾಡುವ ಬದಲು ಬ್ಯಾಕ್‌ಪೆಡ್ಲಿಂಗ್ ಮಾಡಿದರು. ಚೆಂಡು ನೆಟ್‌ನೊಳಗೇ ಬಿತ್ತು. ಇದರಿಂದಾಗಿ ಅವರ ಎದುರಾಳಿ ಅಮಂದಾ ಅನಿಸಿಮೊವಾ ಅವರಿಗೂ ಒಂದು ‘ಬ್ರೇಕ್’ ಸಿಗುವ ಅವಕಾಶ ಲಭಿಸಿತು. ಶನಿವಾರ ನಡೆದ ಸಿಂಗಲ್ಸ್ ಫೈನಲ್‌ನಲ್ಲಿ ಈ ‘ಗಂಭೀರ ತಪ್ಪು’ ಎಸಗಿದ ನಂತರ ಸಬಲೆಂಕಾ ತಮ್ಮ ರೆಕೆಟ್ ಅನ್ನು ಅನ್ನು ನೀಲಿ ಅಂಕಣದಲ್ಲಿ ಬೀಳಿಸಿ ವಿಷಾದದ ನಗೆ ಬೀರಿದರು. ಜನವರಿಯಲ್ಲಿ ಆಸ್ಟ್ರೇಲಿಯನ್ ಓಪನ್ ಮತ್ತು ಜೂನ್‌ನಲ್ಲಿ ಫ್ರೆಂಚ್ ಓಪನ್ ಫೈನಲ್‌ಗಳಲ್ಲಿ ಸೋತಿದ್ದ ನೆನಪುಗಳು ಅವರ ಮನದಲ್ಲಿ ಹಾದುಹೋಗಿರಬಹುದು. ನಿಧಾನವಾಗಿ ಸಾವರಿಸಿಕೊಂಡ ಅವರು 15 ನಿಮಿಷಗಳಲ್ಲಿ ವಿಜಯದ ಸಂಭ್ರಮ ಆಚರಿಸಿದರು. 6–3, 7–6 (3)ರಿಂದ ಅನಿಸಿಮೊವಾ ವಿರುದ್ಧ ಗೆದ್ದರು.
- ‘ಆ ಸಂದೇಹದ ಭಾವವು ಮನದಲ್ಲಿ ಬಂದು ಹೋಯಿತು. ಅದರ ನಂತರ ದೀರ್ಘ ಉಸಿರೆಳೆದುಕೊಂಡು ಮನ ವನ್ನು ಸ್ಥಿಮಿತಕ್ಕೆ ತಂದುಕೊಂಡೆ. ಇದೆಲ್ಲವೂ ಆಗುತ್ತಿರುತ್ತದೆ. ಮುಂದೆ ಆಗುವ ಕೆಲಸ ನೋಡೋಣ ಎಂದುಕೊಂಡು ಆಡಿದೆ’ ಎಂದು ಸಬಲೆಂಕಾ ಪಂದ್ಯದ ನಂತರ ಹೇಳಿದರು.
- ಇದು ಅವರ ನಾಲ್ಕನೇ ಗ್ರ್ಯಾನ್‌ಸ್ಲಾಮ್ ಪ್ರಶಸ್ತಿ. ಅವೆಲ್ಲವೂ ಅವರಿಗೆ ಹಾರ್ಡ್‌ಕೋರ್ಟ್ ಮೇಲೆಯೇ ಒಲಿದಿರುವ ಪ್ರಶಸ್ತಿಗಳು. 27 ವರ್ಷದ ಸಬಲೆಂಕಾ ಅಮೆರಿಕ ಓಪನ್ ಟೂರ್ನಿಯಲ್ಲಿ ಸತತ ಎರಡನೇ ಪ್ರಶಸ್ತಿ ಜಯಿಸಿದ ದಾಖಲೆ ಬರೆದರು. 2012–2014ರ ಅವಧಿಯಲ್ಲಿ ಸೆರೆನಾ ವಿಲಿಯಮ್ಸ್ ಸತತ ಮೂರು ಬಾರಿ ಜಯಿಸಿದ್ದರು. ಸಬಲೆಂಕಾ ಅವರು ಕಳೆದೊಂದು ಋತುವಿನಲ್ಲಿ ಮೂರು ಟೂರ್ನಿಗಳ ಫೈನಲ್ ಗಳಲ್ಲಿ ಸೋತಿದ್ದರು.
- ‘ನಾನು ಅವರನ್ನು (ಸಬಲೆಂಕಾ) ಅಪಾರವಾಗಿ ಗೌರವಿಸುತ್ತೇನೆ. ಅವರು ಬಹಳಷ್ಟು ಕಠಿಣ ಪರಿಶ್ರಮಪಟ್ಟು ಅಭ್ಯಾಸ ಮಾಡುತ್ತಾರೆ. ಆದ್ದರಿಂದ ಅವರು ಈ ಎತ್ತರಕ್ಕೇರಿದ್ದಾರೆ’ ಎಂದು 24 ವರ್ಷದ ಅನಿಸಿಮೊವಾ ಹೇಳಿದರು.
- ಆರ್ಥರ್ ಆ್ಯಷ್ ಕ್ರೀಡಾಂಗಣದಲ್ಲಿ 24 ಸಾವಿರ ಪ್ರೇಕ್ಷಕರು ವೀಕ್ಷಿಸಿದ ಫೈನಲ್‌ನಲ್ಲಿ ಸಬಲೆಂಕಾ ಮೊದಲ ಸೆಟ್‌ನಲ್ಲಿ ಸುಲಭವಾಗಿ ಅಮಂಡಾ ಅವರನ್ನು ಸೋಲಿಸಿದರು. ಆದರೆ ಎರಡನೇ ಸೆಟ್‌ನಲ್ಲಿ ಅಮೆರಿಕದ ಆಟಗಾರ್ತಿ ತಿರುಗೇಟು ನೀಡಿದರು. ತೀವ್ರ ಜಿದ್ದಾಜಿದ್ದಿನಿಂದ ಕೂಡಿದ್ದ ಸೆಟ್ ಫಲಿತಾಂಶವು ಟೈ ಬ್ರೇಕರ್ ನಲ್ಲಿ ನಿರ್ಧಾರವಾಯಿತು.

## ❖ ಆರ್ಚರಿ ವಿಶ್ವ ಚಾಂಪಿಯನ್‌ಶಿಪ್ ಪುರುಷರ ತಂಡಕ್ಕೆ ಚಿನ್ನದ ಪದಕ


**ಸಂದರ್ಭ:** ಭಾರತದ ಪುರುಷರ ಕಾಂಪೌಂಡ್ ಆರ್ಚರಿ ತಂಡವು ಇಲ್ಲಿ ನಡೆಯುತ್ತಿರುವ ವಿಶ್ವ ಚಾಂಪಿಯನ್ ಶಿಪ್‌ನಲ್ಲಿ ಚೊಚ್ಚಲ ಚಿನ್ನ ಗೆದ್ದು, ಚಾರಿತ್ರಿಕ ಸಾಧನೆ ಮೆರೆಯಿತು. ಆದರೆ, ಮಹಿಳಾ ತಂಡವು ಎಂಟು ವರ್ಷಗಳಲ್ಲಿ ಇದೇ ಮೊದಲ ಬಾರಿ ಪದಕ ಗೆಲ್ಲಲು ವಿಫಲವಾಯಿತು.

- ಭಾರತದ ರಿಷಭ್ ಯಾದವ್ ಅವರು ಮಿಶ್ರ ತಂಡ ವಿಭಾಗದಲ್ಲಿ ಅನುಭವಿ ಬಿಲ್ಗಾರ್ತಿ ಜ್ಯೋತಿ ಸುರೇಖಾ ವೆನ್ನಮ್ ಅವರೊಂದಿಗೆ ಬೆಳ್ಳಿ ಗೆದ್ದು, ಪದಕ ಡಬಲ್ ಮಾಡಿದರು.
- ರಿಷಭ್ ಯಾದವ್, ಅಮನ್ ಸೈನಿ ಮತ್ತು ಪ್ರಥಮೇಶ್ ಫ್ಯೂಗೆ ಅವರನ್ನು ಒಳಗೊಂಡ ಪುರುಷರ ತಂಡವು ಫೈನಲ್‌ನಲ್ಲಿ 235-233ರಿಂದ ಫ್ರಾನ್ಸ್ ಅನ್ನು ಮಣಿಸಿ ರೋಚಕ ಗೆಲುವು ಸಾಧಿಸಿತು.

Dr. Rajkumar IAS/KAS Academy

- ನಿಕೋಲಸ್ ಗಿರಾರ್ಡ್, ಜೀನ್ ಫಿಲಿಪ್ ಬೌಲ್ಸ್ ಮತ್ತು ಫ್ರಾಂಕೋಯಿಸ್ ಡುಬೊಯಿಸ್ ಅವರನ್ನು ಒಳಗೊಂಡ ಫ್ರಾನ್ಸ್ ತಂಡ ಪ್ರಬಲ ಸ್ಪರ್ಧೆ ನೀಡಿ ಎರಡು ಪಾಯಿಂಟ್‌ಗಳಿಂದ ಸೋತು, ಬೆಳ್ಳಿ ಪದಕ ತಮ್ಮದಾಗಿಸಿಕೊಂಡಿತು.
- ಮೊದಲ ಸುತ್ತಿನಲ್ಲಿ 57–59ರಿಂದ ಹಿನ್ನಡೆ ಅನುಭವಿಸಿದ್ದ ಭಾರತ ತಂಡವು ನಂತರದಲ್ಲಿ ಲಯ ಕಂಡುಕೊಂಡು, ಎರಡನೇ ಸುತ್ತಿನಲ್ಲಿ ಪೂರ್ಣ ಅಂಕ ಗಳಿಸಿ 117 ಸ್ಕೋರ್‌ಗಳೊಂಡನೆ ಸಮಬಲ ಸಾಧಿಸಿತು.
- ಮೂರನೇ ಸುತ್ತಿನಲ್ಲೂ ಉಭಯ ತಂಡಗಳಿಂದ ಸಮಬಲದ ಹೋರಾಟ ಕಂಡು ಬಂದಿದ್ದರಿಂದ ಸ್ಕೋರ್ 176–176 ಆಯಿತು. ಕೊನೆಯ ಸುತ್ತಿನಲ್ಲಿ ಭಾರತದ ಬಿಲ್ಲಾರರು ನಿಖರ ಗುರಿಯಿಟ್ಟು, ಜಯ ಸಾಧಿಸಿದರು.

IAS/KAS Academy



## ❖ ಆಧಾರ್ ಪರಿಗಣನೆಗೆ ಸೂಚನೆ

**ಸಂದರ್ಭ:** ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ (ಎಸ್‌ಐಆರ್) ಮತದಾರರ ಗುರುತಿನ ದಾಖಲೆಯಾಗಿ ಆಧಾರ್ ಸಂಖ್ಯೆಯನ್ನು ಪರಿಗಣಿಸುವಂತೆ ಸುಪ್ರೀಂ ಕೋರ್ಟ್ ಚುನಾವಣಾ ಆಯೋಗಕ್ಕೆ ಸೂಚಿಸಿದೆ.

- **ಪ್ರಸ್ತುತ ಬಿಹಾರದಲ್ಲಿ ಎಸ್‌ಐಆರ್ ಪ್ರಕ್ರಿಯೆಗೆ 11 ದಾಖಲೆಗಳನ್ನು ಗೊತ್ತುಪಡಿಸಲಾಗಿದೆ. ಮತದಾರರು ಈ ಪೈಕಿ ಯಾವುದಾದರೂ ಒಂದು ದಾಖಲೆಯನ್ನು ಅರ್ಜಿ ನಮೂನೆ ಜೊತೆ ಸಲ್ಲಿಸಬೇಕಿದೆ.**
- **ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ಜಾಯ್‌ಮಾಲ್ಯ ಬಾಗ್ಚಿ ಅವರನ್ನು ಒಳಗೊಂಡ ನ್ಯಾಯಪೀಠವು, 12ನೇ ದಾಖಲೆಯಾಗಿ 'ಆಧಾರ್' ಅನ್ನು ಪರಿಗಣಿಸುವಂತೆ ಹೇಳಿದೆ.**
- **ಆದಾಗ್ಯೂ, ಆಧಾರ್ ಸಂಖ್ಯೆಯು ಪೌರತ್ವಕ್ಕೆ ಪುರಾವೆ ಅಲ್ಲ. ಅದನ್ನು ಗುರುತಿನ ದಾಖಲೆಯಾಗಿ ಪರಿಗಣಿಸಬಹುದಷ್ಟೆ** ಎಂದು ನ್ಯಾಯಪೀಠ ಹೇಳಿದೆ.
- ಮತದಾರ ಸಲ್ಲಿಸಿದ ಆಧಾರ್ ಕಾರ್ಡ್ ಅಸಲಿ ಹೌದೇ ಅಲ್ಲವೇ ಎನ್ನುವುದನ್ನು ಆಯೋಗವು ಪರಿಶೀಲಿಸಬಹುದು ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.
- 'ಅಕ್ರಮ ವಲಸಿಗರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಬೇಕೆಂದು ಯಾರೂ ಬಯಸುತ್ತಿಲ್ಲ. ಆಯೋಗವು ನೈಜ ಮತದಾರರಿಗೆ ಮಾತ್ರ ಮತ ಚಲಾವಣೆಗೆ ಅವಕಾಶ ನೀಡಬೇಕು. ನಕಲಿ ದಾಖಲೆಗಳ ಆಧಾರದಲ್ಲಿ ನೈಜ ಪ್ರಜೆಗಳು ಎಂದು ಹೇಳಿಕೊಳ್ಳುತ್ತಿರುವವರನ್ನು ಮತದಾರರ ಪಟ್ಟಿಯಿಂದ ಹೊರಹಾಕಬೇಕು' ಎಂದು ಕೋರ್ಟ್ ಸ್ಪಷ್ಟಪಡಿಸಿತು.
- ಆಧಾರ್ ಅನ್ನು ಗುರುತಿನ ದಾಖಲೆಯಾಗಿ ಸ್ವೀಕರಿಸುವ ಸಂದರ್ಭದಲ್ಲಿ ಅಧಿಕಾರಿಗಳಿಗೆ ಅಗತ್ಯವಿರುವ ನಿರ್ದೇಶನಗಳನ್ನು ನೀಡುವಂತೆ ಆಯೋಗಕ್ಕೆ ನ್ಯಾಯಪೀಠ ಹೇಳಿತು.
- ಇದೇ ವೇಳೆ, ಆಧಾರ್ ಕಾರ್ಡನ್ನು ಗುರುತಿನ ದಾಖಲೆಯಾಗಿ ಸ್ವೀಕರಿಸದ್ದಕ್ಕೆ ಸಂಬಂಧಿಸಿದಂತೆ ನೀಡಿದ್ದ ಶೋಕಾಸ್ ನೋಟಿಸ್‌ಗೆ ವಿವರಣೆ ನೀಡುವಂತೆ ಕೇಳಿತು. ಆಯೋಗದ ಪರ ಹಾಜರಿದ್ದ ಹಿರಿಯ ವಕೀಲ ರಾಕೇಶ್ ದ್ವಿವೇದಿ ಅವರು, 99.6ರಷ್ಟು ಮತದಾರರ ಹೆಸರನ್ನು ಒಳಗೊಂಡ ಕರಡು ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದರು.

## ❖ 'ಗ್ಯಾರಂಟಿಗಳಿಗೆ ₹97,813 ಕೋಟಿ ವೆಚ್ಚ'

**ಸಂದರ್ಭ:** ಗ್ಯಾರಂಟಿ ಯೋಜನೆಯಡಿ ಈವರೆಗೆ ₹97,813 ಕೋಟಿ ಖರ್ಚು ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

- ಮುಖ್ಯಮಂತ್ರಿಯವರ ಗೃಹ ಕಚೇರಿ 'ಕೃಷ್ಣಾ'ದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಅವರು ಈ ಮಾಹಿತಿ ನೀಡಿದರು.
- ಈ ಪೈಕಿ ಗೃಹಲಕ್ಷ್ಮಿ ಯೋಜನೆಯಡಿ 1.24 ಕೋಟಿ ಫಲಾನುಭವಿಗಳಿಗೆ ₹50,005 ಕೋಟಿ, ಗೃಹಜ್ಯೋತಿ ಯೋಜನೆಯಡಿ 1.64 ಕೋಟಿ ಫಲಾನು ಭವಿಗಳಿಗೆ ₹18,139 ಕೋಟಿ, ಯುವನಿಧಿ ಯೋಜನೆಯಡಿ 2.55 ಲಕ್ಷ ಫಲಾನುಭವಿಗಳಿಗೆ ₹623 ಕೋಟಿ, ಶಕ್ತಿ ಯೋಜನೆಯಡಿ 544 ಕೋಟಿ ಬಾರಿ ಪ್ರಯಾಣಿಸಿದ್ದಕ್ಕೆ ₹13,903 ಕೋಟಿ ಮತ್ತು ಅನ್ನಭಾಗ್ಯ ಯೋಜನೆಯಡಿ 72.02 ಕೋಟಿ ಫಲಾನುಭವಿ ಗಳಿಗೆ ₹11,821.17 ಕೋಟಿ ವೆಚ್ಚ ಮಾಡಲಾಗಿದೆ ಎಂದು ಹೇಳಿದರು.
- ಮರಣ ಹೊಂದುವ ಫಲಾನುಭವಿ ಗಳ ಪಟ್ಟಿಯನ್ನು ಪ್ರತಿ ತಿಂಗಳು ಪಂಚಾಯತ್ ಹಂತದಲ್ಲಿ ನವೀಕರಿಸಿ ಸಂಬಂಧಪಟ್ಟ ಬ್ಯಾಂಕ್‌ಗಳಿಗೆ ಮಾಹಿತಿ ಒದಗಿಸಬೇಕು. ಮರಣ ಹೊಂದುವ ಫಲಾನುಭವಿಗಳ ಹೆಸರನ್ನು ಪಟ್ಟಿಯಿಂದ ತೆಗೆದು ಹಾಕಬೇಕು ಎಂದರು.

Dr. Rajkumar IAS/KAS Academy

- ಆದಾಯ ತೆರಿಗೆ ರಿಟರ್ನ್ ಸಲ್ಲಿಸುವವರು ಗೃಹಲಕ್ಷ್ಮಿ ಯೋಜನೆ ಲಾಭ ಪಡೆಯುವ ಕುರಿತು ಇರುವ ಗೊಂದಲವನ್ನು ನಿವಾರಿಸಲು ಕ್ರಮ ಕೈಗೊಳ್ಳಬೇಕು. ಅನರ್ಹ ಬಿಪಿಎಲ್ ಕಾರ್ಡುದಾರರನ್ನು ಗುರುತಿಸಿ ಬಿಪಿಎಲ್ ಕಾರ್ಡ್ ರದ್ದುಪಡಿಸುವ ಕಾರ್ಯವನ್ನು ಪಂಚಾಯತ್ ಮಟ್ಟದಲ್ಲಿ ನಡೆಸಬೇಕು. ಈ ಕುರಿತ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಸೂಚಿಸಿದರು. ಅನ್ನಭಾಗ್ಯ ಯೋಜನೆಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಅಕ್ಕಿಯ ಬದಲು ಪ್ರದೇಶವಾರು ಇತರ ಧಾನ್ಯಗಳನ್ನು ನೀಡುವ ಬಗ್ಗೆ ಪರಿಶೀಲನೆ ನಡೆಸಬೇಕು ಎಂದು ಸಿದ್ದರಾಮಯ್ಯ ಹೇಳಿದರು.

**'ವಿಶ್ವದಾಖಲೆ' ಸೃಷ್ಟಿಸಿದ ಶಕ್ತಿ ಯೋಜನೆ**

- 'ರಾಜ್ಯದಲ್ಲಿ 'ಶಕ್ತಿ' ಯೋಜನೆಯಡಿ 500 ಕೋಟಿಗೂ ಹೆಚ್ಚು ಬಾರಿ ಮಹಿಳಾ ಪ್ರಯಾಣಿಕರು ಉಚಿತವಾಗಿ ಬಸ್‌ಗಳಲ್ಲಿ ಪ್ರಯಾಣಿಸಿದ್ದಾರೆ. ಇದು 'ಗೋಲ್ಡನ್ ಬುಕ್ ಆಫ್ ರೆಕಾರ್ಡ್ಸ್' ನಲ್ಲಿ ದಾಖಲಾಗಿದೆ. ಇದಕ್ಕೆ ಪ್ರಮಾಣ ಪತ್ರ ಸಿಕ್ಕಿದೆ' ಎಂದು ಸಭೆಯಲ್ಲಿ ಹೇಳಿದ ಸಚಿವ ರಾಮಲಿಂಗಾರೆಡ್ಡಿ ಅವರು ಸಭೆಯಲ್ಲಿ ಪ್ರಮಾಣ ಪತ್ರ ಪ್ರದರ್ಶಿಸಿ ಹರ್ಷ ವ್ಯಕ್ತಪಡಿಸಿದರು.

## ❖ 'ಮತಪತ್ರ' ಕಡ್ಡಾಯ: 4 ಮಸೂದೆ ಸಿದ್ಧ

**<u>ಸಂದರ್ಭ:</u>** ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ವಿದ್ಯುನ್ಮಾನ ಮತಯಂತ್ರದ (ಇವಿಎಂ) ಬದಲು, ರಹಸ್ಯ ಮತದಾನ ವ್ಯವಸ್ಥೆಗೆ 'ಮತಪತ್ರ' (ಬ್ಯಾಲಟ್ ಪೇಪರ್) ಬಳಕೆ ಕಡ್ಡಾಯಗೊಳಿಸಲು ಸಂಬಂಧಪಟ್ಟ ಕಾಯ್ದೆಗಳ ತಿದ್ದುಪಡಿಗೆ ನಾಲ್ಕು ಮಸೂದೆ ಗಳನ್ನು ರಾಜ್ಯ ಸರ್ಕಾರ ಸಿದ್ಧಪಡಿಸಿದೆ.

- ಇದೇ 11ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಮಸೂದೆಗಳ ಕರಡನ್ನು ಮಂಡನೆ ಮಾಡಲಾಗುತ್ತಿದೆ. ಬಳಿಕ ಸುಗ್ರೀವಾಜ್ಞೆ ಹೊರಡಿಸಲು ಉದ್ದೇಶಿಸಲಾಗಿದೆ ಎಂದು ಸರ್ಕಾರದ ಮೂಲಗಳು ತಿಳಿಸಿವೆ.
- ತನ್ನ ವ್ಯಾಪ್ತಿಯಲ್ಲಿರುವ ನಗರ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲು ಮತಪತ್ರ ಬಳಕೆ ಹಾಗೂ ರಾಜ್ಯ ಚುನಾವಣಾ ಆಯೋಗದ ನೇತೃತ್ವ ದಲ್ಲಿ ಪ್ರತ್ಯೇಕ ಮತದಾರರ ಪಟ್ಟಿ ಸಿದ್ಧಪಡಿ ಸುವ ಮಹತ್ವದ ನಿರ್ಣಯವನ್ನು ಸೆ. 4ರಂದು ನಡೆದ ಸಂಪುಟ ಸಭೆಯಲ್ಲಿ ರಾಜ್ಯ ಸರ್ಕಾರ ತೆಗೆದುಕೊಂಡಿತ್ತು.

**<u>ಸರ್ಕಾರದ ಸಮರ್ಥನೆಗಳೇನು?:</u>**

- ಮತಪತ್ರದ ಗೌಪ್ಯತೆಯು ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳ ಮೂಲ ಆಧಾರವಾಗಿದ್ದು, ಪ್ರಜಾಸತ್ತಾತ್ಮಕ ಪ್ರಕ್ರಿ ಯೆಯ ಪಾವಿತ್ರ್ಯವನ್ನು ಕಾಪಾಡುವ ಮೂಲಕ ಮತದಾರರನ್ನು ಬಲವಂತ, ಬೆದರಿಕೆ ಮತ್ತು ಅನುಚಿತ ಪ್ರಭಾವದಿಂದ ರಕ್ಷಿಸುತ್ತದೆ ಎಂದು ಹಲವು ತೀರ್ಪುಗ ಳಲ್ಲಿ ಸುಪ್ರೀಂ ಕೋರ್ಟ್ ಹೇಳಿದೆ. ಕುಲದೀಪ್ ನಾಯರ್ ವಿರುದ್ಧದ ಕೇಂದ್ರ ಸರ್ಕಾರ (2006) ಪ್ರಕರಣದಲ್ಲಿ 'ಮತದಾರರ ಸ್ವಾಯತ್ತತೆಯನ್ನು ಖಚಿತಪಡಿಸಿ ಕೊಳ್ಳಲು ಮತ್ತು ಬಾಹ್ಯ ಒತ್ತಡಗಳನ್ನು ತಡೆಯಲು ಸಾರ್ವತ್ರಿಕ ಚುನಾವಣೆಗಳಿಗೆ ರಹಸ್ಯ ಮತದಾನ ಅತ್ಯಗತ್ಯವಾಗಿದೆ' ಎಂದೂ ಸ್ಪಷ್ಟಪಡಿ ಸಿದೆ. ಆ ಮೂಲಕ, ಮುಕ್ತ ಚುನಾವಣೆಗಳ ಸಾಂವಿಧಾನಿಕ ಆದೇಶ ಎತ್ತಿ ಹಿಡಿದಿದೆ.
- ಚುನಾವಣಾ ಪ್ರಕ್ರಿಯೆಯಲ್ಲಿ ಮತದಾರರ ವಿಶ್ವಾಸದ ಮಹತ್ವವನ್ನು ಸುಪ್ರೀಂ ಕೋರ್ಟ್ ಒತ್ತಿ ಹೇಳಿದ್ದು, ಮತ ಪತ್ರದ ಗೌಪ್ಯತೆ ಕಾಪಾಡುವಾಗ ಪಾರ ದರ್ಶಕತೆ ಹೆಚ್ಚಿಸಲು ಇವಿಎಂಗಳಲ್ಲಿ ದಾಖಲಾಗುವ ಮತಗಳ ಪರಿಶೀಲನೆಗೆ ವೆರಿಫೈಯಲ್ ಪೇಪರ್ ಆಡಿಟ್ ಟ್ರಯಲ್ (ವಿವಿ ಪ್ಯಾಟ್) ಪರಿಚಯಿಸಿತ್ತು. ಅಲ್ಲದೆ, ಇವಿಎಂ ವ್ಯವಸ್ಥೆಯಲ್ಲಿನ ದೌರ್ಬಲ್ಯಗಳನ್ನು ಪರಿಹರಿಸಲು ನಿರಂತರ ಸುಧಾರಣೆಗಳ ಅಗತ್ಯವನ್ನೂ ಎತ್ತಿ

Dr. Rajkumar Academy

ತೋರಿಸಿದೆ. ಆದರೆ, ಇವಿಎಂಗಳಲ್ಲಿನ ದೌರ್ಬಲ್ಯಗಳು ಮತ್ತು ಮತದಾರರ ಪಟ್ಟಿಗಳಲ್ಲಿನ ವ್ಯತ್ಯಾಸಗಳ ಮೂಲಕ ಚುನಾವಣಾ ಕುತಂತ್ರಗಳ ಸಾಧ್ಯತೆಯ ಕುರಿತು ಸುಪ್ರೀಂ ಕೋರ್ಟ್ ಕಳವಳ ವ್ಯಕ್ತಪಡಿಸಿರುವುದರಿಂದ, ಸಾರ್ವಜನಿಕ ನಂಬಿಕೆಯನ್ನು ಮರು ಸ್ಥಾಪಿ ಸಲು ಸದೃಢವಾದ ರಹಸ್ಯ ಮತಪತ್ರ ವ್ಯವಸ್ಥೆಗೆ ಮರಳುವ ಅಗತ್ಯ ಉಂಟಾಗಿದೆ ಎಂದು ರಾಜ್ಯ ಸರ್ಕಾರ ಸಮರ್ಥನೆ ನೀಡಿದೆ.

- ಈ ಕಳವಳಗಳ ಕಾರಣಕ್ಕೆ, ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಕಾಗದ ಮತಪತ್ರ ವ್ಯವಸ್ಥೆಗೆ ಮರಳಲು ನಿರ್ಧರಿಸಲಾಗಿದೆ. ಕಾಗದ ಮತಪತ್ರಗಳು ಅಥವಾ ಇತರ ಗೌಪ್ಯ ಕಾರ್ಯವಿಧಾನ ಗಳ ಬಳಕೆಯ ಮೂಲಕ ರಹಸ್ಯ ಮತ ದಾನ ವ್ಯವಸ್ಥೆಯು, ಮತದಾರರು ಪ್ರತೀ ಕಾರದ ಭಯ ಇಲ್ಲದೆ ತಮ್ಮ ಮತ ಚಲಾ ಯಿಸಬಹುದು ಎಂಬುದನ್ನು ಖಚಿತಪಡಿಸುತ್ತದೆ ಎಂದೂ ವಿವರಿಸಿದೆ.

**ತಿದ್ದುಪಡಿ ಮಸೂದೆಗಳು ಯಾವುವು?**

- । ಗ್ರೇಟರ್ ಬೆಂಗಳೂರು ಆಡಳಿತ (ಎರಡನೇ ತಿದ್ದುಪಡಿ)
- । ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ)
- । ಕರ್ನಾಟಕ ನಗರ ಪಾಲಿಕೆಗಳು (ಎರಡನೇ ತಿದ್ದುಪಡಿ)
- । ಕರ್ನಾಟಕ ಪುರಸಭೆಗಳು (ತಿದ್ದುಪಡಿ)

**'ವಿಧಾನ ಮಂಡಲಕ್ಕೆ ಅಧಿಕಾರವಿದೆ'**

- 'ಸ್ಥಳೀಯ ಪ್ರಾಧಿಕಾರಗಳಿಗೆ ಮುಕ್ತ, ನ್ಯಾಯಯುತ ಮತ್ತು ಪಾರದರ್ಶಕ ಚುನಾವಣೆಗಳನ್ನು ಖಚಿತಪಡಿಸಿಕೊಳ್ಳಲು, ಕಾಗದ ಮತಪತ್ರಗಳನ್ನು ಬಳಸಿಕೊಂಡು ರಹಸ್ಯ ಮತದಾನ ವ್ಯವಸ್ಥೆ ಅಳವಡಿಸಿಕೊಳ್ಳುವುದನ್ನು ಕಡ್ಡಾಯಗೊಳಿಸಲು ಸಂಬಂಧಿತ ಕಾಯ್ದೆಗಳಿಗೆ ತಿದ್ದುಪಡಿ ಮಾಡಬೇಕಿದೆ. ಆ ಮೂಲಕ, ರಾಜ್ಯ ಚುನಾವಣಾ ಆಯೋಗವು ಮತದಾರರ ಗೌಪ್ಯತೆ ಮತ್ತು ಚುನಾವಣಾ ಸಮಗ್ರತೆಯೊಂದಿಗೆ ಚುನಾವಣೆಗಳನ್ನು ನಡೆಸಲು ಅನುಕೂಲ ಕಲ್ಪಿಸಲು ಉದ್ದೇಶಿಸಲಾಗಿದೆ.
- ಮಸೂದೆ ರೂಪಿಸಲು ರಾಜ್ಯ ವಿಧಾನ ಮಂಡಲಕ್ಕೆ ಅಧಿಕಾರವಿದೆ. ಮಸೂದೆಯಲ್ಲಿರುವ ಉಪಬಂಧಗಳು ಕೇಂದ್ರದ ಜಾರಿಯಲ್ಲಿರುವ ಯಾವುದೇ ಕಾಯ್ದೆಯ ಉಪಬಂಧಗಳಿಗೆ ವ್ಯತಿರಿಕ್ತ ಆಗುವುದಿಲ್ಲ. ಹೀಗಾಗಿ, ಮಸೂದೆಗಳನ್ನು ರಾಷ್ಟ್ರಪತಿಯ ಅಂಕಿತಕ್ಕೆ ಕಾಯ್ದಿರಿಸುವ ಅಗತ್ಯವೂ ಇಲ್ಲ' ಎಂದು ಕಾನೂನು ಮತ್ತು ಸಂಸದೀಯ ಇಲಾಖೆ ಪ್ರತಿಪಾದಿಸಿದೆ.

## ❖ ಹಿಮಾಲಯದಲ್ಲಿ 'ಪಲ್ಲಾಸ್ ಕ್ಯಾಟ್'

**ಸಂದರ್ಭ:** ಅರುಣಾಚಲ ಪ್ರದೇಶದ ಹಿಮಾಚ್ಛಾದಿತ ಪ್ರದೇಶದಲ್ಲಿ ಅಳವಡಿಸಲಾಗಿದ್ದ ಕ್ಯಾಮೆರಾದಲ್ಲಿ 'ಪಲ್ಲಾಸ್ ಕ್ಯಾಟ್' ಎಂಬ ವಿರಳ ಜಾತಿಯ ಕಾಡುಬೆಕ್ಕಿನ ಚಿತ್ರಗಳು ಇದೇ ಮೊದಲ ಬಾರಿ ಸೆರೆಯಾಗಿವೆ.




- ಇದರೊಂದಿಗೆ **ಹಿಮಾಲಯದಲ್ಲಿ 4,200 ಮೀಟರ್‌ಗಿಂತ ಹೆಚ್ಚಿನ ಎತ್ತರದಲ್ಲಿ 6 ವಿವಿಧ ಜಾತಿಯ ಕಾಡಿನ ಬೆಕ್ಕುಗಳ ಇರುವಿಕೆಯು ಪತ್ತೆಯಾದಂತಾಗಿದೆ** ಎಂದು ವಿಶ್ವ ವನ್ಯಜೀವಿ ಸಂಸ್ಥೆಯ ಭಾರತ ಘಟಕವು ತಿಳಿಸಿದೆ.
- ಈವರೆಗೆ 5 ವಿಧದ ಕಾಡು ಬೆಕ್ಕಿನ ಚಿತ್ರಗಳನ್ನು ಸೆರೆಹಿಡಿಯಲಾಗಿದೆ. ಅವುಗಳೆಂದರೆ: **ಸ್ನೋ ಲೆಪರ್ಡ್, ಕ್ಲೌಡೆಡ್ ಲೆಪರ್ಡ್, ಲೆಪರ್ಡ್ ಕ್ಯಾಟ್, ಕಾಮನ್ ಲೆಪರ್ಡ್ ಮತ್ತು ಮಾರ್ಬಲ್ಡ್ ಕ್ಯಾಟ್‌ಗಳು.**
- ಭಾರತದ ವಿಶ್ವ ವನ್ಯಜೀವಿ ಸಂಸ್ಥೆಯು ಹಿಮಾಲಯದಲ್ಲಿನ ವನ್ಯಜೀವಿ ಪರಿಸರದ ಕುರಿತು ತವಾಂಗ್ ಹಾಗೂ ಪಶ್ಚಿಮ ಕಮೆಂಗ್ ಜಿಲ್ಲೆಗಳಲ್ಲಿ ಸಮೀಕ್ಷೆ ನಡೆಸುತ್ತಿದೆ.

- ಸಮುದ್ರ ಮಟ್ಟದಿಂದ 4,000 ಮೀಟರ್‌ಗಿಂತ ಹೆಚ್ಚಿನ ಎತ್ತರದಲ್ಲಿ ವನ್ಯಜೀವಿಗಳ ಇರುವಿಕೆಯು ದೇಶದ ಮಹತ್ವದ ದಾಖಲೆಯಾಗಿದ್ದು, ನೂತನ ಅಧ್ಯಯನಕ್ಕೆ ದಾರಿಯಾಗಿದೆ.
- ರಾಜ್ಯ ಅರಣ್ಯ ಇಲಾಖೆಯ ಬೆಂಬಲ ಹಾಗೂ ಸ್ಥಳೀಯರ ಬೆಂಬಲದೊಂದಿಗೆ ಸಂಸ್ಥೆಯು'ರಿವೈವಿಂಗ್ ಟ್ರಾನ್ಸ್–ಹಿಮಾಲಯನ್ ರೇಂಜ್‌ಲ್ಯಾಂಡ್ಸ್– ಎ ಕಮ್ಯುನಿಟಿ– ಲೆಡ್ ವಿಶನ್ ಫಾರ್ ಪೀಪಲ್ ಆ್ಯಂಡ್ ನೇಚರ್' ಯೋಜನೆಯಡಿ ಸಮೀಕ್ಷೆ ನಡೆಸುತ್ತಿವೆ.
- 2024ರ ಸೆಪ್ಟೆಂಬರ್‌ನಲ್ಲಿ ಹಿಮಾಲಯದ 2,000 ಚದರ ಅಡಿ ಕಿ.ಮೀ ಎತ್ತರದಲ್ಲಿ 83 ಕಡೆ 136 ಕ್ಯಾಮೆರಾಗಳನ್ನು ಅಳವಡಿಸಲಾಗಿತ್ತು.

## ❖ 'ಲಿಪುಲೇಖ್ ವ್ಯಾಪಾರ ಒಪ್ಪಂದ ರದ್ದುಪಡಿಸಿ'

- ಲಿಪುಲೇಖ್ ಪಾಸ್ ಗಡಿಭಾಗದ ಮೂಲಕ ವ್ಯಾಪಾರವನ್ನು ಪುನರಾರಂಭಿಸಲು ಭಾರತ ಹಾಗೂ ಚೀನಾ ಇತ್ತೀಚೆಗೆ ಮಾಡಿಕೊಂಡಿರುವ ಒಪ್ಪಂದವನ್ನು ರದ್ದುಪಡಿಸಬೇಕು ಎಂದು ನೇಪಾಳದ ಆಡಳಿತಾರೂಢ ಪಕ್ಷವಾದ ಸಿಪಿಎನ್–ಯುಎಂಎಲ್ ಒತ್ತಾಯಿಸಿದೆ.

## ❖ ಕೋಲಾರದಲ್ಲಿ ಇ.ವಿ ತಯಾರಿಕೆ

**<u>ಸಂದರ್ಭ:</u>** ಕೋಲಾರ ಜಿಲ್ಲೆಯ ನರಸಾಪುರ ಕೈಗಾರಿಕಾ ಪ್ರದೇಶದಲ್ಲಿ ಜಪಾನಿನ ಹೋಂಡಾ ಕಂಪನಿಯು ಸುಮಾರು ₹600 ಕೋಟಿ ವೆಚ್ಚದ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ತಯಾರಿಕಾ ಘಟಕವನ್ನು ಶೀಘ್ರದಲ್ಲಿಯೇ ಆರಂಭಿಸಲಿದೆ.

- ಬೃಹತ್ ಕೈಗಾರಿಕಾ ಸಚಿವ ಎಂ. ಬಿ. ಪಾಟೀಲ ನೇತೃತ್ವದ ರಾಜ್ಯದ ಉನ್ನತ ಮಟ್ಟದ ನಿಯೋಗ ಜಪಾನ್ ಪ್ರವಾಸದಲ್ಲಿದ್ದು, ಅಲ್ಲಿ ಹೋಂಡಾ ಕಂಪನಿಯ ಕಾರ್ಯನಿರ್ವಾಹಕ ಉಪಾಧ್ಯಕ್ಷ ನೋರಿಯಾ ಕೈಹರಾ ಅವರನ್ನು ಭೇಟಿ ಮಾಡಿ ಚರ್ಚಿಸಿತು.
- ಈ ವೇಳೆ, ನೋರಿಯಾ ಅವರು ಈ ವಿಷಯ ತಿಳಿಸಿದರು. ಇದರಿಂದ ರಾಜ್ಯದಲ್ಲಿ ವಾಹನ ತಯಾರಿಕಾ ವಲಯದಲ್ಲಿ ಉದ್ಯೋಗ ಅವಕಾಶಗಳು ಹೆಚ್ಚಲಿವೆ ಎಂದು ಸಚಿವ ಎಂ.ಬಿ. ಪಾಟೀಲ ಹೇಳಿದ್ದಾರೆ.
- **ಭಾರತದಲ್ಲಿನ ತನ್ನ ಮೊದಲ ವಿದ್ಯುತ್ ಚಾಲಿತ ದ್ವಿಚಕ್ರ ವಾಹನ ತಯಾರಿಕಾ ಘಟಕವು ನರಸಾಪುರದಲ್ಲಿ ಕಾರ್ಯಾರಂಭ ಮಾಡಲಿದೆ.** ಫೆಬ್ರುವರಿಯಲ್ಲಿ ನಡೆದ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಮಾಡಿಕೊಂಡಿರುವ ಈ ಒಪ್ಪಂದಕ್ಕೆ ಸದ್ಯದಲ್ಲೇ ಚಾಲನೆ ದೊರೆಯಲಿದೆ ಎಂದು ಕಂಪನಿಯು ನಿಯೋಗಕ್ಕೆ ಮಾಹಿತಿ ನೀಡಿದೆ.
- ಸಚಿವರ ನೇತೃತ್ವದ ನಿಯೋಗವು, ಸೆಮಿಕಂಡಕ್ಟರ್, ಎಲೆಕ್ಟ್ರಾನಿಕ್ಸ್ ಮತ್ತು ಅತ್ಯಾಧುನಿಕ ತಯಾರಿಕಾ ವಲಯದಲ್ಲಿ ಕರ್ನಾಟಕವನ್ನು ಜಾಗತಿಕ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಅಲ್ಲಿಯ ಬಹುರಾಷ್ಟ್ರೀಯ ಪ್ರಮುಖ ಕಂಪನಿಗಳ ಜೊತೆಗೆ ಮಾತುಕತೆ ನಡೆಸಿತು.
- ಪ್ರಮುಖ ಬಹುರಾಷ್ಟ್ರೀಯ ಕಂಪನಿಗಳಿಂದ ಹೆಚ್ಚುವರಿ ಬಂಡವಾಳ ಆಕರ್ಷಿಸುವ ಉದ್ದೇಶದಿಂದ ನಿಯೋಗವು ಜಪಾನ್‌ಗೆ ಭೇಟಿ ನೀಡಿದೆ. ಟೋಕಿಯೊ ಎಲೆಕ್ಟ್ರಾನ್, ಮಿತ್ಸುಬಿಸಿ ಎಲೆಕ್ಟ್ರಿಕ್, ಹೋಂಡಾ, ಯೋಕೊಗವಾ ಎಲೆಕ್ಟ್ರಿಕ್ ಮತ್ತು ರೆಸ್ಟರ್ ಹೋಲ್ಡಿಂಗ್ಸ್ ಕಂಪನಿಗಳ ಜೊತೆಗೆ ವಾಣಿಜ್ಯ ಬಾಂಧವ್ಯ ಬಲಪಡಿಸುವ ಮತ್ತು ಹೊಸ ಬಂಡವಾಳ ಹೂಡಿಕೆ ಸಾಧ್ಯತೆಗಳನ್ನು ಪ್ರಮುಖವಾಗಿ ಚರ್ಚಿಸಲಾಗಿದೆ.
- ಮಿತ್ಸುಬಿಸಿ ಎಲೆಕ್ಟ್ರಿಕ್ ಜೊತೆಗಿನ ಭೇಟಿ ಸಂದರ್ಭದಲ್ಲಿ, ಕಂಪನಿಯು ಕರ್ನಾಟಕದಲ್ಲಿನ ತನ್ನ ತಯಾರಿಕಾ ಚಟುವಟಿಕೆಗಳ ಮಾಹಿತಿ ಹಂಚಿಕೊಂಡಿತು. ಕಂಪನಿಯ ಭವಿಷ್ಯದ ವಿಸ್ತರಣಾ ಯೋಜನೆಗಳಿಗೆ ಅಗತ್ಯ ನೆರವು ಕಲ್ಪಿಸಿಕೊಡುವುದಾಗಿ ಸಚಿವರು ಭರವಸೆ ನೀಡಿದರು.
- ಕರ್ನಾಟಕದಲ್ಲಿನ ತನ್ನ ತಯಾರಿಕಾ ಸಾಮರ್ಥ್ಯವು ಶೀಘ್ರದಲ್ಲಿಯೇ ಪೂರ್ಣ ಪ್ರಮಾಣಕ್ಕೆ ತಲುಪಲಿದ್ದು, ವಿಸ್ತರಣಾ ಅವಕಾಶಗಳನ್ನು ಪರಿಶೀಲಿಸುತ್ತಿ ರುವುದಾಗಿ ಯೋಕೊಗವಾ ಎಲೆಕ್ಟ್ರಿಕ್ ತಿಳಿಸಿದೆ.

Dr Rajkumar IAS Academy

- ನಿಯೋಗದಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಸ್. ಸೆಲ್ವಕುಮಾರ್ ಆಯುಕ್ತೆ ಗುಂಜನ್ ಕೃಷ್ಣ ಇದ್ದಾರೆ.

**ಇಎಂಎಸ್ ಸೇವೆಗೆ ಮನವಿ**

- ಬೆಂಗಳೂರಿನಲ್ಲಿ ಎಲೆಕ್ಟ್ರಾನಿಕ್ಸ್ ತಯಾರಿಕಾ ಸೇವೆಗಳನ್ನು (ಇಎಂಎಸ್) ಆರಂಭಿಸಲು ಮುಂದಾಗಬೇಕು ಎಂದು ಜಪಾನಿನ ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕ್ಟರ್ ವಲಯದ ಪ್ರಮುಖ ಕಂಪನಿಯಾಗಿರುವ ರೆಸ್ಟರ್ ಹೋಲ್ಡಿಂಗ್ಸ್‌ಗೆ ಸಚಿವರು ಮನವಿ ಮಾಡಿದ್ದಾರೆ.

## ❖ ಇಸ್ರೇಲ್ ಜೊತೆ ಹೂಡಿಕೆ ಒಪ್ಪಂದಕ್ಕೆ ಸಹಿ

**ಸಂದರ್ಭ:** ಭಾರತ ಮತ್ತು ಇಸ್ರೇಲ್ ನಡುವೆ ದ್ವಿಪಕ್ಷೀಯ ಹೂಡಿಕೆ ಒಪ್ಪಂದಕ್ಕೆ (ಬಿಐಟಿ) ಸಹಿ ಹಾಕಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯವು ಹೇಳಿದೆ. ಈ ಒಪ್ಪಂದವು ಎರಡೂ ದೇಶಗಳ ನಡುವೆ ಹೂಡಿಕೆಗಳಿಗೆ ಉತ್ತೇಜನ ನೀಡಲು ನೆರವಾಗಲಿದೆ ಎಂದು ಅದು ತಿಳಿಸಿದೆ.

- 'ಒಪ್ಪಂದಕ್ಕೆ ನವದೆಹಲಿಯಲ್ಲಿ ಸಹಿ ಮಾಡಲಾಗಿದೆ' ಎಂದು ಹಣಕಾಸು ಸಚಿವಾಲಯವು ಎಕ್ಸ್ ಮೂಲಕ ತಿಳಿಸಿದೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಇಸ್ರೇಲ್‌ನ ಹಣಕಾಸು ಸಚಿವ ಬೆಜಲೆಲ್ ಸ್ಮೊಟ್ರಿಕ್ ಅವರು ಒಪ್ಪಂದಕ್ಕೆ ಸಹಿ ಮಾಡಿದ್ದಾರೆ.

## ❖ ದಕ್ಷಿಣ ಪಿನಾಕಿನಿ: ನ್ಯಾಯಮಂಡಳಿಗೆ ತಮಿಳುನಾಡು ಪಟ್ಟು

**ಸಂದರ್ಭ:** ಪೆನ್ನಾರ್ (ದಕ್ಷಿಣ ಪಿನಾಕಿನಿ) ನದಿ ನೀರು ಹಂಚಿಕೆ ವಿವಾದ ಬಗೆಹರಿಸಲು ನ್ಯಾಯಮಂಡಳಿ ರಚಿಸಬೇಕು ಎಂದು ತಮಿಳುನಾಡು ಸರ್ಕಾರ ಮತ್ತೆ ಪಟ್ಟು ಹಿಡಿದಿದೆ.

- ವಿವಾದ ಬಗೆಹರಿಸಲು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ ಅವರು ಕರೆದಿದ್ದ ಎರಡು ಸಭೆಗಳನ್ನು ತಮಿಳುನಾಡು ಬಹಿಷ್ಕರಿಸಿತ್ತು. ಸುಪ್ರೀಂ ಕೋರ್ಟ್‌ನಲ್ಲಿ ನಡೆದ ವಿಚಾರಣೆ ಸಂದರ್ಭದಲ್ಲೂ ತಮಿಳುನಾಡು ಇದೇ ನಿಲುವು ತಳೆಯಿತು.
- **ದಕ್ಷಿಣ ಪಿನಾಕಿನಿ ನದಿಯ ಕಣಿವೆಯಲ್ಲಿ ಕರ್ನಾಟಕ ಸರ್ಕಾರವು ಮಾರ್ಕಂಡೇಯ ನದಿಗೆ ಅಡ್ಡಲಾಗಿ ಅಣೆಕಟ್ಟೆ ನಿರ್ಮಿಸಿದೆ. ಬೆಂಗಳೂರಿನ ಎಲೆ ಮಲ್ಲಪ್ಪ ಚೆಟ್ಟಿ ಕೆರೆಯಿಂದ ಹೊಸಕೋಟೆಯವರೆಗೆ ನೀರು ಹರಿಸುವ ಕಾಮಗಾರಿ, ಬ್ಯಾಲಹಳ್ಳಿ ಗ್ರಾಮದ ಹತ್ತಿರ ಪಿನಾಕಿನಿ ನದಿಯಿಂದ ನೀರು ಹರಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದೆ. ಈ ಯೋಜನೆಗೆ ತಮಿಳುನಾಡು ಸರ್ಕಾರ ವಿರೋಧ ವ್ಯಕ್ತಪಡಿಸಿ ಸುಪ್ರೀಂ ಕೋರ್ಟ್‌ಗೆ 2018ರ ಮೇ 18ರಂದು ಅರ್ಜಿ ಸಲ್ಲಿಸಿತ್ತು. ಜಲವಿವಾದ ನ್ಯಾಯ ಮಂಡಳಿ ಸ್ಥಾಪಿಸುವಂತೆ ಒತ್ತಾಯಿಸಿ ತಮಿಳುನಾಡು ಸರ್ಕಾರವು ಕೇಂದ್ರ ಸರ್ಕಾರಕ್ಕೆ 2019ರ ನವೆಂಬರ್ ತಿಂಗಳಲ್ಲಿ ಮನವಿ ಮಾಡಿತ್ತು.**
- ಜಲಶಕ್ತಿ ಸಚಿವಾಲಯವು 2020ರಲ್ಲಿ ಸಂಧಾನ ಸಭೆ ನಡೆಸಿತ್ತು. ಆದರೆ, ರಾಜ್ಯ ಸರ್ಕಾರಗಳು ಒಮ್ಮತಕ್ಕೆ ಬಂದಿರಲಿಲ್ಲ. ಹೊಸದಾಗಿ ಸಂಧಾನ ನಡೆಸುವಂತೆ ಕರ್ನಾಟಕ ಸರ್ಕಾರವು ಕೇಂದ್ರಕ್ಕೆ 2024ರ ಜೂನ್‌ನಲ್ಲಿ ಒತ್ತಾಯಿಸಿತ್ತು. ಈ ನಡುವೆ, ಸುಪ್ರೀಂ ಕೋರ್ಟ್ ನಿರ್ದೇಶನದ ಪ್ರಕಾರ, ಕೇಂದ್ರ ಜಲ ಆಯೋಗದ ಅಧ್ಯಕ್ಷರ ನೇತೃತ್ವದಲ್ಲಿ ಜಲಶಕ್ತಿ ಸಚಿವಾಲಯವು ಹೊಸ ಸಂಧಾನ ಸಮಿತಿ ರಚಿಸಿತ್ತು. ಈ ಸಮಿತಿಯು ಉಭಯ ರಾಜ್ಯಗಳ ನಡುವೆ ಒಂಬತ್ತು ಸಭೆಗಳನ್ನು ನಡೆಸಿತ್ತು ಹಾಗೂ ಯೋಜನಾ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿತ್ತು.

Dr. Rajkumar IAS Academy

## ❖ ಆರ್ಥಿಕ ನೀತಿಗಳು ಪಾರದರ್ಶಕವಾಗಿರಲಿ ವಿದೇಶಾಂಗ ಸಚಿವ ಎಸ್. ಜೈಶಂಕರ್

**ಸಂದರ್ಭ:** ಜಾಗತಿಕ ಆರ್ಥಿಕ ನೀತಿಗಳು ನ್ಯಾಯಯುತ, ಪಾರದರ್ಶಕ ಮತ್ತು ಎಲ್ಲರಿಗೂ ಪ್ರಯೋಜನವಾಗುವಂತೆ ಇರಬೇಕು ಎಂದು ವಿದೇಶಾಂಗ ಸಚಿವ ಎಸ್.ಜೈಶಂಕರ್ ಪ್ರತಿಪಾದಿಸಿದರು.

- 'ಬ್ರಿಕ್ಸ್' ರಾಷ್ಟ್ರಗಳ ನಾಯಕರ ವರ್ಚುವಲ್ ಶೃಂಗಸಭೆಯಲ್ಲಿ ಮಾತನಾಡಿದ ಅವರು, 'ವ್ಯಾಪಾರ ಮತ್ತು ಹೂಡಿಕೆಗಾಗಿ ಜಗತ್ತು ಇಂದು ಸ್ಥಿರ ವಾತಾವರಣವನ್ನು ಬಯಸುತ್ತಿದೆ' ಎಂದರು.
- 'ಅಂತರರಾಷ್ಟ್ರೀಯ ವ್ಯಾಪಾರ ನೀತಿಯು ಮುಕ್ತ, ನಿಷ್ಪಕ್ಷಪಾತ, ಎಲ್ಲರನ್ನೂ ಒಳಗೊಳ್ಳುವ ಮತ್ತು ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ವಿಶೇಷ ಒತ್ತು ನೀಡುವ ತತ್ವಗಳನ್ನು ಆಧರಿಸಿರಬೇಕು' ಎಂದು ಹೇಳಿದರು.
- ಜೈಶಂಕರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರ ಪ್ರತಿನಿಧಿಯಾಗಿ ಶೃಂಗಸಭೆಯಲ್ಲಿ ಪಾಲ್ಗೊಂಡರು. ಚೀನಾದ ಅಧ್ಯಕ್ಷ ಷಿ ಜಿನ್‌ಪಿಂಗ್ ಮತ್ತು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರೂ ಶೃಂಗದಲ್ಲಿ ಭಾಗವಹಿಸಿದ್ದಾರೆ.

## ❖ ಅರ್ಜಿ ವರ್ಗಾವಣೆಗೆ 'ಸುಪ್ರೀಂ' ಒಪ್ಪಿಗೆಆನ್‌ಲೈನ್ ಗೇಮಿಂಗ್ ನಿಷೇಧ: ಮನವಿ ಸಲ್ಲಿಸಿದ್ದ ಕೇಂದ್ರ ಸರ್ಕಾರ

**ಸಂದರ್ಭ:** 'ಆನ್‌ಲೈನ್ ಗೇಮಿಂಗ್ ಉತ್ತೇಜನ ಮತ್ತು ನಿಯಂತ್ರಣ ಕಾಯ್ದೆ' ಪ್ರಶ್ನಿಸಿ ಮೂರು ಹೈಕೋರ್ಟ್‌ಗಳಿಗೆ ಸಲ್ಲಿಕೆ ಯಾಗಿರುವ ಅರ್ಜಿಗಳನ್ನು ಸುಪ್ರೀಂ ಕೋರ್ಟ್‌ಗೆ ವರ್ಗಾಯಿಸುವಂತೆ ಕೋರಿ ಕೇಂದ್ರ ಸರ್ಕಾರ ಸಲ್ಲಿಸಿರುವ ಮನವಿಯನ್ನು ಸುಪ್ರೀಂ ಕೋರ್ಟ್ ಪುರಸ್ಕರಿಸಿದೆ.

- ದೆಹಲಿ, ಕರ್ನಾಟಕ ಮತ್ತು ಮಧ್ಯಪ್ರದೇಶ ಹೈಕೋರ್ಟ್‌ಗಳ ಮುಂದೆ ಬಾಕಿ ಇರುವ ಅರ್ಜಿಗಳನ್ನು ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದೀವಾಲಾ ಮತ್ತು ಕೆ.ವಿ.ವಿಶ್ವನಾಥನ್ ಅವರ ಪೀಠವು ಸುಪ್ರೀಂ ಕೋರ್ಟ್‌ಗೆ ವರ್ಗಾಯಿಸಿತು.
- ಕಾಯ್ದೆಯನ್ನು ಪ್ರಶ್ನಿಸಿ ಸಲ್ಲಿಸಲಾ ಗಿರುವ ಅರ್ಜಿಗಳು ಮತ್ತು ಇದುವರೆಗೆ ನಡೆದಿರುವ ವಿಚಾರಣೆಯ ಸಂಪೂರ್ಣ ದಾಖಲೆಗಳನ್ನು ಒಂದು ವಾರದೊಳಗೆ ವರ್ಗಾಯಿಸುವಂತೆ ಪೀಠವು ಸಂಬಂಧಪಟ್ಟ ಹೈಕೋರ್ಟ್‌ಗಳಿಗೆ ನಿರ್ದೇಶಿಸಿತು.
- ಕೇಂದ್ರ ಸರ್ಕಾರದ ಪರ ಹಾಜರಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಮತ್ತು ಅರ್ಜಿದಾರರ ಪರ ಹಾಜರಿದ್ದ ಹಿರಿಯ ವಕೀಲರಾದ ಸಿ.ಎ.ಸುಂದರಂ ಹಾಗೂ ಅರವಿಂದ ದಾತಾರ್ ಅವರ ವಾದ ಆಲಿಸಿದ ಪೀಠ, 'ಸಮಯವನ್ನು ಉಳಿಸಲಿಕ್ಕಾಗಿ ಈ ವರ್ಗಾವಣೆ ಪ್ರಕ್ರಿಯೆ ಡಿಜಿಟಲ್ ರೂಪದಲ್ಲಿ ನಡೆಯಲಿ' ಎಂದು ಹೇಳಿತು.
- ಹೈಕೋರ್ಟ್‌ಗಳಿಗೆ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಸುಪ್ರೀಂ ಕೋರ್ಟ್‌ಗೆ ವರ್ಗಾಯಿಸುವಂತೆ ಕೋರಿ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಮನವಿ ಮಾಡಿತ್ತು.
- ಕಾನೂನಿನಲ್ಲಿರುವ ಅಂಶಗಳ ಕುರಿತು ಒಂದೇ ರೀತಿಯ ಪ್ರಶ್ನೆಗಳನ್ನು ಎತ್ತಿರುವ ಹಲವು ಅರ್ಜಿಗಳು ವಿವಿಧ ಹೈಕೋರ್ಟ್‌ಗಳ ಮುಂದೆ ಬಾಕಿಯಿರು ವುದರಿಂದ, ಅಭಿಪ್ರಾಯಗಳ ಭಿನ್ನತೆ ಅಥವಾ ಬಹುವಿಧದ ವಿಚಾರಣೆಗಳನ್ನು ತಪ್ಪಿಸಲು ಅದನ್ನು ಈ ನ್ಯಾಯಾಲಯ (ಸುಪ್ರೀಂ ಕೋರ್ಟ್) ಅಥವಾ ಯಾವುದಾದರೂ ಹೈಕೋರ್ಟ್‌ಗೆ ವರ್ಗಾಯಿಸುವುದು ಒಳ್ಳೆಯದು ಎಂದು ಅರ್ಜಿಯಲ್ಲಿ ಕೋರಲಾಗಿತ್ತು.
- ಆನ್‌ಲೈನ್ ಜೂಜು ನಿಷೇಧಿಸಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಕಾಯ್ದೆಯನ್ನು ಪ್ರಶ್ನಿಸಿ ಹೆಡ್ ಡಿಜಿಟಲ್ ವರ್ಕ್ಸ್ ಪ್ರೈವೆಟ್ ಲಿಮಿಟೆಡ್, ಬಘೀರಾ ಕೇರಮ್ ಪ್ರೈವೆಟ್ ಲಿಮಿಟೆಡ್ ಮತ್ತು ಕ್ಲಬ್‌ಬೂಮ್ ಇಲೆವೆನ್ ಸ್ಪೋರ್ಟ್ಸ್ ಆ್ಯಂಡ್ ಎಂಟರ್‌ಟೇನ್‌ಮೆಂಟ್ ಪ್ರೈವೆಟ್ ಲಿಮಿಟೆಡ್ ಕಂಪನಿಗಳು ಕ್ರಮವಾಗಿ ಕರ್ನಾಟಕ ಹೈಕೋರ್ಟ್, ದೆಹಲಿ ಹೈಕೋರ್ಟ್ ಹಾಗೂ ಮಧ್ಯ ಪ್ರದೇಶ ಹೈಕೋರ್ಟ್‌ಗಳಿಗೆ ಅರ್ಜಿ ಸಲ್ಲಿಸಿವೆ.

Dr. Rajkumar IAS Academy

## ❖ ಅಲ್ಕರಾಜ್‌ಗೆ ಅಮೆರಿಕ ಓಪನ್ ಕಿರೀಟ

**<u>ಸಂದರ್ಭ:</u>** ಕಾರ್ಲೋಸ್ ಅಲ್ಕರಾಜ್ ಅವರು ನಾಲ್ಕು ಸೆಟ್‌ಗಳ ಫೈನಲ್ ಸೆಣಸಾಟದಲ್ಲಿ ಯಾನಿಕ್ ಸಿನ್ನರ್ ಅವರನ್ನು ಸೋಲಿಸಿ ಅಮೆರಿಕ ಓಪನ್ ಸಿಂಗಲ್ಸ್ ಪ್ರಶಸ್ತಿ ಗೆದ್ದುಕೊಂಡರು. ಬದ್ಧ ಎದುರಾಳಿಗಳ ಸೆಣಸಾಟದಲ್ಲಿ ಸ್ಪೇನ್‌ನ ಆಟಗಾರ ತಮ್ಮ ಪ್ರಭುತ್ವವನ್ನು ಮತ್ತೊಮ್ಮೆ ಸ್ಥಾಪಿಸಿದರು.



ರನ್ನರ್ ಅಪ್ ಯಾನಿಕ್ ಸಿನ್ನರ್ (ಎಡ) ಮತ್ತು ಚಾಂಪಿಯನ್ ಕಾರ್ಲೋಸ್ ಅಲ್ಕರಾಜ್ -ಎಎಫ್‌ಪಿ ಚಿತ್ರಗಳು

- **22 ವರ್ಷ ವಯಸ್ಸಿನ ಅಲ್ಕರಾಜ್ ಫೈನಲ್‌ನಲ್ಲಿ 6–2, 3–6, 6–1, 6–4 ರಿಂದ ಗೆಲುವು ಸಾಧಿಸಿ ಎರಡನೇ ಸಲ ಅಮೆರಿಕ ಓಪನ್ ಪ್ರಶಸ್ತಿ ಗೆದ್ದುಕೊಂಡರು. ಒಟ್ಟಾರೆ ಅವರಿಗೆ ಇದು ಆರನೇ ಗ್ರ್ಯಾನ್‌ಸ್ಲಾಮ್ ಪ್ರಶಸ್ತಿಯಾಗಿದೆ.**
- ಜುಲೈ ತಿಂಗಳಲ್ಲಿ ವಿಂಬಲ್ಡನ್ ಫೈನಲ್‌ನಲ್ಲಿ ಅಗ್ರ ಶ್ರೇಯಾಂಕದ ಆಟಗಾರನ ಕೈಲಿ ಅನುಭವಿಸಿದ ಸೋಲಿಗೆ ಅಲ್ಕರಾಜ್ ಇಲ್ಲಿ ಸೇಡು ತೀರಿಸಿಕೊಂಡರು. ಅದು ಪ್ರಮುಖ ಟೂರ್ನಿಗಳ ಫೈನಲ್‌ನಲ್ಲಿ ಅವರಿಗೆ ಮೊದಲ ಸೋಲಾಗಿತ್ತು.
- **ಅಗ್ರಪಟ್ಟ: ಇಲ್ಲಿ ಪಡೆದ ಪ್ರಶಸ್ತಿಯೊಂದಿಗೆ ಅಲ್ಕರಾಜ್ ಅವರು ಸೆಪ್ಟೆಂಬರ್ 2023ರ ನಂತರ ವಿಶ್ವ ಕ್ರಮಾಂಕಪಟ್ಟಿಯಲ್ಲಿ ಸಿನ್ನರ್ ಅವರನ್ನು ಹಿಂದೆಹಾಕಿ ಮರಳಿ ಅಗ್ರಸ್ಥಾನಕ್ಕೇರಿದರು. ಮಾತ್ರವಲ್ಲ, ಹಾರ್ಡ್‌ಕೋರ್ಟ್‌ನಲ್ಲಿ 25 ವರ್ಷದ ಸಿನ್ನರ್ ಅವರ ಸತತ 27 ಗೆಲುವುಗಳ ಸರಪಣಿಯನ್ನು ತುಂಡರಿಸಿದರು.**
- ಅಲ್ಕರಾಜ್ ಅವರು ಸಿನ್ನರ್ ಎದುರಿನ ಈ ಹಿಂದಿನ ಎಂಟು ಮುಖಾಮುಖಿಗಳಲ್ಲಿ ಏಳನ್ನು ಗೆದ್ದಂತಾಗಿದೆ. ಒಟ್ಟಾರೆ ಸಿನ್ನರ್ ವಿರುದ್ಧ ಅವರು 10–5 ಗೆಲುವಿನ ದಾಖಲೆ ಹೊಂದಿದ್ದಾರೆ.
- ಕಳೆದ ಎಂಟು ಗ್ರ್ಯಾನ್‌ಸ್ಲಾಮ್‌ಗಳಲ್ಲಿ ಇವರಿಬ್ಬರು ತಲಾ ನಾಲ್ಕನ್ನು ಹಂಚಿಕೊಂಡಿದ್ದಾರೆ. ಆ ಮೂಲಕ ವಿಶ್ವ ಟೆನಿಸ್‌ನಲ್ಲಿ ಹಳೆಯ ಹುಲಿ ನೊವಾಕ್ ಜೊಕೊವಿಚ್ ಅವರನ್ನೂ ಸೇರಿದಂತೆ ಎಲ್ಲರ ಮೇಲೂ ಪ್ರಾಬಲ್ಯ ಮೆರೆದಿದ್ದಾರೆ.
- ಫ್ಲಷಿಂಗ್ ಮಿಡೋಸ್‌ನಲ್ಲಿ ದಶಕಕ್ಕೂ ಹೆಚ್ಚು ಸಮಯದಿಂದ ಯಾರೂ ಪ್ರಶಸ್ತಿ ಉಳಿಸಿಕೊಂಡಿಲ್ಲ. ಕಳೆದ ಸಲದ ವಿಜೇತ ಸಿನ್ನರ್ ಸಹ ಆ ಸಾಲಿಗೆ ಸೇರಿದರು. ರೋಜರ್ ಫೆಡರರ್ ಅವರು 2004 ರಿಂದ 08ರವರೆಗೆ ಸತತ ಐದು ಸಲ ಪ್ರಶಸ್ತಿ ಗೆದ್ದಿದ್ದರು. ನಂತರ ಯಾರೂ ಇಲ್ಲಿ ಸತತವಾಗಿ ಚಾಂಪಿಯನ್ ಆಗಿಲ್ಲ.

## ❖ ಜಾವೆಲಿನ್ ಥ್ರೋ: ನೀರಜ್ ದಾಖಲೆ ಮುರಿದ ಶಿವಂ

**<u>ಸಂದರ್ಭ:</u>** ಜಾವೆಲಿನ್ ಥ್ರೋಪಟು ಶಿವಂ ಲೋಹಕರೆ ಅವರು ಜಾಲಹಳ್ಳಿಯಲ್ಲಿ ನಡೆದ ಇಂಟರ್ ಸರ್ವೀಸಸ್ ಅಥ್ಲೆಟಿಕ್ಸ್ ಚಾಂಪಿಯನ್ ಷಿಪ್‌ನಲ್ಲಿ ಕೂಟ ದಾಖಲೆಯೊಂದಿಗೆ ಚಿನ್ನದ ಪದಕ ಗೆದ್ದರು.

- ಆರ್ಮಿ ರೆಡ್ ತಂಡವನ್ನು ಪ್ರತಿನಿಧಿಸಿದ 20 ವರ್ಷದ ಶಿವಂ (ಮಹಾರಾಷ್ಟ್ರ) ಅವರು 84.31 ಮೀಟರ್ ದೂರ ಈಟಿಯನ್ನು ಎಸೆದರು. **ಈ ಮೂಲಕ ನೀರಜ್ ಚೋಪ್ರಾ (83.80 ಮೀ) ಹೆಸರಿನಲ್ಲಿದ್ದ ಕೂಟ ದಾಖಲೆಯನ್ನು ಅವರು ಮುರಿದರು.** ಈ ಕೂಟವು ವಿಶ್ವ ಅಥ್ಲೆಟಿಕ್ಸ್‌ನಿಂದ ಮಾನ್ಯತೆ ಪಡೆಯದ ಕಾರಣ ವೈಯಕ್ತಿಕ ಶ್ರೇಷ್ಠ ದಾಖಲೆಗೆ ಪರಿಗಣಿಸುವುದಿಲ್ಲ.
- ಕರ್ನಾಟಕದ ಮಣಿಕಂಠ ಹೋಬಳಿದಾರ್ ಅವರು ಆರ್ಮಿ ರೆಡ್ ತಂಡವನ್ನು ಪ್ರತಿನಿಧಿಸಿ 100 ಮೀ, 200 ಮೀ ಮತ್ತು 4x100 ಮೀ ರಿಲೆ ಸ್ಪರ್ಧೆಯಲ್ಲಿ ಚಿನ್ನದ ಪದಕಗಳನ್ನು ಗೆದ್ದರು.

Dr. Rajkumar IAS/KAS Academy

## ❖ ಫುಟ್‌ಬಾಲ್: ಭಾರತಕ್ಕೆ 3ನೇ ಸ್ಥಾನ

**ಸಂದರ್ಭ:** ಹಿಸೋರ್ (ತಾಜಿಕಿಸ್ತಾನ), (ಪಿಟಿಐ): ಭಾರತ, ಸಿಎಎಫ್‌ಎ ನೇಷನ್ಸ್ ಕಪ್ ಫುಟ್‌ಬಾಲ್ ಟೂರ್ನಿಯಲ್ಲಿ ತನಗಿಂತ ಮೇಲಿನ ಕ್ರಮಾಂಕದ ಒಮಾನ್ ತಂಡವನ್ನು ಪೆನಾಲ್ಟಿಯಲ್ಲಿ 3–2 ಗೋಲುಗಳಿಂದ ಸೋಲಿಸಿ ಪದಾರ್ಪಣೆ ಯಲ್ಲಿ ಮೂರನೇ ಸ್ಥಾನ ಗಳಿಸಿತು.

- ಭಾರತಕ್ಕೆ, ಪಶ್ಚಿಮ ಏಷ್ಯಾದ ರಾಷ್ಟ್ರ ಒಮಾನ್ ವಿರುದ್ಧ ಇದು ಮೊದಲ ಗೆಲುವು. ಹಿಸೋರ್ ಸೆಂಟ್ರಲ್ ಸ್ಟೇಡಿಯಂನಲ್ಲಿ ನಿಗದಿ ಅವಧಿಯ ಆಟ 1–1 ಸಮಬಲಗೊಂಡಿತ್ತು. ಒಮಾನ್ ಪರ ಜಮೀಲ್ ಅಲ್ ಯಹ್ಮದಿ 55ನೇ ನಿಮಿಷ ಗೋಲು ಗಳಿಸಿದರು. ಆದರೆ ಉದಾಂತ ಸಿಂಗ್ ಕುಮಮ್‌80ನೇ ನಿಮಿಷ ಗೋಲು ಗಳಿಸಿದ್ದರಿಂದ ಸ್ಕೋರ್ ಸಮನಾಯಿತು.
- ಪೆನಾಲ್ಟಿಯಲ್ಲಿ ಲಾಲಿಯನ್ ಝುವಾಲ ಚಾಂಗ್ಟೆ, ರಾಹುಲ್ ಭೆಕೆ ಮತ್ತು ಜಿತಿನ್ ಎಂ.ಎಸ್. ತಮ್ಮ ಯತ್ನಗಳಲ್ಲಿ ಯಶಸ್ಸು ಕಂಡರು.




## ❖ ಎನ್‌ಡಿಎಯ ರಾಧಾಕೃಷ್ಣನ್ ದೇಶದ 15ನೇ ಉಪರಾಷ್ಟ್ರಪತಿ

**ಸಂದರ್ಭ:** ಜಗದೀಪ್ ಧನಕರ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಉಪರಾಷ್ಟ್ರಪತಿ ಹುದ್ದೆಗೆ ನಡೆದ ಚುನಾವಣೆಯಲ್ಲಿ ಆಡಳಿತಾರೂಢ ಎನ್‌ಡಿಎ ಅಭ್ಯರ್ಥಿ ಸಿ.ಪಿ.ರಾಧಾಕೃಷ್ಣನ್ ಅವರು ನಿರೀಕ್ಷೆಯಂತೆ ಗೆಲುವು ಸಾಧಿಸಿದರು. ಅವರು, ವಿರೋಧ ಪಕ್ಷಗಳ ಒಮ್ಮತದ ಅಭ್ಯರ್ಥಿ ಬಿ.ಸುದರ್ಶನ ರೆಡ್ಡಿ ಅವರಿಗಿಂತ 152 ಹೆಚ್ಚು ಮತಗಳನ್ನು ಪಡೆದು **ದೇಶದ 15ನೇ ಉಪ ರಾಷ್ಟ್ರಪತಿಯಾಗಿ** ಚುನಾಯಿತರಾದರು.

- ರಾಧಾಕೃಷ್ಣನ್ ಅವರ ಪರವಾಗಿ ಒಟ್ಟು 452 ಮತಗಳು ಚಲಾವಣೆಯಾಗಿದ್ದರೆ, ಪ್ರತಿಸ್ಪರ್ಧಿ ಸುದರ್ಶನ ರೆಡ್ಡಿ ಅವರಿಗೆ 300 ಮತಗಳು ಬಂದಿವೆ ಎಂದು ಚುನಾವಣಾ ಅಧಿಕಾರಿ ಪಿ.ಸಿ. ಮೋದಿ ಅವರು ಪ್ರಕಟಿಸಿದರು.
- 'ಒಟ್ಟು 767 ಸಂಸದರು (ಶೇ 98.2) ಮತಚಲಾಯಿಸಿದ್ದು, ಅವುಗಳಲ್ಲಿ 752 ಮತಗಳು ಮಾನ್ಯಗೊಂಡಿವೆ ಮತ್ತು 15 ಮತಗಳು ಅಮಾನ್ಯಗೊಂಡಿವೆ. ಅಂಚೆ ಮತಪತ್ರ ಸಲ್ಲಿಸಿದ್ದ ಸಂಸದರೊಬ್ಬರು 'ಅದನ್ನು ಪರಿಗಣಿಸಬೇಡಿ' ಎಂದು ಆನಂತರ ಹೇಳಿದ್ದರಿಂದ ಅದನ್ನು ಪರಿಗಣಿಸಿಲ್ಲ.
- ಅಡ್ಡಮತದಾನದ ಲಾಭ ಬಿಜೆಪಿಗೆ: 'ರಾಧಾಕೃಷ್ಣನ್ ಅವರ ಪರವಾಗಿ ಕೆಲ ಅಡ್ಡಮತದಾನ ನಡೆದಿರುವುದನ್ನು ಫಲಿತಾಂಶ ಸೂಚಿಸುತ್ತದೆ. ವಿರೋಧ ಪಕ್ಷಗಳ ಕನಿಷ್ಠ 15 ಸದಸ್ಯರು ಎನ್‌ಡಿಎ ಅಭ್ಯರ್ಥಿಗೆ ಮತ ಚಲಾಯಿಸಿದ್ದಾರೆ' ಎಂದು ಬಿಜೆಪಿ ನಾಯಕರು ಪ್ರತಿಪಾದಿಸಿದ್ದಾರೆ. ಅದಕ್ಕೂ ಮುನ್ನ ಮಾತನಾಡಿದ್ದ ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, 'ವಿರೋಧ ಪಕ್ಷಗಳು ಒಗ್ಗಟ್ಟಿನಿಂದ ಇವೆ. ಎಲ್ಲ 315 ಸಂಸದರು ಮತ ಚಲಾಯಿಸಿದ್ದಾರೆ' ಎಂದಿದ್ದರು.



ಭಾರತದ ನೂತನ ಉಪರಾಷ್ಟ್ರಪತಿಯಾಗಿ ಸಿ.ಪಿ.ರಾಧಾಕೃಷ್ಣನ್ ಆಯ್ಕೆಯಾಗಿದ್ದಾರೆ. ಭಾರತದ ಉಪರಾಷ್ಟ್ರಪತಿ ಹುದ್ದೆ ಹಲವು ಕಾರಣಗಳಿಂದ ವಿಶೇಷವಾಗಿದೆ. ವಿಮರ್ಶಕರಿಂದ 'ಹಿಸ್ ಸೂಪರ್‌ಫ್ಲುಯಸ್ ಹೈನೆಸ್' ಎಂಬ ಟೀಕೆಗೂ ಒಳಗಾಗಿದೆ. ಈ ಹಿನ್ನೆಲೆಯಲ್ಲಿ ಭಾರತದ ಉಪರಾಷ್ಟ್ರಪತಿ ಹುದ್ದೆ ಕುರಿತಾದ ವಿಶಿಷ್ಟ ಮಾಹಿತಿಗಳು ಇಲ್ಲಿವೆ.

# ಉಪರಾಷ್ಟ್ರಪತಿ ಹುದ್ದೆಯ ಸುತ್ತಮುತ್ತ

ಸಿ.ಪಿ.ರಾಧಾಕೃಷ್ಣನ್

■ ಚನ್ನಬಸಪ್ಪ ರೊಟ್ಟಿ

### ಸಂಘದ ಕಟ್ಟಾಳು ಒಬಿಸಿ ನಾಯಕ

ನೂತನ ಉಪ ರಾಷ್ಟ್ರಪತಿಯಾಗಿ ಆಯ್ಕೆಯಾಗಿರುವ ಸಿ.ಪಿ.ರಾಧಾಕೃಷ್ಣನ್ ಅವರು ತಮಿಳುನಾಡಿನ ತಿರುಪ್ಪೂರಿನಲ್ಲಿ 1957ರ ಅಕ್ಟೋಬರ್ 20ರಂದು ಜನಿಸಿದರು. ಒಬಿಸಿ ಕೆಟಗರಿಯಲ್ಲಿ ಬರುವ ಪ್ರಭಾವಿ ಗೌಂಡರ್ ಸಮುದಾಯದವರು. ಬಿಜಿನೆಸ್ ಅಡ್ಮಿನಿಸ್ಟ್ರೇಷನ್‌ನಲ್ಲಿ ಪದವಿ ಗಳಿಸಿದರು. ಕಾಲೇಜಿನಲ್ಲಿದ್ದಾಗ ಟೇಬಲ್ ಟೆನಿಸ್ ಚಾಂಪಿಯನ್ ಆಗಿದ್ದರು ಮತ್ತು ದೂರ ಅಂತರದ ಓಟಗಾರರಾಗಿದ್ದರು. ಹದಿನಾರನೇ ವಯಸ್ಸಿನಿಂದಲೇ ರಾಷ್ಟ್ರೀಯ ಸ್ವಯಂಸೇವಕ ಸಂಘ ಮತ್ತು ಬಿಜೆಪಿ (ಮುಂಚೆ ಜನಸಂಘ) ಸಂಪರ್ಕ. 1974ರಲ್ಲಿ ಜನಸಂಘದ ರಾಜ್ಯ ಕಾರ್ಯಕಾರಿಣಿಗೆ ಆಯ್ಕೆ. 1998ರಲ್ಲಿ ಕೊಯಮತ್ತೂರು ಕ್ಷೇತ್ರದಿಂದ ಲೋಕಸಭೆಗೆ ಪ್ರವೇಶ. 1999ರಲ್ಲಿಯೂ ಅಲ್ಲಿಂದಲೇ ಆಯ್ಕೆ. ರಾಜ್ಯದಲ್ಲಿ ಎಐಎಡಿಎಂಕೆ ಜತೆ ಬಿಜೆಪಿ ಮೈತ್ರಿ ಸಾಧಿಸುವಲ್ಲಿ ಇವರೂ ಪ್ರಮುಖ ಪಾತ್ರ ನಿಭಾಯಿಸಿದ್ದಾರೆ. 2004-2006ರವರೆಗೆ ಬಿಜೆಪಿ ತಮಿಳುನಾಡು ರಾಜ್ಯಾಧ್ಯಕ್ಷರಾಗಿ ಕಾರ್ಯ. 2004ರ ಲೋಕಸಭಾ ಚುನಾವಣೆಯಲ್ಲಿ ಸೋಲಿನ ಕಹಿಯುಣ್ಣಬೇಕಾಯಿತು. 2024ರಿಂದ ವಿವಿಧ ಅವಧಿಗೆ ಪುದುಚೇರಿ ಲೆಫ್ಟಿನೆಂಟ್ ಗವರ್ನರ್, ತೆಲಂಗಾಣ ಮತ್ತು ಜಾರ್ಖಂಡ್ ರಾಜ್ಯಪಾಲರಾಗಿ ಕಾರ್ಯನಿರ್ವಹಣೆ. 2024ರ ಜುಲೈ 31ರಂದು ಮಹಾರಾಷ್ಟ್ರ ಗವರ್ನರ್ ಆಗಿ ನೇಮಕ. ದಕ್ಷಿಣ ಭಾರತದಲ್ಲಿ ವಿಶೇಷವಾಗಿ ತಮಿಳುನಾಡಿನಲ್ಲಿ ಪಕ್ಷದ ಬೇರನ್ನು ಗಟ್ಟಿಗೊಳಿಸುವ ಉದ್ದೇಶದಿಂದ ಅವರನ್ನು ಉಪ ರಾಷ್ಟ್ರಪತಿ ಹುದ್ದೆಗೆ ತರಲಾಗುತ್ತಿದೆ ಎಂಬುದು ರಾಜಕೀಯ ವಿಶ್ಲೇಷಕರ ವ್ಯಾಖ್ಯಾನ. ಮುಂದಿನ ವರ್ಷ (2026) ತಮಿಳುನಾಡು ವಿಧಾನಸಭಾ ಚುನಾವಣೆ ನಡೆಯಲಿದೆ.

ವಿ ಫೋಕಸ್

### ಚುನಾವಣಾ ಪ್ರಕ್ರಿಯೆ (ವಿಧಿ 66)

■ 1952ರ ಉಪರಾಷ್ಟ್ರಪತಿ ಚುನಾವಣೆ ಕಾಯ್ದೆಯನ್ವಯ ಭಾರತದ ಚುನಾವಣಾ ಆಯೋಗ ನಿರ್ವಹಿಸುತ್ತದೆ. ■ ಭಾರತದ ಉಪರಾಷ್ಟ್ರಪತಿಗಳನ್ನು ಸಂಸತ್ತಿನ ಉಭಯ ಸದನಗಳ ಸದಸ್ಯರನ್ನು ಒಳಗೊಂಡ (ನಾಮಕರಣಗೊಂಡ ಸದಸ್ಯರೂ ಸೇರಿದಂತೆ) ನಿರ್ವಾಚನ ಮಂಡಳಿ (ಚುನಾವಣಾ ಕಾಲೇಜ್) ಮೂಲಕ ಆಯ್ಕೆ ಮಾಡಲಾಗುತ್ತದೆ. ■ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭಾ ಸದಸ್ಯರು ಉಪರಾಷ್ಟ್ರಪತಿಗಳನ್ನು ಚುನಾಯಿಸುವ ನಿರ್ವಾಚನಾ ಮಂಡಳಿ ಒಳಗೊಂಡಿರುವುದಿಲ್ಲ. ■ ರಾಷ್ಟ್ರಪತಿಗಳ ಚುನಾವಣೆಯಂತೆ ಉಪರಾಷ್ಟ್ರಪತಿಗಳ ಚುನಾವಣೆಯಲ್ಲಿಯೂ ಏಕಮತ ವರ್ಗಾವಣೆ ಪ್ರಮಾಣಾನುಗುಣ (ಆದ್ಯತೆ ಶ್ರೇಣೀಕರಣ/ಸಮಾಜಮಿತಿ ಮಾಪನ) ಪದ್ಧತಿ ಅನುಸರಿಸಲಾಗುತ್ತದೆ. ■ ವಿಪ್ ನಿರ್ಬಂಧ ಇಲ್ಲದ್ದರಿಂದ ಯಾವ ಅಭ್ಯರ್ಥಿಗಾದರೂ ತಮ್ಮ ಮತ ಚಲಾಯಿಸಬಹುದು. ■ ಉಪರಾಷ್ಟ್ರಪತಿ ಚುನಾವಣೆಗೆ ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ 20 ಮಂದಿ ಮತದಾರರು ಪ್ರಸ್ತಾಪಕರಾಗಿ, 20 ಮಂದಿ ಅನುಮೋದಕರಾಗಿ ಸಹಿ ಹಾಕಬೇಕು. ■ ಉಪರಾಷ್ಟ್ರಪತಿ ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳು ಆರ್‌ಬಿಐನಲ್ಲಿ 15,000 ರೂ. ಠೇವಣಿ ಇಡಬೇಕು.

### ಉಪರಾಷ್ಟ್ರಪತಿ ಹುದ್ದೆ ಅರ್ಹತೆಗಳು (ವಿಧಿ 66)

■ ಭಾರತದ ಪೌರನಾಗಿರಬೇಕು. ■ 35 ವರ್ಷ ಮೀರಿದವರಾಗಿರಬೇಕು. ■ ರಾಜ್ಯಸಭಾ ಸದಸ್ಯರಿಗಿರಬೇಕಾದ ಅರ್ಹತೆಗಳನ್ನು ಹೊಂದಿರಬೇಕು. ■ ಯಾವುದೇ ಲಾಭದಾಯಕ ಹುದ್ದೆಯಲ್ಲಿರಬಾರದು.

### ಸಿಜೆಐ ರಾಷ್ಟ್ರಪತಿ ಆಗುವ ವಿಶೇಷ ಸಂದರ್ಭ

ರಾಷ್ಟ್ರಪತಿ ಹಾಗೂ ಉಪರಾಷ್ಟ್ರಪತಿ ಎರಡೂ ಹುದ್ದೆಗಳು ತೆರವಾದ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಾಧೀಶರು ರಾಷ್ಟ್ರಪತಿಗಳಾಗಿ ಕಾರ್ಯನಿರ್ವಹಿಸುತ್ತಾರೆ. ಉದಾಹರಣೆಗೆ: 1969ರಲ್ಲಿ ರಾಷ್ಟ್ರಪತಿಯಾಗಿದ್ದ ಡಾ.ಜಾಕಿರ್ ಹುಸೇನ್ ನಿಧನರಾದಾಗ ಉಪರಾಷ್ಟ್ರಪತಿ ವಿ.ವಿ.ಗಿರಿ ರಾಜೀನಾಮೆ ನೀಡಿದ್ದ ಸಂದರ್ಭದಲ್ಲಿ ಅಂದಿನ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಹಿದಾಯತ್ ಉಲ್ಲಾ ರಾಷ್ಟ್ರಪತಿಗಳಾಗಿ ಕಾರ್ಯನಿರ್ವಹಿಸಿದ್ದರು.

### ಗಮನಿಸಬೇಕಾದ ಅಂಶಗಳು

**ಅಮೆರಿಕದಿಂದ ಎರವಲು:** ಭಾರತದ ಉಪರಾಷ್ಟ್ರಪತಿ ಹುದ್ದೆಯನ್ನು ಅಮೆರಿಕ ಸಂವಿಧಾನದಿಂದ ಎರವಲು ಪಡೆಯಲಾಗಿದೆ.

**ಅನಗತ್ಯ ಹುದ್ದೆ ಎಂಬ ಟೀಕೆ:** ಭಾರತದ ಸಂವಿಧಾನ ಉಪರಾಷ್ಟ್ರಪತಿಗಳಿಗೆ ಆ ಹುದ್ದೆಯಲ್ಲಿ ಯಾವುದೇ ಮಹತ್ವದ ಕಾರ್ಯ ನಿಯೋಜಿಸಿಲ್ಲ. ಆದ್ದರಿಂದ, ವಿಮರ್ಶಕರು ಈ ಹುದ್ದೆಯನ್ನು 'ಹಿಸ್ ಸೂಪರ್‌ಫ್ಲುಯಸ್ ಹೈನೆಸ್' (ಅನಗತ್ಯವಾಗಿರುವ ಮಹಾನ್ ಹುದ್ದೆ) ಎಂದು ಟೀಕಿಸುತ್ತಾರೆ.

**ತಕ್ಷಣದ ಪರ್ಯಾಯ ಇಲ್ಲ:** ಭಾರತದ ಉಪರಾಷ್ಟ್ರಪತಿ ಹುದ್ದೆ ಖಾಲಿಯಾದಾಗ, ಅಥವಾ ಅವರು ತಮ್ಮ ಅವಧಿ ಮುಗಿಯುವ ಮುನ್ನ ಭಾರತದ ರಾಷ್ಟ್ರಪತಿಯಾಗಿ ಅಧಿಕಾರ ಸ್ವೀಕರಿಸಿದಾಗ, ಉಪರಾಷ್ಟ್ರಪತಿಗಳ ಕರ್ತವ್ಯಗಳನ್ನು ಯಾರು ನಿರ್ವಹಿಸಬೇಕು ಎಂಬ ಕುರಿತು ಸಂವಿಧಾನ ಏನನ್ನೂ ಉಲ್ಲೇಖಿಸಿಲ್ಲ.

**ಜಂಟಿ ಸದನ ನಿಯಮ ಬದಲಾವಣೆ:** ಎರಡೂ ಸದನಗಳು ಜಂಟಿ ಸಭೆ ಸೇರಿ ಉಪರಾಷ್ಟ್ರಪತಿಗಳನ್ನು ಚುನಾಯಿಸಬೇಕೆಂಬ ನಿಯಮವನ್ನು ಸಂವಿಧಾನ ಒಳಗೊಂಡಿತ್ತು. 1961ರಲ್ಲಿ ಜಾರಿಗೆ ಬಂದ 11ನೇ ಸಂವಿಧಾನ ತಿದ್ದುಪಡಿ ಕಾಯ್ದೆ ಮೂಲಕ ಈ ಸಂಕೀರ್ಣ ನಿಯಮ ತೆಗೆದುಹಾಕಲಾಗಿದೆ.

**ಹೆಚ್ಚು ಮತ ಗಳಿಸಿದವರು:** ಉಪರಾಷ್ಟ್ರಪತಿ ಚುನಾವಣೆಯಲ್ಲಿ ಅತಿ ಹೆಚ್ಚು ಮತಗಳ ಹೆಗ್ಗಳಿಕೆಯನ್ನು ಕೊಚೇರಿಲ್ ರಾಮನ್ ನಾರಾಯಣನ್ (1992) ಹೊಂದಿದ್ದಾರೆ. ಅವರು 700 ಮತ ಗಳಿಸಿದ್ದರು. ಅವರ ಪ್ರತಿಸ್ಪರ್ಧಿ ಕಾಕಾ ಜೋಗಿಂದರ್ ಸಿಂಗ್ ಕೇವಲ 1 ಮತ ಗಳಿಸಿದ್ದರು.

**4 ಬಾರಿ ಅವಿರೋಧ ಆಯ್ಕೆ:** ಡಾ.ಸರ್ವಪಲ್ಲಿ ರಾಧಾಕೃಷ್ಣನ್ 1952ರಲ್ಲಿ ಮತ್ತು 1957ರಲ್ಲಿ, ನ್ಯಾಯಮೂರ್ತಿ ಮಹಮ್ಮದ್ ಹಿದಾಯತ್ ಉಲ್ಲಾ ಅವರು 1979ರಲ್ಲಿ ಹಾಗೂ ಶಂಕರ್ ದಯಾಳ್ ಶರ್ಮಾ 1987ರಲ್ಲಿ ಉಪರಾಷ್ಟ್ರಪತಿಯಾಗಿ ಅವಿರೋಧ ಆಯ್ಕೆಯಾಗಿದ್ದಾರೆ.

**ರಾಷ್ಟ್ರಪತಿಗಳಾಗಿ ಆಯ್ಕೆಯಾದವರು 6 ಜನ:** ಇಲ್ಲಿಯವರೆಗೆ ಒಟ್ಟು 6 ಜನ ಉಪರಾಷ್ಟ್ರಪತಿಗಳು ರಾಷ್ಟ್ರಪತಿಗಳಾಗಿ ಆಯ್ಕೆಯಾಗಿದ್ದಾರೆ. ಅವರೆಂದರೆ; ಡಾ.ಸರ್ವಪಲ್ಲಿ ರಾಧಾಕೃಷ್ಣನ್ (1962-1967), ಡಾ.ಜಾಕಿರ್ ಹುಸೇನ್ (1967-1969), ವರಾಹ ವೆಂಕಟ ಗಿರಿ (1969-1974), ರಾಮಸ್ವಾಮಿ ವೆಂಕಟರಾಮನ್ (1987-1992), ಶಂಕರ್ ದಯಾಳ್ ಶರ್ಮಾ (1992-1997) ಹಾಗೂ ಕೊಚೇರಿಲ್ ರಾಮನ್ ನಾರಾಯಣನ್ (1997-2002) (ಗಮನಿಸಿ: ಆವರಣದಲ್ಲಿರುವುದು ರಾಷ್ಟ್ರಪತಿ ಆಗಿದ್ದಾಗಿನ ಅವಧಿ).

**ಅಧಿಕಾರದಲ್ಲಿದ್ದಾಗಲೇ ನಿಧನ:** ಅಧಿಕಾರದಲ್ಲಿದ್ದಾಗ ನಿಧನರಾದ ಏಕೈಕ ಉಪರಾಷ್ಟ್ರಪತಿ ಕೃಷ್ಣಕಾಂತ್.

### ಸಂವಿಧಾನದ ವಿಧಿಗಳು ಏನು ಹೇಳುತ್ತವೆ?

**63ನೇ ವಿಧಿ:** ಭಾರತದಲ್ಲಿ ಉಪರಾಷ್ಟ್ರಪತಿ ಹುದ್ದೆ ಇರಬೇಕು ಎಂದು ಹೇಳುತ್ತದೆ.

**64ನೇ ವಿಧಿ:** ಉಪರಾಷ್ಟ್ರಪತಿ ರಾಜ್ಯಸಭೆಯ ಪದನಿಮಿತ್ತ ಅಧ್ಯಕ್ಷರಾಗಿರುತ್ತಾರೆ ಎಂದು ಹೇಳುತ್ತದೆ.

**65ನೇ ವಿಧಿ:** ರಾಷ್ಟ್ರಪತಿಗಳ ನಿಧನ, ರಾಜೀನಾಮೆ, ಪದಚ್ಯುತಿ ಅಥವಾ ಇತರ ಕಾರಣದಿಂದ ರಾಷ್ಟ್ರಪತಿ ಹುದ್ದೆ ಖಾಲಿ ಇದ್ದಾಗ ಉಪರಾಷ್ಟ್ರಪತಿಗಳು ಹಂಗಾಮಿ ರಾಷ್ಟ್ರಪತಿಯಾಗಿರುತ್ತಾರೆ.

**66ನೇ ವಿಧಿ:** ಉಪರಾಷ್ಟ್ರಪತಿಗಳ ಅರ್ಹತೆಗಳನ್ನು ವಿವರಿಸುತ್ತದೆ ಹಾಗೂ ಒಬ್ಬ ವ್ಯಕ್ತಿ ಎಷ್ಟು ಸಾರಿ ಬೇಕಾದರೂ ಉಪರಾಷ್ಟ್ರಪತಿಯಾಗಲು ಅವಕಾಶ ನೀಡುತ್ತದೆ.

**67ನೇ ವಿಧಿ:** ಉಪರಾಷ್ಟ್ರಪತಿ ಅಧಿಕಾರಾವಧಿ (5 ವರ್ಷ), ರಾಜೀನಾಮೆ ಮತ್ತು ಪದಚ್ಯುತಿ ಕುರಿತು ವಿವರಿಸುತ್ತದೆ. ಉತ್ತರಾಧಿಕಾರಿ ಪ್ರಮಾಣವಚನ ಸ್ವೀಕರಿಸುವವರೆಗೆ ಅಧಿಕಾರದಲ್ಲಿ ಮುಂದುವರಿಯಲು ಅವಕಾಶ ನೀಡುತ್ತದೆ.

**68ನೇ ವಿಧಿ:** ಉಪರಾಷ್ಟ್ರಪತಿ ಹುದ್ದೆ ಖಾಲಿಯಾದಾಗ ಆದಷ್ಟು ಬೇಗ ಚುನಾವಣೆ ನಡೆಸಬೇಕು ಎಂದು ತಿಳಿಸುತ್ತದೆ.

**69ನೇ ವಿಧಿ:** ಉಪರಾಷ್ಟ್ರಪತಿ ತಮ್ಮ ಅಧಿಕಾರ ಸ್ವೀಕರಿಸುವ ಮೊದಲು ರಾಷ್ಟ್ರಪತಿ ಸಮ್ಮುಖದಲ್ಲಿ ಅಥವಾ ಅವರಿಂದ ನೇಮಕಗೊಂಡ ವ್ಯಕ್ತಿ ಸಮ್ಮುಖದಲ್ಲಿ ಪ್ರಮಾಣವಚನ ಸ್ವೀಕರಿಸಬೇಕು ಎಂದು ಹೇಳುತ್ತದೆ.

**70ನೇ ವಿಧಿ:** ಅನಿಶ್ಚಿತ ಸಂದರ್ಭಗಳಲ್ಲಿ ಉಪರಾಷ್ಟ್ರಪತಿ ರಾಷ್ಟ್ರಪತಿಗಳ ಕಾರ್ಯ ನಿರ್ವಹಿಸುವ ಬಗ್ಗೆ ತಿಳಿಸುತ್ತದೆ. ಅನಿಶ್ಚಿತ ಸಂದರ್ಭ ಯಾವುವು ಎಂಬುದನ್ನು ನಿರ್ಧರಿಸುವ ಅಧಿಕಾರವನ್ನು ಸಂಸತ್ತಿಗೆ ನೀಡುತ್ತದೆ.

**71ನೇ ವಿಧಿ:** ಉಪರಾಷ್ಟ್ರಪತಿ ಚುನಾವಣೆಗೆ ಸಂಬಂಧಿಸಿದ ವಿವಾದಗಳನ್ನು ಸರ್ವೋಚ್ಚ ನ್ಯಾಯಾಲಯದಲ್ಲಿಯೇ ವಿಚಾರಿಸಬೇಕು. ಈ ಕುರಿತು ಮೇಲ್ಮನವಿಗೆ ಅವಕಾಶವಿಲ್ಲ ಎಂದು ಉಲ್ಲೇಖಿಸುತ್ತದೆ.

**92ನೇ ವಿಧಿ:** ಉಪರಾಷ್ಟ್ರಪತಿಗಳನ್ನು ಹುದ್ದೆಯಿಂದ ತೆಗೆದುಹಾಕುವ ನಿರ್ಣಯ ಚರ್ಚೆಯಲ್ಲಿರುವಾಗ ಅವರು ರಾಜ್ಯಸಭೆ ಅಧ್ಯಕ್ಷತೆ ವಹಿಸದಂತೆ ನಿರ್ಬಂಧಿಸುತ್ತದೆ.

**100ನೇ ವಿಧಿ:** ರಾಜ್ಯಸಭೆ ಅಧ್ಯಕ್ಷರಾಗಿರುವಾಗ ನಿರ್ಣಾಯಕ ಮತ ಚಲಾಯಿಸುವ ಅಧಿಕಾರ ನೀಡುತ್ತದೆ.

### ಪದಚ್ಯುತಗೊಳಿಸುವಿಕೆ (ವಿಧಿ: 67(ಬಿ) ಮತ್ತು 67(ಸಿ))

ಉಪರಾಷ್ಟ್ರಪತಿಗಳನ್ನು ಅವರ ಅಧಿಕಾರಾವಧಿ ಮುಗಿಯುವ ಮುನ್ನ ರಾಜ್ಯಸಭೆಯಲ್ಲಿ ಪರಿಣಾಮಕಾರಿ ಬಹುಮತ ಮತ್ತು ಲೋಕಸಭೆಯಲ್ಲಿ ಸರಳ ಬಹುಮತದಿಂದ ನಿರ್ಣಯ ಅಂಗೀಕರಿಸುವ ಮೂಲಕ ಪದಚ್ಯುತಗೊಳಿಸಬಹುದು. ನಿರ್ಣಯ ಮಂಡಿಸುವ ಕನಿಷ್ಠ 14 ದಿನಗಳ ಮುನ್ನ ಉಪರಾಷ್ಟ್ರಪತಿಗಳಿಗೆ ನೋಟಿಸ್ ನೀಡಬೇಕು.

### ಪ್ರತ್ಯೇಕ ವೇತನ ಸೌಲಭ್ಯಗಳಿಲ್ಲ!

■ ಭಾರತದ ಸಂವಿಧಾನವು ಉಪರಾಷ್ಟ್ರಪತಿ ಹುದ್ದೆಗೆ ಪ್ರತ್ಯೇಕ ವೇತನ ಮತ್ತು ಇತರ ಸೌಲಭ್ಯಗಳನ್ನು ನಿಗದಿಪಡಿಸಿಲ್ಲ.
■ ಇವರು ರಾಜ್ಯಸಭೆ ಪದನಿಮಿತ್ತ ಅಧ್ಯಕ್ಷರಾಗಿ ಮಾಸಿಕ 4 ಲಕ್ಷ ರೂ. ವೇತನ, ದಿನಭತ್ಯೆ, ಬಾಡಿಗೆರಹಿತ ನಿವಾಸ, ವೈದ್ಯಕೀಯ ಭತ್ಯೆ, ಪ್ರವಾಸ ಭತ್ಯೆ, ಪಿಂಚಣಿ ಪಡೆಯುತ್ತಾರೆ.

### ಭಾರತದ ಉಪರಾಷ್ಟ್ರಪತಿಗಳ ಪಟ್ಟಿ

1. ಡಾ.ಸರ್ವಪಲ್ಲಿ ರಾಧಾಕೃಷ್ಣನ್ (1952ರ ಮೇ 13 ರಿಂದ 1957ರ ಮೇ 12 )
2. ಡಾ.ಸರ್ವಪಲ್ಲಿ ರಾಧಾಕೃಷ್ಣನ್ (1957ರ ಮೇ 13 ರಿಂದ 1962ರ ಮೇ 12 )
3. ಡಾ.ಜಾಕಿರ್ ಹುಸೇನ್ (1962ರ ಮೇ 13 ರಿಂದ 1967ರ ಮೇ 12 )
4. ವರಾಹ ವೆಂಕಟ ಗಿರಿ (1967ರ ಮೇ 13 ರಿಂದ 1969ರ ಜುಲೈ 20)
5. ಗೋಪಾಲ್ ಸ್ವರೂಪ್ ಪಾಠಕ್ (1969ರ ಆಗಸ್ಟ್ 31 ರಿಂದ 1974ರ ಆ.30)
6. ಬಸಪ್ಪ ದಾನಪ್ಪ ಜತ್ತಿ (1974ರ ಆಗಸ್ಟ್ 31ರಿಂದ 1979ರ ಆಗಸ್ಟ್ 30)
7. ನ್ಯಾ.ಮಹಮ್ಮದ್ ಹಿದಾಯತ್ ಉಲ್ಲಾ (1979ರ ಆ.31 ರಿಂದ 1984ರ ಆ.30)
8. ರಾಮಸ್ವಾಮಿ ವೆಂಕಟರಾಮನ್ (1984ರ ಆಗಸ್ಟ್ 31ರಿಂದ 1987ರ ಜುಲೈ 24)
9. ಶಂಕರ್ ದಯಾಳ್ ಶರ್ಮಾ (1987ರ ಸೆಪ್ಟೆಂಬರ್ 7 ರಿಂದ 1992ರ ಜುಲೈ 24)
10. ಕೊಚೇರಿಲ್ ರಾಮನ್ ನಾರಾಯಣನ್ (1992ರ ಆ.21ರಿಂದ 1997ರ ಜು.24)
11. ಕೃಷ್ಣಕಾಂತ್ (1997ರ ಆಗಸ್ಟ್ 21 ರಿಂದ 2002ರ ಜುಲೈ 27)
12. ಭೈರೋನ್ ಸಿಂಗ್ ಶೇಖಾವತ್ (2002ರ ಆ.19ರಿಂದ 2007ರ ಜುಲೈ 21)
13. ಮಹಮ್ಮದ್ ಹಮೀದ್ ಅನ್ಸಾರಿ (2007ರ ಆಗಸ್ಟ್ 11 ರಿಂದ 2012ರ ಆ.10)
14. ಮಹಮ್ಮದ್ ಹಮೀದ್ ಅನ್ಸಾರಿ (2012ರ ಆಗಸ್ಟ್ 11 ರಿಂದ 2017ರ ಆ.10)
15. ಎಂ.ವೆಂಕಯ್ಯ ನಾಯ್ಡು (2017ರ ಆಗಸ್ಟ್ 11ರಿಂದ 2022ರ ಆಗಸ್ಟ್ 11)
16. ಜಗದೀಪ್ ಧನಕರ್ (2022ರ ಆಗಸ್ಟ್ 11ರಿಂದ 2025ರ ಜುಲೈ 21)
17. ಸಿ.ಪಿ.ರಾಧಾಕೃಷ್ಣನ್ (2025ರ ಸೆಪ್ಟೆಂಬರ್ 9ರಿಂದ)

## ❖ ಯೋಜನೆಗಳಿಗೆ 'ಸುಪ್ರೀಂ' ನಿರ್ಬಂಧ'ಮಹದಾಯಿ–ಕೋಟಿಗಾಂವ್ ಪ್ರದೇಶದಲ್ಲಿ ಅಭಿವೃದ್ಧಿ ಚಟುವಟಿಕೆ ಕೂಡದು'

**ಸಂದರ್ಭ:** ಮಹದಾಯಿ- ಕೋಟಿಗಾಂವ್ ಪ್ರದೇಶದಲ್ಲಿ ಯಾವುದೇ ಅಭಿವೃದ್ಧಿ ಚಟುವಟಿಕೆ ಅಥವಾ ಯೋಜನೆಗಳನ್ನು ಕೈಗೊಳ್ಳಬಾರದು ಎಂದು ಸುಪ್ರೀಂ ಕೋರ್ಟ್ ಆದೇಶಿಸಿದೆ.

- ಉತ್ತರ ಗೋವಾದಲ್ಲಿರುವ ಮಹದಾಯಿ ವನ್ಯಜೀವಿ ಧಾಮವು ಕಾಳಿ ಹುಲಿ ಮೀಸಲು ಪ್ರದೇಶ, ಭೀಮಘಡ ವನ್ಯಜೀವಿಧಾಮ ಮತ್ತು ಭಗವಾನ್ ಮಹಾವೀರ ರಾಷ್ಟ್ರೀಯ ಉದ್ಯಾನ ಒಳಗೊಂಡಂತೆ ಭೌಗೋಳಿಕವಾಗಿ ಕರ್ನಾಟಕದ ಜೊತೆಗೆ ಬೆಸೆದುಕೊಂಡಿದೆ.
- ವನ್ಯಜೀವಿಧಾಮದಲ್ಲಿ ವಾಣಿಜ್ಯ ಯೋಜನೆಗಳಿಗೆ ಅನುಮತಿ ನೀಡಿರುವುದನ್ನು ಆಕ್ಷೇಪಿಸಿ ಗೋವಾ ಫೌಂಡೇಷನ್ ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಪೀಠ ಈ ನಿರ್ದೇಶನ ನೀಡಿತು.
- ಮಹದಾಯಿ ವನ್ಯಜೀವಿ ಅಭಯಾರಣ್ಯ ಮತ್ತು ಪಕ್ಕದ ಪ್ರದೇಶಗಳನ್ನು ಹುಲಿ ಸಂರಕ್ಷಿತ ಪ್ರದೇಶವೆಂದು ಅಧಿಸೂಚನೆ ಹೊರಡಿಸುವ ಸಂಬಂಧ ಕೇಂದ್ರ ಉನ್ನತಾಧಿಕಾರ ಸಮಿತಿಯು (ಸಿಇಸಿ) ಆರು ವಾರಗಳಲ್ಲಿ ವರದಿ ಸಲ್ಲಿಸಬೇಕು ಎಂದು ಪೀಠ ನಿರ್ದೇಶಿಸಿದೆ. ಬಳಿಕ ವಿಚಾರಣೆಯನ್ನು ಎಂಟು ವಾರ ಮುಂದೂಡಿದೆ.
- **ಮಹದಾಯಿ ವನ್ಯಜೀವಿಧಾಮ ಹಾಗೂ ಆಸುಪಾಸಿನ ಪ್ರದೇಶಗಳನ್ನು 'ಹುಲಿ ಸಂರಕ್ಷಣಾ ಮೀಸಲು ಅರಣ್ಯ'ವೆಂದು ಮೂರು ತಿಂಗಳಲ್ಲಿ ಅಧಿಸೂಚನೆ ಹೊರಡಿಸಬೇಕು ಎಂದು ಬಾಂಬೆ ಹೈಕೋರ್ಟ್‌ನ ಗೋವಾ ಪೀಠವು ಗೋವಾ ಸರ್ಕಾರಕ್ಕೆ 2023ರಲ್ಲಿ ನಿರ್ದೇಶನ ನೀಡಿತ್ತು.**
- ವನ್ಯಜೀವಿಧಾಮ ಹಾಗೂ ಸಮೀಪದ ಅರಣ್ಯ ಭಾಗದಲ್ಲಿ ಜನವಸತಿಗಳಿವೆ ಹಾಗೂ ಹುಲಿ ಗೋವಾದ ಸ್ಥಳೀಯ ವನ್ಯಜೀವಿ ಯಲ್ಲ ಎಂಬ ಕಾರಣ ನೀಡಿ ಮೀಸಲು ಅರಣ್ಯವಾಗಿ ಘೋಷಿಸಲು ಗೋವಾ ಸರ್ಕಾರ ವಿರೋಧ ವ್ಯಕ್ತಪಡಿಸಿತ್ತು.
- ಕರ್ನಾಟಕ, ಮಹಾರಾಷ್ಟ್ರದ ಪಶ್ಚಿಮ ಘಟ್ಟದ ಅರಣ್ಯ ಭಾಗಗಳ ಜೊತೆಗೆ ಭೌಗೋಳಿಕವಾಗಿ ಬೆಸೆದುಕೊಂಡಿರುವ ಮಹದಾಯಿ ವನ್ಯಜೀವಿ ಧಾಮದಲ್ಲಿ ಕೆಲವು ಹುಲಿಗಳು ಕಾಣಿಸಿಕೊಂಡಿದ್ದವು. ಇದನ್ನು ಹುಲಿ ಮೀಸಲು ಪ್ರದೇಶವಾಗಿ ಘೋಷಿಸಬೇಕು ಎಂಬ ಬೇಡಿಕೆ ಎದ್ದಿತ್ತು. ಕೆಲವು ವರ್ಷಗಳ ಹಿಂದೆ ಮಹದಾಯಿ ವನ್ಯಜೀವಿ ಧಾಮದಲ್ಲಿ ನಾಲ್ಕು ಹುಲಿಗಳ ಹತ್ಯೆಯಾಗಿತ್ತು.
- **ಈ ಪ್ರದೇಶವು ಹುಲಿ ಸಂತತಿ ವೃದ್ಧಿಗೆ ಸೂಕ್ತವಾದ ಪ್ರದೇಶವಾಗಿದೆ. ಇದನ್ನು ಮೀಸಲು ಅರಣ್ಯವಾಗಿ ಘೋಷಿಸಬೇಕು ಎಂದು ಎನ್‌ಟಿಸಿಎ ಸಲಹೆ ನೀಡಿತ್ತು.**
- **ಕರ್ನಾಟಕ, ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳು ಮಹದಾಯಿಯಲ್ಲಿ ತಮ್ಮ ಪಾಲಿನ ನೀರನ್ನು ಬಳಸಿಕೊಳ್ಳುವ ಹಕ್ಕು ಹೊಂದಿವೆ. ಆದರೆ, ಅದಕ್ಕೆ ಪರಿಸರ ಮತ್ತು ಅರಣ್ಯ ಅನುಮತಿಗಳನ್ನು ಪಡೆಯಬೇಕಿದೆ.** ಗೋವಾ ಸರ್ಕಾರ ಮತ್ತು ಅಲ್ಲಿನ ಪರಿಸರವಾದಿಗಳ ನಡುವಿನ ಹೋರಾಟವು ಕರ್ನಾಟಕದ ಮೇಲೆ ನೇರ ಪರಿಣಾಮ ಬೀರುವುದಿಲ್ಲ

## ❖ ಜಿಬಿಎ: ಮೂರು ಅಂತಸ್ತಿನ ಕಟ್ಟಡಗಳಿಗೆ ಒಸಿ ವಿನಾಯಿತಿ

**ಸಂದರ್ಭ:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯಲ್ಲಿ 1,200 ಚದರ ಅಡಿವರೆಗಿನ ನಿವೇಶನದಲ್ಲಿ ನಿರ್ಮಿಸಿರುವ ಮೂರು ಅಂತಸ್ತಿನ ಕಟ್ಟಡಕ್ಕೆ ಸ್ವಾಧೀನಾನುಭವ ಪ್ರಮಾಣ ಪತ್ರ (ಒಸಿ) ಪಡೆಯುವುದರಿಂದ ವಿನಾಯಿತಿ ನೀಡಲಾಗಿದೆ.

- ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ–2024ರ ಕಲಂ 241(7)ರಂತೆ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರದ ಅನ್ವಯ ಈ ವಸತಿ ಕಟ್ಟಡಗಳಿಗೆ ಒಸಿಯಿಂದ ವಿನಾಯಿತಿ ನೀಡಿ ಆದೇಶ ಹೊರಡಿಸಲಾಗಿದೆ.
- 1,200 ಚದರ ಅಡಿ ನಿವೇಶನದಲ್ಲಿ ನೆಲ ಹಾಗೂ 2 ಅಂತಸ್ತು ಅಥವಾ ಸ್ಟಿಲ್ಟ್ + ಮೂರು ಅಂತಸ್ತಿನ ಕಟ್ಟಡಗಳಿಗೆ ಒಸಿಯಿಂದ ವಿನಾಯಿತಿ ನೀಡಲಾಗಿದೆ. ಜಿಬಿಎ ಮುಖ್ಯ ಆಯುಕ್ತರ ಪ್ರಸ್ತಾವವನ್ನು

ಕೂಲಂಕಷವಾಗಿ ಪರಿಶೀಲಿಸಿ ಸಣ್ಣ ಪ್ರಮಾಣದ ಕಟ್ಟಡಗಳಿಗೆ ಒಸಿ ವಿನಾಯಿತಿ ನೀಡುವುದರಿಂದ, ಸಾರ್ವಜನಿಕರಿಗೆ ಸಕಾಲದಲ್ಲಿ ಸೇವೆ ಒದಗಿಸಲು ಸಹಕಾರಿಯಾದಂತಾಗುತ್ತದೆ ಎಂದು ನಗರಾಭಿವೃದ್ಧಿ ಇಲಾಖೆ ಆದೇಶದಲ್ಲಿ ತಿಳಿಸಿದೆ.

- ಪ್ರತಿ ವರ್ಷ 1,200 ಚದರಡಿಗಿಂತ ಕಡಿಮೆ ವಿಸ್ತೀರ್ಣದ ನಿವೇಶನಗಳಲ್ಲಿ ಸುಮಾರು ನಾಲ್ಕು ಸಾವಿರ ಕಟ್ಟಡಗಳಿಗೆ ನಕ್ಷೆ ಮಂಜೂರು ಮಾಡಲಾಗುತ್ತಿದೆ.

## ❖ 'ಧಾರವಾಡದಲ್ಲಿ ಹಿಟಾಚಿ ಘಟಕ'

**ಸಂದರ್ಭ:** 'ಜಪಾನಿನ ಹಿಟಾಚಿ ಕನ್‌ಸ್ಟ್ರಕ್ಷನ್ ಮಷಿನರಿ ಕಂಪನಿಯು ಧಾರವಾಡದಲ್ಲಿ ನಿರ್ಮಾಣ ಯಂತ್ರೋಪಕರಣಗಳ ವಿನ್ಯಾಸ ಮತ್ತು ಅಭಿವೃದ್ಧಿ ಕೇಂದ್ರ ಸ್ಥಾಪಿಸಲಿದೆ' ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರು ತಿಳಿಸಿದ್ದಾರೆ.

- ಜಪಾನ್ ಪ್ರವಾಸದಲ್ಲಿರುವ ಅವರು ಹಿಟಾಚಿ ಕಂಪನಿಯ ಪ್ರತಿನಿಧಿಗಳ ಭೇಟಿಯ ನಂತರ ಹೊರಡಿಸಿದ ಪ್ರಕಟಣೆ ಯಲ್ಲಿ ಈ ಮಾಹಿತಿ ನೀಡಿದ್ದಾರೆ.
- '**ಧಾರವಾಡದಲ್ಲಿ ಈ ಕೇಂದ್ರವು 2027ರ ವೇಳೆಗೆ ಕಾರ್ಯಾರಂಭ ಮಾಡಲಿದೆ. ವಾಹನಗಳ ಏರ್ ಬ್ಯಾಗ್‌ನ ಬಿಡಿ ಭಾಗಗಳ ತಯಾರಿಕಾ ಕಂಪನಿ ಅಸಾಹಿ ಕಸೆಯಿ ಅಡ್ವಾನ್ಸ್ಡ್ ಬೆಂಗಳೂರಿನಲ್ಲಿ ಬಿಡಿ ಭಾಗಗಳ ತಯಾರಿಕಾ ಘಟಕ ಸ್ಥಾಪಿಸುವುದಾಗಿ ಹೇಳಿದೆ**' ಎಂದಿದ್ದಾರೆ.

## ❖ ಅಪರೂಪದ ಶಾಸನ ಪತ್ತೆ

**ಸಂದರ್ಭ:** ತಾಲ್ಲೂಕಿನ ನಾರಿಹಳ್ಳ ಜಲಾಶಯದ ಹಿನ್ನೀರಿನ ತಟದಲ್ಲಿನ ಗಂಡಿ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಇಲ್ಲಿನ **ಉಭಯ ದೇವರುಗಳ ಆರಾಧನೆ**ಯನ್ನು ಉಲ್ಲೇಖಿಸುವ ಅಪರೂಪದ **ಅಪ್ರಕಟಿತ ಮ್ಯಾಂಗನೀಸ್ ಶಾಸನ ಪತ್ತೆ**ಯಾಗಿದೆ.

- 10 ಅಡಿ ಎತ್ತರವಿರುವ ಮ್ಯಾಂಗನೀಸ್ ಬಂಡೆಯಲ್ಲಿ 3 ಅಡಿ ಎತ್ತರ 3 ಅಡಿ ಅಗಲದಲ್ಲಿ ಆರು ಸಾಲುಗಳಲ್ಲಿ ಶಾಸನ ಕೆತ್ತಲಾಗಿದೆ.
- '**ಮರುಜನ್ಮ ಮತ್ತು ಮೋಕ್ಷಕ್ಕೆ ಸಂಬಂಧಿಸಿದ ಶಾಸನ ಇದಾಗಿದ್ದು ಮಾನವನಿಗೆ ನೀತಿ ಬೋಧಿಸುವ ಪ್ರತೀಕವಾಗಿದೆ**' ಎಂದು ಕೃಷ್ಣದೇವರಾಯ ವಿಶ್ವಾವಿದ್ಯಾಲಯದ ಪ್ರೊ.ತಿಪ್ಪೇಸ್ವಾಮಿ ತಿಳಿಸಿದ್ದಾರೆ.



ಪತ್ತೆಯಾದ ಶಾಸನ

## ❖ ಮಿಜೋರಾಂ ರಾಜಧಾನಿಗೆ ರೈಲುಮಾರ್ಗ ಸಿದ್ಧ

**ಸಂದರ್ಭ:** ಮಿಜೋರಾಂ ರಾಜ್ಯದ ರಾಜಧಾನಿ ಐಜ್ವಾಲ್‌ಗೆ ಸಂಪರ್ಕಿಸುವ ರೈಲು ಮಾರ್ಗ ಕಣಿವೆಗಳ ನಡುವೆ ಅತ್ಯಧಿಕ ಸೇತುವೆ ಮತ್ತು ಸುರಂಗಗಳೊಂದಿಗೆ ಸಿದ್ಧಗೊಂಡಿದ್ದು, ಉದ್ಘಾಟನೆಗಾಗಿ ಕಾಯುತ್ತಿದೆ.

- **ಈಶಾನ್ಯ ಭಾರತದ ರಾಜ್ಯಗಳ ರಾಜಧಾನಿಗಳಿಗೆ ರೈಲು ಸಂಪರ್ಕ ಇರಲಿಲ್ಲ.**
- **ಅರುಣಾಚಲ ಪ್ರದೇಶವನ್ನು ಹೊರತುಪಡಿಸಿ ಉಳಿದ ಏಳು ರಾಜ್ಯಗಳ ರಾಜಧಾನಿಗಳಿಗೆ ರೈಲು ಸಂಪರ್ಕ ಕಾಮಗಾರಿಗೆ 2014ರಲ್ಲಿ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದ್ದರು.**
- **ಮಿಜೋರಾಂನ ರಾಜಧಾನಿ ಐಜ್ವಾಲ್ ಕಡಿದಾದ ಬೆಟ್ಟಗಳ ಮೇಲೆ ಇರುವುದರಿಂದ ರೈಲು ಸಂಪರ್ಕ ಕಾಮಗಾರಿ ನಿಧಾನವಾಗಿ ನಡೆದಿದ್ದು, 11 ವರ್ಷಗಳ ಬಳಿಕ ಪೂರ್ಣಗೊಂಡಿದೆ.**



ಮಿಜೋರಾಂ ರಾಜ್ಯದ ಬೈರಾಬಿ–ಸೈರಾಂಗ್ ನಡುವಿನ ರೈಲು ಮಾರ್ಗದಲ್ಲಿ ನಿರ್ಮಾಣಗೊಂಡಿರುವ ಸೇತುವೆ

Dr. Rajkumar IAS Academy

- **ಅಸ್ಸಾಂನಿಂದ ಮಿಜೋರಾಂನ ಬೈರಾಬಿವರೆಗೆ ಬ್ರಾಡ್‌ಗೇಜ್ ರೈಲು ಮಾರ್ಗ 2016ರಲ್ಲಿ ನಿರ್ಮಾಣವಾಗಿತ್ತು. ಬೈರಾಬಿಗೆ ಮೊದಲ ಸರಕು ರೈಲು ಆ ವರ್ಷ ಬಂದಿತ್ತು. ಇದುವೇ ರಾಜ್ಯದಲ್ಲಿ ಸಂಚರಿಸಿದ ಮೊದಲ ರೈಲು ಆಗಿತ್ತು. ಇದೀಗ ಬೈರಾಬಿಯಿಂದ ಐಜ್ವಾಲ್‌ನ ಸೈರಾಂಗ್‌ವರೆಗೆ ರೈಲು ಮಾರ್ಗವಾಗಿದ್ದು, ಸರಕು ರೈಲುಗಳಲ್ಲದೇ ಪ್ರಯಾಣಿಕರ ರೈಲುಗಳೂ ಸಂಚರಿಸಲಿವೆ.**
- **51.38 ಕಿ.ಮೀ. ಉದ್ದದ ಈ ಮಾರ್ಗದಲ್ಲಿ** 48 ಸುರಂಗಗಳು, 55 ದೊಡ್ಡ ರೈಲು ಸೇತುವೆಗಳು, 88 ಸಣ್ಣ ಸೇತುವೆಗಳಿವೆ. 1.86 ಕಿ.ಮೀ. ಉದ್ದದ ಸುರಂಗವು ದೊಡ್ಡ ರೈಲು ಸುರಂಗ ಮಾರ್ಗವಾಗಿದ್ದರೆ, 114 ಮೀಟರ್ ಎತ್ತರದ ದೊಡ್ಡ ಸೇತುವೆಯೂ ಇದೆ. **ಒಟ್ಟು ಆರು ಸೇತುವೆಗಳು ದೆಹಲಿಯ ಕುತುಬ್ ಮೀನಾರ್‌ಗಿಂತ (72 ಮೀಟರ್) ಅಧಿಕ ಎತ್ತರವನ್ನು ಹೊಂದಿವೆ.**
- 'ಐಜ್ವಾಲ್ ಮತ್ತು ಕೊಲಸಿಬ್ ಜಿಲ್ಲೆಗಳಲ್ಲಿ ಸಾಗುವ ಈ ಮಾರ್ಗವನ್ನು ₹8,071 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಬೈರಾಬಿ, ಹೋರ್ಟೋಕಿ, ಕವನ್‌ಪುವಿ, ಮುಆಲ್ಕಾಂಗ್ ಮತ್ತು ಸೈರಾಂಗ್ ನಿಲ್ದಾಣಗಳಿವೆ. **ಗಂಟೆಗೆ 100 ಕಿ.ಮೀ. ವೇಗದಲ್ಲಿ ಸಾಗಬಹುದಾದ ಸಾಮರ್ಥ್ಯವನ್ನು ಹೊಂದಿದೆ.** ಒಂದೆರಡು ವಾರದಲ್ಲಿ ಉದ್ಘಾಟನೆಗೆ ಪ್ರಧಾನಿ ಕಚೇರಿಯಿಂದ ದಿನಾಂಕ ನಿಗದಿಯಾಗಲಿದೆ' ಎಂದು ಈಶಾನ್ಯ ಗಡಿನಾಡು ರೈಲ್ವೆ (ನಾರ್ತ್ ಈಸ್ಟ್ ಫ್ರಾಂಟಿಯರ್ ರೈಲ್ವೆ) ಅಧಿಕಾರಿ.
- 'ಕೇಂದ್ರ ಸರ್ಕಾರದ ಮಹತ್ವದ ಯೋಜನೆ ಇದಾಗಿದ್ದು, ಐಜ್ವಾಲ್‌ನಿಂದ ಗಡಿಭಾಗಗಳಿಗೂ ವಿಸ್ತರಿಸಲು ಸಮೀಕ್ಷೆಯನ್ನು ಕೈಗೊಳ್ಳಲಾಗಿದೆ.

## ❖ ರೈಲು ಹಳಿಗಳೇ ಸೌರ ವಿದ್ಯುತ್ ಸ್ಥಾವರ

**ಸಂದರ್ಭ:** ಈ ವರ್ಷದ ಜೂನ್ ಅಂತ್ಯದಲ್ಲಿ ಭಾರತೀಯ ರೈಲ್ವೆಗೆ ಸಂಬಂಧಿಸಿದ ಒಂದು ಪೋಸ್ಟ್ ಸಾಮಾಜಿಕ ಜಾಲ ತಾಣಗಳಲ್ಲಿ ಹರಿದಾಡಿತ್ತು. 'ಭಾರತವು ರೈಲು ಹಳಿಗಳನ್ನು ವಿದ್ಯುತ್ ಸ್ಥಾವರನ್ನಾಗಿ ಪರಿವರ್ತಿಸುತ್ತಿದೆ' ಎಂದು ಆ ಪೋಸ್ಟ್ ಹೇಳಿತ್ತು.

- ಸುಸ್ಥಿರ ಮೂಲಸೌಕರ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆ ತರುವಂತಹ ಬೆಳವಣಿಗೆ ಇದಾಗಿದ್ದು, 'ಸನ್ ವೇಸ್' (Sun Ways) ಎಂಬ ಭಾರತದ ಸ್ಟಾರ್ಟ್‌ಅಪ್ ಕಂಪನಿಯು ರೈಲು ಹಳಿಗಳ ಮಧ್ಯೆ ಸೌರಫಲಕಗಳನ್ನು ಅಳವಡಿಸಿ ಸೌರ ವಿದ್ಯುತ್ ಉತ್ಪಾದಿಸಲು ಹೊರಟಿದೆ ಎಂದು ಆ ಪೋಸ್ಟ್‌ನಲ್ಲಿ ಹೇಳಲಾಗಿತ್ತು.



ರೈಲು ಹಳಿಗಳ ನಡುವಿನ ಖಾಲಿ ಜಾಗದಲ್ಲಿ ಸೌರಫಲಕ ಅಳವಡಿಸಿರುವುದು
ಚಿತ್ರ: ರೈಲ್ವೆ ಸಚಿವಾಲಯದ 'ಎಕ್ಸ್' ಖಾತೆ

- ದೇಶದ ಪ್ರಮುಖ ಸುದ್ದಿ ಸಂಸ್ಥೆ ಪಿಟಿಐ, ಜುಲೈ 7ರಂದು ಈ ಪೋಸ್ಟ್ ಬಗ್ಗೆ ಫ್ಯಾಕ್ಟ್‌ಚೆಕ್ ಮಾಡಿತ್ತು. 'ಹಳಿಗಳ ನಡುವೆ ಸೌರಫಲಕಗಳನ್ನು ಅಳವಡಿಸುವ ಯೋಜನೆಯನ್ನು ಭಾರತೀಯ ರೈಲ್ವೆಯು ಕೈಗೆತ್ತಿಕೊಂಡಿಲ್ಲ; ಪೋಸ್ಟ್‌ನಲ್ಲಿರುವ ಚಿತ್ರ ಸ್ವಿಟ್ಜರ್ಲೆಂಡ್‌ಗೆ ಸಂಬಂಧಿಸಿ ದ್ದಾಗಿದ್ದು, **ಸನ್ ವೇ ಕಂಪನಿ ಭಾರತದ್ದಲ್ಲ, ಸ್ವಿಟ್ಜರ್ಲೆಂಡ್‌ನದ್ದು. ಅಲ್ಲಿ ಅದು ಈ ಯೋಜನೆಯನ್ನು ಪ್ರಾಯೋಗಿಕವಾಗಿ ಕೈಗೆತ್ತಿಕೊಂಡಿದೆ**' ಎಂದು ಫ್ಯಾಕ್ಟ್‌ಚೆಕ್ ವರದಿ ತಿಳಿಸಿತ್ತು.
- ಇದಾಗಿ, ಒಂದೂವರೆ ತಿಂಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ ಪೋಸ್ಟ್ ನಿಜವಾಗಿರುವ ಸುದ್ದಿ ಉತ್ತರ ಪ್ರದೇಶದಿಂದ ಬಂದಿದೆ. **ವಾರಾಣಸಿಯಲ್ಲಿರುವ ಭಾರತೀಯ ರೈಲ್ವೆಯ ಬನಾರಸ್ ಲೋಕೋಮೋಟಿವ್ ವರ್ಕ್ಸ್ (ಬಿಎಲ್‌ಡಬ್ಲ್ಯು) ಘಟಕವು ಸದ್ದಿಲ್ಲದೇ ಹಳಿಗಳ ನಡುವೆ ಸೌರಫಲಕ ಗಳನ್ನು ಯಶಸ್ವಿಯಾಗಿ ಅಳವಡಿಸಿ ಸೂರ್ಯನ ಶಾಖದಿಂದ ವಿದ್ಯುತ್ ಉತ್ಪಾದಿಸುವ ಪ್ರಾಯೋಗಿಕ ಯೋಜನೆಯನ್ನು ಆರಂಭಿಸಿದೆ. ಸ್ವಾತಂತ್ರ್ಯೋತ್ಸವದ ದಿನದಂದು ಈ ಯೋಜನೆಗೆ ಚಾಲನೆ ನೀಡಲಾಗಿದೆ.**

Dr Rajkumar IAS Academy

- **2030ರ ವೇಳೆಗೆ ಇಂಗಾಲ ಹೊರಸೂಸುವಿಕೆ ಪ್ರಮಾಣವನ್ನು ಶೂನ್ಯಕ್ಕೆ ಇಳಿಸುವ ಗುರಿಯನ್ನು ರೈಲ್ವೆ ಹೊಂದಿದ್ದು**, ಆ ದಿಸೆಯಲ್ಲಿ ಈ ಪ್ರಾಯೋಗಿಕ ಯೋಜನೆ ಮಹತ್ವದ ಮೈಲಿಗಲ್ಲು ಎಂದು ರೈಲ್ವೆಯ ಅಧಿಕಾರಿಗಳು ಹೇಳಿದ್ದಾರೆ. **ರೈಲ್ವೆ ಮಾತ್ರವಲ್ಲ, 2070ರ ವೇಳೆಗೆ ಇಂಗಾಲ ಹೊರಸೂಸುವಿಕೆಯನ್ನು ಶೂನ್ಯಕ್ಕೆ ಇಳಿಸುವ ಗುರಿಯನ್ನು ಭಾರತ ಹಾಕಿಕೊಂಡಿದೆ**. ಅದನ್ನು ಸಾಧಿಸುವ ನಿಟ್ಟಿನಲ್ಲೂ ಈ ಯೋಜನೆ ಮಹತ್ವದ್ದು. ಸ್ವಿಟ್ಜರ್ಲೆಂಡ್ ಬಿಟ್ಟು ಬೇರೆ ದೇಶಗಳಲ್ಲಿ ಇಂತಹ ಪ್ರಯತ್ನ ನಡೆದಂತೆ ಕಾಣುತ್ತಿಲ್ಲ. ಭಾರತದಲ್ಲಂತೂ ಇದು ಮೊದಲ ಪ್ರಯತ್ನ.
- ಬನಾರಸ್‌ನ ಲೋಕೋಮೋಟಿವ್ ವರ್ಕ್ಸ್‌ನ ಎಂಜಿನಿಯರ್‌ಗಳು ಈ ಯೋಜನೆಯ ರೂವಾರಿಗಳು. ಬಿಎಲ್‌ಡಬ್ಲ್ಯು ವರ್ಕ್ಸ್‌ಶಾಪ್‌ನ ಲೈನ್–19ರಲ್ಲಿ 70 ಮೀಟರ್‌ನಷ್ಟು ದೂರಕ್ಕೆ 28 ಸೌರಫಲಕ ಗಳನ್ನು ಅಳವಡಿಸಲಾಗಿದ್ದು, ಇದು **15 ಕಿಲೋ ವಾಟ್‌ನಷ್ಟು ಸೌರ ವಿದ್ಯುತ್ ಉತ್ಪಾದಿಸುವ ಸಾಮರ್ಥ್ಯ ಹೊಂದಿದೆ. ಒಂದು ಕಿ.ಮೀ ಉದ್ದಕ್ಕೆ ಫಲಕ ಅಳವಡಿಸಿದರೆ 220 ಕಿಲೋ ವ್ಯಾಟ್‌ನಷ್ಟು ಸೌರವಿದ್ಯುತ್ ಉತ್ಪಾದಿಸಬಹುದು. ಪ್ರತಿ ಕಿ.ಮೀನಲ್ಲಿ ಒಂದು ದಿನಕ್ಕೆ 880 ಯುನಿಟ್‌ಗಳಂತೆ ಒಂದು ವರ್ಷದಲ್ಲಿ 3.20 ಲಕ್ಷ ಯುನಿಟ್‌ಗಳಷ್ಟು ವಿದ್ಯುತ್ ಉತ್ಪಾದಿಸಬಹುದು** ಎಂಬುದು ಅಧಿಕಾರಿಗಳ ಲೆಕ್ಕಾಚಾರ.
- **ದೇಶದಲ್ಲಿ ರೈಲ್ವೆಯ ಜಾಲ 1.2 ಲಕ್ಷ ಕಿ.ಮೀನಷ್ಟು ಉದ್ದವಿದೆ.** ಈ ತಂತ್ರಜ್ಞಾನವನ್ನು ರೈಲ್ವೆ ಯಾರ್ಡ್‌ಗಳಲ್ಲಿರುವ ಹೆಚ್ಚು ಬಳಕೆ ಯಲ್ಲಿರದ ಹಳಿಗಳಲ್ಲಿ ಬಳಸಬಹುದು. ಇದರಲ್ಲಿ ಸೌರಫಲಕಗಳ ಅಳವಡಿಕೆಗೆ ಹಳಿಗಳ ನಡುವಿನ ಖಾಲಿ ಜಾಗವನ್ನು ಬಳಸುವುದರಿಂದ ಯೋಜನೆಗಾಗಿ ಭೂಮಿಯನ್ನು ಸ್ವಾಧೀನ ಮಾಡುವ ಅಗತ್ಯವಿಲ್ಲ ಎಂಬುದು ಅಧಿಕಾರಿಗಳ ವಾದ.

ಫಲಕ ತೆರವುಗೊಳಿಸುವ ತಂತ್ರಜ್ಞಾನ

- ಆಗಸ್ಟ್ 15ರಂದು ಯೋಜನೆಗೆ ಚಾಲನೆ ನೀಡುವ ವೇಳೆ ಸೌರಫಲಕಗಳನ್ನು ಅಳವಡಿಸಿದ 78 ಮೀಟರ್ ಉದ್ದದ ಹಳಿಯ ಮೇಲೆ ರೈಲು ಎಂಜಿನ್ ಅನ್ನು ಓಡಿಸಲಾಗಿತ್ತು. ಫಲಕ ಅಳವಡಿಕೆ ನಂತರ ಎದುರಾಗಬಹುದಾದ ಸವಾಲುಗಳನ್ನು ಪರಿಗಣಿಸಿಯೇ ಇದರ ವಿನ್ಯಾಸ ರೂಪಿಸಲಾಗಿದೆ. ದೇಶೀಯವಾಗಿ ವಿನ್ಯಾಸವನ್ನು ಸಿದ್ಧಪಡಿಸ ಲಾಗಿದೆ. ರೈಲು ಸಂಚರಿಸುವಾಗ ರೈಲು ಹಳಿಗಳು ಅದುರುವುದರಿಂದ, ಇದರ ಪ್ರಭಾವವನ್ನು ಕಡಿಮೆ ಮಾಡುವುದಕ್ಕಾಗಿ ಫಲಕಗಳಿಗೆ ರಬ್ಬರ್ ಚೌಕಟ್ಟುಗಳನ್ನು ಹೊಂದಿರುವ ಪ್ಯಾಡ್ ಬಳಸಲಾಗಿದೆ. ಹಳಿಯ ಕೆಳಗೆ, ಜಲ್ಲಿ ಮೇಲೆ ಹಾಕಲಾಗಿರುವ ಕಾಂಕ್ರೀಟ್ ಪಟ್ಟಿಗೆ ಫಲಕಗಳನ್ನು ಅಂಟಿಸಲಾಗಿದೆ. ಇದಕ್ಕಾಗಿ ಎಪಾಕ್ಸಿ ಅಂಟನ್ನು ಬಳಸಲಾಗಿದೆ. ಹಳಿ ನಿರ್ವಹಣೆ, ಸ್ವಚ್ಛತೆಗಾಗಿ ಫಲಕಗಳನ್ನು ಸುಲಭವಾಗಿ ತೆರವುಗೊಳಿಸಬಹುದು ಎಂಬುದು ಅಧಿಕಾರಿಗಳ ವಿವರಣೆ.

ಶೂನ್ಯ ಇಂಗಾಲ ಗುರಿಯೆಡೆಗೆ

- ಸುಸ್ಥಿರ ಅಭಿವೃದ್ಧಿ, ನವೀಕರಿಸಬಹುದಾದ ಇಂಧನ ಬಳಕೆಯ ಮೂಲಕ ನಿರ್ವಹಣಾ ವೆಚ್ಚವನ್ನು ಉಳಿತಾಯ ಮಾಡಲು ಯತ್ನಿಸುತ್ತಿರುವ ರೈಲ್ವೆಯು ಸೌರಶಕ್ತಿಯಿಂದ ವಿದ್ಯುತ್ ಉತ್ಪಾದಿಸಿ ಶೂನ್ಯ ಇಂಗಾಲದ ಹೊರಸೂಸುವಿಕೆಯ ಗುರಿಯನ್ನು ಸಾಧಿಸುವತ್ತ ದೃಷ್ಟಿ ನೆಟ್ಟಿದೆ. **ಈ ವರ್ಷದ ಫೆಬ್ರುವರಿ ಅಂಕಿ–ಅಂಶಗಳ ಪ್ರಕಾರ, ರೈಲ್ವೆಯು ಈವರೆಗೆ ದೇಶದಾದ್ಯಂತ ಇರುವ 2,249 ರೈಲ್ವೆ ನಿಲ್ದಾಣಗಳು ಹಾಗೂ ಇತರ ಕಟ್ಟಡಗಳಲ್ಲಿ ಒಟ್ಟು 209 ಮೆಗಾ ವಾಟ್ ಸಾಮರ್ಥ್ಯದ ಸೌರ ಘಟಕಗಳನ್ನು ಅಳವಡಿಸಿದೆ.**
- ಹಳಿಗಳ ನಡುವಿನ ಖಾಲಿ ಜಾಗ ಬಳಸಿ ಸೌರ ವಿದ್ಯುತ್ ಉತ್ಪಾದಿಸುವ ರೈಲ್ವೆಯ ಯೋಜನೆಯು 2030ರ ವೇಳೆಗೆ ಇಂಗಾಲ ಸೂಸುವಿಕೆಯನ್ನು ಶೂನ್ಯಕ್ಕೆ ಇಳಿಸುವ ಗುರಿ ಸಾಧನೆಯ ದಿಸೆಯಲ್ಲಿ ಮತ್ತೊಂದು ಪ್ರಯತ್ನ.

Dr. Rajkumar IAS KAS Academy

## ❖ ಆಂಧ್ರಪ್ರದೇಶ: ರೋಗಿಯಲ್ಲಿ 'ಮೆಲಿಯೊಯಿಡೊಸಿಸ್' ದೃಢ

**ಸಂದರ್ಭ:** ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯ ತುರಕಪಲೆಂ ಗ್ರಾಮದ ರೋಗಿಯೊಬ್ಬರಲ್ಲಿ 'ಮೆಲಿಯೊಯಿಡೊಸಿಸ್' (ಬ್ಯಾಕ್ಟೀರಿ ಯಾದಿಂದ ಹರಡುವ ಸೋಂಕು) ಇರುವುದು ದೃಢಪಟ್ಟಿದೆ.

- 1,200 ಜನರು ವಾಸಿಸುತ್ತಿರುವ ಈ ಪುಟ್ಟ ಗ್ರಾಮದಲ್ಲಿ ಜುಲೈನಿಂದ ಇದುವರೆಗೆ ನಿಗೂಢ ಆರೋಗ್ಯ ಸಮಸ್ಯೆಗಳಿಂದಾಗಿ 23 ಮಂದಿ ಮೃತ ಪಟ್ಟಿದ್ದರು. ಸರಣಿ ಸಾವುಗಳ ನಡುವೆಯೇ ಬ್ಯಾಕ್ಟೀರಿಯಾ ಸೋಂಕಿನ ಮೊದಲ ಪ್ರಕರಣ ದೃಢಪಟ್ಟಿದೆ.
- ಗುಂಟೂರು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ 46 ವರ್ಷದ ರೋಗಿಯಲ್ಲಿ 'ಮೆಲಿಯೊಯಿಡೊಸಿಸ್' ಸೋಂಕು ಇರುವುದು ದೃಢಪಟ್ಟಿದೆ ಎಂದು ಗುಂಟೂರು ಜಿಲ್ಲಾಧಿಕಾರಿ ಎಸ್ .ನಾಗಲಕ್ಷ್ಮಿ ಮಂಗಳವಾರ ಹೇಳಿದ್ದಾರೆ. ಅವರ ಆರೋಗ್ಯ ಸ್ಥಿರವಾಗಿದೆ ಮತ್ತು ಯಾವುದೇ ತಕ್ಷಣದ ಅಪಾಯವಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.
- ಈ ಗ್ರಾಮದಲ್ಲಿ ಜುಲೈ ಮತ್ತು ಆಗಸ್ಟ್‌ನಲ್ಲಿ ತಲಾ 10 ಮಂದಿ ಹಾಗೂ ಸೆಪ್ಟೆಂಬರ್‌ನಲ್ಲಿ ಮೂವರು ಅನಾರೋಗ್ಯದಿಂದ ಮೃತ ಪಟ್ಟಿದ್ದಾರೆ. **ಇವರಲ್ಲಿ ಆರಂಭದಲ್ಲಿ ಜ್ವರದ ಲಕ್ಷಣಗಳು ಕಾಣಿಸಿಕೊಂಡಿದ್ದು, ಬಳಿಕ ಅಂಗಾಂಗ ವೈಫಲ್ಯಗೊಂಡು ಕೆಲವೇ ದಿನಗಳಲ್ಲಿ ಮೃತಪಟ್ಟಿದ್ದಾರೆ. ಮೃತರಲ್ಲಿ ಬಹುತೇಕರು 55 ವರ್ಷದವರಾಗಿದ್ದರು.**

## ❖ ಪರಿಷ್ಕೃತ ಎಂಆರ್‌ಪಿ ಪ್ರಕಟಿಸಿ: ಸೂಚನೆ

**ಸಂದರ್ಭ:** ಉತ್ಪನ್ನಗಳ ತಯಾರಕರು ಮತ್ತು ಆಮದುಗಾರರು ಜಿಎಸ್‌ಟಿ ದರದಲ್ಲಿ ಆಗಿರುವ ಪರಿಷ್ಕರಣೆ ಯನ್ನು ಪ್ರತಿಫಲಿಸುವ ರೀತಿಯಲ್ಲಿ ಹೊಸ ಎಂಆರ್‌ಪಿ ದರವನ್ನು ಉತ್ಪನ್ನಗಳ ಮೇಲೆ ಪ್ರಕಟಿಸಬೇಕು ಎಂದು ಕೇಂದ್ರ ಸರ್ಕಾರವು ಸೂಚನೆ ನೀಡಿದೆ.

- ಉತ್ಪನ್ನಗಳನ್ನು ಪ್ಯಾಕ್ ಮಾಡಲು ಬಳಸುವ ಪೊಟ್ಟಣಗಳ ಮೇಲೆ ಹಳೆಯ ಎಂಆರ್‌ಪಿ ಇದ್ದರೆ, ಅವುಗಳನ್ನು ಡಿಸೆಂಬರ್ 31ರವರೆಗೆ ಅಥವಾ ಅವುಗಳ ದಾಸ್ತಾನು ಇರುವವರೆಗೆ (ಇವೆರಡರಲ್ಲಿ ಯಾವುದು ಮೊದಲೋ ಅದು ಅನ್ವಯ) ಬಳಕೆ ಮಾಡಬಹುದು ಎಂದು ಹೇಳಿದೆ. ಆದರೆ, ಇಂತಹ ಪೊಟ್ಟಣಗಳ ಮೇಲೆ ಪರಿಷ್ಕೃತ ಎಂಆರ್‌ಪಿಯನ್ನೂ ಪ್ರಕಟಿಸಬೇಕಾಗುತ್ತದೆ.
- ವಿವಿಧ ಉತ್ಪನ್ನಗಳು ಹಾಗೂ ಸೇವೆಗಳ ಮೇಲಿನ ಜಿಎಸ್‌ಟಿ ಪ್ರಮಾಣವನ್ನು ಜಿಎಸ್‌ಟಿ ಮಂಡಳಿ ತಗ್ಗಿಸಿದೆ. ಪರಿಷ್ಕೃತ ಜಿಎಸ್‌ಟಿ ದರವು ಸೆಪ್ಟೆಂಬರ್ 22ರಿಂದ ಜಾರಿಗೆ ಬರುತ್ತಿದೆ. ಈ ಸಂದರ್ಭದಲ್ಲಿ ಕೇಂದ್ರವು ಕಂಪನಿಗಳಿಗೆ ಈ ಸೂಚನೆ ನೀಡಿದೆ.
- 'ತಯಾರಕರು, ಪ್ಯಾಕ್ ಮಾಡುವವರು ಮತ್ತು ಆಮದುದಾರರು ಮಾರಾಟವಾಗದ ಉತ್ಪನ್ನಗಳ ಮೇಲಿನ ಎಂಆರ್‌ಪಿ ದರವನ್ನು ಡಿಸೆಂಬರ್ 31ರವರೆಗೆ (ಅಥವಾ ದಾಸ್ತಾನು ಖಾಲಿಯಾಗುವವರೆಗೆ) ಪರಿಷ್ಕರಿಸ ಬಹುದು. ಪರಿಷ್ಕರಿಸುವ ದರವು ಜಿಎಸ್‌ಟಿಯಿಂದ ಆದ ಬದಲಾವಣೆಯನ್ನು ಮಾತ್ರ ತೋರಿಸಬೇಕು. ತೆರಿಗೆಯಿಂದ ಆದ ಹೆಚ್ಚಳ ಅಥವಾ ಇಳಿಕೆಯನ್ನು ಮಾತ್ರ ಅದರಲ್ಲಿ ತೋರಿಸಬಹುದು' ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಎಕ್ಸ್ ಮೂಲಕ ತಿಳಿಸಿದ್ದಾರೆ.
- ಸ್ಟಿಕ್ಕರ್ ಬಳಸಿ, ಸ್ಟ್ಯಾಂಪ್ ಬಳಸಿ ಅಥವಾ ಆನ್‌ಲೈನ್ ಪ್ರಿಂಟ್ ಮೂಲಕ ಪರಿಷ್ಕೃತ ಎಂಆರ್‌ಪಿಯನ್ನು ತೋರಿಸಬಹುದು. ಜೊತೆಯಲ್ಲೇ, ಮೂಲ ಎಂಆರ್‌ಪಿ ಕೂಡ ಕಾಣುವಂತೆ ಇರಬೇಕು ಎಂದು ಸೂಚಿಸಲಾಗಿದೆ. ಬೆಲೆಯಲ್ಲಿನ ಪರಿಷ್ಕರಣೆಗೆ ಸಂಬಂಧಿಸಿದಂತೆ ತಯಾರ ಕರು, ಪ್ಯಾಕ್ ಮಾಡುವವರು ಅಥವಾ ಆಮದುದಾರರು ಕನಿಷ್ಠ ಎರಡು ಜಾಹೀರಾತುಗಳನ್ನು ಒಂದು ಅಥವಾ ಅದಕ್ಕಿಂತ ಹೆಚ್ಚಿನ ಪತ್ರಿಕೆಗಳ ಮೂಲಕ ನೀಡಬೇಕಿದೆ.
- ಬೆಲೆ ಪರಿಷ್ಕರಣೆ ಬಗ್ಗೆ ಗ್ರಾಹಕರಿಗೆ ಜಾಹೀರಾತು ಹಾಗೂ ಸಾರ್ವಜನಿಕ ನೋಟಿಸ್ ಮೂಲಕ ಮಾಹಿತಿ ನೀಡಬೇಕು. ಇದರಿಂದಾಗಿ ಪಾರದರ್ಶಕತೆಯನ್ನು ಕಾಯ್ದುಕೊಳ್ಳಲು, ಗ್ರಾಹಕರ ಹಕ್ಕುಗಳನ್ನು ರಕ್ಷಿಸಲು ಸಾಧ್ಯವಾಗುತ್ತದೆ ಎಂದು ಜೋಶಿ ಅವರು ಹೇಳಿದ್ದಾರೆ.

Dr. Rajkumar IAS Academy

## ❖ ರಾಜಕೀಯ ಅಸ್ಥಿರತೆಯ ನೋಟ

# ರಾಜಕೀಯ ಅಸ್ಥಿರತೆಯ ನೋಟ

**ನವದೆಹಲಿ (ರಾಯಿಟರ್ಸ್): 2008ರಿಂದ ಈಚೆಗೆ ನೇಪಾಳದಲ್ಲಿ 14 ಸರ್ಕಾರಗಳು ರಚನೆಯಾಗಿವೆ. ಈ ಯಾವ ಸರ್ಕಾರವೂ 5 ವರ್ಷದ ಆಡಳಿತ ಅವಧಿಯನ್ನು ಪೂರ್ಣಗೊಳಿಸಿಲ್ಲ. ರಾಜಪ್ರಭುತ್ವದಿಂದ ಪ್ರಜಾಪ್ರಭುತ್ವದವರೆಗೆ ದೇಶದಲ್ಲಿ ನಡೆದ ರಾಜಕೀಯ ಅಸ್ಥಿರತೆಯ ಕುರಿತು ಪ್ರಮುಖ ಘಟನಾವಳಿಗಳ ಸಣ್ಣ ಪರಿಚಯ ಇಲ್ಲಿದೆ:**

**1951:** ಇದಕ್ಕೂ ಮೊದಲು ನೇಪಾಳವನ್ನು ವಿವಿಧ ರಾಜಮನೆ ತನಗಳು ಆಳಿವೆ. ರಾಣಾ ರಾಜಮನೆತನವು ಪ್ರಧಾನಿಯನ್ನು ಆಡಳಿತದ ಪ್ರಮುಖನನ್ನಾಗಿಸಿ ಕೊಂಡು ಆಡಳಿತ ನಡೆಸಿತ್ತು. ವಂಶಪಾರಂಪರ್ಯವಾಗಿ ರಾಜಮನೆತನದವರೇ ಈ ಹುದ್ದೆಗೇರುತ್ತಿದ್ದರು. ಪ್ರಜಾಪ್ರಭುತ್ವಾದಿ ಚಳವಳಿಯ ಮೂಲಕ 1951ರಲ್ಲಿ ಈ ರಾಜಮನೆತನವನ್ನು ಆಡಳಿತದಿಂದ ಕೆಳಗಿಳಿಸಿ, ಪ್ರಜಾಪ್ರಭುತ್ವಾದಿ ಸರ್ಕಾರ ರಚನೆಯಾಯಿತು

**1961-1990:** ದೇಶದಲ್ಲಿದ್ದ ರಾಜಕೀಯ ಪಕ್ಷಗಳನ್ನು ರಾಜ ಮಹೇಂದ್ರ ಅವರು 1961ರಲ್ಲಿ ತೆಗೆದು ಹಾಕಿದರು. ಮತ್ತೊಮ್ಮೆ ಆಡಳಿತವನ್ನು ತಮ್ಮ ಕೈಗೆ ತೆಗೆದುಕೊಂಡರು. ಈ ಆಡಳಿತ ವೈಖರಿಗೆ 'ಪಂಚಾಯತ್' ಎಂದು ಅವರೇ ಹೆಸರಿಟ್ಟರು. ರಾಜನ ಆಡಳಿತವು ಮತ್ತೊಮ್ಮೆ ಜನರನ್ನು ಉಸಿರು ಕಟ್ಟಿಸುವಂತೆ ಮಾಡಿತು.

ಈ ಆಕ್ರೋಶವು 1990ರಲ್ಲಿ ಸ್ಫೋಟಗೊಂಡಿತು. ವಿವಿಧ ರಾಜಕೀಯ ಪಕ್ಷಗಳು, ಜನರು ಅಭಿಯಾನ ಆರಂಭಿಸಿದರು. ಮತ್ತೊಮ್ಮೆ ಪ್ರಜಾಪ್ರಭುತ್ವವಾದಿ ಸರ್ಕಾರ ರಚನೆಗೆ, ಬಹುಪಕ್ಷೀಯ ವ್ಯವಸ್ಥೆ ಸ್ಥಾಪನೆಗೆ ಚಳವಳಿ ನಡೆಸಿದರು. ಇದನ್ನು 'ಜನರ ಚಳವಳಿ' ಎಂದೇ ಕರೆಯಲಾಗುತ್ತದೆ. ಬಳಿಕ ಪಕ್ಷಗಳ ಮೇಲಿದ್ದ ರದ್ದತಿಯನ್ನು ರಾಜ ಬೀರೇಂದ್ರ ಅವರು ತೆರವು ಮಾಡಿದರು. 'ಪಂಚಾಯತ್' ವ್ಯವಸ್ಥೆಯು ಅವಸಾನ ಕಂಡಿತು



**1996:** ಸಿರಿತನದಿಂದ ಕೂಡಿದ್ದ ಸಂಸದೀಯ ವ್ಯವಸ್ಥೆಯನ್ನು ಜನರ ಕೈಗೆಟಕುವ ವ್ಯವಸ್ಥೆಯನ್ನಾಗಿ ಮರುರೂಪಿಸಲು ಮಾವೋವಾದಿಗಳು ಹಿಂಸಾತ್ಮಕವಾಗಿ ಚಳವಳಿಯನ್ನು ಆರಂಭಿಸಿದರು. ನಾಗರಿಕ ಯುದ್ಧದ ರೀತಿಯಲ್ಲಿ ಈ ಚಳವಳಿಯು 10 ವರ್ಷ ನಡೆಯಿತು. ಇದರಲ್ಲಿ 17 ಸಾವಿರಕ್ಕೂ ಅಧಿಕ ಮಂದಿ ಮೃತಪಟ್ಟರು

**2006-2015:** ರಾಜಾಪ್ರಭುತ್ವದ ವಿರುದ್ಧ 2006ರಲ್ಲಿ ಜನರು ಪ್ರತಿಭಟನೆ ಆರಂಭಿಸಿದರು. 2008ರಲ್ಲಿ ರಾಜ ಪ್ರಭುತ್ವವು ಕೊನೆಗೊಂಡಿತು. ಈ ಬಳಿಕ ನೇಪಾಳವು ಸಂಪೂರ್ಣ
ಪ್ರಜಾಪ್ರಭುತ್ವ ವಾದಿ ದೇಶ ವಾಯಿತು. ರಾಜ ಜ್ಞಾನೇಂದ್ರ ಅವರೇ ಕೊನೆಯ ರಾಜ. ಕಠ್ಮಂಡುವಿ ನಲ್ಲಿ ಇವರು ಸಾಮಾನ್ಯ ಪ್ರಜೆಯಂತೆ ಜೀವಿಸತೊಡಗಿದರು. 2015ರಲ್ಲಿ ದೇಶವು ನೂತನ ಸಂವಿಧಾನವನ್ನು ಅಳವಡಿಸಿಕೊಂಡಿತು

**2015–2025:** 2015ರ ಅಕ್ಟೋಬರ್‌ನಲ್ಲಿ ಪ್ರಥಮ ಬಾರಿಗೆ ಕೆ.ಪಿ. ಓಲಿ ಶರ್ಮ ಅವರು ದೇಶದ ಪ್ರಧಾನಿಯಾದರು. ಒಂದು ವರ್ಷದವರೆಗೆ ಈ ಸರ್ಕಾರವು ಆಡಳಿತ ನಡೆಸಿತು. ಬಳಿಕ ಎರಡನೇ ಬಾರಿಗೆ 2018ರಲ್ಲಿ ಮತ್ತು ಮೂರನೇ ಬಾರಿಗೆ 2021ರಲ್ಲಿ ಮರುಆಯ್ಕೆಗೊಂಡರು. 2024ರಲ್ಲಿ ಓಲಿ ಅವರು ನಾಲ್ಕನೇ ಬಾರಿಗೆ ಪ್ರಧಾನಿ ಹುದ್ದೆಗೇರಿದರು

## ❖ 'ನಾಮಕಾವಸ್ಥೆ ಮುಖ್ಯಸ್ಥರು'ನಿಯಮಗಳ ಪ್ರಕಾರ ರಾಜ್ಯಪಾಲರಿಗೆ ವಿಟೋ ಅಧಿಕಾರ ಇಲ್ಲ: ಕರ್ನಾಟಕ ವಾದ

**ಸಂದರ್ಭ:** ಸಂವಿಧಾನದ ಪ್ರಕಾರ, ರಾಷ್ಟ್ರಪತಿ ಹಾಗೂ ರಾಜ್ಯಪಾಲರು ಕೇವಲ ನಾಮಕಾವಸ್ಥೆ ಮುಖ್ಯಸ್ಥರು. ಕೇಂದ್ರ ಹಾಗೂ ರಾಜ್ಯ ಸಚಿವ ಸಂಪುಟದ ಸಲಹೆ ಮೇರೆಗೆ ಕಾರ್ಯನಿರ್ವಹಿಸಲು ಬದ್ಧರು ಎಂದು ಕರ್ನಾಟಕದ ಕಾಂಗ್ರೆಸ್ ಸರ್ಕಾರ ಪ್ರತಿಪಾದಿಸಿದೆ.

- ವಿಧಾನಸಭೆಗಳು ಅಂಗೀಕರಿಸಿದ ಮಸೂದೆಗಳಿಗೆ ಅಂಕಿತ ಹಾಕುವುದಕ್ಕೆ ರಾಷ್ಟ್ರಪತಿ ಹಾಗೂ ರಾಜ್ಯಪಾಲರಿಗೆ ನ್ಯಾಯಾಲಯ ಗಡುವು ನಿಗದಿ ಮಾಡಬಹುದೇ ಎಂಬ ವಿಷಯದ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು ಕೇಳಿರುವ ಸಲಹೆಗೆ ಸಂಬಂಧಿಸಿದ ವಿಚಾರಣೆ ವೇಳೆ ಕರ್ನಾಟಕ ಈ ಅಭಿಪ್ರಾಯ ವ್ಯಕ್ತಪಡಿಸಿತು. ರಾಜ್ಯ ಸರ್ಕಾರದ ಪರ ಹಿರಿಯ ವಕೀಲ ಗೋಪಾಲ್ ಸುಬ್ರಹ್ಮಣ್ಯನ್ ವಾದ ಮಂಡಿಸಿದರು.
- 'ರಾಷ್ಟ್ರಪತಿ ಹಾಗೂ ರಾಜ್ಯಪಾಲರು ಸಚಿವ ಸಂಪುಟದ ನೆರವು ಮತ್ತು ಸಲಹೆಗೆ ಬದ್ಧರಾಗಿದ್ದಾರೆ. ಇದು ಭಾರತದಲ್ಲಿ ಆಡಳಿತದ ಮೂಲಭೂತ ಕಲ್ಪನೆಯಾಗಿದೆ ಮತ್ತು ಸುಪ್ರೀಂ ಕೋರ್ಟ್ ಇದನ್ನು ಅನುಮೋದಿಸಿದೆ' ಎಂದು ಅವರು ವಾದಿಸಿದರು.
- 'ನಿಯಮಗಳ ಪ್ರಕಾರ ರಾಜ್ಯಪಾಲರಿಗೆ ವಿಟೋ ಅಧಿಕಾರ ಇಲ್ಲ. ರಾಜ್ಯಪಾಲರು ಮಸೂದೆಯನ್ನು ಮರುಪರಿಶೀಲನೆಗಾಗಿ ವಿಧಾನಸಭೆಗೆ ಮರಳಿಸುವ ಉದ್ದೇಶದಿಂದ ಅಂಕಿತ ಹಾಕುವುದನ್ನು ತಡೆಹಿಡಿಯುವ ಅಧಿಕಾರವನ್ನಷ್ಟೇ ಹೊಂದಿದ್ದಾರೆ. ಆದರೆ, ವಿಧಾನಸಭೆಯಲ್ಲಿ ಮತ್ತೊಮ್ಮೆ ಮಸೂದೆ ಅನುಮೋದನೆಗೊಂಡಲ್ಲಿ ರಾಜ್ಯಪಾಲರು ಅಂಕಿತ ನೀಡಲೇಬೇಕ' ಎಂದು ವಾದಿಸಿದರು. 'ಸಂಸದೀಯ ಪ್ರಜಾಪ್ರಭುತ್ವವು ಶಾಸಕಾಂಗದ ಮೂಲಕ ವ್ಯಕ್ತವಾಗುವ ಸಾಮೂಹಿಕ ಅಭಿವ್ಯಕ್ತಿಯಾಗಿದೆ. ಕಾರ್ಯಾಂಗವು ಶಾಸಕಾಂಗದಿಂದ ರೂಪುಗೊಳ್ಳುತ್ತದೆ ಮತ್ತು ಅದಕ್ಕೆ ಉತ್ತರದಾಯಿಯಾಗಿರುತ್ತದೆ. ಕಾನೂನನ್ನು ರೂಪಿಸುವ ಅಂತಿಮ ಜವಾಬ್ದಾರಿ ಶಾಸಕಾಂಗದ ಮೇಲಿದೆ' ಎಂದು ಅವರು ಹೇಳಿದರು.

ಸೂಕ್ತ ಸಮಯದಲ್ಲಿ ಮಸೂದೆಗೆ ಅಂಗೀಕಾರ: ಸುಪ್ರೀಂ ಸಲಹೆ

- ರಾಜ್ಯ ವಿಧಾನಸಭೆಯಲ್ಲಿ ಅನುಮೋದನೆಗೊಂಡ ಮಸೂದೆಗಳಿಗೆ ಅಂಕಿತ ಹಾಕುವ ಅಧಿಕಾರ ನೀಡುವ ಸಂವಿಧಾನದ 200 ನೇ ಪರಿಚ್ಛೇದದಲ್ಲಿ 'ಸಾಧ್ಯವಾದಷ್ಟು ಬೇಗ' ಎಂಬ ಅಂಶ ಇಲ್ಲದೆ ಇದ್ದರೂ ಕೂಡ ರಾಜ್ಯಪಾಲರು 'ಸೂಕ್ತ ಸಮಯ'ದಲ್ಲಿ ಕ್ರಮ ಕೈಗೊಳ್ಳುವುದನ್ನು ನಿರೀಕ್ಷಿಸಲಾಗುತ್ತಿದೆ ಎಂದು ಸುಪ್ರೀಂಕೋರ್ಟ್ ಹೇಳಿದೆ.
- ಎಂಟನೇ ದಿನದ ವಿಚಾರಣೆಯ ಸಂದರ್ಭದಲ್ಲಿ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಐದು–ಸದಸ್ಯರ ಸಾಂವಿಧಾನಿಕ ಪೀಠ, 'ಕೇವಲ ಸಂವಿಧಾನವನ್ನಷ್ಟೇ ವಿಶ್ಲೇಷಿಸಲಾಗುವುದು, ವೈಯಕ್ತಿಕ ಪ್ರಕರಣಗಳನ್ನಲ್ಲ' ಎಂದು ಸ್ಪಷ್ಟಪಡಿಸಿದೆ.
- 'ತುರ್ತು ಪ್ರಕರಣಗಳಲ್ಲಿ ರಾಜ್ಯಪಾಲರು 24 ಗಂಟೆಗಳ ಒಳಗೆ ಕಾರ್ಯ ನಿರ್ವಹಿಸಬೇಕಾಗಬಹುದು' ಎಂದು ಪೀಠ ಹೇಳಿದೆ.
- **ಸಂವಿಧಾನ 200 ಪರಿಚ್ಛೇದವು ರಾಜ್ಯಪಾಲರಿಗೆ ವಿಧಾನಸಭೆಯಲ್ಲಿ ಅನುಮೋದನೆಗೊಂಡ ಮಸೂದೆಗಳಿಗೆ ಅಂಕಿತ ನೀಡುವ, ಮಸೂದೆ ತಡೆ ಹಿಡಿಯುವ ಅಥವಾ ಮಸೂದೆಯನ್ನು ಮರಳಿ ಕಳುಹಿಸುವ ಅಥವಾ ಮಸೂದೆಯನ್ನು ರಾಷ್ಟ್ರಪತಿಗಳ ಪರಿಗಣನೆಗೆ ಮೀಸಲಿರಿಸುವ ಅಧಿಕಾರ ನೀಡುತ್ತದೆ.**
- ಪರಿಚ್ಛೇದ 200ರ ಮೊದಲ ನಿಯಮದ ಅನುಸಾರ, ರಾಜ್ಯಪಾಲರು ತಮಗೆ ಬಂದ ಮಸೂದೆಯನ್ನು ಸಾಧ್ಯವಾಷ್ಟು ಶೀಘ್ರದಲ್ಲಿ ಅಂಕಿತ ಹಾಕಬೇಕು ಅಥವಾ ಮರುಪರಿಶೀಲನೆಗಾಗಿ ಸದನಕ್ಕೆ ಮರಳಿ ಕಳುಹಿಸಬೇಕು (ಹಣಕಾಸಿನ ಮಸೂದೆ ಹೊರತುಪಡಿಸಿ). ವಿಧಾನಸಭೆಯಲ್ಲಿ ಅದನ್ನು ಮರುಪರಿಶೀಲಿಸಿ ಕಳುಹಿಸಿದ ನಂತರ ಅದಕ್ಕೆ ಅಂಕಿತ ಹಾಕುವುದಕ್ಕೆ ವಿಳಂಬ ಮಾಡಬಾರದು.

❖ ಇಂದೋರ್, ಅಮರಾವತಿ, ದೇವಾಸ್ ನಗರ ಪ್ರಥಮ

## ವಾಯುಮಾಲಿನ್ಯ ತಡೆಗೆ ಪ್ರಯತ್ನ

# ಇಂದೋರ್, ಅಮರಾವತಿ, ದೇವಾಸ್ ನಗರ ಪ್ರಥಮ

ನವದೆಹಲಿ (ಪಿಟಿಐ): ಇಂದೋರ್, ಅಮರಾವತಿ ಮತ್ತು ದೇವಾಸ್ ನಗರಗಳು ರಾಷ್ಟ್ರೀಯ ಶುದ್ಧಗಾಳಿ ಕಾರ್ಯಕ್ರಮದ (ಎನ್‌ಸಿಎಪಿ) ಅಡಿಯಲ್ಲಿ ವಾಯುಮಾಲಿನ್ಯ ತಡೆಗಟ್ಟುವಲ್ಲಿ ಅತ್ಯುತ್ತಮ ಪ್ರಯತ್ನ ನಡೆಸಿ ಅಗ್ರಸ್ಥಾನ ಪಡೆದಿವೆ.

**ದೇಶದ ಹಲವಾರು ನಗರಗಳು ಕೈಗಾರಿಕಾ ಕೇಂದ್ರಗಳಾಗಿ ಇದ್ದರೂ ಅಥವಾ ಕಲ್ಲಿದ್ದಲು ಗಣಿಗಾರಿಕೆಯನ್ನು ಹೊಂದಿದ್ದರೂ ಭಾರಿ ಪ್ರಗತಿಯನ್ನು ಸಾಧಿಸಿವೆ. ಮುಂದಿನ ವರ್ಷದಿಂದ ನಗರಗಳ ವಾರ್ಡ್‌ಗಳಲ್ಲಿ ಕೂಡ ವಾಯುಮಾಲಿನ್ಯ ತಡೆಗಟ್ಟುವ ಪ್ರಯತ್ನಗಳನ್ನು ಮೌಲ್ಯಮಾಪನ ಮಾಡುವ ನಿರ್ಧಾರ ತೆಗೆದು ಕೊಂಡಿದ್ದೇವೆ**

**ಭೂಪೇಂದರ್ ಯಾದವ್,**
ಕೇಂದ್ರ ಪರಿಸರ ಸಚಿವ



**10** ಲಕ್ಷಕ್ಕೂ ಅಧಿಕ ಜನಸಂಖ್ಯೆಯ ವಿಭಾಗ ( ಅಗ್ರ ನಗರಗಳು)
1.ಇಂದೋರ್ (ಮಧ್ಯಪ್ರದೇಶ)
2.ಜಬಲ್‌ಪುರ (ಮಧ್ಯಪ್ರದೇಶ)
3.ಆಗ್ರಾ (ಉತ್ತರ ಪ್ರದೇಶ) ಮತ್ತು ಸೂರತ್ (ಗುಜರಾತ್)

**3-10** ಲಕ್ಷ ಜನಸಂಖ್ಯೆಯ ವಿಭಾಗ (ಅಗ್ರ ನಗರಗಳು)
1.ಅಮರಾವತಿ (ಮಹಾರಾಷ್ಟ್ರ)
2.ಝಾನ್ಸಿ ಮತ್ತು ಮೊರಾದಾಬಾದ್ (ಉತ್ತರಪ್ರದೇಶ) 3.ಅಲ್ವರ್ (ರಾಜಸ್ಥಾನ)

**3** ಲಕ್ಷಕ್ಕಿಂತ ಕಡಿಮೆ ಜನಸಂಖ್ಯೆಯ ವಿಭಾಗ (ಅಗ್ರ ನಗರಗಳು)
1.ದೇವಾಸ್ (ಮಧ್ಯಪ್ರದೇಶ)
2.ಪರ್ವಾಣೋ (ಹಿಮಾಚಲ ಪ್ರದೇಶ)
3.ಅನುಗುಲ್ (ಒಡಿಶಾ)


## ❖ 'ಹಿಮಾಚಲಕ್ಕೆ ₹1,500 ಕೋಟಿ ನೆರವು'

**<u>ಸಂದರ್ಭ:</u>** ಭಾರಿ ಮಳೆಯಿಂದಾಗಿ ತೀವ್ರ ಹಾನಿಗೆ ಒಳಗಾಗಿರುವ ಹಿಮಾಚಲ ಪ್ರದೇಶಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಭೇಟಿ ನೀಡಿದರು. ರಾಜ್ಯಕ್ಕೆ ತಕ್ಷಣಕ್ಕೆ ₹1,500 ಕೋಟಿ ಬಿಡುಗಡೆ ಮಾಡುವುದಾಗಿ ಅವರು ಘೋಷಣೆ ಮಾಡಿದರು.

- ಜೂನ್ 20ರಿಂದ ಸೆಪ್ಟೆಂಬರ್ 8ರವರೆಗೆ ರಾಜ್ಯಕ್ಕೆ ಸುಮಾರು ₹4,122 ಕೋಟಿ ನಷ್ಟವಾಗಿದೆ. ಮಳೆ ಸಂಬಂಧಿತ ಅವಘಡ ಗಳಲ್ಲಿ ಮೃತಪಟ್ಟವರ ಕುಟುಂಬಗಳಿಗೆ ₹2 ಲಕ್ಷ ಮತ್ತು ಗಾಯಗೊಂಡವರಿಗೆ ₹50 ಸಾವಿರ ಪರಿಹಾರ ನೀಡುವುದಾಗಿ ಪ್ರಧಾನಿ ಹೇಳಿದರು. ಹೆಲಿಕಾಪ್ಟರ್ ಮೂಲಕ ಪ್ರಧಾನಿ ಮೋದಿ ಅವರು ವೈಮಾನಿಕ ಸಮೀಕ್ಷೆ ನಡೆಸಿ ಹಾನಿಯ ಮಾಹಿತಿ ಪಡೆದುಕೊಂಡರು.
- ರಾಜ್ಯ ವಿಪತ್ತು ನಿರ್ವಹಣೆ ಪಡೆ ನಿಧಿಗೆ ಮತ್ತು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಗೆ ಕೇಂದ್ರ ಸರ್ಕಾರವು ನೀಡುವ ಹಣವನ್ನೇ ಮುಂಗಡವಾಗಿ (₹1,500 ಕೋಟಿ) ನೀಡಲಾಗುತ್ತಿದೆ. ಈ ನಿಧಿಗಳಿಗೆ ಎರಡನೇ ಕಂತಿನಲ್ಲಿ ಕೇಂದ್ರವು ಹಣ ಪಾವತಿ ಮಾಡಬೇಕಿತ್ತು.
- ಮಳೆಹಾನಿ ಅಂದಾಜಿಸಲು ಕೇಂದ್ರ ಸರ್ಕಾರವು ರಾಜ್ಯಕ್ಕೆ ಈಗಾಗಲೇ ಸಚಿವರ ತಂಡವನ್ನು ರಾಜ್ಯಕ್ಕೆ ಕಳುಹಿಸಿದೆ. ಈ ತಂಡದ ವರದಿ ಬಂದ ಬಳಿಕ, ಕೇಂದ್ರ ಸರ್ಕಾರವು ಮುಂದಿನ ಹಂತದ ಆರ್ಥಿಕ ನೆರವು ನೀಡಲಿದೆ ಎನ್ನಲಾಗುತ್ತಿದೆ. ಮಳೆ ಸಂಬಂಧಿತ ಅವಘಡಗಳಲ್ಲಿ ಮೃತಪಟ್ಟ ಕುಟುಂಬದವರನ್ನು ಪ್ರಧಾನಿ ಮೋದಿ ಭೇಟಿ ಮಾಡಿದರು.
- 'ಶಿಕ್ಷಣ, ಕೃಷಿ ಸೇರಿದಂತೆ ರಾಜ್ಯದಲ್ಲಿ ಹಲವು ಕ್ಷೇತ್ರಗಳಿಗೆ ಭಾರಿ ನಷ್ಟವಾಗಿದೆ. ಜನರ ಜೀವನ ಸಹಜಸ್ಥಿತಿಗೆ ಮರಳುವಂತೆ ಮಾಡಬೇಕಿದೆ ಇದಕ್ಕಾಗಿ ಬಹು ಆಯಾಮದ ಯೋಜನೆಗಳನ್ನು ರೂಪಿಸಬೇಕು' ಎಂದು ಪ್ರಧಾನಿ ಹೇಳಿದರು.

ಪಂಜಾಬ್‌ಗೆ ₹1,600 ಕೋಟಿ ನೆರವು

- ಪ್ರವಾಹದಿಂದ ತೀವ್ರ ಹಾನಿಗೆ ಒಳಗಾಗಿರುವ ಪಂಜಾಬ್‌ಗೆ ಪ್ರಧಾನಿ ಮೋದಿ ಅವರು ₹1,600 ಕೋಟಿ ನೆರವು ಘೋಷಣೆ ಮಾಡಿದರು. ರಾಜ್ಯಕ್ಕೆ ಈಗಾಗಲೇ ₹12 ಸಾವಿರ ಕೋಟಿ ನೆರವನ್ನು ಕೇಂದ್ರ ಸರ್ಕಾರ ನೀಡಿದೆ. ರಾಜ್ಯಕ್ಕೆ ಸುಮಾರು ₹13 ಸಾವಿರ ಕೋಟಿ ನಷ್ಟವಾಗಿದೆ' ಎಂದು ರಾಜ್ಯ ಸರ್ಕಾರ ಅಂದಾಜಿಸಿದೆ. ಮನೆ ಸಂಬಂಧಿತ ಅವಘಡಗಳಲ್ಲಿ ಮೃತಪಟ್ಟವರಿಗೆ ₹2 ಲಕ್ಷ ಮತ್ತು ಗಾಯಗೊಂಡವರಿಗೆ ₹50 ಸಾವಿರ ಪರಿಹಾರ ನೀಡುವುದಾಗಿ ಘೋಷಿಸಲಾಯಿತು.

## ❖ ಮರುಸಿಂಚನ: 27 ಜಿಲ್ಲೆಗಳಿಗೆ ವಿಸ್ತರಣೆ: ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗಾಗಿ ರೂಪಿಸಿರುವ ಯೋಜನೆ

**<u>ಸಂದರ್ಭ:</u>** ಕಲಿಕೆಯಲ್ಲಿ ಹಿಂದುಳಿ ದಿರುವ ಮಕ್ಕಳಿಗಾಗಿ ರೂಪಿಸಿರುವ **ಮರುಸಿಂಚನ ಯೋಜನೆಯನ್ನು ಪ್ರಸಕ್ತ ಶೈಕ್ಷಣಿಕ ಸಾಲಿನಿಂದ 6ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಜಾರಿ** ಗೊಳಿಸುತ್ತಿದ್ದು, ಸರ್ಕಾರಿ ಶಾಲೆಗಳಲ್ಲಿನ ಸುಮಾರು 18 ಲಕ್ಷ ಮಕ್ಕಳು ಇದರ ಪ್ರಯೋಜನ ಪಡೆಯುವ ಸಾಧ್ಯತೆ ಇದೆ.

- ‘ಎರಡು ವರ್ಷಗಳ ಹಿಂದೆ ಪ್ರಾಯೋಗಿಕವಾಗಿ ಜಾರಿಗೊಳಿಸಿದ್ದ ಈ ಯೋಜನೆಯನ್ನು 2025–26ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದ 27 ಶೈಕ್ಷಣಿಕ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ.
- ಕಲಿಕೆಯಲ್ಲಿ ಹಿಂದೆ ಇರುವ ಮಕ್ಕಳನ್ನು ಗುರುತಿಸಿ, ಶಾಲಾ ಅವಧಿಯಲ್ಲೇ ಪರಿಹಾರ ಬೋಧನೆ ಮೂಲಕ ಅವರ ಕಲಿಕಾ ಮಟ್ಟವನ್ನು ಸುಧಾರಿಸಲಾಗುತ್ತದೆ. ಇದಕ್ಕಾಗಿ ಶಿಕ್ಷಕರಿಗೆ ವಿಶೇಷ ತರಬೇತಿ ನೀಡಲಾಗುತ್ತದೆ. ವಿದ್ಯಾರ್ಥಿಗಳಿಗೆ ಅಭ್ಯಾಸ ಪುಸ್ತಕ, ಶಿಕ್ಷಕರಿಗೆ ಮಾಡ್ಯೂಲ್‌ಗಳ ಕೈಪಿಡಿ ನೀಡಲಾಗುತ್ತದೆ. ಅದಕ್ಕೆ ಅನುಗುಣವಾಗಿ ಮಕ್ಕಳಿಗೆ ಕಲಿಸಲಾಗುತ್ತದೆ.
- ಗಣಿತ, ವಿಜ್ಞಾನ, ಸಮಾಜ ವಿಜ್ಞಾನ, ಕನ್ನಡ ಹಾಗೂ ಇಂಗ್ಲಿಷ್ ವಿಷಯಗಳಲ್ಲಿ ಅಭ್ಯಾಸ ಪುಸ್ತಕಗಳನ್ನು ರಾಜ್ಯ ಶಿಕ್ಷಣ, ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ (ಡಿಎಸ್‌ಇಆರ್‌ಟಿ) ಸಿದ್ಧಪಡಿಸಲಿದೆ.
- **ಸ್ವಯಂ ಸೇವಾ ಸಂಸ್ಥೆಗಳಾದ ಪೀಪಲ್ ಫಾರ್ ಆಕ್ಷನ್ ಸಂಸ್ಥೆ ಮತ್ತು ಜೆ–ಪಾಲ್ ಯೋಜನೆಯ ಅನುಷ್ಠಾನದಲ್ಲಿ ಭಾಗಿಯಾಗಿದ್ದು, ಕಾಲಕಾಲಕ್ಕೆ ಅಗತ್ಯ ಸಲಹೆಗಳನ್ನು ನೀಡಲಿವೆ.**
- ಕಲಿಕೆಯಲ್ಲಿ ಶೇ 40ಕ್ಕಿಂತ ಕಡಿಮೆ ಇರುವ ಅಥವಾ ಶೇ 60ಕ್ಕಿಂತ ಕಡಿಮೆ ಇರುವ ಮಕ್ಕಳಿಗೆ ಮರುಸಿಂಚನ ಯೋಜನೆಯಡಿ ಪರಿಹಾರ ಬೋಧನೆ ತರಗತಿಗಳನ್ನು ನಡೆಸಬೇಕೇ ಎಂಬುದು ಇನ್ನೂ ಅಂತಿಮವಾಗಿಲ್ಲ.
- **<u>ಗುಣಮಟ್ಟ ಸುಧಾರಣೆ:</u> 10ನೇ ತರಗತಿಯಲ್ಲಿ ಕಡಿಮೆ ಫಲಿತಾಂಶ, ಉತ್ತೀರ್ಣರಾಗದೆ ಇರುವುದು ಕಂಡುಬಂದಿದೆ. ಅಲ್ಲದೆ ಮಕ್ಕಳು ಯಾವ ಹಂತದಲ್ಲಿ ಎಷ್ಟು ಕಲಿತಿರಬೇಕೊ, ಅಷ್ಟು ಕಲಿತಿರುವುದಿಲ್ಲ. ಇದನ್ನು ಗಮನದಲ್ಲಿಟ್ಟುಕೊಂಡು ಆಯಾ ತರಗತಿಯಿಂದಲೇ ಗುಣಮಟ್ಟದಲ್ಲಿ ಸುಧಾರಣೆ ತರಲು ಮರುಸಿಂಚನ ಕಾರ್ಯಕ್ರಮ ರೂಪಿಸಲಾಗಿದೆ.**
- ಅಭ್ಯಾಸ ಪುಸ್ತಕ 80ರಿಂದ 100 ಪುಟ ಇರಲಿದ್ದು, ಮಕ್ಕಳ ಸಾಮರ್ಥ್ಯವನ್ನು ಅರಿತು ಪೂರಕ ಚಟುವಟಿಕೆಗಳ ಮೂಲಕ ಮಕ್ಕಳಿಗೆ ಕಲಿಸಲಾಗುತ್ತದೆ. **ಸಾಮಾನ್ಯ ತರಗತಿ ಹೊರತುಪಡಿಸಿ, ಹೆಚ್ಚುವರಿಯಾಗಿ ಪ್ರಾಯೋಗಿಕ ಚಟುವಟಿಕೆಗಳ ಮೂಲಕ ಕಲಿಸುವುದರಿಂದ ಮಕ್ಕಳ ಕಲಿಕಾ ಮಟ್ಟದಲ್ಲಿ ಸುಧಾರಣೆಯಾಗಿರುವುದು ಮೌಲ್ಯಾಂಕನದಿಂದ ದೃಢಪಟ್ಟಿದೆ. ಇದನ್ನು ಆಧರಿಸಿ ಈ ವರ್ಷ ಎಲ್ಲ ಸರ್ಕಾರಿ ಶಾಲೆಗಳಿಗೆ ವಿಸ್ತರಣೆ ಮಾಡಲಾಗುತ್ತಿದೆ.**

ಪ್ರಾಯೋಗಿಕ ಯೋಜನೆ ಯಶಸ್ವಿ

- 17 ಜಿಲ್ಲೆಗಳ 93 ತಾಲ್ಲೂಕುಗಳಲ್ಲಿ 9ನೇ ತರಗತಿ ಮಕ್ಕಳಿಗೆ 2023–24ರಲ್ಲಿ ಪ್ರಾಯೋಗಿಕವಾಗಿ ಮರುಸಿಂಚನ ಯೋಜನೆ ಜಾರಿಗೊಳಿಸಲಾಗಿತ್ತು. ಕಳೆದ ವರ್ಷ 6ರಿಂದ 10ನೇ ತರಗತಿವರೆಗಿನ ಮಕ್ಕಳಿಗೆ ವಿಸ್ತರಿಸಲಾಗಿತ್ತು. ಇದು ಯಶಸ್ವಿಯಾಗಿರುವುದನ್ನು ಗಮನಿಸಿ 27 ಶೈಕ್ಷಣಿಕ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ.
- **‘ರಾಜ್ಯದಲ್ಲಿ ಒಟ್ಟು 35 ಶೈಕ್ಷಣಿಕ ಜಿಲ್ಲೆಗಳಿವೆ. ಈ ಪೈಕಿ ದಕ್ಷಿಣ ಕನ್ನಡ, ಉತ್ತರ ಕನ್ನಡ, ಶಿರಸಿ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳಲ್ಲಿ ಒಟ್ಟಾರೆ ಶೈಕ್ಷಣಿಕ ಗುಣಮಟ್ಟ ಚೆನ್ನಾಗಿದೆ.** ಆ ಜಿಲ್ಲೆಗಳಲ್ಲೂ ಕೆಲವು ಶಾಲೆಗಳಲ್ಲಿನ ಮಕ್ಕಳ ಕಲಿಕಾ ಮಟ್ಟ ಕಡಿಮೆ ಇರಬಹುದು. ಆದರೆ, ಆ ಜಿಲ್ಲೆಗಳಲ್ಲಿ ಮರುಸಿಂಚನ ಜಾರಿ ಮಾಡುವ ಬಗ್ಗೆ ಸದ್ಯಕ್ಕೆ ನಿರ್ಧರಿಸಿಲ್ಲ’ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಮೂಲಗಳು ತಿಳಿಸಿವೆ.

## ❖ ದೇಶದಾದ್ಯಂತ ಎಸ್‌ಐಆರ್‌ಗೆ ಸಿದ್ಧತೆ

**ಸಂದರ್ಭ:** ವರ್ಷಾಂತ್ಯದ ವೇಳೆಗೆ ದೇಶದಾದ್ಯಂತ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ನಡೆಸಲು ಮುಂದಾಗಿರುವ ಚುನಾ ವಣಾ ಆಯೋಗ, ಈ ಕುರಿತು ಶೀಘ್ರದಲ್ಲಿಯೇ ವೇಳಾಪಟ್ಟಿ ಪ್ರಕಟಿಸುವ ಸಾಧ್ಯತೆ ಇದೆ.

- ರಾಷ್ಟ್ರದಾದ್ಯಂತ ಎಸ್‌ಐಆರ್ ನಡೆಸಲು ಕೈಗೊಂಡಿರುವ ಸಿದ್ಧತಾ ಕಾರ್ಯಗಳ ಕುರಿತು ಸಭೆಯಲ್ಲಿ ಪರಿಶೀಲನೆ ನಡೆಸಲಾಯಿತು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು, ವಿವೇಕ್ ಜೋಶಿ ಅವರೂ ಪಾಲ್ಗೊಂಡಿದ್ದರು.
- ಬಿಹಾರದ ಮುಖ್ಯ ಚುನಾವಣಾ ಅಧಿಕಾರಿ ವಿನೋದ್ ಸಿಂಗ್ ಗುಂಜಿ ಯಾಲ್ ಅವರು, ವಿವಾದಗಳ ನಡುವೆಯೂ ರಾಜ್ಯದಲ್ಲಿ ಎಸ್‌ಐಆರ್ ಜಾರಿಗೆ ಅಳವಡಿಸಿಕೊಂಡ ಕಾರ್ಯ ತಂತ್ರ, ನಿಯಮಗಳು, ನಡೆಸಿದ ಕಸರತ್ತಿನ ವಿವರವನ್ನು ಪ್ರಾತ್ಯಕ್ಷಿಕೆ ಮೂಲಕ ನೀಡಿದರು.
- **ಮುಂದಿನ ವರ್ಷದ (2026) ಏಪ್ರಿಲ್–ಮೇ ತಿಂಗಳಲ್ಲಿ ಅಸ್ಸಾಂ, ಕೇರಳ, ಪುದುಚೇರಿ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳದಲ್ಲಿ ವಿಧಾನಸಭಾ ಚುನಾವಣೆಗಳು ನಡೆಯಬೇಕಿದ್ದು, ಅದಕ್ಕೂ ಮುನ್ನವೇ, ಈ ವರ್ಷಾಂತ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆಗೆ ಚಾಲನೆ ನೀಡುವ ಸಾಧ್ಯತೆ ಇದೆ ಎಂದು ಉನ್ನತ ಮೂಲಗಳು ತಿಳಿಸಿವೆ.**
- ಸಭೆಯಲ್ಲಿ ಹಾಜರಿದ್ದ ಸಿಇಒಗಳು ತಮ್ಮ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿನ ಒಟ್ಟಾರೆ ಮತದಾರರ ಸಂಖ್ಯೆ, ಹಿಂದೆ ನಡೆದಿದ್ದ ಎಸ್‌ಐಆರ್ ಮತ್ತು ಮತದಾರರ ಪಟ್ಟಿಯ ಕುರಿತು ವಿವರವಾದ ಮಾಹಿತಿಯನ್ನು ಪ್ರಸ್ತುತ ಪಡಿಸಿದರು ಎಂದು ಆಯೋಗದ ಪ್ರಕಟಣೆ ತಿಳಿಸಿದೆ.
- ದೇಶದಾದ್ಯಂತ ಎಸ್‌ಐಆರ್ ನಡೆಸಲು ಚುನಾವಣಾ ಆಯೋಗ ಜೂನ್ 24ರಂದು ನಿರ್ಧರಿಸಿತ್ತು. ಅಕ್ಟೋಬರ್–ನವೆಂಬರ್‌ನಲ್ಲಿ ಚುನಾವಣೆ ನಡೆಯಲಿ ರುವ ಬಿಹಾರದಿಂದ ಅದನ್ನು ಪ್ರಾರಂಭಿಸುವುದಾಗಿ ತಿಳಿಸಿತ್ತು. ದೇಶದ ಇತರ ಭಾಗಗಳಿಗೆ ಮುಂದಿನ ದಿನಗಳಲ್ಲಿ ವೇಳಾಪಟ್ಟಿ ಪ್ರಕಟಿಸಲಾಗುವುದು ಎಂದೂ ಆಯೋಗ ಹೇಳಿತ್ತು.
- **‘ದೇಶದಲ್ಲಿ 2003ರಲ್ಲಿ ಕೊನೆಯ ದಾಗಿ ಎಸ್‌ಐಆರ್ ನಡೆಸಲಾಗಿತ್ತು. ನಗರೀಕರಣ, ಹೆಚ್ಚುತ್ತಿರುವ ವಲಸೆ ಯಿಂದಾಗಿ ಮತದಾರರ ಪಟ್ಟಿಯಲ್ಲಿ ಪದೇ ಪದೇ ಬದಲಾವಣೆಗಳು ಆಗುತ್ತಿವೆ. ಹೀಗಾಗಿ ಎಸ್‌ಐಆರ್ ಅಗತ್ಯವಾಗಿದೆ’** ಎಂದು ಚುನಾವಣಾ ಆಯೋಗ ಪ್ರತಿಪಾದಿಸಿತ್ತು.
- **ಬಾಂಗ್ಲಾ ಮತ್ತು ಮ್ಯಾನ್ಮಾರ್ ಅಕ್ರಮ ವಲಸಿಗರನ್ನು ಹಲವು ರಾಜ್ಯಗಳಲ್ಲಿ ಪತ್ತೆ ಮಾಡಿದ ನಂತರ ವಿದೇಶಿ ಅಕ್ರಮ ವಲಸಿಗರನ್ನು ಪಟ್ಟಿಯಿಂದ ತೆಗೆಯುವುದು ಈ ವಿಶೇಷ ಪರಿಷ್ಕರಣೆಯ ಪ್ರಾಥಮಿಕ ಉದ್ದೇಶ.**

ಹೊರರಾಜ್ಯಗಳಲ್ಲಿ ನೆಲಸಿರುವವರಿಗೆ ‘ಘೋಷಣಾ ಅರ್ಜಿ’

- **ಹೊರರಾಜ್ಯಗಳಲ್ಲಿ ನೆಲಸಿರುವವರಿಗಾಗಿಯೇ ಹೆಚ್ಚುವರಿ ಯಾಗಿ ‘ಘೋಷಣಾ ಅರ್ಜಿ’ ಯೊಂದನ್ನು ಪರಿಚಯಿಸಲು ಆಯೋಗ ಮುಂದಾಗಿದೆ. 1987ರ ಜುಲೈ 1 ಮತ್ತು 2004ರ ಡಿಸೆಂಬರ್ 2ರ ಮಧ್ಯೆ ಭಾರತದಲ್ಲಿ ಜನಿಸಿರುವ ಬಗ್ಗೆ ಅವರೆಲ್ಲ ದೃಢಪಡಿಸಬೇಕು. ಜನ್ಮ ದಿನಾಂಕ ಮತ್ತು ವಾಸಸ್ಥಳದ ದೃಢೀಕರಣ ಪತ್ರಗಳನ್ನು ಸಲ್ಲಿಸಬೇಕು.**
- ಯಾವುದೇ ಅರ್ಹ ನಾಗರಿಕ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳಲು ಈಗಾಗಲೇ ಬಿಹಾರ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಆಯೋಗಕ್ಕೆ ಸೂಚನೆ ನೀಡಿದೆ. ಕೆಲವು ರಾಜ್ಯಗಳು 2002 ಮತ್ತು 2004ರ ಮಧ್ಯೆ ಮತದಾರರ ಪಟ್ಟಿಯ ಪರಿಷ್ಕರಣೆ ನಡೆಸಿದ್ದವು.

Dr. Rajkumar IAS/KAS Academy

ಆಧಾರ್ ಪರಿಗಣನೆಗೆ ಸೂಚನೆ

- ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ (ಎಸ್ಐಆರ್) ಮತದಾರರ ಗುರುತಿನ ದಾಖಲೆಯಾಗಿ ಆಧಾರ್ ಕಾರ್ಡ್ ಅನ್ನು ಪರಿಗಣಿಸುವಂತೆ ಚುನಾವಣಾ ಆಯೋಗವು ಬಿಹಾರದ ರಾಜ್ಯ ಚುನಾವಣಾ ಆಯೋಗಕ್ಕೆ ಸೂಚಿಸಿದೆ.
- ಸುಪ್ರೀಂ ಕೋರ್ಟ್ ಆದೇಶದ ಬೆನ್ನಲ್ಲೇ ಈ ನಿರ್ದೇಶನ ನೀಡಿದೆ. ಈ ಸಂಬಂಧ ರಾಜ್ಯ ಚುನಾವಣಾ ಆಯುಕ್ತರಿಗೆ ಪತ್ರ ಬರೆದಿರುವ ಆಯೋಗವು, **'ಮತದಾರರ ಗುರುತಿಗೆ ಗೊತ್ತುಪಡಿಸಲಾದ 11 ದಾಖಲೆಗಳ ಜೊತೆಗೆ 12ನೇ ದಾಖಲೆಯಾಗಿ ಆಧಾರ್ ಕಾರ್ಡ್ ಅನ್ನು ಪರಿಗಣಿಸಬಹುದು**' ಎಂದು ತಿಳಿಸಿದೆ.

## ❖ ಸೈಬರ್ ಕಮಾಂಡ್ ಘಟಕ ರಚನೆ

**ಸಂದರ್ಭ:** 'ರಾಜ್ಯದಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧಗಳನ್ನು ಗಮನದಲ್ಲಿ ರಿಸಿಕೊಂಡು ರೂಪಿಸಲಾಗಿರುವ ದೇಶದ ಮೊದಲ ಸೈಬರ್ ಕಮಾಂಡ್ ಘಟಕವು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸುವಂತಾಗಬೇಕು' ಎಂದು ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿದೆ.

- ನಗರದ 'ನ್ಯೂಸ್ಪೇಸ್ ರಿಸರ್ಚ್ ಆ್ಯಂಡ್ ಟೆಕ್ನಾಲಜೀಸ್ ಪ್ರೈವೆಟ್ ಲಿಮಿಟೆಡ್ ಕಂಪನಿ'ಯ ಅಧಿಕೃತ ಪ್ರತಿನಿಧಿ ಭಾವನಾ ವಿಜಯಕುಮಾರ್ ಸಲ್ಲಿಸಿದ್ದ ರಿಟ್ ಅರ್ಜಿ ಪುರಸ್ಕರಿಸಿರುವ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ, ಈ ಪ್ರಕರಣದಲ್ಲಿ ಇಂತಹದೊಂದು ಸ್ವತಂತ್ರ ಘಟಕವನ್ನು ಸ್ಥಾಪಿಸುವ ಬಗ್ಗೆ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿತ್ತು.
- ಈ ಆದೇಶದ ಅನುಪಾಲನೆಯನ್ನು ಪರಿಗಣಿಸಿ ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ ಅವರನ್ನು ತೆರೆದ ಕೋರ್ಟ್ ಹಾಲ್‌ಗೆ ಬರಮಾಡಿಕೊಂಡ ನ್ಯಾಯಪೀಠ, ಸೈಬರ್ ಕಮಾಂಡ್ ಘಟಕ ಅಥವಾ ಸೈಬರ್ ಕಮಾಂಡ್ ಸೆಂಟರ್ (ಸಿಸಿಸಿ) ರಚನೆಯ ಆದೇಶ ಕೇವಲ ಕಾಗದದಲ್ಲಿ ಉಳಿಯುವಂತಾಗಬಾರದು ಎಂದು ಹೇಳಿತು.
- ಸೈಬರ್ ಅಪರಾಧಗಳ ತನಿಖೆಯಲ್ಲಿನ ಪ್ರಗತಿ ಅಥವಾ ಎಲ್ಲಾ ಮಾಹಿತಿ ಮತ್ತು ತಂತ್ರಜ್ಞಾನ ಪ್ರಕರಣಗಳನ್ನು ಒಂದೇ ಸೂರಿನಡಿ ತರಬೇಕು. ಸಿಸಿಸಿಯ ಇಂತಹ ಏಕೀಕರಣವನ್ನು ತೋರಿಸುವ ನಿಮ್ಮ ವರದಿಯನ್ನು ಅಮಿಕಸ್ ಕ್ಯೂರಿ ಮೂಲಕ ಈ ನ್ಯಾಯಪೀಠಕ್ಕೆ ಸಲ್ಲಿಸಬೇಕು. ಕೇಂದ್ರದ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಅದಕ್ಕಾಗಿ ಕ್ರಮ ತೆಗೆದುಕೊಳ್ಳುವುದು ಸಿಸಿಸಿಯ ಆದ್ಯ ಕರ್ತವ್ಯವಾಗಿರುತ್ತದೆ ಎಂದು ನ್ಯಾಯಪೀಠ ಹೇಳಿದೆ.
- 'ಈ ಸಂಸ್ಥೆ ಅಥವಾ ಕೇಂದ್ರವು ದೇಶದ ಮೊದಲ ಸೈಬರ್ ಕಮಾಂಡ್ ಘಟಕ (ಸಿಸಿಯು) ಅಥವಾ ಸಿಸಿಸಿ ಎಂಬ ಹೆಗ್ಗಳಿಕೆ ಎಂಬುದನ್ನು ಮರೆಯಬೇಡಿ' ಎಂದು ಸೂಚಿಸಿತು.
- 'ಸೈಬರ್ ಅಪರಾಧಗಳನ್ನು ಎದುರಿಸಲು ಮತ್ತು ಸೈಬರ್ ಭದ್ರತೆಯನ್ನು ಬಲಪಡಿಸಲು ಸ್ಥಾಪಿಸಿರುವ ಸದರಿ ಘಟಕವು, ಹೊಸ ಯುಗದ ತನಿಖಾ ಕೇಂದ್ರಗಳೊಂದಿಗೆ ಹೊಸ ನಮೂನೆಯ ತಾಂತ್ರಿಕ ಯುಗದ ಅಪರಾಧಗಳನ್ನು ನಿಭಾಯಿಸುವ ನಿಟ್ಟಿನಲ್ಲಿ ದಾಪುಗಾಲು ಹಾಕಬೇಕು. ಈ ಘಟಕದ ಅಧಿಕಾರಿಗಳು ಅರ್ಥಪೂರ್ಣವಾಗಿ ಕಾರ್ಯನಿರ್ವಹಿಸು ವಂತೆ ಮಾಡಬೇಕು. ಆಗ ಮಾತ್ರ ರಾಜ್ಯವು ಸೈಬರ್ ಅಪರಾಧದಿಂದ ಹೊರಹೊಮ್ಮುತ್ತಿರುವ ಅಪಸವ್ಯಗಳನ್ನು ನಿಯಂತ್ರಿಸಲು ಸಾಧ್ಯ' ಎಂದು ನ್ಯಾಯಪೀಠ ಎಚ್ಚರಿಸಿದೆ.
- 'ಸಿಸಿಸಿ ಅಥವಾ ಸೈಬರ್ ಕಮಾಂಡೊ ಘಟಕ ಸೈಬರ್ ಅಪರಾಧದ ವಿರುದ್ಧದ ಹೋರಾಟದಲ್ಲಿ ಹೊಸ ಉದಯವನ್ನು ಸೂಚಿಸುವ ದೀಪವಾಗಿರಬೇಕು' ಎಂದು ಸ್ಪಷ್ಟಪಡಿಸಿದೆ. 'ನ್ಯಾಯಾಲಯ ನೀಡಿರುವ ಈ ಆದೇಶದ ಅನುಪಾಲನೆ ಕುರಿತಂತೆ ಕೈಗೊಳ್ಳಲಾಗುವ ಕ್ರಮಗಳನ್ನು ಇದೇ 24ಕ್ಕೆ ವಿವರಿಸಿ' ಎಂದು ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿದ ನ್ಯಾಯಪೀಠ ವಿಚಾರಣೆ ಮುಂದೂಡಿತು.

## ❖ 371 ಮರ: 'ಜೀವವೈವಿಧ್ಯ ಪಾರಂಪರಿಕ ತಾಣ'

**ಸಂದರ್ಭ:** ರೈಲ್ವೆ ಕಂಟೋನ್ಮೆಂಟ್ ಕಾಲೊನಿಯಲ್ಲಿ 371 ಮರಗಳಿರುವ ಎಂಟು ಎಕರೆಗೂ ಹೆಚ್ಚು ಪ್ರದೇಶವನ್ನು 'ಜೀವವೈವಿಧ್ಯ ಪಾರಂಪರಿಕ ತಾಣ' ಎಂದು ಘೋಷಿಸಿ, ಅರಣ್ಯ ಇಲಾಖೆ ಅಧಿಸೂಚನೆ ಹೊರಡಿಸಿದೆ.

- ವಸಂತನಗರದಲ್ಲಿರುವ ದಂಡು ಪ್ರದೇಶದ ಬಳಿಯ ರೈಲ್ವೆ ಕಾಲೊನಿಯಲ್ಲಿ ವಾಣಿಜ್ಯ ಕೇಂದ್ರ ಅಭಿವೃದ್ಧಿಗೆ 368 ಮರ ತೆರವುಗೊಳಿಸುವುದಕ್ಕೆ ಪರಿಸರ ಕಾರ್ಯಕರ್ತರು ವಿರೋಧ ವ್ಯಕ್ತಪಡಿಸಿದ್ದರು. ಇದಕ್ಕಾಗಿ ಹೋರಾಟ ವನ್ನೂ ನಡೆಸಿದ್ದರು. ಪರಿಸರ ಕಾರ್ಯಕರ್ತರ ಒತ್ತಾಸೆ ಹಾಗೂ ಅರಣ್ಯ ಸಚಿವ ಈಶ್ವರ ಬಿ. ಖಂಡ್ರೆ ಅವರ ಭರವಸೆಯಂತೆ ಈ ಪ್ರದೇಶವು 'ಜೀವವೈವಿಧ್ಯ ಪಾರಂಪರಿಕ ತಾಣ'ವಾಗಿದೆ.
- **ನಗರದ ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿಕೆವಿಕೆ) ಆವರಣದ 167 ಎಕರೆಯನ್ನು ಈ ಹಿಂದೆ 'ಜೀವವೈವಿಧ್ಯ ಪಾರಂಪರಿಕ ತಾಣ' ಎಂದು ಘೋಷಿಸಲಾಗಿತ್ತು. ಇದರ ನಂತರ, ರೈಲ್ವೆ ಕಂಟೋನ್ಮೆಂಟ್ ಕಾಲೊನಿ ಈ ಹೆಗ್ಗಳಿಕೆಗೆ ಪಾತ್ರವಾಗಿದೆ.**
- ರಾಜ್ಯ ಜೀವವೈವಿಧ್ಯ ಮಂಡಳಿಯ ಅಧ್ಯಕ್ಷರೂ ಆಗಿರುವ ಅರಣ್ಯ ಸಚಿವರ ಅಧ್ಯಕ್ಷತೆಯಲ್ಲಿ ಮಂಡಳಿಯ ವಿಶೇಷ ಸಭೆ ನಡೆಯಿತು. **ಬೆಂಗಳೂರಿನ ಕಂಟೋನ್ಮೆಂಟ್ ರೈಲು ನಿಲ್ದಾಣಕ್ಕೆ ಹೊಂದಿಕೊಂಡಿರುವ 8.61 ಎಕರೆ ಪ್ರದೇಶವನ್ನು ಹಸಿರು ವಲಯವನ್ನಾಗಿ ಪರಿಗಣಿಸಿ, ಸಂರಕ್ಷಣೆಯ ಅಗತ್ಯವನ್ನು ಮನಗಂಡು, ಜೀವ ವೈವಿದ್ಯ ಕಾಯ್ದೆ–2002 ನಿಬಂಧನೆಗಳ ಅಡಿಯಲ್ಲಿ ಈ ಸ್ಥಳವನ್ನು 'ಜೀವವೈವಿಧ್ಯ ಪಾರಂಪರಿಕ ತಾಣ' (ಬಿಎಚ್ಎಸ್) ಎಂದು ಘೋಷಿಸಲು ತೀರ್ಮಾನಿಸಲಾಯಿತು.**
- ರಾಜಧಾನಿಯ ಹೃದಯ ಭಾಗದಲ್ಲಿ 50 ಜಾತಿಯ 371 ಮರಗಳಿದ್ದು, ರಮಣೀಯ ಸೌಂದರ್ಯ, ಹಕ್ಕಿಗಳ ಚಿಲಿಪಿಲಿಯ ಹಸಿರು ತಾಣವಾಗಿದೆ. ನಗರದ ವಾಸಯೋಗ್ಯತೆ ಯನ್ನು ಉತ್ತಮಪಡಿಸಿ, ಹಸಿರುಹಾಸು ಈ ಪ್ರದೇಶದ ಹೆಗ್ಗುರುತಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ ಹೊರಡಿಸಿರುವ ಅಧಿಸೂಚನೆಯಲ್ಲಿ ವಿವರಿಸಲಾಗಿದೆ.

**ಷರತ್ತುಗಳು ಏನು?**

।ಸೂಕ್ಷ್ಮ ಅನುಮೋದಿತ ನಿರ್ವಹಣಾ ಯೋಜನೆಯಂತೆ ಪಾರಂಪರಿಕ ತಾಣವನ್ನು ನಿರ್ವಹಿಸಬೇಕು
।ಸ್ಥಳೀಯರ ಹಕ್ಕುಗಳು ಮತ್ತು ಸವಲತ್ತುಗಳು ಸದಾ ಅಸ್ತಿತ್ವದಲ್ಲಿರುತ್ತವೆ
।ಪಾರಂಪರಿಕ ತಾಣದ ನಿರ್ವಹಣೆಯಲ್ಲಿ ಸ್ಥಳೀಯ ಜನರಿಗೆ ಪಾಲ್ಗೊಳ್ಳಲು ಅವಕಾಶ ಇರಬೇಕು
।ಜೀವವೈವಿಧ್ಯತೆಯ ಸಂರಕ್ಷಣೆಗೆ ವಿರುದ್ಧವಾದ ಯಾವುದೇ ಚಟುವಟಿಕೆಗಳಿಗೆ ಅವಕಾಶ ಇಲ್ಲ

## ❖ ಇಟಲಿ ಪ್ರಧಾನಿ ಜತೆ ಮೋದಿ ಮಾತುಕತೆ


**ಸಂದರ್ಭ:** ಪ್ರಧಾನಿ ನರೇಂದ್ರ ಮೋದಿ ಅವರು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೊನಿ ಅವರೊಂದಿಗೆ ದೂರವಾಣಿಯಲ್ಲಿ ಮಾತುಕತೆ ನಡೆಸಿದರು.

- 'ಪ್ರಧಾನಿ ಜಾರ್ಜಿಯಾ ಮೆಲೊನಿ ಅವರೊಂದಿಗೆ ಉತ್ತಮ ಸಂಭಾಷಣೆ ನಡೆಸಿದೆ. ಭಾರತ– ಇಟಲಿ ಕಾರ್ಯತಂತ್ರದ ಪಾಲುದಾರಿಕೆಯನ್ನು ಇಮ್ಮಡಿಗೊಳಿಸುವ ನಮ್ಮ ಬದ್ಧತೆಯನ್ನು ಪುನರುಚ್ಚರಿಸಿದ್ದೇವೆ.
- ಉಕ್ರೇನ್‌ನಲ್ಲಿ ನಡೆಯುತ್ತಿರುವ ಸಂಘರ್ಷವನ್ನು ಶೀಘ್ರವಾಗಿ ಕೊನೆಗೊಳಿಸಬೇಕೆಂಬ ಕುರಿತೂ ಮಾತನಾಡಿದೆವು' ಎಂದು ಮೋದಿ 'ಎಕ್ಸ್' ಖಾತೆಯಲ್ಲಿ ಬರೆದುಕೊಂಡಿದ್ದಾರೆ.
- 'ಭಾರತ–ಯುರೋಪ್ ಒಕ್ಕೂಟದ ವ್ಯಾಪಾರ ಒಪ್ಪಂದ ಮತ್ತು 'ಭಾರತ– ಮಧ್ಯಪ್ರಾಚ್ಯ– ಯುರೋಪ್ ಆರ್ಥಿಕ ಕಾರಿಡಾರ್' (ಐಎಂಇಇಸಿ) ಅನುಷ್ಠಾನಕುರಿತು ಬೆಂಬಲ ನೀಡಿದ್ದಕ್ಕಾಗಿ ಮೆಲೊನಿ ಅವರಿಗೆ

Dr. Rajkumar IAS/KAS Academy

ಧನ್ಯವಾದ ತಿಳಿಸುತ್ತೇನೆ' ಎಂದೂ ಹೇಳಿದ್ದಾರೆ. ಭಾರತ ಮತ್ತು ಯುರೋಪ್ ಒಕ್ಕೂಟವು ಪ್ರಸ್ತಾವಿತ ಮುಕ್ತ ವ್ಯಾಪಾರ ಒಪ್ಪಂದ (ಎಫ್‌ಟಿಎ) ಬಲಗೊಳಿಸುವತ್ತ ಮುಂದುವರಿದಿವೆ.

## ❖ ಬಿಆರ್‌ಎಸ್‌ಗೆ ಅಧಿಕ ಆದಾಯ



# ಬಿಆರ್‌ಎಸ್‌ಗೆ ಅಧಿಕ ಆದಾಯ

ದೇಶದ 60 ಪ್ರಾದೇಶಿಕ ಪಕ್ಷಗಳ ಪೈಕಿ 40 ಪಕ್ಷಗಳು 2023–24ನೇ ಸಾಲಿನಲ್ಲಿ ಚುನಾವಣಾ ಆಯೋಗಕ್ಕೆ ಸಲ್ಲಿಸಿರುವ ತಮ್ಮ ಆದಾಯ, ವೆಚ್ಚಗಳ ಮಾಹಿತಿಯನ್ನು ಸಂಗ್ರಹಿಸಿ ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ (ಎಡಿಆರ್) ತನ್ನ ವರದಿಯನ್ನು ಬುಧವಾರ ಬಿಡುಗಡೆ ಮಾಡಿದೆ. ದಕ್ಷಿಣ ಭಾರತದ ಪ್ರಾದೇಶಿಕ ಪಕ್ಷಗಳೇ ಅಧಿಕ ಆದಾಯ ಬರುವ ಪಟ್ಟಿಯಲ್ಲಿ ಮುಂಚೂಣಿಯಲ್ಲಿವೆ. ಬಿಆರ್‌ಎಸ್ ಪಕ್ಷವೇ ಅಧಿಕ ಆದಾಯ ಪಡೆದ ಪಕ್ಷವಾಗಿ ಹೊರಹೊಮ್ಮಿದೆ. ನಂತರದ ಸ್ಥಾನದಲ್ಲಿ ಟಿಎಂಸಿ ಇದೆ

**₹2,532.09 ಕೋಟಿ** 40 ಪ್ರಾದೇಶಿಕ ಪಕ್ಷಗಳ ಒಟ್ಟು ಆದಾಯದ ಮೊತ್ತ

### ಟಿಡಿಪಿ ಆದಾಯ 4 ಪಟ್ಟು ಹೆಚ್ಚಳ (ಕೋಟಿಗಳಲ್ಲಿ)

| ಪಕ್ಷ | 2023-24 | 2022-23 |
|---|---|---|
| ಬಿಆರ್‌ಎಸ್ | ₹685.51 | ₹737.67 |
| ಟಿಎಂಸಿ | ₹646.39 | ₹333.45 |
| ಬಿಜೆಡಿ | ₹297.80 | ₹181.05 |
| ಟಿಡಿಪಿ | ₹285.07 | ₹63.99 |
| ವೈಎಸ್‌ಆರ್ ಕಾಂಗ್ರೆಸ್ | ₹191.04 | ₹74.78 |

ಎಲ್ಲ **40** ಪ್ರಾದೇಶಿಕ ಪಕ್ಷಗಳ ಒಟ್ಟು ಆದಾಯದಲ್ಲಿ ಮೊದಲ **5** ಪಕ್ಷಗಳ ಆದಾಯದ ಒಟ್ಟು ಮೊತ್ತವೇ **₹2,105.82** ಕೋಟಿ (ಶೇ **83.17**ರಷ್ಟಿದೆ) ಇದೆ

### ಬಾಂಡ್ ಮೂಲಕವೇ ಆದಾಯ

ಹೆಚ್ಚಿನ ಪ್ರಾದೇಶಿಕ ಪಕ್ಷಗಳಿಗೆ ತಮ್ಮ ಒಟ್ಟು ಆದಾಯದಲ್ಲಿ ಶೇ 50ಕ್ಕಿಂತ ಹೆಚ್ಚಿನ ಆದಾಯವು ಚುನಾವಣಾ ಬಾಂಡ್ ಮೂಲಕವೇ ಬಂದಿದೆ. ಟಿಎಂಸಿ ಪಕ್ಷಕ್ಕೆ ಬಂದ ಒಟ್ಟು ಆದಾಯದಲ್ಲಿ ಶೇ **94.74**ರಷ್ಟು ಆದಾಯವು ಚುನಾವಣಾ ಬಾಂಡ್ ಮೂಲಕವೇ ಬಂದಿದೆ. ನಂತರದ ಸ್ಥಾನದಲ್ಲಿ ಬಿಆರ್‌ಎಸ್ ಇದೆ. ಡಿಎಂಕೆ, ಸಮಾಜವಾದಿ ಪಕ್ಷ ಸೇರಿ ಕೆಲವು ಪಕ್ಷಗಳು ಇದಕ್ಕೆ ಹೊರತಾಗಿದೆ. ಸಮಾಜವಾದಿ ಪಕ್ಷಕ್ಕೆ ಬಾಂಡ್ ಮೂಲಕ ಆದಾಯವೇ ಬಂದಿಲ್ಲ (ಕೋಟಿಗಳಲ್ಲಿ)

| ಟಿಎಂಸಿ | ಬಿಆರ್‌ಎಸ್ | ಬಿಜೆಡಿ | ಟಿಡಿಪಿ | ವೈಎಸ್‌ಆರ್ ಕಾಂಗ್ರೆಸ್ |
|---|---|---|---|---|
| ₹612.42 | ₹495.52 | ₹245.50 | ₹174.08 | ₹121.50 |

### ಜೆಡಿಎಸ್ ಆದಾಯ: ಸುಮಾರು 40 ಪಟ್ಟು ಹೆಚ್ಚಳ

₹1.47 ಕೋಟಿ 2022-23

₹44.18 ಕೋಟಿ 2023-24

**2022-23** ಮತ್ತು **2023-24**ನೇ ಆರ್ಥಿಕ ವರ್ಷದ ಹೋಲಿಕೆಯಲ್ಲಿ ಜೆಡಿಎಸ್ ಪಕ್ಷದ ಆದಾಯವು ಸುಮಾರು **40** ಪಟ್ಟು ಏರಿಕೆಯಾಗಿದೆ. ಇದರಲ್ಲಿ ಸುಮಾರು ಶೇ 99ರಷ್ಟು ಆದಾಯವು ಚುನಾವಣಾ ಬಾಂಡ್ ಮೂಲಕವೇ ಬಂದಿದೆ

* **₹44.18** ಕೋಟಿ ಆದಾಯದಲ್ಲಿ **₹41** ಕೋಟಿಯಷ್ಟು ಆದಾಯವು ಚುನಾವಣಾ ಬಾಂಡ್ ಮೂಲಕ ಬಂದಿದೆ

ಆಧಾರ: ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ (ಎಡಿಆರ್)

Dr Rajkumar IAS Academy

## ❖ 'ಕೈಗಾರಿಕೆಗೆ ಎರಡು ಎಕರೆ: ಭೂಮಿ ಪರಿವರ್ತನೆ ಅಗತ್ಯವಿಲ್ಲ'

**ಸಂದರ್ಭ:** ಕೃಷಿ ಭೂಮಿ ಖರೀದಿ ಸರಳೀಕರಣ ಮತ್ತು ಕೆಲವು ಉದ್ದೇಶ ಗಳಿಗೆ ಭೂಮಿ ಪರಿವರ್ತನೆ ನಿಯಮ ಸಡಿಲಿಕೆಗೆ ಅವಕಾಶ ಕಲ್ಪಿಸುವ 'ಕರ್ನಾಟಕ ಭೂ ಸುಧಾರಣೆಗಳು ಮತ್ತು ಇತರೆ ಕಾನೂನು (ತಿದ್ದುಪಡಿ)' ಮಸೂದೆ ಸೇರಿ ವಿವಿಧ ಮಸೂದೆಗಳಿಗೆ ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರು ಅಂಕಿತ ಹಾಕಿದ್ದಾರೆ. ಆ ಬೆನ್ನಲ್ಲೇ, ರಾಜ್ಯ ಸರ್ಕಾರ ಗೆಜೆಟ್ ಹೊರಡಿಸಿದೆ.

- ಶಿಕ್ಷಣ ಸಂಸ್ಥೆಗಳಿಗೆ ಅಥವಾ ಕೈಗಾರಿಕೆ ಗಳಿಗೆ ಎರಡು ಎಕರೆವರೆಗಿನ ಕೃಷಿ ಭೂಮಿಗೆ ಭೂ ಪರಿವರ್ತನೆಯಿಂದ ವಿನಾಯಿತಿ ನೀಡುವ, ಶಿಕ್ಷಣ ಸಂಸ್ಥೆ ಗಳು ಮತ್ತು ಕೈಗಾರಿಕೆಗಳಿಗೆ ನಾಲ್ಕು ಹೆಕ್ಟೇರ್ ವರೆಗೆ ಕೃಷಿ ಭೂಮಿ ಖರೀದಿಗೆ ಮಿತಿ, ಜಿಲ್ಲಾಧಿಕಾರಿಗಳಿಗೆ ಭೂಮಿ ಖರೀದಿಸುವ ಅಧಿಕಾರ, ಕೃಷಿ ಭೂಮಿ ಯನ್ನು ಅನುಮತಿ ಇಲ್ಲದೆ ಅಥವಾ ಪರಿವರ್ತನೆ ಮಾಡದೆ ಕೃಷಿಯೇತರ ಉದ್ದೇಶಕ್ಕೆ ಬಳಸಿದರೆ ₹ 1 ಲಕ್ಷ ದಂಡ, ನವೀಕರಿಸಬಹುದಾದ ಇಂಧನ ಉತ್ಪಾದನೆಗಾಗಿ ಕೃಷಿ ಭೂಮಿಯ ಸ್ವಯಂ ಚಾಲಿತ ಪರಿವರ್ತನೆ ಪ್ರಮಾಣಪತ್ರ ನೀಡಲು ಕೂಡಾ ಕರ್ನಾಟಕ ಭೂ ಸುಧಾರಣೆ, ಇತರೆ ಕಾನೂನು ಮಸೂದೆ ಅವಕಾಶ ನೀಡಿದೆ.
- ಇತರ ಮಸೂದೆಗಳು: ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ, ಕೂಡಲ ಸಂಗಮ ಅಭಿವೃದ್ಧಿ ಮಂಡಳಿ, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ, ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ, ಬನವಾಸಿ ಅಭಿವೃದ್ಧಿ ಪ್ರಾಧಿಕಾರಗಳಿಗೆ ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿ ಆಯ್ಕೆ ಮಾಡಿದ ಯಾರಾದರು ಸಚಿವರು ಪದನಿಮಿತ್ತ ಅಧ್ಯಕ್ಷರಾಗಿ ಮಾಡಲು ಅವಕಾಶ ಕಲ್ಪಿಸುವ ತಿದ್ದುಪಡಿ ಮಸೂದೆಗಳಿಗೂ ರಾಜ್ಯಪಾಲರು ಅಂಕಿತ ಹಾಕಿದ್ದಾರೆ.
- ಲಿಫ್ಟ್, ಎಸ್ಕಲೇಟರ್ ಅಥವಾ ಪ್ಯಾಸೆಂಜರ್ ಕನ್ವೇಯರ್‌ಗಳನ್ನು ಭಾರತೀಯ ಗುಣಮಟ್ಟ ಬ್ಯೂರೊ ಪದ್ಧತಿ ಗಳ ಅಸ್ತಿತ್ವದಲ್ಲಿರುವ ಸಂಬಂಧಪಟ್ಟ ಸಂಹಿತೆ ಮತ್ತು ಕೇಂದ್ರ ವಿದ್ಯುಚ್ಛಕ್ತಿ ಪ್ರಾಧಿಕಾರ (ಸುರಕ್ಷತೆ ಮತ್ತು ವಿದ್ಯುತ್ ಸರಬರಾಜಿಗೆ ಸಂಬಂಧಿಸಿದ ಕ್ರಮಗಳು) ವಿನಿಮಯಗಳ ಅನ್ವಯ ಸ್ಥಾಪಿಸಲು ನಿರ್ದೇಶಿಸುವ ಉದ್ದೇಶದ 'ಕರ್ನಾಟಕ ಲಿಫ್ಟ್‌ಗಳ, ಎಸ್ಕಲೇಟರ್‌ಗಳ ಮತ್ತು ಪ್ಯಾಸೆಂಜರ್ ಕನ್ವೇಯರ್‌ಗಳ (ತಿದ್ದುಪಡಿ) ಮಸೂದೆ, ಪ್ರವಾಸೋದ್ಯಮ ಉತ್ತೇಜನಕ್ಕೆ ಜಿಲ್ಲಾ ಮಟ್ಟದ ಮೇಲುಸ್ತುವಾರಿ ಸಮಿತಿ ರಚಿಸಲು ಅವಕಾಶ ಕಲ್ಪಿಸಲು ರೂಪಿಸಿದ 'ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ,ನಿಯಂತ್ರಣ) (ತಿದ್ದುಪಡಿ) ಮಸೂದೆ, ಎಸ್ಮಾ ವಿಧಿಸುವ ಅವಕಾಶ ವನ್ನು ಮುಂದಿನ 20 ವರ್ಷಗಳ ಅವಧಿ ವಿಸ್ತರಿಸಲು ಅವಕಾಶ ನೀಡುವ 'ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ಮಸೂದೆ, ರಾಜ್ಯದ ಬಹುಮಹಡಿ ಕಟ್ಟಡಗಳಿಗೆ ಶೇ 1ರಷ್ಟು ಅಗ್ನಿ ಸೆಸ್ ವಿಧಿಸಲು ಅವಕಾಶ ಮಾಡಿಕೊಡುವ 'ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ಮಸೂದೆ'ಗೂ ಅಂಕಿತ ಹಾಕಿದ್ದಾರೆ.

Dr. Rajkumar IAS/KAS Academy

# ಮನೆ–ಮನೆಯ ಕಥೆ



## ಪೋಷಕರ ಪಾಲನೆ ಭತ್ಯೆ ಹೆಚ್ಚಳಕ್ಕೆ ಶಿಫಾರಸು

ಪೋಷಕರು ಮತ್ತು ಹಿರಿಯ ನಾಗರಿಕರ ಜೀವನ ನಿರ್ವಹಣೆಗೆ ಸಂಬಂಧಿಸಿದಂತೆ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. 'ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ ಅನುಸಾರ ತಿಂಗಳ ಪಾಲನಾ ಭತ್ಯೆಯ ಮೊತ್ತ ₹10 ಸಾವಿರಕ್ಕೆ ಮೀರಬಾರದು ಎಂಬ ಕಲಂ 9ರ ಮಿತಿಯನ್ನು ತೆಗೆದು ಹಾಕಲು ಇದು ಸಕಾಲ' ಎಂದು ತೀರ್ಪು ಪ್ರಕಟಿಸಿದೆ. ದೇಶದ 25 ಹೈಕೋರ್ಟ್‌ಗಳು ಈವರೆವಿಗೂ ಉಲ್ಲೇಖಿಸದ ಕಾನೂನು ಮಾರ್ಪಾಡುಗಳ ಅಗತ್ಯವನ್ನು ಕರ್ನಾಟಕದ ಹೈಕೋರ್ಟ್ ಪ್ರತಿಪಾದಿಸಿದೆ. ಈ ಮೂಲಕ ಜೀವನದ ಮುಸ್ಸಂಜೆಯಲ್ಲಿರುವವರಿಗೆ ಆಸರೆಯಾಗುವಂಥ ನಿಯಮ ಬದಲಾವಣೆಯ ಭರವಸೆ ಮೂಡಿಸಿದೆ

• ಬಿ.ಎಸ್.ಷಣ್ಮುಖಪ್ಪ

ಕರ್ನಾಟಕದ ಹೈಕೋರ್ಟ್, ಹಿರಿಯ ನಾಗರಿಕರಿಗೆ ಸಂತಸ ತರುವಂತಹ ಉಲ್ಲೇಖವೊಂದನ್ನು ಮಾಡಿದೆ. ಹಿರಿಯರು ಅಥವಾ ಪೋಷಕರಿಗೆ ನೀಡಲಾಗುವ ಮಾಸಿಕ ಭತ್ಯೆಗೆ ಸಂಬಂಧಿಸಿದ ಪ್ರಕರಣವೊಂದನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠವು, 'ಈಗಿರುವ ₹10 ಸಾವಿರದ ಮಿತಿಯನ್ನು ಯಥೋಚಿತವಾಗಿ ಆಯಾ ಪ್ರಕರಣಗಳಿಗೆ ಅನುಗುಣವಾಗಿ ವಾಸ್ತವಾಂಶಗಳ ಆಧಾರದಡಿ ಏರಿಕೆ ಮಾಡಲು 2007ರ ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಹಾಗೂ ಕಲ್ಯಾಣ ಕಾಯ್ದೆಗೆ ಅಗತ್ಯ ಬದಲಾವಣೆ ತರಬೇಕು' ಎಂದು ಕೇಂದ್ರ ಸರ್ಕಾರಕ್ಕೆ ಜಬರ್‌ದಸ್ತ್ ಶಿಫಾರಸು ಮಾಡಿದೆ.

'ಹಿರಿಯರ ಅಗತ್ಯಗಳು 2007ರಲ್ಲಿ ಇದ್ದಂತೆಯೇ ಇಲ್ಲ. 18 ವರ್ಷಗಳ ಅಂತರದ ಆಧುನಿಕ ಜೀವನದಲ್ಲಿ ಇಂದು ಜೀವನವೆಚ್ಚ ಅಪಾರ ಏರಿಕೆ ಕಂಡಿದೆ. 2007ರಲ್ಲಿ ₹10 ಸಾವಿರ ಸಾಕಾಗುತ್ತಿದ್ದರೂ ಇಂದಿನ ದಿನಗಳಲ್ಲಿ ಅದು ವೈದ್ಯಕೀಯ ವೆಚ್ಚಕ್ಕೂ ಸಾಲದಾಗಿದೆ' ಎಂಬ ಕಳಕಳಿಯ ಮೂಲಕ ಸರ್ಕಾರದ ಗಮನ ಸೆಳೆದಿದೆ.

'ಹಣಕಾಸು ಸಚಿವಾಲಯವು ಕಾಲಕಾಲಕ್ಕೆ ಸಿಐಐ (Cost Inflation Index–ಹಣದುಬ್ಬರದಿಂದಾಗಿ ಹೆಚ್ಚಳವಾದ ವೆಚ್ಚದ ಸೂಚ್ಯಂಕ) ಪ್ರಕಟಿಸಿರುವುದನ್ನು ನೋಡಿದಾಗ, 2007-08ರಲ್ಲಿ ಸೂಚ್ಯಂಕ 129 ಆಗಿದ್ದರೆ, ಇಂದಿಗೆ ಅದು 363 ಇದೆ. ಅಂದರೆ, 2007ರಲ್ಲಿ ₹100ಗೆ ದೊರಕುತ್ತಿದ್ದ ವಸ್ತು, 2025ರಲ್ಲಿ ₹1 ಸಾವಿರಕ್ಕೆ ಏರಿಕೆಯಾಗಿದೆ. ಆಹಾರ, ವಾಸ ಸ್ಥಳ, ಔಷಧಿ ಬೆಲೆಗಳು ಗಗನಕ್ಕೇರಿವೆ. ಆದರೆ, ಪೋಷಕರ ಪಾಲನೆಯ ಭತ್ಯೆಯ ಮಿತಿ ₹10 ಸಾವಿರದಲ್ಲೇ ಅಚಲವಾಗಿ ನಿಂತಿದೆ. ಇಷ್ಟು ಕಡಿಮೆ ಭತ್ಯೆಯು ಈ ಕಾಯ್ದೆಯ ಉದ್ದೇಶಗಳನ್ನು ಸಾಧಿಸಬಲ್ಲದೇ' ಎಂದು ಪ್ರಶ್ನಿಸಿರುವ ನ್ಯಾಯಪೀಠ, 'ಕಲಂ 9ರ ವ್ಯಾಪ್ತಿಯಲ್ಲಿ ಒಬ್ಬ ಹಿರಿಯ ವ್ಯಕ್ತಿ ಗೌರವಯುತ ಜೀವನ ನಡೆಸಲು, ವೈದ್ಯಕೀಯ ನೆರವು ಪಡೆಯಲು ₹10 ಸಾವಿರ ಭತ್ಯೆಯಿಂದ ಮಾತ್ರ ಸಾಧ್ಯವೇ ಎಂಬ ಪ್ರಶ್ನೆಯನ್ನು ಕಡೆಗಣಿಸಿದ್ದೇ ಆದರೆ ಹಿರಿಯರ ಜೀವನವನ್ನು 'ಪ್ರಾಣಿಗಳ ಅಸ್ತಿತ್ವ'ಕ್ಕೆ ಇಳಿಸಿದಂತಾಗುತ್ತದೆ' ಎಂದು ಎಚ್ಚರಿಸಿದೆ.

### ಕೇಂದ್ರ ಸರ್ಕಾರಕ್ಕೆ ಶಿಫಾರಸು

ಕೇಂದ್ರ ಸರ್ಕಾರವು ಕಲಂ 9ರ ಮಿತಿಯನ್ನು ಮರು ಪರಿಶೀಲಿಸಬೇಕು. ಜೀವನ ವೆಚ್ಚದ ಸೂಚ್ಯಂಕಕ್ಕೆ ಅನುಗುಣವಾಗಿ ಗಣನೀಯವಾಗಿ ಏರಿಸಲು ಮಾಸಿಕ ಪಾಲನೆಯ ಭತ್ಯೆಯ ಮಿತಿಗೆ ಅಗತ್ಯ ತಿದ್ದುಪಡಿ ತರಬೇಕು. ಆಗ ಮಾತ್ರ ಈ ಕಾಯ್ದೆ ಹಿರಿಯರ ಪಾಲಿಗೆ ಗೌರವಯುತ ಭರವಸೆಯಾಗಿ ಉಳಿಯುತ್ತದೆ. ದೇಶದ ಆಸ್ತಿಯನ್ನು ಅಳೆಯುವುದು, ಅಲ್ಲಿನ ಭೌತಿಕ ವಸ್ತುಗಳ ಪ್ರಗತಿಯಿಂದ ಮಾತ್ರವಲ್ಲ. ಬದಲಿಗೆ ಅಲ್ಲಿನ ಹಿರಿಯರ, ಮಕ್ಕಳ ಪೋಷಣೆ ಹಾಗೂ ಕಲ್ಯಾಣ ಎಷ್ಟರ ಮಟ್ಟಿಗಿದೆ ಎಂಬುದೂ ಅಷ್ಟೇ ಪ್ರಧಾನವಾದುದು.


ನ್ಯಾಯಾಲಯವು ತಾನೇ ಕಾನೂನು ಬರೆಯಲು ಸಾಧ್ಯವಿಲ್ಲ. ಆದರೆ, ಸರ್ಕಾರಕ್ಕೆ ಅರಿವು ಮೂಡಿಸುವ ಗುರುತರ ಜವಾಬ್ದಾರಿಯನ್ನಂತೂ ಹೊಂದಿದೆ. ಹೀಗಾಗಿ, 2007ರಲ್ಲಿ ಅರ್ಥಪೂರ್ಣವೆಂದು ಭಾವಿಸಲಾದ ಮಸೂದೆಯ ನಿಬಂಧನೆಗಳು 2025ರಲ್ಲಿ ಬದಲಾಗಬೇಕಾದ ಅನಿವಾರ್ಯ ಇದೆ ಎಂಬುದನ್ನು ನಾವು ಈ ಹಂತದಲ್ಲಿ ಎದೆಗೊತ್ತಿ ಕೊಳ್ಳಬೇಕು. ಪೋಷಕರ ಪಾಲನೆಯ ಭತ್ಯೆ ಕೇವಲ ಭ್ರಮೆ ಎನಿಸಬಾರದು. ವಾಸ್ತವದಲ್ಲಿ ಅದು ಅವರ ನೆರವಿಗೆ ಬರಬೇಕು. ಇಲ್ಲದಿದ್ದರೆ 'ಮರಳಿನ ಕಂಬ'ದಂತೆಯೇ ಕುಸಿದು ಬಿಡುತ್ತದೆ.



**ಎಂ.ನಾಗಪ್ರಸನ್ನ**, ನ್ಯಾಯಮೂರ್ತಿ

'ವೃದ್ಧಾಪ್ಯದ ಮುಸ್ಸಂಜೆಯ ಬಾಳ್ವೆ ಇಂದು ದೇಶದ ಸಾಮಾಜಿಕ ಸವಾಲಾಗಿ ಪರಿಣಮಿಸಿದೆ. ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ–1860ರ (ಐಪಿಸಿ) ಅಡಿಯಲ್ಲಿ ವೃದ್ಧರು ತಮ್ಮ ಪೋಷಣೆ ಹಾಗೂ ನಿರ್ವಹಣೆಗಾಗಿ ಮಾಹೆಯಾನ ಭತ್ಯೆಗೆ ಹಣದ ಬೇಡಿಕೆ ಇಡಬಹುದಾಗಿದ್ದರೂ ಈ ನ್ಯಾಯಿಕ ಪ್ರಕ್ರಿಯೆ ದುಬಾರಿ ಹಾಗೂ ಹೆಚ್ಚಿನ ಸಮಯ ತೆಗೆದುಕೊಳ್ಳುತ್ತದೆ' ಎಂದು ನ್ಯಾಯಪೀಠ ಕಳವಳ ವ್ಯಕ್ತಪಡಿಸಿದೆ.

'ಇಂದಿನ ಉಗ್ರರೂಪದ ದರ ಏರಿಕೆ ಹಾಗೂ ಜೀವನ ವೆಚ್ಚದ ಸೂಚ್ಯಂಕವನ್ನು ದಿಟ್ಟಿಸಿದರೆ ಪ್ರತಿಯೊಬ್ಬ ಹಿರಿಯರಿಗೆ, ಪೋಷಕರಿಗೆ ತಿಂಗಳ ₹10 ಸಾವಿರ ಪಾಲನೆ ಭತ್ಯೆಯನ್ನೂ ಗಮನಾರ್ಹವಾಗಿ ಏರಿಕೆ ಮಾಡುವುದು ಅತ್ಯಂತ ಸಮಂಜಸ. ಈ ತೀರ್ಪನ್ನು ಕೇವಲ ಈ ಪ್ರಕರಣವನ್ನು ಇತ್ಯರ್ಥ ಮಾಡಲು ನೀಡಿಲ್ಲ. ನಿರ್ಲಕ್ಷ್ಯಕ್ಕೊಳಗಾದ ಹಿರಿಯರ ಕುರಿತಾದ ವ್ಯಾಜ್ಯಗಳು ಕೋರ್ಟ್ ಮೆಟ್ಟಿಲು ತುಳಿದು ಬಂದಾಗ ನಮ್ಮ ಅಂತಃಕರಣ ಕಲಕುತ್ತದೆ. ಅದಕ್ಕೆಂದೇ ಅತೀವವಾಗಿ ಕಾಡುವ ವಿಷಾದದಲ್ಲಿ ಈ ತೀರ್ಪು ನೀಡಲಾಗಿದೆ. ನಮ್ಮ ಪೋಷಕರನ್ನು, ವೃದ್ಧರನ್ನು ನಾವು ಅಪಮಾನಗಳಿಗೆ ಈಡು ಮಾಡಬಾರದು. ಯಾವೊಬ್ಬ ಹಿರಿಯರ ಇಳಿಬಾಳು ಬಯಕೆಗಳ ಬುಟ್ಟಿಯಲ್ಲಿ ಬಾಡಬಾರದು. ನಮ್ಮ ಕಾಳಜಿಯ ಕಾವಿನಲ್ಲಿ ಅವರ ಜೀವಗಳು ಹೊಳೆಯಬೇಕು. ಈ ಮಾತುಗಳನ್ನು ಶಾಸಕಾಂಗ ಸಂವೇದನಾಶೀಲತೆಯಿಂದ ಸ್ವೀಕರಿಸಬೇಕು' ಎಂದು ಸೂಚಿಸಿದೆ.



### ಯಾವುದೀ ಪ್ರಕರಣ?

ಬೆಂಗಳೂರಿನ ಜಯನಗರದ ವೃದ್ಧ ದಂಪತಿ ಮತ್ತು ಅವರ ಮಕ್ಕಳಿಗೆ ಸಂಬಂಧಿಸಿದ ಈ ಪ್ರಕರಣವನ್ನು ಮೊದಲಿಗೆ ಸಕ್ಷಮ ಪ್ರಾಧಿಕಾರವಾದ ಬೆಂಗಳೂರು ಉತ್ತರ ಉಪ ವಿಭಾಗಾಧಿಕಾರಿ ವಿಚಾರಣೆ ನಡೆಸಿದ್ದರು. ಪತಿ–ಪತ್ನಿಯ ಅಹವಾಲಿಗೆ ಕಿವಿಯಾಗಿದ್ದ ಪ್ರಾಧಿಕಾರ, '₹5 ಲಕ್ಷ ಮೊತ್ತವನ್ನು ಈ ಆದೇಶ ತಲುಪಿದ 15 ದಿನಗಳ ಒಳಗಾಗಿ ಅರ್ಜಿದಾರರಾಗಿರುವ 66 ವರ್ಷದ ಪತಿ ಮತ್ತು ಅವರ 60 ವರ್ಷದ ಪತ್ನಿಗೆ ನೀಡಬೇಕು ಮತ್ತು ಅವರ ವಾಸಸ್ಥಳಕ್ಕೆ ಸಂಬಂಧಿಸಿದಂತೆ ಅವರು ಕೇಳುತ್ತಿರುವ ಸ್ಥಿರಾಸ್ತಿಯನ್ನು ಅವರ ಅನುಭೋಗಕ್ಕೆ ಬಿಟ್ಟುಕೊಡಬೇಕು' ಎಂದು ಅವರ ಮಕ್ಕಳಿಗೆ ಆದೇಶಿಸಿತ್ತು.

ನಾಲ್ವರು ಗಂಡು ಮಕ್ಕಳು ಹಾಗೂ ಒಬ್ಬ ಸೊಸೆ ಈ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಕುರಿತಾದ ರಿಟ್ ಅರ್ಜಿಯನ್ನು (ಡಬ್ಲ್ಯು.ಪಿ ಸಂಖ್ಯೆ: 13448/2025–ಜಿಎಂ–ಆರ್‌ಇಎಸ್) ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ನ್ಯಾಯಪೀಠ ಈಗ ವಿಲೇವಾರಿ ಮಾಡಿದೆ. ವೃದ್ಧ ದಂಪತಿ ಪರವಾಗಿ ಹೈಕೋರ್ಟ್ ವಕೀಲ ಎಂ.ವಿನೋದ್ ಕುಮಾರ್ ವಾದ ಮಂಡಿಸಿದ್ದರು.

**ಆದೇಶ:** ಉಪ ವಿಭಾಗಾಧಿಕಾರಿ ಆದೇಶವನ್ನು ರದ್ದುಗೊಳಿಸಿರುವ ನ್ಯಾಯಪೀಠ, ಪೋಷಕರ ಮನವಿಯನ್ನು ಮರುಪರಿಶೀಲನೆ ಮಾಡಬೇಕು. ವಿಚಾರಣೆ ಸಮಯದಲ್ಲಿ ಉಪ ವಿಭಾಗಾಧಿಕಾರಿಯು ಕೋರ್ಟ್ ಈ ತೀರ್ಪಿನಲ್ಲಿ ಅವಲೋಕಿಸಿರುವ ಅಂಶಗಳನ್ನು ಗಮನದಲ್ಲಿ ಇರಿಸಿಕೊಂಡು ನ್ಯಾಯಿಕ ಪ್ರಕ್ರಿಯೆ ಮುಂದುವರಿಸಿ ಸೂಕ್ತ ಆದೇಶ ಹೊರಡಿಸಬೇಕು. ಉಪವಿಭಾಗಾಧಿಕಾರಿ ಆದೇಶ ಹೊರಡಿಸುವ ತನಕ ಪ್ರತಿವಾದಿ (ಪತಿ–ಪತ್ನಿ) ಪೋಷಕರಿಗೆ ಪ್ರತಿ ತಿಂಗಳೂ ₹10 ಸಾವಿರ ನಿರ್ವಹಣಾ ವೆಚ್ಚವನ್ನು 2021ರ ಏಪ್ರಿಲ್ 16ರಿಂದಲೇ ನೀಡಬೇಕು. ಈ ತೀರ್ಪು ಪ್ರಕಟವಾದ ದಿನದಿಂದ ₹10 ಸಾವಿರ ನಿರ್ವಹಣಾ ವೆಚ್ಚವನ್ನು ₹30 ಸಾವಿರಕ್ಕೆ ಏರಿಕೆ ಮಾಡಿ ಐವರೂ ಅರ್ಜಿದಾರರು ನೀಡಬೇಕು. ಈ ತೀರ್ಪಿನ ಪ್ರತಿಯನ್ನು ರಿಜಿಸ್ಟ್ರಾರ್ ಜನರಲ್ ಅವರು ಭಾರತದ ಹೆಚ್ಚುವರಿ ಸಾಲಿಸಿಟರ್ ಜನರಲ್ ಅವರಿಗೆ ಮತ್ತು ಕೇಂದ್ರ ಹಣಕಾಸು ಸಚಿವಾಲಯಕ್ಕೆ ರವಾನಿಸಬೇಕು ಎಂದು ನ್ಯಾಯಪೀಠ ಆದೇಶಿಸಿದೆ.

### ಕಾಯ್ದೆ ಅನುಷ್ಠಾನ

'ಭಾರತೀಯ ಸಮಾಜದ ಪಾರಂಪರಿಕ ಮೌಲ್ಯಗಳಲ್ಲಿ ಹಿರಿಯರ ಆರೈಕೆಗೆ ಹೆಚ್ಚು ಒತ್ತು ಕೊಡಬೇಕು. ಆದರೆ, ಭರದಿಂದ ಚಲಿಸುತ್ತಿರುವ ಸಮಾಜದಲ್ಲಿ ಅವಿಭಜಿತ ಕುಟುಂಬದ ವ್ಯವಸ್ಥೆ ಕುಸಿಯುತ್ತಿದೆ. ಇಂತಹ ಕುಟುಂಬಗಳಲ್ಲಿನ ಹಿರಿಯರನ್ನು ಅದರಲ್ಲೂ ವಿಧವೆಯರು, ವೃದ್ಧರು ತಮ್ಮ ವೃದ್ಧಾಪ್ಯವನ್ನು ಭಾವನಾತ್ಮಕ ನಿರ್ಲಕ್ಷ್ಯ, ದೈಹಿಕ ಮತ್ತು ಆರ್ಥಿಕ ನೆರವಿನ ಕೊರತೆಗಳಲ್ಲಿ ಸಿಲುಕಿ ಒಂಟಿಯಾಗಿ ಬದುಕುವಂತಾಗಿದೆ' ಎಂಬ ಕಾರಣಗಳಿಗಾಗಿ 'ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ'ಯನ್ನು 2007ರಲ್ಲಿ ಜಾರಿಗೆ ತರಲಾಯಿತು.



ಈ ಕಾಯ್ದೆಯು ಮಕ್ಕಳಿಂದ ಅಥವಾ ಹಿರಿಯ ಸಂಬಂಧಿಕರ ಆಸ್ತಿಯನ್ನು ಸ್ವೀಕರಿಸಿದವರ ಮೇಲೆ ಆ ಹಿರಿಯರನ್ನು ಪಾಲಿಸುವ ಜವಾಬ್ದಾರಿ ವಿಧಿಸುವ ಉದ್ದೇಶ ಹೊಂದಿದೆ. ಹಾಗೆಯೇ ಬಡತನದಲ್ಲಿರುವ ಹಿರಿಯರ ನೆರವಿಗಾಗಿ ವೃದ್ಧಾಶ್ರಮಗಳನ್ನು ಸ್ಥಾಪಿಸುವುದಕ್ಕೂ ಅವಕಾಶ ನೀಡುತ್ತದೆ. ಅವರಿಗೆ ಉತ್ತಮ ವೈದ್ಯಕೀಯ ಸೌಲಭ್ಯ ಒದಗಿಸಲು ಹಾಗೂ ಅವರ ಜೀವ–ಆಸ್ತಿಗೆ ರಕ್ಷಣೆಯನ್ನು ಒದಗಿಸುವ ಕ್ರಮಗಳ ಬಗ್ಗೆಯೂ ಪ್ರಸ್ತಾಪಿಸುತ್ತದೆ.

ಪೋಷಕರು–ಹಿರಿಯರಿಗೆ ಅವರ ಅವಶ್ಯಕತೆಯ ಆಧಾರದಡಿ ಅವರ ಪಾಲನೆಗಾಗಿ ಸೂಕ್ತ ವ್ಯವಸ್ಥೆಯ ಸ್ಥಾಪನೆ, ಉತ್ತಮ ವೈದ್ಯಕೀಯ ಸೌಲಭ್ಯ ನೀಡುವುದು, ಹಿರಿಯರ ಜೀವ ಮತ್ತು ಆಸ್ತಿ ರಕ್ಷಣೆಗೆ ಸೂಕ್ತ ವ್ಯವಸ್ಥೆ ಸ್ಥಾಪಿಸುವುದು, ಪ್ರತೀ ಜಿಲ್ಲೆಯಲ್ಲಿ ವೃದ್ಧಾಶ್ರಮ ಸ್ಥಾಪಿಸುವುದು ಮುಂತಾದ ಪ್ರಮುಖ ಅಂಶಗಳು ಇದರಲ್ಲಿ ಅಡಕವಾಗಿವೆ. ಮೂಲ ಕಾಯ್ದೆಯು ಹಠಾತ್ ರೂಪುಗೊಂಡದ್ದಲ್ಲ. ಇದು ಭಾರತದ ಸಂವಿಧಾನದ 41ನೇ ವಿಧಿಯನ್ನು ಅನುಸರಿಸಿ ರೂಪುಗೊಂಡಿರುವ ನಮ್ಮ ರಾಜ್ಯದ ಆರ್ಥಿಕ ಬಲದ ದಿಕ್ಸೂಚಿಯೊಂದಿಗೆ ನಿರುದ್ಯೋಗ, ಅನಾರೋಗ್ಯ, ಅಂಗವೈಕಲ್ಯ, ವೃದ್ಧಾಪ್ಯ ಮುಂತಾದ ದುರ್ಬಲ ಸ್ಥಿತಿಗಳ ಸಂದರ್ಭಗಳಲ್ಲಿ ನೀಡಲಾಗುವ ನೆರವಿನ ಶಾಸಕಾಂಗದ ಒಳದನಿ. ಈ ಕಾಯ್ದೆ 2007ರ ಡಿಸೆಂಬರ್ 29ರಂದು ಜಾರಿಗೆ ಬಂದ ನಂತರ ಅನೇಕ ಬಾರಿ ತಿದ್ದುಪಡಿಗೆ ಒಳಗಾಗಿದೆ.

2019ರಲ್ಲಿ ತರಲಾದ ತಿದ್ದುಪಡಿ ಮಸೂದೆಯ ಅನುಸಾರ ಹಿರಿಯರು ಅಥವಾ ಪೋಷಕರಿಗೆ ನೀಡಲಾಗುವ ಮಾಸಿಕ ಭತ್ಯೆಯ ಬಗ್ಗೆ ಕಲಂ 9ರ ಅಡಿಯಲ್ಲಿ ವಿಶೇಷವಾಗಿ ವಿವರಿಸಿ ಅದರ ಬದಲಾವಣೆಯನ್ನು ನಿರ್ದಿಷ್ಟಪಡಿಸಲಾಯಿತು.

**ಆ ಬದಲಾವಣೆಯ ರೂಪ ಹೀಗಿತ್ತು**

- ಪೋಷಕರು ಅಥವಾ ಹಿರಿಯರನ್ನು ನಿರ್ಲಕ್ಷಿಸುವ ಅಥವಾ ಪಾಲನೆ ಮಾಡಲು ನಿರಾಕರಿಸುವ ಮಕ್ಕಳ ವಿರುದ್ಧ ಅಥವಾ ಸಂಬಂಧಿಕರ ವಿರುದ್ಧ, ಹಿರಿಯರು ತಮ್ಮ ನಿರ್ವಹಣೆಯನ್ನು ಮಾಡಲಾಗದೆ, ಗೌರವಯುತವಾಗಿ ಜೀವನ ನಡೆಸಲು ಸಾಧ್ಯವಾಗದ ಪರಿಸ್ಥಿತಿಯಲ್ಲಿ ಇದ್ದಾರೆ ಎಂಬುದನ್ನು ನ್ಯಾಯಮಂಡಳಿ ಮನವರಿಕೆ ಮಾಡಿಕೊಳ್ಳಬೇಕು. ಇಂತಹ ಸಂದರ್ಭದಲ್ಲಿ ನ್ಯಾಯಮಂಡಳಿಯು, ಆ ಮಕ್ಕಳು ಅಥವಾ ಸಂಬಂಧಿಕರು ಅಂತಹ ಪೋಷಕರು/ಹಿರಿಯರಿಗೆ ಪ್ರತಿ ತಿಂಗಳ ಪಾಲನೆ ಭತ್ಯೆ ಅಥವಾ ಬೇರೆ ಅಗತ್ಯ ನೆರವುಗಳನ್ನು ನೀಡುವಂತೆ ಆದೇಶಿಸಬಹುದು.
- ಪಾಲನೆಗೆ ನೀಡುವ ಮೊತ್ತದ ಬಗ್ಗೆ ನಿರ್ಧರಿಸುವಾಗ, ನ್ಯಾಯಮಂಡಳಿಯು ಆ ಹಿರಿಯರ ಜೀವನದ ಮಟ್ಟ, ಶೈಲಿ ಮತ್ತು ಅವರ ಹಾಗೂ ಮಕ್ಕಳ ಇಲ್ಲವೇ ಸಂಬಂಧಿಕರ ಆದಾಯಗಳನ್ನು ಪರಿಗಣಿಸಬಹುದು.
- ಪಾಲನೆ ಆದೇಶವು, ಆದೇಶದ ದಿನಾಂಕದಿಂದಲೇ ಜಾರಿಗೆ ಬರಬಹುದು ಅಥವಾ ಅರ್ಜಿಯ ದಿನಾಂಕದಿಂದಲೂ ಅನ್ವಯಿಸಬಹುದು.
- ಪಾಲನೆಯ ಆದೇಶದ ಪ್ರತಿಯನ್ನು
(i) ಉಚಿತವಾಗಿ ಪೋಷಕರಿಗೆ ಅಥವಾ ಹಿರಿಯರಿಗೆ ನೀಡಬೇಕು
(ii) ನ್ಯಾಯಮಂಡಳಿಯ ನೋಟಿಸ್ ಬೋರ್ಡ್ ಮೇಲೆ ಪ್ರದರ್ಶಿಸಬೇಕು
(iii) ಸಂಬಂಧಿಸಿದ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕು
(iv) ಪಾಲನೆ ಅಧಿಕಾರಿಗೆ ನೀಡಬೇಕು.
- ಒಂದು ವೇಳೆ ಒಬ್ಬರಿಗಿಂತ ಹೆಚ್ಚಿನವರ ವಿರುದ್ಧ ಹಿರಿಯರ ಪಾಲನೆಯ ಆದೇಶವಾಗಿದ್ದಲ್ಲಿ, ಅವರಲ್ಲಿ ಒಬ್ಬರು ಮೃತಪಟ್ಟರೂ ಉಳಿದವರು ಹಿರಿಯರ ಪೋಷಣೆಯ ಜವಾಬ್ದಾರಿಯನ್ನು ಮುಂದುವರಿಸಬೇಕಾಗಿರುತ್ತದೆ.

### ಕಲಂ 9ರ ಪಾಲನೆಯ ಆದೇಶ

(1) ಪೋಷಕರು ಅಥವಾ ಹಿರಿಯರನ್ನು ಪಾಲನೆ ಮಾಡಲು ಮಕ್ಕಳು ಅಥವಾ ಸಂಬಂಧಿಕರು ನಿರಾಕರಿಸಿದಲ್ಲಿ, ನ್ಯಾಯಮಂಡಳಿ ಅವರಿಗೆ ಪ್ರತಿ ತಿಂಗಳ ಪಾಲನೆಗೆ ಭತ್ಯೆಯನ್ನು ನೀಡಲು ಆದೇಶಿಸಬಹುದು.
(2) ರಾಜ್ಯ ಸರ್ಕಾರ ನಿಗದಿಪಡಿಸಿದ ಗರಿಷ್ಠ ಪಾಲನೆಯ ಭತ್ಯೆ ₹10 ಸಾವಿರ ಮೀರಬಾರದು.

**ಈ ಕಾಯ್ದೆಯ ಮೂಲ ಉದ್ದೇಶಗಳು**

(i) ಅಗತ್ಯ ಆಧಾರಿತ ಪಾಲನೆ
(ii) ಉತ್ತಮ ವೈದ್ಯಕೀಯ ಸೌಲಭ್ಯ
(iii) ರಕ್ಷಣೆಗೆ ಸೂಕ್ತ ವ್ಯವಸ್ಥೆ.



## ❖ ‘ರಾಜ್ಯ ಸ್ಥಾನಮಾನಕ್ಕಾಗಿ ಸತ್ಯಾಗ್ರಹ’

**ಸಂದರ್ಭ:** **ಲಡಾಖ್‌ಗೆ ರಾಜ್ಯ ಸ್ಥಾನಮಾನ ನೀಡುವುದರ ಜೊತೆಗೆ ಅದನ್ನು ಸಂವಿಧಾನದ 6ನೇ ಪರಿಚ್ಛೇದಕ್ಕೆ ಸೇರಿಸುವಂತೆ** ಒತ್ತಾಯಿಸಿ ಲೇಹ್‌ನಲ್ಲಿ 35 ದಿನಗಳ ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಪರಿಸರ ಹೋರಾಟಗಾರ ಸೋನಮ್ ವಾಂಗ್ಚುಕ್ ತಿಳಿಸಿದ್ದಾರೆ. ಲೇಹ್ ಅಪೆಕ್ಸ್ ನಿಯೋಗ (ಎಲ್‌ಎಬಿ) ಕೂಡ ಇದನ್ನು ಸ್ಪಷ್ಟಪಡಿಸಿದೆ.

- ‘ಕಳೆದ ಎರಡು ತಿಂಗಳಿಂದ ನಮ್ಮ ಬೇಡಿಕೆಗಳ ಕುರಿತು ಕೇಂದ್ರ ಗೃಹ ಸಚಿವಾಲಯವು ಯಾವುದೇ ಪ್ರತಿಕ್ರಿಯೆ ನೀಡದ ಕಾರಣ ಉಪವಾಸ ಸತ್ಯಾಗ್ರಹ ಕೈಗೊಳ್ಳಲು ನಿರ್ಧರಿಸಿದ್ದೇವೆ’ ಎಂದು ಪತ್ರಿಕಾಗೋಷ್ಠಿಯಲ್ಲಿ ವಾಂಗ್ಚುಕ್ ತಿಳಿಸಿದರು.
- ಲೇಹ್‌ನ ಹಿಲ್ ಕೌನ್ಸಿಲ್ ಚುನಾವಣೆ ಶೀಘ್ರವೇ ನಡೆಯಲಿದ್ದು, ಕೇಂದ್ರ ಸರ್ಕಾರವು ಕಳೆದ ಬಾರಿಯ ಚುನಾವಣೆಯಲ್ಲೇ ಲಡಾಖ್ ಅನ್ನು ಸಂವಿಧಾನದ 6ನೇ ಪರಿಚ್ಛೇದಕ್ಕೆ ಸೇರಿಸುವುದಾಗಿ ಭರವಸೆ ನೀಡಿತ್ತು. ಇದನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು. ಗಾಂಧಿ ಜಯಂತಿಯು ಸತ್ಯಾಗ್ರಹದ ಪ್ರಮುಖ ದಿನವಾಗಲಿದೆ ಎಂದೂ ಅವರು ಹೇಳಿದ್ದಾರೆ.

## ❖ ಕೊಪ್ಪಳದಲ್ಲಿ ಉಕ್ಕು ಘಟಕ ಸ್ಥಾಪನೆಗೆ ₹2,345 ಕೋಟಿ

**ಸಂದರ್ಭ:** ಬಜಾಜ್ ಸಮೂಹದ ಮುಕುಂದ ಸುಮಿ ಸಹಭಾಗಿತ್ವ ದಲ್ಲಿ ಕೊಪ್ಪಳದಲ್ಲಿ ಉಕ್ಕು ತಯಾರಿಕಾ ಘಟಕ ಸ್ಥಾಪನೆಗೆ ಜಪಾನಿನ ಸುಮಿಟಾವೊ ಕಂಪನಿ ₹2,345 ಕೋಟಿ ಹೂಡಿಕೆ ಮಾಡಲಿದೆ.

- ಬಂಡವಾಳ ಆಕರ್ಷಣೆಗಾಗಿ ಜಪಾನ್ ಪ್ರವಾಸದಲ್ಲಿರುವ ಅವರು ಸುಮಿಟಾವೊ ಪ್ರತಿನಿಧಿಗಳ ಜತೆಗಿನ ಸಭೆಯ ನಂತರ ಈ ಮಾಹಿತಿ ನೀಡಿದ್ದಾರೆ. **‘ಈ ಘಟಕವು ವಾರ್ಷಿಕ 3.50 ಲಕ್ಷ ಟನ್ ಉಕ್ಕು ತಯಾರಿಸುವ ಸಾಮರ್ಥ್ಯ ಹೊಂದಿರಲಿದೆ. 2028ರ ವೇಳೆಗೆ ಘಟಕ ಕಾರ್ಯಾರಂಭ ಮಾಡಲಿದೆ.** ಅಲ್ಲದೆ ಸುಮಿಟಾವೊ ಕಂಪನಿಯು ರಾಜ್ಯದಲ್ಲಿ ಬಯೊಮಾಸ್ ಘಟಕವನ್ನೂ ಸ್ಥಾಪಿಸಲಿದೆ.
- ‘ಹುಬ್ಬಳ್ಳಿಯಲ್ಲಿರುವ ಎನ್‌ಜಿಇಎಫ್ ಕಾರ್ಖಾನೆಯ ಪುನರಾರಂಭದ ಸಂಬಂಧ ಜೆಎಫ್‌ಇ ಷೋಜಿ ಕಂಪನಿಯ ಪ್ರತಿನಿಧಿಗಳ ಜತೆಗೆ ಮಾತುಕತೆ ನಡೆಸಲಾಗಿದೆ. ₹400 ಕೋಟಿ ಹೂಡಿಕೆ ಮಾಡಲು ಕಂಪನಿ ಮುಂದೆ ಬಂದಿದೆ. ವಿದ್ಯುತ್‌ಚಾಲಿತ ವಾಹನಗಳ ಮೋಟರ್‌ಗಳ ಕೋರ್‌ಗಳನ್ನು ಈ ಕಾರ್ಖಾನೆಯಲ್ಲಿ ತಯಾರಿಸುವ ಬಗ್ಗೆ ಪರಿಶೀಲನೆ ನಡೆಯಲಿದೆ. ಅದರ ಭಾಗವಾಗಿ ಜೆಎಫ್‌ಇ ಷೋಜಿ ಪ್ರತಿನಿಧಿಗಳನ್ನು ಎನ್‌ಜಿಇಎಫ್ ಕಾರ್ಖಾನೆ ಭೇಟಿಗೆ ಆಹ್ವಾನಿಸಲಾಗಿದೆ.
- ಯಸ್ಕಾವಾ ಕಂಪನಿಯು ಬೆಂಗಳೂರಿನಲ್ಲಿ ಮೋಷನ್ ಕಂಟ್ರೋಲ್ ಮತ್ತು ವೇರಿಯೇಬಲ್ ಫ್ರೀಕ್ವೆನ್ಸಿ ಡ್ರೈವ್‌ನ ತಯಾರಕ ಘಟಕ ಸ್ಥಾಪಿಸುವ ಬಗ್ಗೆ ಆಸಕ್ತಿ ತೋರಿಸಿದೆ ಎಂದಿದ್ದಾರೆ.

## ❖ ದೇಶದ ಜಿಡಿಪಿ ಬೆಳವಣಿಗೆ ಅಂದಾಜು ಪರಿಷ್ಕರಣೆ

**ಸಂದರ್ಭ:** ಪ್ರಸಕ್ತ ವರ್ಷಕ್ಕೆ ಸಂಬಂಧಿಸಿದ ದೇಶದ ಜಿಡಿಪಿ ಬೆಳವಣಿಗೆ ದರದ ಅಂದಾಜನ್ನು ಫಿಚ್ ರೇಟಿಂಗ್ಸ್ ಸಂಸ್ಥೆಯು ಶೇಕಡ 6.9ಕ್ಕೆ ಹೆಚ್ಚಿಸಿದೆ. ಈ ಮೊದಲು ಅದು ಬೆಳವಣಿಗೆ ದರವು ಶೇ 6.5ರಷ್ಟು ಇರಲಿದೆ ಎಂದು ಅಂದಾಜು ಮಾಡಿತ್ತು.

- ಜೂನ್ ತ್ರೈಮಾಸಿಕದ ಜಿಡಿಪಿ ಬೆಳವಣಿಗೆ ದರವು ನಿರೀಕ್ಷೆಗಿಂತ ಹೆಚ್ಚಿನ ಮಟ್ಟದಲ್ಲಿ ಇದ್ದುದು ಹಾಗೂ ದೇಶಿ ಮಾರುಕಟ್ಟೆಯಲ್ಲಿನ ಬಳಕೆ ಆಧಾರಿತ ಬೇಡಿಕೆಯು ಅಂದಾಜು ಹೆಚ್ಚಿಸುವುದಕ್ಕೆ ಕಾರಣ ಎಂದು ಸಂಸ್ಥೆ ಹೇಳಿದೆ.
- ಸುಂಕ ಸಂಬಂಧಿ ಅನಿಶ್ಚಿತತೆಗಳ ನಂತರ ಭಾರತದ ಜಿಡಿಪಿ ಬೆಳವಣಿಗೆ ದರದ ಅಂದಾಜನ್ನು ಹಲವು ಸಂಸ್ಥೆಗಳು ತಗ್ಗಿಸಿದ್ದವು. ಈಗ ಭಾರತದ ಜಿಡಿಪಿ ಬೆಳವಣಿಗೆ ದರದ ಅಂದಾಜನ್ನು ಹೆಚ್ಚು ಮಾಡುತ್ತಿರುವ ಮೊದಲ ಜಾಗತಿಕ ರೇಟಿಂಗ್ಸ್ ಸಂಸ್ಥೆ ಫಿಚ್ ಆಗಿದೆ.

Dr. Rajkumar IAS Academy

- ಅಮೆರಿಕದ ಜೊತೆಗಿನ ವ್ಯಾಪಾರಕ್ಕೆ ಸಂಬಂಧಿಸಿದ ಬಿಕ್ಕಟ್ಟು ಈಚಿನ ತಿಂಗಳುಗಳಲ್ಲಿ ತೀವ್ರಗೊಂಡಿದೆ. ಅಮೆರಿಕವು ಭಾರತದ ಸರಕುಗಳ ಮೇಲೆ ಒಟ್ಟು ಶೇ 50ರಷ್ಟು ಸುಂಕ ವಿಧಿಸಿದೆ.
- 'ಇದು ಕಾಲಕ್ರಮೇಣ ಮಾತುಕತೆ ಮೂಲಕ ಕಡಿಮೆ ಮಟ್ಟಕ್ಕೆ ಬರಲಿದೆ ಎಂಬುದು ನಮ್ಮ ನಿರೀಕ್ಷೆ. ಆದರೆ ವ್ಯಾಪಾರ ಸಂಬಂಧದ ಸುತ್ತಲಿನ ಅನಿಶ್ಚಿತತೆಗಳು ಹೂಡಿಕೆಯ ಮೇಲೆ ಪರಿಣಾಮ ಬೀರಬಹುದು. ಜಿಎಸ್‌ಟಿ ವ್ಯವಸ್ಥೆಗೆ ಸರ್ಕಾರವು ಸುಧಾರಣೆ ತಂದಿದೆ. ಇದು ಗ್ರಾಹಕರು ಈ ವರ್ಷದಲ್ಲಿ ಹಾಗೂ ಮುಂದಿನ ಹಣಕಾಸು ವರ್ಷಗಳಲ್ಲಿ ಹೆಚ್ಚು ವೆಚ್ಚ ಮಾಡುವಂತೆ ಉತ್ತೇಜನ ನೀಡಲಿದೆ' ಎಂದು ಫಿಚ್ ಹೇಳಿದೆ.

## ❖ ಎಸ್‌ಎಸ್‌ಎಲ್‌ವಿ ತಂತ್ರಜ್ಞಾನ: ಇಸ್ರೊ– ಎಚ್‌ಎಎಲ್ ಒಪ್ಪಂದ

**<u>ಸಂದರ್ಭ:</u>** 'ಸಣ್ಣ ಉಪಗ್ರಹ ಉಡ್ಡಯನ ವಾಹನ'ಗಳ (ಎಸ್‌ಎಸ್‌ಎಲ್‌ವಿ) ಉತ್ಪಾದನಾ ತಂತ್ರಜ್ಞಾನ ವರ್ಗಾವಣೆಗೆ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೊ) ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ (ಎಚ್‌ಎಎಲ್) ಜತೆ ಒಡಂಬಡಿಕೆ ಮಾಡಿಕೊಂಡಿದೆ.

- ಇದು ಬಾಹ್ಯಾಕಾಶ ವಲಯದಲ್ಲಿ ಉದ್ಯಮ ಸಹಭಾಗಿತ್ವದ ದೃಷ್ಟಿಯಿಂದ ಮಹತ್ವದ ಹೆಜ್ಜೆಯಾಗಿದೆ ಎಂದು ಬಣ್ಣಿಸಲಾಗಿದೆ.
- ತಂತ್ರಜ್ಞಾನ ವರ್ಗಾವಣೆ ಕುರಿತ 100ನೇ ಒಪ್ಪಂದಕ್ಕೆ 'ಇಸ್ರೊ', 'ನ್ಯೂಸ್ಪೇಸ್ ಇಂಡಿಯಾ ಲಿಮಿಟೆಡ್' (ಎನ್‌ಎಸ್‌ಐಎಲ್), 'ಇನ್‌ಸ್ಪೇಸ್' ಹಾಗೂ 'ಎಚ್‌ಎಎಲ್' ಸಹಿ ಮಾಡಿವೆ.
- ಈ ಕುರಿತ ಒಪ್ಪಂದಕ್ಕೆ ಸಹಿ ಮಾಡಿದ ದಿನದಿಂದ 24 ತಿಂಗಳುಗಳ ಒಳಗೆ ತಂತ್ರಜ್ಞಾನ ವರ್ಗಾವಣೆ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ಗುರಿಯನ್ನು ಹೊಂದಲಾಗಿದೆ ಎಂದು 'ಇನ್‌ಸ್ಪೇಸ್' ಕೇಂದ್ರ ತಿಳಿಸಿದೆ.
- ಈ ಅವಧಿಯಲ್ಲಿ ಎಸ್‌ಎಸ್‌ಎಲ್‌ವಿಗಳಿಗೆ ಸಂಬಂಧಿಸಿದ ತಾಂತ್ರಿಕ ಜ್ಞಾನ ಮತ್ತು ತರಬೇತಿಯನ್ನು 'ಇಸ್ರೊ' ಸಂಸ್ಥೆಯು ಎಚ್‌ಎಎಲ್‌ಗೆ ವರ್ಗಾಯಿಸಲಿದೆ ಎಂದು ಅದು ಹೇಳಿದೆ.
- 'ವಾಣಿಜ್ಯ ಉದ್ದೇಶಕ್ಕೆ ಬಾಹ್ಯಾಕಾಶ ವಲಯವನ್ನು ಭಾರತವು ಉದಾರೀಕರಿಸಿರುವುದರಿಂದ ಅವಕಾಶಗಳು ವೃದ್ಧಿಸುತ್ತಿವೆ. ಇದಕ್ಕೆ ಪೂರಕವಾಗಿ ಕ್ರಿಯಾತ್ಮಕ ತಂತ್ರಜ್ಞಾನ ವರ್ಗಾವಣೆ ಕಾರ್ಯವಿಧಾನವನ್ನು ಇಸ್ರೊ ಹೊಂದಿದೆ' ಎಂದು 'ಇಸ್ರೊ' ಅಧ್ಯಕ್ಷ ವಿ. ನಾರಾಯಣನ್ ಪ್ರತಿಕ್ರಿಯಿಸಿದ್ದಾರೆ.
- ಎಸ್‌ಎಸ್‌ಎಲ್‌ವಿ ತಂತಜ್ಞಾನ ವರ್ಗಾವಣೆಗೆ ಇಸ್ರೊ, ಎಚ್‌ಎಎಲ್, ಎನ್‌ಎಸ್‌ಐಎಲ್ ಮತ್ತು ಇನ್‌ಸ್ಪೇಸ್ ಒಂದಾಗಿರುವುದು ಈ ಕ್ಷೇತ್ರದಲ್ಲಿ ಮಹತ್ವದ ಮುನ್ನಡೆಯನ್ನು ಸೂಚಿಸುತ್ತದೆ. ಇದು ಬಾಹ್ಯಾಕಾಶ ಉದ್ಯಮವನ್ನು ಸಬಲೀಕರಿಸಲು, ಕೈಗೆಟುಕುವ ಮತ್ತು ವಿಶ್ವಾಸಾರ್ಹ ಉಡಾವಣಾ ಸೇವೆಗಳಿಗಾಗಿ ಭಾರತವನ್ನು ಜಾಗತಿಕ ಕೇಂದ್ರವಾಗಿ ಸ್ಥಾಪಿಸಬಯಸಿರುವ ಭಾರತ ಸರ್ಕಾರದ ದೃಷ್ಟಿಕೋನವನ್ನು ಪ್ರತಿಬಿಂಬಿಸುತ್ತದೆ ಎಂದು 'ಇನ್‌ಸ್ಪೇಸ್'ನ ಅಧ್ಯಕ್ಷ ಪವನ್ ಕುಮಾರ್ ಗೋಯೆಂಕಾ ಹೇಳಿದ್ದಾರೆ.

Dr. Rajkumar IAS/KAS Academy

## ❖ ನದಿ ಜೋಡಣೆ: ಪಾಲು ಹೆಚ್ಚಳಕ್ಕೆ ಪಟ್ಟು


**ಸಂದರ್ಭ:** ಗೋದಾವರಿ–ಕಾವೇರಿ ನದಿಗಳ ಜೋಡಣೆಯಲ್ಲಿ ನೀರಿನ ಪಾಲು ಹಂಚಿಕೆ ಸೂತ್ರಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಕರ್ನಾಟಕ ಸೇರಿದಂತೆ ಪಾಲುದಾರ ರಾಜ್ಯಗಳು, ನೀರಿನ ಪಾಲನ್ನು ನ್ಯಾಯಬದ್ಧವಾಗಿ ಹಂಚಿಕೆ ಮಾಡಿದರಷ್ಟೇ ಕರಡು ಒಪ್ಪಂದಕ್ಕೆ ಸಹಿ ಹಾಕಲು ಸಿದ್ಧ ಎಂದು ಸ್ಪಷ್ಟಪಡಿಸಿವೆ.

- ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ ನೇತೃತ್ವದಲ್ಲಿ ನವದೆಹಲಿಯಲ್ಲಿ ನಡೆದ ಅಂತರ್ ನದಿಗಳ ಜೋಡಣೆಯ ವಿಶೇಷ ಸಮಿತಿಯ 23ನೇ ಸಭೆ ಒಮ್ಮತಾಭಿಪ್ರಾಯಕ್ಕೆ ಬರುವಲ್ಲಿ ವಿಫಲ ಆಯಿತು.
- ಇನ್ನೊಂದೆಡೆ, ಯೋಜನೆಯ ಅನುಷ್ಠಾನಕ್ಕೆ **ತಮಿಳುನಾಡು ಪೂರ್ಣ ಬೆಂಬಲ** ವ್ಯಕ್ತಪಡಿಸಿತು. ಯೋಜನೆಯನ್ನು ತ್ವರಿತಗತಿಯಲ್ಲಿ ಅನುಷ್ಠಾನ ಮಾಡಬೇಕು ಎಂದು ಆಗ್ರಹಿಸಿತು.

**ನೀರು ಹಂಚಿಕೆ**
(ನೀರಾವರಿ ಸೇರಿ)

| ರಾಜ್ಯ | ಟಿಎಂಸಿ ಅಡಿ | ಶೇ |
|---|---|---|
| ತೆಲಂಗಾಣ | 45 | 30.46 |
| ಆಂಧ್ರ ಪ್ರದೇಶ | 43.61 | 29.65 |
| ತಮಿಳುನಾಡು | 41.25 | 27.67 |
| ಕರ್ನಾಟಕ | 15.89 | 10.74 |
| ಪುದುಚೆರಿ | 2.18 | 1.48 |
| ಒಟ್ಟು | 147.93 | 100 |






- ನದಿ ಜೋಡಣೆಗೆ ತಾತ್ವಿಕ ಒಪ್ಪಿಗೆ ವ್ಯಕ್ತಪಡಿಸಿರುವ **ತೆಲಂಗಾಣವು, ಪೋಲವರಂನಿಂದಲೇ ನದಿ ತಿರುವು ಯೋಜನೆ** ಕೈಗೆತ್ತಿಕೊಳ್ಳಬೇಕು ಎಂದು ಪಟ್ಟು ಹಿಡಿಯಿತು.
- **ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಈ ಯೋಜನೆಯಡಿ ತೆಲಂಗಾಣ, ಆಂಧ್ರ ಪ್ರದೇಶ ಹಾಗೂ ತಮಿಳುನಾಡು ರಾಜ್ಯಗಳಿಗೆ ಕುಡಿಯುವ ನೀರು, ಕೈಗಾರಿಕೆ ಹಾಗೂ ನೀರಾವರಿ ಉದ್ದೇಶಕ್ಕೆ** ನೀರಿನ ಹಂಚಿಕೆ ಮಾಡಲಾಗಿದೆ. ಆದರೆ, **ಕರ್ನಾಟಕಕ್ಕೆ ಕೈಗಾರಿಕೆ ಹಾಗೂ ಕುಡಿಯುವ ಉದ್ದೇಶಕ್ಕೆ ಮಾತ್ರ** ಹಂಚಿಕೆ ಆಗಿದೆ. **ರಾಜ್ಯಕ್ಕೆ ನೈಜವಾಗಿ 2.19 ಟಿಎಂಸಿ ಅಡಿ ಮಾತ್ರ ಸಿಗಲಿದೆ**. ಇದರಿಂದ ರಾಜ್ಯಕ್ಕೆ ಅನ್ಯಾಯವಾಗಲಿದೆ ಎಂಬುದು ಕರ್ನಾಟಕದ ಪ್ರಮುಖ ತಕರಾರು. ಈ ಮಹಾ ಅನ್ಯಾಯ ಸರಿಪಡಿಸುವಂತೆ ಒತ್ತಾಯಿಸಿ ರಾಜ್ಯ ಸರ್ಕಾರ ಧ್ವನಿ ಎತ್ತಿದೆ.

**147 ಟಿಎಂಸಿ ಅಡಿಗಾಗಿ ಜಟಾಪಟಿ**

- **ಗೋದಾವರಿ–ಕಾವೇರಿ ನದಿಗಳ ಜೋಡಣೆ ಯೋಜನೆಯಲ್ಲಿ ಗೋದಾವರಿ–ಕೃಷ್ಣಾ (ನಾಗಾರ್ಜುನಸಾಗರ), ಕೃಷ್ಣಾ–ಪೆನ್ನಾರ್ (ಸೋಮಶಿಲಾ) ಹಾಗೂ ಪೆನ್ನಾರ್–ಕಾವೇರಿ ನದಿಗಳ ಜೋಡಣೆ ಮಾಡಲಾಗುವುದು.**
- **ಗೋದಾವರಿ ಕಣಿವೆಯ ಹೆಚ್ಚುವರಿ 248 ಟಿಎಂಸಿ ಅಡಿ ನೀರನ್ನು ಕೃಷ್ಣಾ, ಪೆನ್ನಾರ್ ಹಾಗೂ ಕಾವೇರಿ ಕಣಿವೆಯ ಭಾಗಕ್ಕೆ ಹರಿಸಲು ರಾಷ್ಟ್ರೀಯ ಜಲ ಅಭಿವೃದ್ಧಿ ಸಂಸ್ಥೆ ಯೋಜಿಸಿತ್ತು**. ಈ ಪ್ರಸ್ತಾವಕ್ಕೆ ರಾಜ್ಯಗಳು ಒಪ್ಪಿರಲಿಲ್ಲ. ಬಳಿಕ ಪರಿಷ್ಕೃತ ಪ್ರಸ್ತಾವ ಸಿದ್ಧಪಡಿಸಲಾಗಿತ್ತು.
- **ಗೋದಾವರಿ ನದಿಯ ಉಪನದಿ ಇಂದ್ರಾವತಿಯಲ್ಲಿ ಬಳಕೆಯಾಗದ 147.93 ಟಿಎಂಸಿ ಅಡಿ ನೀರನ್ನು ನದಿ ತಿರುವು ಯೋಜನೆಗೆ ಬಳಸಿಕೊಳ್ಳಲು ತೀರ್ಮಾನಿಸಲಾಗಿತ್ತು. ಬೇಡ್ತಿ–ವರದಾ ನದಿ ಜೋಡಣೆಯಿಂದ 18 ಟಿಎಂಸಿ ಅಡಿ ನೀರು ದೊರಕಲಿದೆ** ಎಂದು ಅಂದಾಜಿಸಲಾಗಿದೆ.

## ❖ ವಿಷ್ಣು, ಸರೋಜಾದೇವಿಗೆ 'ಕರ್ನಾಟಕ ರತ್ನ'

**<u>ಸಂದರ್ಭ:</u>** ಚಲನಚಿತ್ರ ನಟ ವಿಷ್ಣುವರ್ಧನ್ ಮತ್ತು ನಟಿ ಬಿ.ಸರೋಜಾ ದೇವಿ ಅವರಿಗೆ ಮರಣೋತ್ತರವಾಗಿ 'ಕರ್ನಾಟಕ ರತ್ನ' ಪ್ರಶಸ್ತಿ ನೀಡಲು ನಡೆದ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.






- ಕಾನೂನು ಸಚಿವ ಎಚ್.ಕೆ.ಪಾಟೀಲ ಅವರು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು. **'ಕರ್ನಾಟಕ ರತ್ನ' ಪ್ರಶಸ್ತಿ ಪ್ರದಾನ ಕಾರ್ಯಕ್ರಮದ ದಿನಾಂಕವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ** ಸದ್ಯವೇ ನಿಗದಿ ಮಾಡಲಿದೆ ಎಂದು ತಿಳಿಸಿದರು.
- 'ವಿಷ್ಣುವರ್ಧನ್ ಅವರು ಕನ್ನಡದ ಮೇರುನಟರ ಪೈಕಿ ಒಬ್ಬರು. ಇವರಿಗೆ ಕರ್ನಾಟಕ ರತ್ನ ನೀಡಬೇಕು' ಎಂದು ವಿಷ್ಣುವರ್ಧನ್ ಕುಟುಂಬ, ಅಭಿಮಾನಿಗಳ ಸಂಘ ಮತ್ತು ಚಲನಚಿತ್ರ ಕಲಾವಿದರು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರು.
- ಅಭಿಮಾನ್ ಸ್ಟುಡಿಯೊದಲ್ಲಿದ್ದ ವಿಷ್ಣುವರ್ಧನ್ ಅವರ ಸ್ಮಾರಕವನ್ನು ಇತ್ತೀಚೆಗೆ ರಾತ್ರೋರಾತ್ರಿ ನೆಲಸಮ ಮಾಡಿದ್ದರಿಂದ ವಿಷ್ಣುವರ್ಧನ್ ಅಭಿಮಾನಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಅಲ್ಲದೇ, ಭಾರತಿ ವಿಷ್ಣುವರ್ಧನ್ ಮತ್ತು ಅನಿರುದ್ಧ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ **ಸ್ಮಾರಕ ನಿರ್ಮಾಣಕ್ಕೆ 10 ಗುಂಟೆ ಜಮೀನು ನೀಡಬೇಕು ಮತ್ತು ಕರ್ನಾಟಕ ರತ್ನ ಪ್ರಶಸ್ತಿ ನೀಡಬೇಕು** ಎಂದು ಮನವಿ ಮಾಡಿದ್ದರು.
- ಅಲ್ಲದೇ, ನಟಿಯರಾದ ಜಯಮಾಲಾ, ಶ್ರುತಿ, ತಾರಾ ಅನೂರಾಧ, ಮಾಳವಿಕಾ ಅವಿನಾಶ್ ಅವರು ವಿಷ್ಣುವರ್ಧನ್ ಮತ್ತು ಬಿ.ಸರೋಜಾದೇವಿ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಬೇಕು ಎಂದು ಮುಖ್ಯಮಂತ್ರಿಗೆ ಮನವಿ ಪತ್ರ ಸಲ್ಲಿಸಿದ್ದರು. ಇದರ ಬೆನ್ನಲ್ಲೇ **ಸಚಿವ ಸಂಪುಟ ಸಭೆಯಲ್ಲಿ ಕರ್ನಾಟಕ ರತ್ನ ನೀಡುವ ತೀರ್ಮಾನ ಕೈಗೊಂಡಿದೆ.**

Rajkumar IAS/KAS Aca

### <u>ಕುವೆಂಪುಗೆ 'ಭಾರತರತ್ನ': ಶಿಫಾರಸು</u>

- ರಾಷ್ಟ್ರಕವಿ ಕುವೆಂಪು ಅವರಿಗೆ ಮರಣೋತ್ತರವಾಗಿ 'ಭಾರತರತ್ನ' ನೀಡುವಂತೆ ಕೇಂದ್ರಕ್ಕೆ ಶಿಫಾರಸು ಮಾಡಲು ಸಚಿವ ಸಂಪುಟ ಸಭೆ ನಿರ್ಧರಿಸಿದೆ.

### <u>ಕರ್ನಾಟಕ ರತ್ನ ಪ್ರಶಸ್ತಿ</u>

- ಕರ್ನಾಟಕ ರತ್ನ ಕರ್ನಾಟಕ ರಾಜ್ಯದ ಅತ್ಯುನ್ನತ ನಾಗರಿಕ ಪ್ರಶಸ್ತಿ. ಈ ಪ್ರಶಸ್ತಿಯನ್ನು ಯಾವುದೇ ಕ್ಷೇತ್ರದಲ್ಲಿ ಅಸಾಧಾರಣ ಕೊಡುಗೆಯನ್ನು ನೀಡಿದ ವ್ಯಕ್ತಿಗಳಿಗೆ ನೀಡಲಾಗುತ್ತದೆ.

- ಈ ಪ್ರಶಸ್ತಿಯನ್ನು ೧೯೯೨ರಲ್ಲಿ ಪ್ರಾರಂಭಿಸಲಾಯಿತು. ಒಟ್ಟಾರೆ ಇದುವರೆಗೆ ಹತ್ತು ಗಣ್ಯ ವ್ಯಕ್ತಿಗಳಿಗೆ ಈ ಪ್ರಶಸ್ತಿಯನ್ನು ನೀಡಲಾಗಿದೆ.
- ಕೊನೆಯ ಕರ್ನಾಟಕ ರತ್ನ ಪ್ರಶಸ್ತಿಯನ್ನು ಪವರ್ ಸ್ಟಾರ್ ಪುನೀತ್ ರಾಜಕುಮಾರ್ ರವರಿಗೆ ೨೦೨೨ ನವೆಂಬರ್ ೦೧ ರಂದು ನೀಡಲಾಗಿದೆ.

**ಸಿನಿಮಾ ಕ್ಷೇತ್ರದ್ದೆ ಮೇಲುಗೈ**

- ಈ ಹಿಂದೆ ನೀಡಿದ 10 ಕರ್ನಾಟಕ ಪ್ರಶಸ್ತಿಗಳು ಹಾಗೂ ಹೊಸದಾಗ ಘೋಷಣೆಯಾಗಿರುವ ಪ್ರಶಸ್ತಿಗಳು ಸೇರಿ ಒಟ್ಟು 12 ಮಂದಿಯಲ್ಲಿ ನಾಲ್ಕು ಮಂದಿ ಸಿನಿಮಾ ಕ್ಷೇತ್ರದವರಾಗಿದ್ದಾರೆ. ಉಳಿದಂತೆ ಸಮಾಜ ಸೇವೆಗೆ ಶಿವಕುಮಾರ ಸ್ವಾಮೀಜಿ, ಡಿ ವೀರೇಂದ್ರ ಗೌಡ, ಸಾಹಿತ್ಯಕ್ಕೆ ಕುವೆಂಪು, ದೇ ಜವರೇಗೌಡ, ವೈದ್ಯಕೀಯ ಸಾಧನೆಗೆ ಖ್ಯಾತ ಹೃದ್ರೋಗ ತಜ್ಞ ದೇವಿಪ್ರಸಾದ್ ಶೆಟ್ಟಿ, ರಾಜಕೀಯ ಸಾಧನೆಗೆ ಎಸ್ ನಿಜಲಿಂಗಪ್ಪ, ಸಂಗೀತ ಕ್ಷೇತ್ರದಲ್ಲಿ ಭೀಮಸೇನ ಜೋಷಿ, ವಿಜ್ಞಾನಿ ಸಿಎನ್ಆರ್ ರಾವ್ ಪಡೆದುಕೊಂಡಿದ್ದಾರೆ.

**200 ಕ್ಕೂ ಅಧಿಕ ಚಿತ್ರದಲ್ಲಿ ನಟಿಸಿದರುವ ವಿಷ್ಣು**

- ನಟ ವಿಷ್ಣುವರ್ಧನ್ ಅವರು 220 ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿ, 14 ಬಾರಿ ದ್ವಿಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. 7 ಫಿಲ್ಮ್‌ಫೇರ್ ಪ್ರಶಸ್ತಿಗಳು, 8 ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿಗಳು ಸೇರಿದಂತೆ ಅನೇಕ ಪ್ರಶಸ್ತಿಗಳನ್ನು ಗೆದ್ದಿದ್ದಾರೆ. ಭಾರತೀಯ ಚಿತ್ರರಂಗಕ್ಕೆ ಅವರ ಕೊಡುಗೆಯನ್ನು ಗುರುತಿಸಿ, ಕರ್ನಾಟಕ ಸರ್ಕಾರವು ವಾರ್ಷಿಕ ಪ್ರಶಸ್ತಿಯನ್ನು ಅವರ ಹೆಸರಿನಲ್ಲಿ ಮರುನಾಮಕರಣ ಮಾಡಿತ್ತು.

**ಪ್ರಶಸ್ತಿ ಪುರಸ್ಕೃತರು**

| ಕ್ರ.ಸಂ | ಹೆಸರು | ಭಾವಚಿತ್ರ | ಜನನ / ಮರಣ | ಗೌರವಿಸಿದ್ದು | ಕ್ಷೇತ್ರ | ಉಲ್ಲೇಖ |
|---|---|---|---|---|---|---|
| ೧. | ಕುವೆಂಪು |  | ೧೯೦೪–೧೯೯೪ | ೧೯೯೨ | ಸಾಹಿತ್ಯ | |
| ೨. | ರಾಜಕುಮಾರ್ |  | ೧೯೨೯–೨೦೦೬ | ೧೯೯೨ | ಚಲನಚಿತ್ರ | |
| ೩. | ಎಸ್. ನಿಜಲಿಂಗಪ್ಪ |  | ೧೯೦೨–೨೦೦೦ | ೧೯೯೯ | ರಾಜಕೀಯ | [೧] |
| ೪. | ಸಿ. ಎನ್. ಆರ್. ರಾವ್ |  | ಜ.೧೯೩೪ | ೨೦೦೦ | ವಿಜ್ಞಾನ | [೨] |
| ೫. | ದೇವಿಪ್ರಸಾದ್ ಶೆಟ್ಟಿ |  | ಜ.೧೯೫೩ | ೨೦೦೧ | ವೈದ್ಯಕೀಯ | [೩] |
| ೬. | ಭೀಮಸೇನ ಜೋಷಿ |  | ೧೯೨೨–೨೦೧೧ | ೨೦೦೫ | ಸಂಗೀತ | [೪] |
| ೭. | ಶ್ರೀ ಶಿವಕುಮಾರ ಸ್ವಾಮಿಗಳು |  | ೧೯೦೭–೨೦೧೯ | ೨೦೦೭ | ಸಾಮಾಜಿಕ ಸೇವೆ | [೫] |
| ೮. | ದೇ. ಜವರೇಗೌಡ |  | ೧೯೧೮–೨೦೧೬ | ೨೦೦೮ | ಸಾಹಿತ್ಯ | [೬] |
| ೯. | ಡಿ. ವೀರೇಂದ್ರ ಹೆಗ್ಗಡೆ |  | ಜ.೧೯೪೮ | ೨೦೦೯ | ಸಾಮಾಜಿಕ ಸೇವೆ | [೭] |
| ೧೦. | ಪುನೀತ್ ರಾಜಕುಮಾರ್ |  | ೧೯೭೫–೨೦೨೧ | ೨೦೨೨ | ಸಿನಿಮಾ ಹಾಗೂ ಸಾಮಾಜಿಕ ಸೇವೆ | [೮] |

**ಪಂಚಭಾಷೆ ತಾರೆಗೆ ಒಲಿದ ಪ್ರಶಸ್ತಿ**

- ಬಿ. ಸರೋಜಾದೇವಿ ಅವರು ಬೆಂಗಳೂರು ಮೂಲದ ದಕ್ಷಿಣ ಭಾರತದ ಖ್ಯಾತ ನಟಿ. ಕನ್ನಡ, ತೆಲುಗು, ತಮಿಳು ಮತ್ತು ಹಿಂದಿ ಭಾಷೆಗಳಲ್ಲಿ ನಟಿಸಿ, "ಅಭಿನಯ ಸರಸ್ವತಿ" ಎಂದು ಖ್ಯಾತರಾಗಿದ್ದರು. ತಮ್ಮ 17ನೇ ವಯಸ್ಸಿನಲ್ಲಿ ಕನ್ನಡದ "ಮಹಾಕವಿ ಕಾಳಿದಾಸ" ಚಿತ್ರದ ಮೂಲಕ ಚಿತ್ರರಂಗ ಪ್ರವೇಶಿಸಿದ್ದರು, 5 ಭಾಷೆಗಳಲ್ಲಿ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ. ಪದ್ಮಶ್ರೀ, ಪದ್ಮಭೂಷಣ ಪ್ರಶಸ್ತಿಗಳು ಲಭಿಸಿವೆ. 2025 ರಲ್ಲಿ ಅನಾರೋಗ್ಯ ಕಾರಣಕ್ಕೆ ನಿಧನರಾದರು.

## ❖ ಸರ್ಕಾರಿ ವ್ಯವಸ್ಥೆಯಡಿ ಐವಿಎಫ್ ಚಿಕಿತ್ಸೆ

**ಸಂದರ್ಭ:** ನಗರದ ಖಾಸಗಿ ಆಸ್ಪತ್ರೆ ಗಳಲ್ಲಿ ಐವಿಎಫ್ (ಕೃತಕ ಗರ್ಭಧಾರಣೆ) ಚಿಕಿತ್ಸಾ ವೆಚ್ಚ ದುಬಾರಿ ಆಗಿರುವುದ ರಿಂದ, ಸರ್ಕಾರಿ ವ್ಯವಸ್ಥೆಯಡಿ ಐವಿಎಫ್ ಚಿಕಿತ್ಸಾ ಕೇಂದ್ರ ಪ್ರಾರಂಭಿಸಲು ರಾಜ್ಯ ಸರ್ಕಾರ ಮುಂದಾಗಿದೆ. ಇಲ್ಲಿನ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಲ್ಲಿ (ಎಬಿವಿಎಂಸಿಆರ್ಐ) ಈ ಕೇಂದ್ರ ತಲೆಯೆತ್ತಲಿದೆ.

- ಬದಲಾದ ಜೀವನಶೈಲಿಯಿಂದ ಜನರಲ್ಲಿ ಫಲವತ್ತತೆ ದರ ಕುಸಿಯುತ್ತಿದೆ. ಇದರಿಂದಾಗಿ ಐವಿಎಫ್ ಚಿಕಿತ್ಸೆಗೆ ಬೇಡಿಕೆ ಹೆಚ್ಚುತ್ತಿದೆ. ಆದರೆ, ಖಾಸಗಿ ಆಸ್ಪತ್ರೆಗಳಲ್ಲಿ ಈ ಚಿಕಿತ್ಸಾ ವೆಚ್ಚ ಭರಿಸುವುದು ಬಡ, ಮಧ್ಯಮ ವರ್ಗದವರಿಗೆ ಸವಾಲಾಗಿದೆ. ಆದ್ದರಿಂದ ಸರ್ಕಾರಿ ವ್ಯವಸ್ಥೆಯಡಿ ಐವಿಎಫ್ ಚಿಕಿತ್ಸೆ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಂಡಿದೆ.
- ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಇರುವ ಎಬಿವಿಎಂಸಿಆರ್ಐನಲ್ಲಿ ಈ ಕೇಂದ್ರ ಸ್ಥಾಪಿಸಲಾಗುತ್ತಿದ್ದು, ಸಿವಿಲ್ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ. ಮುಂದಿನ ಆರು ತಿಂಗಳಲ್ಲಿ ಈ ಕೇಂದ್ರ ಕಾರ್ಯಾರಂಭಿಸುವ ಸಾಧ್ಯತೆಯಿದೆ.
- ಈ ಕೇಂದ್ರವು ತಜ್ಞ ವೈದ್ಯರ ಕೊಠಡಿಗಳು, ಪ್ರಯೋಗಾಲಯ, ನೋಂದಣಿ ಕೌಂಟರ್, ಸಮಾಲೋಚನಾ ಕೊಠಡಿ ಸೇರಿ ವಿವಿಧ ವಿಭಾಗಗಳನ್ನು ಹೊಂದಲಿದೆ. ಡೇ ಕೇರ್ ಸೆಂಟರ್‌ನಂತೆ (ಹೊರರೋಗಿ ವಿಭಾಗ) ಕಾರ್ಯ ನಿರ್ವಹಿಸಲಿದೆ. ಐವಿಎಫ್‌ಗೆ ನಿಗದಿಪಡಿ ಸಲಾದ ಮಾನದಂಡದ ಅನುಸಾರ ಕೇಂದ್ರವನ್ನು ಸಜ್ಜುಗೊಳಿಸಲಾಗುತ್ತದೆ. ಬಳಿಕ ಸ್ತ್ರೀರೋಗ ತಜ್ಞರು ಒಳಗೊಂಡಂತೆ ಅಗತ್ಯ ವೈದ್ಯರು ಹಾಗೂ ಸಿಬ್ಬಂದಿಯನ್ನು ನಿಯೋಜಿಸಲಾಗುತ್ತದೆ.
- **ದುಬಾರಿ ಚಿಕಿತ್ಸೆ:** ಮಕ್ಕಳಾಗದೇ ಇರುವ ಮಹಿಳೆಯರ ಅಂಡಾಣು ಹಾಗೂ ಪುರುಷರ ವೀರ್ಯಾಣುವನ್ನು ಪ್ರಯೋಗಾಲಯದಲ್ಲಿ ಫಲವತ್ತಾಗಿಸಿ, ನಂತರ ಭ್ರೂಣವನ್ನು ಮಹಿಳೆಯ ಗರ್ಭಕ್ಕೆ ಸೇರಿಸುವ ಕಾರ್ಯವಿಧಾನವೇ ಐವಿಎಫ್. ಬಂಜೆತನದಿಂದ ಬಳಲುತ್ತಿರುವ ದಂಪತಿಗಳಿಗೆ ಮಕ್ಕಳನ್ನು ಹೊಂದಲು ಈ ತಂತ್ರಜ್ಞಾನ ವರದಾನವಾಗಿ ಪರಿಣಮಿಸಿದೆ.
- ಖಾಸಗಿ ಕ್ಲಿನಿಕ್‌ಗಳಲ್ಲಿ ಈ ಚಿಕಿತ್ಸೆಗೆ ₹1.5 ಲಕ್ಷದಿಂದ ₹5 ಲಕ್ಷದವರೆಗೆ ವೆಚ್ಚವಾಗಲಿದೆ. ಈ ಚಿಕಿತ್ಸೆ ಆರೋಗ್ಯ ವಿಮೆಗಳಡಿ ಸೇರ್ಪಡೆಯಾಗದಿರುವುದರಿಂದ, ಬಡ–ಮಧ್ಯಮ ವರ್ಗದವರಿಗೆ ಚಿಕಿತ್ಸಾ ವೆಚ್ಚ ಭರಿಸುವುದು ಕಷ್ಟಸಾಧ್ಯವಾಗಿದೆ.
- ಐವಿಎಫ್ ಚಿಕಿತ್ಸಾ ಕೇಂದ್ರ ಸ್ಥಾಪನೆಗೆ ಸಂಬಂಧಿಸಿದಂತೆ ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ವಾಣಿವಿಲಾಸ ಆಸ್ಪತ್ರೆ, ಈ ಹಿಂದೆ ಬಿಜೆಪಿ ನೇತೃತ್ವದ ರಾಜ್ಯ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಿತ್ತು. 2023–24ನೇ ಸಾಲಿನ ಬಜೆಟ್‌ನಲ್ಲಿ ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರ ಬೆಂಗಳೂರಿನಲ್ಲಿ ಐವಿಎಫ್ ಚಿಕಿತ್ಸಾ ಕೇಂದ್ರ ನಿರ್ಮಿಸುವುದಾಗಿ ಘೋಷಿಸಿತ್ತು. ಆದರೆ, ಪಕ್ಷ ಅಧಿಕಾರಕ್ಕೆ ಬರದಿರುವುದರಿಂದ ಈ ಘೋಷಣೆ ಕಾರ್ಯಗತವಾಗಿರಲಿಲ್ಲ. ಈಗ ಕಾಂಗ್ರೆಸ್ ನೇತೃತ್ವದ ಸರ್ಕಾರ ನಗರದಲ್ಲಿ ಈ ಕ್ಲಿನಿಕ್ ನಿರ್ಮಿಸುತ್ತಿದೆ.

Dr.Rajkumar IAS/KAS Academy

**ಎಬಿ–ಎಆರ್‌ಕೆಗೆ ಒಳಪಡದ ಚಿಕಿತ್ಸೆ**

- ಐವಿಎಫ್ ಚಿಕಿತ್ಸೆಯು ಸರ್ಕಾರಿ ಆರೋಗ್ಯ ವಿಮೆಯಾದ 'ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ' (ಎಬಿ–ಎಆರ್‌ಕೆ) ಯೋಜನೆಯಡಿ ಸೇರ್ಪಡೆಯಾಗಿಲ್ಲ. ಈ ಯೋಜನೆಯಡಿ ಮಂಡಿಚಿಪ್ಪು ಹಾಗೂ ಸೊಂಟದ ಕೀಲು ಬದಲಿ ಶಸ್ತ್ರಚಿಕಿತ್ಸೆ ಸೇರಿದಂತೆ 1,650 ಚಿಕಿತ್ಸಾ ಪ್ಯಾಕೇಜ್‌ಗಳಿವೆ. ಆದರೆ, ಐವಿಎಫ್‌ಗೆ ಸಂಬಂಧಿಸಿದ ಚಿಕಿತ್ಸೆಗಳು ಒಳಪಟ್ಟಿಲ್ಲ. ಆದ್ದರಿಂದ ಎಬಿವಿಎಂಸಿಆರ್‌ಐನಲ್ಲಿ ಚಿಕಿತ್ಸಾ ಕೇಂದ್ರ ಸಜ್ಜುಗೊಂಡ ಬಳಿಕ, ವೈದ್ಯಕೀಯ ತಜ್ಞರ ಸಮಿತಿ ಕೈಗೆಟುಕುವ ದರ ನಿಗದಿಪಡಿಸಲಿದೆ ಎಂದು ವೈದ್ಯಕೀಯ ಶಿಕ್ಷಣ ಇಲಾಖೆಯ ಮೂಲಗಳು ತಿಳಿಸಿವೆ.

## ❖ 'ಕಾಗದ, ನೋಟ್‌ಬುಕ್ ಮೇಲಿನ ಜಿಎಸ್‌ಟಿ ಗೊಂದಲ ಬಗೆಹರಿಸಿ'

**ಸಂದರ್ಭ:** 'ಪಠ್ಯಪುಸ್ತಕ, ನೋಟ್‌ಬುಕ್‌ಗಳಿಗೆ ಶೂನ್ಯ ಜಿಎಸ್‌ಟಿ, ಕಾಗದಕ್ಕೆ ಶೇ 18 ರಷ್ಟು ಜಿಎಸ್‌ಟಿ ವಿಧಿಸಿರುವುದು ಗೊಂದಲ ಉಂಟು ಮಾಡಿದೆ. ಕಾರ್ಪೊರೇಟ್ ಕಂಪನಿಗಳಿಗೆ ಮಾತ್ರ ಲಾಭವಾಗ ಲಿದ್ದು, ಸಣ್ಣ ವ್ಯಾಪಾರಿಗಳು ಮತ್ತು ಗ್ರಾಹಕರಿಗೆ ಯಾವುದೇ ಲಾಭವಿಲ್ಲ' ಎಂದು ಕರ್ನಾಟಕ ಕಾಗದ ಮತ್ತು ಲೇಖನ ಸಾಮಗ್ರಿಗಳ ಮಾರಾಟಗಾರರ ಸಂಘ ತಿಳಿಸಿದೆ.

- 'ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಲು ಶೂನ್ಯ ಜಿಎಸ್‌ಟಿ ಮಾಡಿರುವ ಉದ್ದೇಶ ಒಳ್ಳೆಯದಿದೆ. ಆದರೆ, ತಪ್ಪಾದ ನಿಯಮದಿಂದಾಗಿ ಅನುಷ್ಠಾನಕ್ಕೆ ಬರುವುದಿಲ್ಲ. ಬದಲಾಗಿ ಹೆಚ್ಚುವರಿ ಪಾವತಿ ಮಾಡಬೇಕಾಗುತ್ತದೆ' ಎಂದು ಸಂಘದ ಮಾಜಿ ಕಾರ್ಯದರ್ಶಿ ಶರವಣ್ ಸುದ್ದಿ ಗೋಷ್ಠಿಯಲ್ಲಿ ಮಾಹಿತಿ ನೀಡಿದರು.
- 'ಮಿಲ್‌ನಿಂದ ಸರಬರಾಜಾಗುವ ಕಾಗದವು ಶಾಲಾ ಪಠ್ಯ ಪುಸ್ತಕಕ್ಕೆ ಬಳಕೆಯಾಗುತ್ತದೆಯೇ? ಇಲ್ಲವೇ? ಎಂಬುದು ಗೊತ್ತಾಗುವುದಿಲ್ಲ. ಅದಕ್ಕೆ ಶೇ 18 ಜಿಎಸ್‌ಟಿ ಕಟ್ಟಬೇಕು. ಶಾಲಾ ಪಠ್ಯ ಅಥವಾ ನೋಟ್ ಬುಕ್ ತಯಾರಿಸಿದಾಗ ಶೇ 18 ಜಿಎಸ್‌ಟಿ ವಾಪಸ್ ಬರುವುದಿಲ್ಲ. ಹಾಗಾಗಿ ₹100 ಪುಸ್ತಕ ಖರೀದಿಸಲು ₹118 ನೀಡಬೇಕಾಗುತ್ತದೆ' ಎಂದರು.
- 'ಹಿಂದೆ ಎಲ್ಲದಕ್ಕೂ ಶೇ 12 ಜಿಎಸ್‌ಟಿ ಇದ್ದಾಗ ಈ ಗೊಂದಲಗಳಿರಲಿಲ್ಲ. ಈಗ ಕಾಗದ ತಯಾರಿ ಮತ್ತು ನೋಟ್‌ಬುಕ್, ಪಠ್ಯಪುಸ್ತಕ ತಯಾರಿ ಎಲ್ಲವನ್ನು ಒಂದೇ ಕಡೆ ಮಾಡುವುದು ಕಾರ್ಪೊರೇಟ್ ಕಂಪನಿಗಳು ಮಾತ್ರ. ಅವರಿಗೆ ಶೂನ್ಯ ಜಿಎಸ್‌ಟಿಯ ಲಾಭ ಸಿಗಲಿದೆ. ಆ ಪುಸ್ತಕಗಳನ್ನು ಕಡಿಮೆ ವೆಚ್ಚದಲ್ಲಿ ಮಾರಾಟ ಮಾಡಲು ಸಾಧ್ಯ. ಇದರಿಂದ ಸಣ್ಣದಾಗಿ ವ್ಯಾಪಾರ ಮಾಡಿಕೊಂಡಿರುವ ಕಾಗದ ಮತ್ತು ಲೇಖನ ಸಾಮಗ್ರಿಗಳ ಮಾರಾಟಗಾರರು ಅಂಗಡಿಯ ಬಾಗಿಲು ಹಾಕಬೇಕಾದ ಪರಿಸ್ಥಿತಿ ಬರಲಿದೆ' ಎಂದರು.
- ಕಾಗದ ಮತ್ತು ಕಾಗದ ಉತ್ಪನ್ನಗಳನ್ನು ಶೇ 5ರ ಜಿಎಸ್‌ಟಿ ಅಡಿಯಲ್ಲಿ ತರಬೇಕು ಎಂದು ಆಗ್ರಹಿಸಿದರು.

## ❖ ಪೊಲೀಸರ ಆರೋಗ್ಯ ತಪಾಸಣೆಗೆ 'ಖುಷಿ' ಯೋಜನೆ

**ಸಂದರ್ಭ:** ಹ್ಯಾಪಿಯೆಸ್ಟ್ ಹೆಲ್ತ್ ಸಂಸ್ಥೆ ಹಾಗೂ ನಗರ ಪೊಲೀಸ್ ಇಲಾಖೆ ಸಹಯೋಗದಲ್ಲಿ ಪೊಲೀಸರ ಆರೋಗ್ಯ ತಪಾಸಣೆಗೆ 'ಖುಷಿ' ಯೋಜನೆ ಜಾರಿ ಮಾಡಲಾಗಿದೆ.

- ನಗರ ಪೊಲೀಸ್ ಕಮಿಷನರ್ ಸೀಮಾಂತ್‌ಕುಮಾರ್ ಸಿಂಗ್ ಅವರು ಈ ಯೋಜನೆಗೆ ಚಾಲನೆ ನೀಡಿದರು.
- ಪೊಲೀಸರ ಆರೋಗ್ಯ ನಿರ್ವಹಣೆಗೆ ರೂಪಿಸಲಾದ ಯೋಜನೆ ಇದಾಗಿದೆ. ಮಧುಮೇಹ, ಅಧಿಕ ರಕ್ತದ ಒತ್ತಡ, ಬೊಜ್ಜು, ಜೀರ್ಣಕ್ರಿಯೆಗೆ ಸಂಬಂಧಿಸಿದ ಸಮಸ್ಯೆಗಳಿದ್ದರೆ ತಪಾಸಣೆ ಮಾಡಿಸಿಕೊಳ್ಳಬಹುದು.

Dr. Rajkumar IAS/KAS Aca

- ಪೊಲೀಸ್ ವೃತ್ತಿಯಲ್ಲಿ ದೀರ್ಘಾವಧಿ ಕೆಲಸ, ಅತಿಯಾದ ಒತ್ತಡದ ವಾತಾವರಣ, ಅನಿಯಮಿತ ದಿನಚರಿಗಳಿರುತ್ತವೆ. ಪೊಲೀಸರ ಆರೋಗ್ಯದ ಕಾಳಜಿ ಹಾಗೂ ನಿರ್ವಹಣೆ ಸುಲಭವಾಗಿಲ್ಲ. ವೈಯಕ್ತಿಕ ಯೋಗಕ್ಷೇಮದ ಜೊತೆಗೆ ವೃತ್ತಿಪರ ದಕ್ಷತೆ ಮತ್ತು ಜೀವನದ ಗುಣಮಟ್ಟದ ಮೇಲೂ ಪರಿಣಾಮ ಬೀರುತ್ತದೆ.
- ಜೀವನಶೈಲಿಯ ಸಮಸ್ಯೆಗಳು ಮತ್ತು ಪೊಲೀಸರು ಎದುರಿಸುತ್ತಿರುವ ಅನೇಕ ಆರೋಗ್ಯ ಸವಾಲುಗಳನ್ನು ಗಮನದಲ್ಲಿ ಇರಿಸಿಕೊಂಡು 'ಖುಷಿ ಯೋಜನೆ' ಜಾರಿಗೆ ತರಲಾಗಿದೆ ಎಂದು ಹ್ಯಾಪಿಯೆಸ್ಟ್ ಹೆಲ್ತ್ ಯೋಜನೆ ಅಧಿಕಾರಿಗಳು ತಿಳಿಸಿದರು.
- ಹ್ಯಾಪಿಯೆಸ್ಟ್ ಹೆಲ್ತ್‌ನ ಮುಖ್ಯ ಸಂಪಾದಕ ರವಿ ಜೋಶಿ ಮಾತನಾಡಿ, 'ಸಮಾಜದ ಬೆನ್ನೆಲುಬು ಆಗಿರುವ ಪೊಲೀಸ್ ಸಿಬ್ಬಂದಿ ಸಮತೋಲನ ಜೀವನ ನಡೆಸಲು ಸಹಾಯ ಮಾಡುವುದೇ ಈ ಯೋಜನೆಯ ಉದ್ದೇಶ ' ಎಂದು ಹೇಳಿದರು.
- 'ಮಧುಮೇಹ, ಅಧಿಕ ರಕ್ತದ ಒತ್ತಡ ಹಾಗೂ ಬೊಜ್ಜಿನಂತಹ ಸಮಸ್ಯೆಗಳನ್ನು ಪರೀಕ್ಷಿಸದೇ ಬಿಟ್ಟರೆ ಅವುಗಳು ಸದ್ದಿಲ್ಲದೇ ಜೀವನದ ಗುಣಮಟ್ಟ ಹಾಳು ಮಾಡುತ್ತವೆ' ಎಂದು ಹ್ಯಾಪಿಯೆಸ್ಟ್ ಹೆಲ್ತ್‌ನ ಸಿಇಒ ಶ್ರೀನಿವಾಸ್ ನಾರಾಯಣ್ ಹೇಳಿದರು.
- 'ಪ್ರಾಜೆಕ್ಟ್ ಖುಷಿ' ಯೋಜನೆ ಅಡಿ ಮೂರು ತಿಂಗಳು ಆರೋಗ್ಯ ತಪಾಸಣೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

## ❖ ಬಯೊ ಸಿಎನ್‌ಜಿ ಘಟಕಕ್ಕೆ ಜಮೀನು

**ಸಂದರ್ಭ:** ಪ್ರತಿ ನಿತ್ಯ 300 ಟನ್ ಘನತ್ಯಾಜ್ಯವನ್ನು ಬಳಸಿಕೊಂಡು ಬಯೊ ಸಿಎನ್‌ಜಿ (ಕಂಪ್ರೆಸ್ಡ್ ನ್ಯಾಚುರಲ್ ಗ್ಯಾಸ್) ಉತ್ಪಾದಿಸಲು 18 ಎಕರೆ ಭೂಮಿಯನ್ನು 25 ವರ್ಷಗಳಿಗೆ ಗುತ್ತಿಗೆ ನೀಡಲು ಸಚಿವ ಸಂಪುಟ ಅನುಮೋದನೆ ನೀಡಿದೆ.

- ಗೇಲ್ ಇಂಡಿಯಾ ಸಂಸ್ಥೆಯಿಂದ ನಿತ್ಯ 300 ಟನ್ ಘನತ್ಯಾಜ್ಯ ಸಿಎನ್‌ಜಿ ಉತ್ಪಾದನೆ.
- ದಕ್ಷಿಣ ತಾಲ್ಲೂಕು ಬೇಗೂರು ಹೋಬಳಿಯ ಹರಳಗುಂಟೆ ಗ್ರಾಮದಲ್ಲಿ ಹಿಂದಿನ ಬಿಬಿಎಂಪಿ ಮಾಲೀಕತ್ವದಲ್ಲಿರುವ ಸರ್ವೆ ನಂ. 39, 45, 46ರ ಒಟ್ಟು ವಿಸ್ತೀರ್ಣ 29.29 ಎಕರೆಯಲ್ಲಿ 10 ಎಕರೆ ಜಮೀನು ಹಾಗೂ ಕರ್ನಾಟಕ ಸಾವಯವ ಗೊಬ್ಬರ ಅಭಿವೃದ್ಧಿ ನಿಗಮದ (ಕೆಸಿಡಿಸಿ) ಮಾಲೀಕತ್ವದಲ್ಲಿರುವ ಸರ್ವೆ ನಂ. 39, 40, 45, 46ರ ಎಂಟು ಎಕರೆ ಜಮೀನನ್ನು ಗೇಲ್ ಇಂಡಿಯಾ ಸಂಸ್ಥೆಗೆ ಗುತ್ತಿಗೆ ನೀಡಲು ಸಮ್ಮತಿಸಲಾಗಿದೆ.
- ಪ್ರತಿನಿತ್ಯ 300 ಟನ್ ಘನತ್ಯಾಜ್ಯ ವನ್ನು ಬಳಸಿಕೊಂಡು ಬಯೊ ಸಿಎನ್‌ಜಿ ಉತ್ಪಾದಿಸುವ ಘಟಕವನ್ನು ಗೇಲ್ ಸಂಸ್ಥೆ ಸ್ಥಾಪಿಸಲಿದೆ. ಮುಂದಿನ ದಿನಗಳಲ್ಲಿ ಈ ಘಟಕದ ಸಾಮರ್ಥ್ಯವನ್ನು 500 ಟನ್‌ಗೆ ವಿಸ್ತರಿಸಲೂ ಅನುಮೋದನೆ ನಿಡಲಾಗಿದೆ. ಕಂದಾಯ ಇಲಾಖೆ ಹಾಗೂ ಬಿಎಸ್‌ಡಬ್ಲ್ಯುಎಂಎಲ್ ಜಂಟಿ ಸರ್ವೆ ನಡೆಸಿ ಭೂಮಿಯನ್ನು ಹಸ್ತಾಂತರಿಸಬೇಕು. ಭವಿಷ್ಯದಲ್ಲಿ ಉದ್ಭವಿಸ ಬಹುದಾದ ಕಾರ್ಯಾಚರಣೆ ಯಲ್ಲಿನ ತೊಡಕುಗಳನ್ನು ಬಗೆಹರಿಸಲು ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರನ್ನು ಪ್ರಾಧಿಕಾರವನ್ನಾಗಿಸಲು ಸಚಿವ ಸಂಪುಟ ನಿರ್ಧರಿಸಿದೆ.
- ಎರಡು ಆಸ್ಪತ್ರೆ: ಯಲಹಂಕದ ಬೆಳ್ಳಹಳ್ಳಿಯಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದ್ದ 200 ಹಾಸಿಗೆಗಳ ಸುಸಜ್ಜಿತ ಆಸ್ಪತ್ರೆಯನ್ನು ನಿರ್ಮಿಸುವ ಬದಲು, ತಲಾ 100 ಹಾಸಿಗೆಗಳ ಎರಡು ಆಸ್ಪತ್ರೆಗಳನ್ನು ರಾಜ್ಯ ಸರ್ಕಾರದ ಅನುದಾನದಲ್ಲಿ ನಿರ್ಮಿಸಲು ಸಚಿವ ಸಂಪುಟ ನಿರ್ಣಯಿಸಿದೆ.
- ಯಲಹಂಕದ ಬೆಳ್ಳಹಳ್ಳಿ ಸರ್ವೆ ನಂ.55ರ ಐದು ಎಕರೆ ಜಮೀನಿನಲ್ಲಿ ₹50 ಕೋಟಿ ವೆಚ್ಚದಲ್ಲಿ ಹಾಗೂ ಹೆಬ್ಬಾಳ ವಿಧಾನಸಭೆ ಕ್ಷೇತ್ರದ ಪಶುಸಂಗೋಪನೆ ಮತ್ತು ಕೃಷಿ ಇಲಾಖೆಯ ಆವರಣದಲ್ಲಿ ₹50 ಕೋಟಿ ವೆಚ್ಚದಲ್ಲಿ ತಲಾ 100 ಹಾಸಿಗೆಗಳ ಸಾಮರ್ಥ್ಯದ ಅತ್ಯಾಧುನಿಕ ಆಸ್ಪತ್ರೆಗಳನ್ನು ನಿರ್ಮಿಸುವ ಕಾಮಗಾರಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಅಧಿಕಾರವನ್ನು ಆರೋಗ್ಯ



Dr. Rajkumar IAS Academy

ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿಯವರಿಗೆ ನೀಡಲು ಸಚಿವ ಸಂಪುಟ ತೀರ್ಮಾನಿಸಿದೆ.

100 ಎಂಎಲ್‌ಡಿ ಎಸ್‌ಟಿಪಿ

- ಬೆಂಗಳೂರು ಜಲಮಂಡಳಿ ವತಿಯಿಂದ ಬೈರಮಂಗಲದ ಕೆರೆ ದಡದಲ್ಲಿ ಪ್ರತಿ ನಿತ್ಯ 100 ದಶಲಕ್ಷ ಲೀಟರ್ (ಎಂಎಲ್‌ಡಿ) ಸಾಮರ್ಥ್ಯದ ದ್ವಿತೀಯ ಹಂತದ ತ್ಯಾಜ್ಯ ನೀರು ಶುದ್ಧೀಕರಣ ಘಟಕ (ಎಸ್‌ಟಿಪಿ) ಹಾಗೂ 25 ಎಂಎಲ್‌ಡಿ ಸಾಮರ್ಥ್ಯದ ತೃತೀಯ ಹಂತದ ಎಸ್‌ಟಿಪಿಗಳ ಏಳು ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಅಂದಾಜು ₹391.82 ಕೋಟಿ ವೆಚ್ಚದ ಯೋಜನೆಗೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

## ❖ 3ಡಿ ವಾಯು ಕಣ್ಗಾವಲು ರೇಡಾರ್ ನಿರ್ಮಾಣ

**ಸಂದರ್ಭ:** ಟಾಟಾ ಅಡ್ವಾನ್ಸ್ಡ್ ಸಿಸ್ಟಮ್ಸ್ ಲಿಮಿಟೆಡ್ (ಟಿಎಎಸ್‌ಎಲ್) ಎಂಜಿನಿಯರಿಂಗ್ ಕ್ಷೇತ್ರದ ಪ್ರಮುಖ ಸಂಸ್ಥೆ ಇಂದ್ರಾ ಸಹಯೋಗದಲ್ಲಿ ಸುಧಾರಿತ ನೌಕಾ ವಾಯು ಕಣ್ಗಾವಲು ರೇಡಾರ್ ಅನ್ನು ನಿರ್ಮಿಸಿದೆ.

- 3ಡಿ ವಾಯು ಕಣ್ಗಾವಲು ರೇಡಾರ್ (3ಡಿ–ಎಎಸ್‌ಆರ್) ತಯಾರಿಸುವ ಮೂಲಕ ಮುಂದಿನ ಪೀಳಿಗೆಯ ನೌಕಾ ಕಣ್ಗಾವಲು ರೇಡಾರ್ ವ್ಯವಸ್ಥೆಯನ್ನು ನಿರ್ಮಿಸುವ ಹಾಗೂ ಸಂಯೋಜಿಸುವ ಸಾಮರ್ಥ್ಯ ಪ್ರದರ್ಶಿಸಿದ ಭಾರತದ ಮೊದಲ ಕಂಪನಿಯಾಗಿದೆ. ಭಾರತೀಯ ನೌಕಾಪಡೆಯ ಯುದ್ಧನೌಕೆಯಲ್ಲಿ 3ಡಿ–ಎಎಸ್‌ಆರ್– ಲಾಂಜಾ–ಎನ್ ಅನ್ನು ಯಶಸ್ವಿಯಾಗಿ ನಿಯೋಜಿಸಲಾಗಿದೆ ಎಂದು ಟಿಎಎಸ್‌ಎಲ್ ಪ್ರಕಟಣೆಯಲ್ಲಿ ತಿಳಿಸಿದೆ.
- ಭಾರತದ ರಕ್ಷಣಾ ಸ್ವಾವಲಂಬನೆಯ ಅನ್ವೇಷಣೆಯಲ್ಲಿ ಇದು ಪ್ರಮುಖ ಮೈಲಿಗಲ್ಲಾಗಿದೆ. ಯುದ್ಧನೌಕೆಯ ಎಲ್ಲ ವ್ಯವಸ್ಥೆಗಳೊಂದಿಗೆ ಹೊಂದಾಣಿಕೆ ಸಾಧಿಸುವಂತೆ ರೇಡಾರ್‌ಅನ್ನು ತಯಾರಿಸಲಾಗಿದೆ. ಕರ್ನಾಟಕದ ಟಾಟಾ ಅಡ್ವಾನ್ಸ್ಡ್ ಸಿಸ್ಟಮ್ಸ್‌ನಲ್ಲಿ ರೇಡಾರ್‌ನ ಜೋಡಣೆ, ಸಂಯೋಜನೆ ಹಾಗೂ ಪರೀಕ್ಷಾ ಕಾರ್ಯವನ್ನು ನಡೆಸಲಾಗಿದೆ ಎಂದು ಹೇಳಿದೆ.

## ❖ ಮಾರಿಷಸ್‌ಗೆ ₹6,000 ಕೋಟಿ ಪ್ಯಾಕೇಜ್

**ಸಂದರ್ಭ:** ಭಾರತವು ಮಾರಿಷಸ್‌ಗೆ ₹6,000 ಕೋಟಿ ವಿಶೇಷ ಆರ್ಥಿಕ ಪ್ಯಾಕೇಜ್ ಅನ್ನು ಗುರುವಾರ ಘೋಷಿಸಿದೆ. ಕಡಲ ಭದ್ರತೆ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ವಿಸ್ತರಿಸಲು ಏಳು ಒಪ್ಪಂದಗಳಿಗೆ ಸಹಿ ಹಾಕಿದೆ.

- ಮಾರಿಷಸ್ ಪ್ರಧಾನಿ ನವೀನ್‌ಚಂದ್ರ ರಾಮಗುಲಾಂ ಅವರೊಂದಿಗೆ ವಾರಾಣಸಿಯಲ್ಲಿ ಗುರುವಾರ ಮಾತುಕತೆ ನಡೆಸಿದ ಮೋದಿ, ‘ಭಾರತ ಮತ್ತು ಮಾರಿಷಸ್ ಎರಡು ದೇಶಗಳಾಗಿದ್ದರೂ ಅವುಗಳ ಕನಸು ಮತ್ತು ಗುರಿ ಒಂದೇ. ಭಾರತ ಮತ್ತು ಮಾರಿಷಸ್ ಪಾಲುದಾರ ರಾಷ್ಟ್ರಗಳಷ್ಟೇ ಅಲ್ಲ, ಒಂದೇ ಕುಟುಂಬದ ಸದಸ್ಯರಂತೆ. ಮಾರಿಷಸ್‌ನ ವಿಶೇಷ ಆರ್ಥಿಕ ವಲಯದ ಭದ್ರತೆ ಮತ್ತು ಕಡಲ ಸಾಮರ್ಥ್ಯವನ್ನು ಬಲಪಡಿಸಲು ಭಾರತ ಸಂಪೂರ್ಣ ಬದ್ಧವಾಗಿದೆ’ ಎಂದು ಅವರು ಹೇಳಿದರು.
- ಮಾರಿಷಸ್‌ನಲ್ಲಿ ಯುಪಿಐ ಮತ್ತು ರುಪೇ ಕಾರ್ಡ್‌ಗಳನ್ನು ಬಿಡುಗಡೆ ಮಾಡಿದ ಬಳಿಕ ಸ್ಥಳೀಯ ಕರೆನ್ಸಿಗಳಲ್ಲಿ ದ್ವಿಪಕ್ಷೀಯ ವ್ಯಾಪಾರವನ್ನು ಸುಗಮಗೊಳಿಸಲು ಭಾರತ ಮತ್ತು ಮಾರಿಷಸ್ ಕೆಲಸ ಮಾಡುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.
- ವಿಶೇಷ ಆರ್ಥಿಕ ಪ್ಯಾಕೇಜ್ ಅಡಿಯಲ್ಲಿ, ಬಂದರು, ವಿಮಾನ ನಿಲ್ದಾಣ, ರಸ್ತೆಗಳಂತಹ ಪ್ರಮುಖ ಮೂಲಸೌಕರ್ಯಗಳನ್ನು ಬಲಪಡಿಸಲು ಹಾಗೂ ಹೊಸ ಆಸ್ಪತ್ರೆಗಳು ಮತ್ತು ಶಾಲೆಗಳನ್ನು ನಿರ್ಮಿಸುವುದು ಸೇರಿದಂತೆ ಕನಿಷ್ಠ 10 ಯೋಜನೆಗಳನ್ನು ಕಾರ್ಯಗತಗೊಳಿಸಲು ಭಾರತ ಮಾರಿಷಸ್‌ಗೆ ಸಹಾಯ ಮಾಡಲಿದೆ.

Dr Rajkumar IAS/KAS Academy

- ಈ ಪ್ಯಾಕೇಜ್ ಕೇವಲ ಸಹಾಯವಲ್ಲ, ಬದಲಿಗೆ ಭವಿಷ್ಯದ ಹೂಡಿಕೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ತಿಳಿಸಿದ್ದಾರೆ.
- ಈ ಏಳು ಒಪ್ಪಂದಗಳು ಶಿಕ್ಷಣ, ವಿದ್ಯುತ್, ಜಲವಿಜ್ಞಾನ ಮತ್ತು ಬಾಹ್ಯಾಕಾಶ ಸಂಶೋಧನೆ ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸಲು ಅನುಕೂಲವಾಗಲಿವೆ.

## ❖ ವಲಸೆ ಪ್ರಕ್ರಿಯೆ ತ್ವರಿತ ಕಾರ್ಯಕ್ರಮ ವಿಸ್ತರಣೆ

ಸಂದರ್ಭ: ವಲಸೆ ಅನುಮತಿಗಳನ್ನು ತ್ವರಿತವಾಗಿ ಒದಗಿಸುವ ಎಫ್‌ಟಿಐ–ಟಿಟಿಪಿ (ಫಾಸ್ಟ್‌ಟ್ರ್ಯಾಕ್ ವಲಸೆ–ವಿಶ್ವಸನೀಯ ಪ್ರಯಾಣಿಕ ಯೋಜನೆ) ಸೌಲಭ್ಯಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹೆಚ್ಚುವರಿಯಾಗಿ ಐದು ವಿಮಾನ ನಿಲ್ದಾಣಗಳಲ್ಲಿ ಚಾಲನೆ ನೀಡಿದರು.

- ಈ ಯೋಜನೆಯ ಅಡಿಯಲ್ಲಿ ಭಾರತದ ಪ್ರಜೆಗಳು ಹಾಗೂ ಸಾಗರೋತ್ತರ ಭಾರತೀಯ ಪ್ರಜೆ (ಒಸಿಐ) ಕಾರ್ಡ್ ಇರುವವರಿಗೆ ತ್ವರಿತವಾಗಿ ವಲಸೆ ಅನುಮತಿಗಳನ್ನು ನೀಡಲಾಗುತ್ತದೆ.
- ಈ ಯೋಜನೆಗೆ ಇಲ್ಲಿನ ಇಂದಿರಾ ಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 2024ರ ಜುಲೈನಲ್ಲಿ ಮೊದಲು ಚಾಲನೆ ನೀಡಲಾಗಿತ್ತು. ಈಗ ಇದನ್ನು ಲಖನೌ, ತಿರುವನಂತಪುರ, ತಿರುಚಿರಾಪಳ್ಳಿ, ಕೊಯಿಕ್ಕೋಡ್ ಮತ್ತು ಅಮೃತಸರ ವಿಮಾನ ನಿಲ್ದಾಣಗಳಿಗೆ ಕೂಡ ಗುರುವಾರ ವಿಸ್ತರಣೆ ಮಾಡಲಾಗಿದೆ.
- 'ಈ ಯೋಜನೆಯು ವಲಸೆ ಪ್ರಕ್ರಿಯೆಗಳನ್ನು ಸರಳವಾಗಿಸುತ್ತದೆ, ತ್ವರಿತವಾಗಿಸುತ್ತದೆ' ಎಂದು ಸಚಿವ ಶಾ ಅವರು ಹೇಳಿದ್ದಾರೆ. ಅರ್ಹ ಪ್ರಯಾಣಿಕರಿಗೆ ಇ–ಗೇಟ್ ಸೌಲಭ್ಯವನ್ನು ಬಳಸಲು ಹಾಗೂ ಎಂದಿನ ವಲಸೆ ಸರತಿ ಸಾಲನ್ನು ತಪ್ಪಿಸಿಹೋಗಲು ಅವಕಾಶ ನೀಡಲಾಗುತ್ತದೆ. ಈ ಸೌಲಭ್ಯ ಪಡೆಯಲು ಬಯಸುವ ಪ್ರಯಾಣಿಕರು ಆನ್‌ಲೈನ್ ಮೂಲಕ (www.ftittp.mha.gov.in) ಅರ್ಜಿ ಸಲ್ಲಿಸಿ, ತಮ್ಮ ಬಯೋಮೆಟ್ರಿಕ್ ವಿವರಗಳನ್ನು ನೀಡಬೇಕು. ಅಲ್ಲದೆ, ಇತರ ಕೆಲವು ಮಾಹಿತಿಯನ್ನೂ ಒದಗಿಸಬೇಕು. ಎಫ್‌ಟಿಐ ನೋಂದಣಿಯು ಗರಿಷ್ಠ ಐದು ವರ್ಷಗಳ ಅವಧಿಗೆ ಅಥವಾ ಪಾಸ್‌ಪೋರ್ಟ್‌ನ ಅವಧಿಯವರೆಗೆ (ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ) ಚಾಲ್ತಿಯಲ್ಲಿ ಇರುತ್ತದೆ.

## ❖ 6,856 ಆದಿವಾಸಿ ಕುಟುಂಬಕ್ಕೆ 'ಗೃಹಭಾಗ್ಯ'

**ಸಂದರ್ಭ:** ಅರಣ್ಯ ಮತ್ತು ಅರಣ್ಯಾಧಾರಿತ ಆದಿವಾಸಿ ಸಮುದಾಯಗಳ 6,856 ವಸತಿ ರಹಿತ ಕುಟುಂಬಗಳಿಗೆ 'ಮುಖ್ಯಮಂತ್ರಿ ಆದಿವಾಸಿ ಗೃಹಭಾಗ್ಯ ಯೋಜನೆ'ಯಡಿ ಮನೆಗಳನ್ನು ನಿರ್ಮಿಸಿಕೊಡಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

- ಇದಕ್ಕಾಗಿ ₹160 ಕೋಟಿ ಅನುದಾನ ನೀಡಲು ಒಪ್ಪಿಗೆ ನೀಡಲಾಗಿದೆ. ಪ್ರತಿ ಮನೆಯನ್ನು ₹4.50 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗುವುದು. ಸೋಲಿಗ, ಹಸಲ, ಗೌಡ್ಲು, ಸಿದ್ದಿ, ಕುಡಿಯ, ಮಲೆಕುಡಿಯ, ಕಾಡು ಕುರುಬ, ಇರುಳಿಗ, ಬೆಟ್ಟ ಕುರುಬ, ಯರವ, ಪಣಿಯನ್ ಮತ್ತಿತರ ಸಮುದಾಯಗಳಿಗೆ ಈ ಸೌಲಭ್ಯ ಸಿಗಲಿದೆ ಎಂದು ಅವರು ಹೇಳಿದರು.
- ನಿಯಮ ಸರಳೀಕರಣ: 'ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳ ತಿದ್ದುಪಡಿ'ಗೆ ಒಪ್ಪಿಗೆ ನೀಡಲಾಗಿದೆ.
- ಈ ತಿದ್ದುಪಡಿಯಿಂದಾಗಿ ಭೂಮಿಯನ್ನು ಸಮತಟ್ಟು ಮಾಡುವಾಗ, ಕೃಷಿ ಯೋಗ್ಯ ಭೂಮಿಯನ್ನಾಗಿ ಮಾಡುವಾಗ, ಕೆರೆಗಳಲ್ಲಿ ಹೂಳು ತೆಗೆಯುವಾಗ, ಕೃಷಿ ಮತ್ತು ಮೀನುಗಾರಿಕೆ ಹೊಂಡ ಗಳ ನಿರ್ಮಾಣ ವೇಳೆ ದೊರೆಯುವ ಮರಳು, ಮತ್ತಿತರ ಉಪಖನಿಜಗಳನ್ನು ಬಳಕೆ ಮಾಡಿದ ನಂತರ ಉಳಿದದ್ದನ್ನು ಸಾಗಣೆಗೆ ಅವಕಾಶ ನೀಡಲಾಗುವುದು. ರಾಜಧನ ಮತ್ತು ಇತರ ಪಾವತಿಗಳಲ್ಲಿ ಸೋರಿಕೆ ಆಗುವುದನ್ನು ತಡೆಯಲು ನಿಯಮ ಸರಳೀಕರಣ ಮಾಡಲಾಗಿದೆ.

Dr. Rajkumar IAS Academy

ಪ್ರಮುಖ ತೀರ್ಮಾನಗಳು:

- ***।ಕರ್ನಾಟಕ ಭೌಗೋಳಿಕ ಮಾಹಿತಿ ವ್ಯವಸ್ಥೆ 2.0 (ಕೆ.ಜಿಐಎಸ್ 2.0) ಅನ್ನು ಅನುಷ್ಠಾನಗೊಳಿಸಲು ₹150 ಕೋಟಿ. ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ವತಿಯಿಂದ ಇದನ್ನು ಅನುಷ್ಠಾನಗೊಳಿಸಲಾಗುವುದು. ದತ್ತಾಂಶ ಸಂಗ್ರಹ ಸ್ಥಳ, ಹೋಸ್ಟಿಂಗ್ ಮೂಲ ಸೌಕರ್ಯ ಮತ್ತು ಅದರ ಭದ್ರತೆ ಕೈಗೊಳ್ಳಲಾಗುವುದು. ಡ್ರೋನ್ ಮತ್ತು ಉಪಗ್ರಹ ಸೆರೆ ಹಿಡಿದ ಚಿತ್ರಗಳನ್ನು ಸ್ವಯಂ ಚಾಲಿತವಾಗಿ ಅಳವಡಿಸಿಕೊಳ್ಳುತ್ತದೆ.***
- ***।ಬಯೋ ಡೀಸೆಲ್(ಬಿ–100) ಅನ್ನು ಹೈ ಸ್ಪೀಡ್ ಡೀಸೆಲ್‌ನೊಂದಿಗೆ ಮಿಶ್ರಣ ಮಾಡುವ(ಪರವಾನಗಿ) ಆದೇಶ 2025 ಕರಡು ಅಧಿಸೂಚನೆಗೆ ಅನುಮೋದನೆ.***
- ***।ಪಿಎಂ ಕುಸುಮ್–ಬಿ ಯೋಜನೆಯಡಿ ನೆಟ್‌ವರ್ಕ್ ಗ್ರಿಡ್‌ನಿಂದ ಎಷ್ಟೇ ದೂರದಲ್ಲಿದ್ದರೂ ಸೋಲಾರ್ ಪಂಪ್‌ಸೆಟ್‌ಗಳಿಗೆ ಅದರ ವೆಚ್ಚದ ಶೇ 50 ರಷ್ಟು ಮೊತ್ತವನ್ನು ಸಹಾಯಧನ ನೀಡಲು ತೀರ್ಮಾನ. ಇದರಿಂದ ರೈತರ ಬೆಳೆಗಳಿಗೆ ಹಗಲು ನೀರು ನೀಡಬೇಕು ಎಂಬ ಬೇಡಿಕೆ ಈಡೇರಲಿದೆ.***

## ❖ ಗ್ರಾಮ ಆಡಳಿತ ಅಧಿಕಾರಿಗಳಿಗೆ ಕ್ರೋಮ್ ಬುಕ್

**ಸಂದರ್ಭ:** ಡಿಜಿ– ಕಂದಾಯ ಯೋಜನೆಯಡಿ ಕಂದಾಯ ಇಲಾಖೆಯ ಗ್ರಾಮ ಅಧಿಕಾರಿಗಳು, ಕಂದಾಯ ಆಡಳಿತ ಅಧಿಕಾರಿಗಳಿಗೆ 3500 ಕ್ರೋಮ್‌ಬುಕ್ ಖರೀದಿಸಿ, ವಿತರಿಸಲು ತೀರ್ಮಾನಿಸಲಾಗಿದೆ.

- ಇದರ ಒಟ್ಟು ವೆಚ್ಚ ₹19.25 ಕೋಟಿ. ಪ್ರತಿ ಕ್ರೋಮ್‌ಬುಕ್‌ನ ಬೆಲೆ ₹55,000 ಎಂದು ಸಚಿವ ಎಚ್ .ಕೆ.ಪಾಟೀಲ ತಿಳಿಸಿದರು
- **ಹಿರಿಯರಿಗೆ 'ವಯೋ ವಂದನಾ':** ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಯೋಜನೆಯಡಿ 70 ವರ್ಷ ಅದಕ್ಕಿಂತ ಹೆಚ್ಚು ವಯಸ್ಸಿನ ಎಲ್ಲ ಹಿರಿಯರಿಗೆ (ಇಎಸ್‌ಐಎಸ್ ಫಲಾನುಭವಿಗಳು) ಆರೋಗ್ಯ ಸೇವೆಗಳ ಪ್ರಯೋಜನ ವಿಸ್ತರಿಸಲು ಸಂಪುಟ ಒಪ್ಪಿಗೆ ನೀಡಿದೆ.
- ಕೇಂದ್ರ ಸರ್ಕಾರದ ಆಯುಷ್ಮಾನ್ ಭಾರತ ಮಾರ್ಗಸೂಚಿಗಳ ಪ್ರಕಾರ 'ಅನ್ನಭಾಗ್ಯ' ಯೋಜನೆ ಫಲಾನುಭವಿಗಳು, ಅಂಗನವಾಡಿಗೆ ದಾಖಲಾಗಿರುವ ಮಕ್ಕಳ ಕುಟುಂಬದ ಹಿರಿಯರಿಗೆ ಈ ಸೇವೆ ಲಭ್ಯವಾಗಲಿದೆ ಎಂದು ಪಾಟೀಲ ಹೇಳಿದರು.

**ಇವಿಎಂ ಬದಲು ಮತಪತ್ರ ಸುಗ್ರೀವಾಜ್ಞೆ ಇಲ್ಲ**

- ಜಿಬಿಎ ಮತ್ತು ಇತರ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಇವಿಎಂ ಬದಲು ಮತ ಪತ್ರಬಳಸುವ ಸಂಬಂಧ ಸುಗ್ರೀವಾಜ್ಞೆ ಹೊರಡಿಸದಿರಲು ಸರ್ಕಾರ ತೀರ್ಮಾನಿಸಿದೆ.
- ತಿದ್ದುಪಡಿ ಮಾಡಿದ ಬಳಿಕ ಸುಗ್ರೀವಾಜ್ಞೆ ಹೊರಡಿಸಲು ಕಳೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿತ್ತು. ಆದರೆ, ಇಂದು ಈ ವಿಷಯ ಚರ್ಚೆಗೆ ಬರಲಿಲ್ಲ. 'ಕಾನೂನಿಗೆ ತಿದ್ದುಪಡಿ ಮಾಡಬೇಕು. **ಸ್ಥಳೀಯ ಸಂಸ್ಥೆ ಚುನಾವಣೆ ಗಳಲ್ಲಿ ಇವಿಎಂ ಅಥವಾ ಮತಪತ್ರ ಎರಡರಲ್ಲಿ ಯಾವುದಾದರೂ ಒಂದನ್ನು ಬಳಸಬಹುದು ಎಂಬ ಅಂಶ ಸುಪ್ರೀಂಕೋರ್ಟ್‌ನ ಒಂದು ತೀರ್ಪಿನಲ್ಲಿದೆ. ಹೀಗಾಗಿ ಸುಗ್ರೀವಾಜ್ಞೆಯ ಅವಶ್ಯ ಬೀಳದು ಎಂಬ ಚರ್ಚೆ ನಡೆದಿದೆ**' ಎಂದು ಮೂಲಗಳು ಹೇಳಿವೆ.

Dr Rajkumar IAS KAS Academy

## ❖ ತೀರ್ಪು ಕಾಯ್ದಿರಿಸಿದ ಸುಪ್ರೀಂ ಕೋರ್ಟ್

**ಸಂದರ್ಭ:** ರಾಜ್ಯ ಶಾಸಕಾಂಗಗಳು ಅಂಗೀಕರಿಸಿದ ಮಸೂದೆಗಳಿಗೆ ರಾಜ್ಯಪಾಲರು ಹಾಗೂ ರಾಷ್ಟ್ರಪತಿ ಅವರು ಅಂಕಿತ ಹಾಕುವುದಕ್ಕೆ ಕಾಲಮಿತಿ ವಿಧಿಸಬಹುದೇ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕೇಳಿರುವ ಪ್ರಶ್ನೆಗಳ ಕುರಿತು 10 ದಿನಗಳವರೆಗೆ ವಾದ-ಪ್ರತಿವಾದ ಆಲಿಸಿದ ಸುಪ್ರೀಂ ಕೋರ್ಟ್, ತೀರ್ಪನ್ನು ಕಾಯ್ದಿರಿಸಿತು.

- ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ, ನ್ಯಾಯಮೂರ್ತಿ ಗಳಾದ ಸುರ್ಯಕಾಂತ್, ವಿಕ್ರಮ್ ನಾಥ್, ಪಿ.ಎಸ್.ನರಸಿಂಹ ಮತ್ತು ಎ.ಎಸ್.ಚಂದೂರ್ಕರ್ ಅವರನ್ನು ಒಳಗೊಂಡ ಸಂವಿಧಾನ ಪೀಠ ಈ ಕುರಿತು ಆಗಸ್ಟ್ 19ರಿಂದ ವಿಚಾರಣೆ ಪ್ರಾರಂಭಿಸಿತ್ತು.
- ಅಟಾರ್ನಿ ಜನರಲ್ ಆರ್. ವೆಂಕಟರಮಣಿ ಅವರ ವಾದದ ಮುಕ್ತಾಯದೊಂದಿಗೆ ಪೀಠವು ತೀರ್ಪನ್ನು ಕಾಯ್ದಿರಿಸಿತು. ಕೇಂದ್ರದ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರೂ ತಮ್ಮ ವಾದವನ್ನು ಮುಕ್ತಾಯಗೊಳಿಸಿದರು.
- ರಾಷ್ಟ್ರಪತಿ ಅವರು ಎತ್ತಿದ್ದ ಪ್ರಶ್ನೆಗಳನ್ನು ಆಕ್ಷೇಪಿಸಿದ ವಿರೋಧ ಪಕ್ಷಗಳ ಆಡಳಿತವಿರುವ ತಮಿಳುನಾಡು, ಪಶ್ಚಿಮ ಬಂಗಾಳ, ಕೇರಳ, ಕರ್ನಾಟಕ, ತೆಲಂಗಾಣ, ಪಂಜಾಬ್ ಮತ್ತು ಹಿಮಾಚಲ ಪ್ರದೇಶ ಸರ್ಕಾರಗಳ ಪರ ವಕೀಲರು ವಿರೋಧಗಳನ್ನು ದಾಖಲಿಸುವ ಮೂಲಕ ತಮ್ಮ ವಾದ ಅಂತಿಮಗೊಳಿಸಿದರು.
- ಮಸೂದೆಗಳಿಗೆ ಅಂಕಿತ ಹಾಕುವ ವಿಚಾರಕ್ಕೆ ಸಂಬಂಧಿಸಿದಂತೆ ತಮಿಳುನಾಡು ಸರ್ಕಾರ ಪ್ರಶ್ನಿಸಿದ್ದ ಅರ್ಜಿ ಕುರಿತು ಸುಪ್ರೀಂ ಕೋರ್ಟ್ ಏಪ್ರಿಲ್ 8ರಂದು ತೀರ್ಪು ನೀಡಿತ್ತು. ಪರಿಶೀಲನೆಗಾಗಿ ರಾಜ್ಯಪಾಲರಿಂದ ಬಂದ ಮಸೂದೆಗಳ ವಿಚಾರವಾಗಿ ಮೂರು ತಿಂಗಳ ಅವಧಿಯಲ್ಲಿ ತೀರ್ಮಾನ ಕೈಗೊಳ್ಳಬೇಕು ಎಂದು ಸುಪ್ರೀಂ ಕೋರ್ಟ್ ರಾಷ್ಟ್ರಪತಿಯ ವರಿಗೆ ಕಾಲಮಿತಿ ನಿಗದಿ ಮಾಡಿತ್ತು. ಇದರ ಬೆನ್ನಲ್ಲೇ, ರಾಷ್ಟ್ರಪತಿಯ ವರು ಸುಪ್ರೀಂ ಕೋರ್ಟ್‌ಗೆ ಐದು ಪುಟಗಳ ಪತ್ರ ಬರೆದು, 14 ಪ್ರಶ್ನೆಗಳನ್ನು ಎತ್ತಿದ್ದರು.

### **ಸೋನಿಯಾ ವಿರುದ್ಧದ ಅರ್ಜಿ ವಜಾ**

- ಕಾಂಗ್ರೆಸ್‌ನ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಅವರು ಭಾರತದ ಪೌರತ್ವ (1983) ಪಡೆಯುವುದಕ್ಕೂ ಮೂರು ವರ್ಷಗಳ ಮುನ್ನವೇ ಮತದಾರರ ಪಟ್ಟಿಯಲ್ಲಿ ಹೆಸರನ್ನು ನೋಂದಾಯಿಸಿಕೊಂಡಿದ್ದರು ಎಂದು ಮಾಡಿರುವ ಆರೋಪಕ್ಕೆ ಸಂಬಂಧಿಸಿದ ಅರ್ಜಿಯನ್ನು ದೆಹಲಿ ನ್ಯಾಯಾಲಯ ಗುರುವಾರ ವಜಾಗೊಳಿಸಿದೆ.
- ಪೌರತ್ವದ ವಿಷಯವು ಕೇಂದ್ರ ಸರ್ಕಾರದ ವಿಶೇಷ, ಸಾಂವಿಧಾನಿಕ ಮತ್ತು ಶಾಸನಬದ್ಧ ಅಧಿಕಾರ ವ್ಯಾಪ್ತಿಗೆ ಬರುತ್ತದೆ. ಇದರಲ್ಲಿ ಅನಗತ್ಯವಾಗಿ ನ್ಯಾಯಾಲಯ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಹೇಳಿದ ನ್ಯಾಯಾಧೀಶರು ಅರ್ಜಿಯನ್ನು ವಜಾಗೊಳಿಸಿದರು.

## ❖ ಪಟ್ನಾ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಹುದ್ದೆಗೆ ಪವನ್‌ಕುಮಾರ್ ಹೆಸರು ಶಿಫಾರಸು

**ಸಂದರ್ಭ:** ಪಟ್ನಾ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಯನ್ನಾಗಿ ನೇಮಕ ಮಾಡುವಂತೆ ಕರ್ನಾಟಕ ಹೈಕೋರ್ಟ್‌ನ ನ್ಯಾಯ ಮೂರ್ತಿ ಪವನ್‌ಕುಮಾರ್ ಬಿ.ಭಜಂತ್ರಿ ಅವರ ಹೆಸರನ್ನು ಸುಪ್ರೀಂ ಕೋರ್ಟ್‌ನ ಕೊಲಿಜಿಯಂ ಶಿಫಾರಸು ಮಾಡಿದೆ.

- ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಹಾಗೂ ನ್ಯಾಯಮೂರ್ತಿಗಳಾದ ಸೂರ್ಯಕಾಂತ್, ವಿಕ್ರಮ್‌ನಾಥ್ ಅವರ ನ್ನೊಳಗೊಂಡ ಕೊಲಿಜಿಯಂ ಗುರುವಾರ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಂಡಿದೆ.
- ಇದಲ್ಲದೆ, ಮೇಘಾಲಯ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಯಾಗಿ ಕಲ್ಕತ್ತ ಹೈಕೋರ್ಟ್‌ನ ನ್ಯಾಯಮೂರ್ತಿ ಸೌಮೆನ್ ಸೇನ್ ಹಾಗೂ ಮಣಿಪುರ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಮದ್ರಾಸ್ ಹೈಕೋರ್ಟ್‌ನ ನ್ಯಾಯಮೂರ್ತಿ ಎಂ. ಸುಂದರ್ ಅವರ ಹೆಸರುಗಳನ್ನು ಶಿಫಾರಸು ಮಾಡಿದೆ.

Dr. Rajkumar IAS/KAS Academy

- 2015ರ ಜನವರಿ 2ರಂದು ಕರ್ನಾಟಕ ಹೈಕೋರ್ಟ್‌ನ ಹಂಗಾಮಿ ನ್ಯಾಯಮೂರ್ತಿಯಾಗಿ ನೇಮಕಗೊಂಡರು. 2015ರಲ್ಲಿ ಪಂಜಾಬ್–ಹರಿಯಾಣ ಹೈಕೋರ್ಟ್‌ಗೆ ವರ್ಗಾವಣೆಗೊಂಡಿದ್ದ ಅವರು, ನಂತರದಲ್ಲಿ ಪಟ್ನಾ ಹೈಕೋರ್ಟ್ ನ್ಯಾಯಮೂರ್ತಿಯಾಗಿ 2021ರ ಅ.20ರಂದು ವರ್ಗಾವಣೆಗೊಂಡಿದ್ದರು. 2025ರ ಅಕ್ಟೋಬರ್ 22ರಂದು ನಿವೃತ್ತಿ ಹೊಂದಲಿದ್ದಾರೆ.

## ❖ 'ಸದನ ಇರುವುದು ಜನರ ಒಳಿತಿಗಾಗಿ'

**ಸಂದರ್ಭ:** ಸಂಸತ್ತು ಅಥವಾ ವಿಧಾನ ಮಂಡಲದ ಸದನಗಳು ಇರುವುದು ಜನರ ಸಮಸ್ಯೆ–ಆಗುಹೋಗುಗಳ ಚರ್ಚೆಗೆ. ಅದನ್ನು ರಾಜಕೀಯ ಆರೋಪ–ಪ್ರತ್ಯಾರೋಪಕ್ಕೆ ಬಳಸಿಕೊಳ್ಳಬಾರದು ಎಂಬ ಅಭಿಪ್ರಾಯಕ್ಕೆ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತೀಯ ವಿಭಾಗದ 11ನೇ ಸಮ್ಮೇಳನದ ಉದ್ಘಾಟನಾ ಸಮಾರಂಭದ ವೇದಿಕೆ ಸಾಕ್ಷಿಯಾಯಿತು.

- ನಗರದಲ್ಲಿ ಇದೇ 12 ಮತ್ತು 13ರಂದು ನಡೆಯಲಿರುವ ಈ ಸಮ್ಮೇಳನದಲ್ಲಿ ಲೋಕಸಭೆಯ ಸ್ಪೀಕರ್ ಮತ್ತು ಉಪಸ್ಪೀಕರ್, ಎಲ್ಲ ರಾಜ್ಯಗಳ ವಿಧಾನಸಭಾಧ್ಯಕ್ಷರು, ಉಪಸಭಾಧ್ಯಕ್ಷರು, ವಿಧಾನ ಪರಿಷತ್ತಿನ ಸಭಾಪತಿ, ಉಪಸಭಾಪತಿ ಭಾಗಿಯಾಗಲಿದ್ದಾರೆ.
- ದೇಶದ ಎಲ್ಲ ರಾಜ್ಯಗಳಿಂದ ಬಂದಿದ್ದ ಗಣ್ಯರನ್ನು ಬರಮಾಡಿಕೊಂಡ ನಂತರ ಸಾಕ್ಷ್ಯಚಿತ್ರವೊಂದರ ಮೂಲಕ ಅವರೆಲ್ಲರಿಗೆ ಕರ್ನಾಟಕ ಸಂಸ್ಕೃತಿ–ಪರಂಪರೆ ಮತ್ತು ಹೆಗ್ಗಳಿಕೆಯನ್ನು ಪರಿಚಯಿಸಿಕೊಡಲಾಯಿತು. ದೇಶದ ಮೊದಲ ಸಂಸತ್ತು 'ಅನುಭವ ಮಂಟಪ'. ಭಾರತದ ಪ್ರಜಾಪ್ರಭುತ್ವದ ತಳಹದಿಯನ್ನು ಕರ್ನಾಟಕದ ವಚನ ಚಳವಳಿಯಿಂದಲೇ ಕಾಣಬಹುದು ಎಂದು ಸಾಕ್ಷ್ಯಚಿತ್ರವು ವಿವರಿಸಿತು.
- ರಾಜ್ಯ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, 'ಸದನಗಳಲ್ಲಿ ನಡೆಯುವ ಕಲಾಪವನ್ನು ಇನ್ನಷ್ಟು ಉತ್ತಮಗೊಳಿಸುವ ಹಾದಿಗಳನ್ನು ಈ ಸಮ್ಮೇಳನದಲ್ಲಿ ಚರ್ಚಿಸುತ್ತೇವೆ' ಎಂದರು.
- ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ, 'ಸದನಗಳು ಇರುವುದು ಚರ್ಚೆ ಮತ್ತು ಸಂವಾದದ ಮೂಲಕ ಜನರ ಕಷ್ಟ, ಸಮಸ್ಯೆ, ಆಗುಹೋಗುಗಳ ಬಗ್ಗೆ ಗಮನಹರಿಸಲು. ಜನಪ್ರತಿನಿಧಿಗಳು ಇದೇ ಹಾದಿಯಲ್ಲಿ ನಡೆಯುವಂತೆ ನೋಡಿಕೊಳ್ಳುವ ಗುರುತರ ಹೊಣೆಗಾರಿಕೆ ಸಭಾಧ್ಯಕ್ಷರ ಮೇಲಿದೆ' ಎಂದರು.
- 'ನಮ್ಮ ಸಂವಿಧಾನವನ್ನು ಅಂಗೀಕರಿಸಿಕೊಳ್ಳುವ ಮುನ್ನ ಸುದೀರ್ಘವಾದ ಚರ್ಚೆ ನಡೆದಿದೆ. ವಾದ–ಪ್ರತಿವಾದಗಳು, ಸಮ್ಮತಿ–ಅಸಮ್ಮತಿಗಳು ಹಾಗೂ ಅವೆಲ್ಲವನ್ನು ಒಳಗೊಂಡ ಸಮನ್ವಯವಾದದ ರೂಪವಾಗಿ ಸಂವಿಧಾನ ರೂಪುಗೊಂಡಿದೆ. ಸದನ–ಕಲಾಪವನ್ನು ಇನ್ನಷ್ಟು ಉತ್ತಮವಾಗಿ ಹೇಗೆ ನಡೆಸಬಹುದು ಎಂಬುದರ ಸಾಧ್ಯತೆಗಳನ್ನು ಈ ಎರಡು ದಿನಗಳ ಸಮ್ಮೇಳನದಲ್ಲಿ ಪರಿಶೀಲಿಸೋಣ' ಎಂದು ಕರೆ ನೀಡಿದರು.
- ರಾಜ್ಯದ ಸಾಂಸ್ಕೃತಿಕ ಪರಂಪರೆಗೆ ಬಸವಣ್ಣನ ಕೊಡುಗೆಯನ್ನು ರಾಜ್ಯಸಭೆಯ ಉಪಸಭಾಪತಿ ಹರಿವಂಶ ನಾರಾಯಣ್ ಸಿಂಗ್ ಪ್ರಸ್ತಾಪಿಸಿದರೆ, ವಿಧಾನ ಪರಿಷತ್ತಿನ ಮಹತ್ವವನ್ನು ಸಭಾಪತಿ ಬಸವರಾಜ ಹೊರಟ್ಟಿ ಅವರು ವಿವರಿಸಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿದರು.

Dr. Rajkumar IAS/KAS Academy

## ❖ 'ಮತಾಂತರಗೊಂಡವರು ಕ್ರೈಸ್ತರೇ'

**ಸಂದರ್ಭ:** ಕುರುಬ, ಬ್ರಾಹ್ಮಣ, ಲಿಂಗಾಯತ, ದಲಿತ, ವೈಶ್ಯ ಮತ್ತು ಒಕ್ಕಲಿಗರಲ್ಲಿ ಯಾರೇ ಕ್ರೈಸ್ತ ಧರ್ಮಕ್ಕೆ ಮತಾಂತರಗೊಂಡಿದ್ದರೂ ಅವರೆ ಲ್ಲರೂ ಕ್ರೈಸ್ತರೇ ಆಗುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

- ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಸಮೀಕ್ಷಾ ಕೈಪಿಡಿ ಬಿಡುಗಡೆ ಮಾಡಿದ ಬಳಿಕ ಅವರು ಸುದ್ದಿಗೋಷ್ಠಿಯಲ್ಲಿ ಪ್ರಶ್ನೆ ಯೊಂದಕ್ಕೆ ಉತ್ತರಿಸಿದರು.
- 'ಮತಾಂತರಗೊಂಡವರ ಧರ್ಮ ವನ್ನು ಉಲ್ಲೇಖಿಸುವಾಗ ಅವರ ಮೂಲ ಜಾತಿಯ ಹೆಸರು ಸೇರಿಸಿರುವ ಬಗ್ಗೆ ಆಕ್ಷೇಪ ವ್ಯಕ್ತವಾಗಿದೆಯಲ್ಲ' ಎಂಬ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ, 'ಮತಾಂತರ ಗೊಂಡವರು ಕ್ರೈಸ್ತರೇ ಆಗುತ್ತಾರೆ' ಎಂದರು.
- 'ಸಮೀಕ್ಷೆಗೆ ಬಂದಾಗ ಏನು ಬರೆಯುತ್ತಾರೋ ಬರೆಯಲಿ. **ಮತಾಂತರ ಗೊಂಡವರು ಅಥವಾ ಜಾತಿ–ಧರ್ಮದ ಹೆಸರಿನ ಗೊಂದಲ ಇದ್ದರೆ ಅದನ್ನು ಹಿಂದುಳಿದ ವರ್ಗಗಳ ಆಯೋಗ ವಿಶ್ಲೇಷಣೆ ನಡೆಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳುತ್ತದೆ.** ನಾವು ಸಾಮಾಜಿಕ ಮತ್ತು ಶೈಕ್ಷಣಿಕ ಮಾಹಿತಿ ಮಾತ್ರ ಸಂಗ್ರಹಿಸುತ್ತಿದ್ದೇವೆ' ಎಂದು ಹೇಳಿದರು.
- **'ಹಿಂದುಳಿದ ವರ್ಗಗಳ ಆಯೋಗ ಪ್ರಕಟಿಸಿದ್ದ ಜಾತಿ ಪಟ್ಟಿಯಲ್ಲಿ ಕುರುಬ ಕ್ರಿಶ್ಚಿಯನ್. ಕುಂಬಾರ ಕ್ರಿಶ್ಚಿಯನ್, ಮಡಿವಾಳ ಕ್ರಿಶ್ಚಿಯನ್, ನೇಕಾರ ಕ್ರಿಶ್ಚಿಯನ್ ಸೇರಿ 100ಕ್ಕೂ ಹೆಚ್ಚು ಜಾತಿಗಳನ್ನು ಕ್ರಿಶ್ಚಿಯನ್ ಧರ್ಮದ ಹೆಸರಿನಲ್ಲಿ ಸೇರಿಸಲಾಗಿದೆ'** ಎಂದು ಬಿಜೆಪಿ ನಾಯಕರು ಆರೋಪಿಸಿದ್ದರು.
- ಸರ್ಕಾರ ಬಿಡುಗಡೆಗೊಳಿಸಿದ ಪಟ್ಟಿಯಲ್ಲಿ ಕ್ಯಾಥೋಲಿಕ್, ಪ್ರೊಟೆಸ್ಟಂಟ್, ಪೆಂಟಕೋಸ್ಟ್ ಇತ್ಯಾದಿ ಮೂಲ ಕ್ರೈಸ್ತ ಪಂಗಡಗಳ ಹೆಸರೇ ಇಲ್ಲ. ಅವರಿಗೆ ಕೇವಲ ಕ್ರೈಸ್ತರೆಂದು ಗುರುತಿಸಿ ಕೊಳ್ಳಲು ಅವಕಾಶ ನೀಡಿದೆ' ಎಂದು ಬಿಜೆಪಿ ನಾಯಕರು ದೂರಿದ್ದರು.

ವೀರಶೈವ– ಲಿಂಗಾಯತ.. ಏನಾದರೂ ಬರೆಯಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ

- 'ವೀರಶೈವ– ಲಿಂಗಾಯತರು ಧರ್ಮ ಮತ್ತು ಜಾತಿಯನ್ನು ತಮಗೆ ಹೇಗೆ ಬೇಕೋ ಹಾಗೆ ಬರೆಸಿಕೊಳ್ಳಲಿ' ಎಂದು ಸಿದ್ದರಾಮಯ್ಯ ಹೇಳಿದರು.
- 'ವೀರಶೈವ ಲಿಂಗಾಯತರು ಹಿಂದೂ ಧರ್ಮ ಎಂಬುದನ್ನು ಬಳಸದೇ ಲಿಂಗಾಯತ ಧರ್ಮ ಎಂದೇ ನಮೂದಿಸಬೇಕು ಎಂದು ಕೆಲವರು ಪ್ರಚಾರ ಮಾಡುತ್ತಿದ್ದಾರೆ. ಆದರೆ, ಧರ್ಮದ ಪಟ್ಟಿಯಲ್ಲಿ ಲಿಂಗಾಯತ ಧರ್ಮದ ಉಲ್ಲೇಖ ಇಲ್ಲ. ಹೀಗಾಗಿ ಏನೆಂದು ಬರೆಸಬೇಕೆಂಬ ಗೊಂದಲಕ್ಕೆ ಆ ಸಮುದಾಯದ ಜನ ಸಿಲುಕಿದ್ದಾರೆ' ಎಂಬ ಪ್ರಶ್ನೆಗೆ ಅವರು ಮೇಲಿನಂತೆ ಉತ್ತರಿಸಿದರು.
- 'ಅವರು 'ವೀರಶೈವ–ಲಿಂಗಾಯತ' ಧರ್ಮ ಅಂತ ಬರೆಯಿಸಲಿ, 'ವೀರಶೈವ' ಧರ್ಮ ಅಂತಾನೆ ಬರೆಯಿಸಲಿ, ಕೇವಲ ವೀರಶೈವ ಅಥವಾ ಲಿಂಗಾಯತ ಅಂತ ಬೇಕಾದರೂ ಬರೆಯಿಸಿಕೊಳ್ಳಲಿ. ನಮಗೆ ಬೇಕಾಗಿರುವುದು ಅವರ ಶೈಕ್ಷಣಿಕ, ಸಾಮಾಜಿಕ ಸ್ಥಿತಿಗತಿ ಮಾತ್ರ. ಏನು ಬೇಕಾದರೂ ಬರೆಯಿಸಿಕೊಳ್ಳಲಿ' ಎಂದು ಹೇಳಿದರು.

Dr. Rajkumar IAS/KAS Academy

- ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಲಿಂಗಾಯತ ಧರ್ಮ ಎಂದೇ ಬರೆಯಿಸಬೇಕು ಎಂದು ಆ ಸಮುದಾಯದ ಕೆಲವು ಮಠಾಧೀಶರು ಮತ್ತು ಪ್ರಮುಖರು ಪ್ರಚಾರ ನಡೆಸುತ್ತಿದ್ದಾರೆ. ಆದರೆ, **ಹಿಂದುಳಿದ ವರ್ಗಗಳ ಆಯೋಗ ಪ್ರಕಟಿಸಿರುವ ಸಮೀಕ್ಷೆಯ ಕೈಪಿಡಿಯಲ್ಲಿ ಹಿಂದೂ, ಇಸ್ಲಾಂ, ಕ್ರೈಸ್ತ, ಜೈನ, ಸಿಖ್, ಬೌದ್ಧ, ಪಾರ್ಸಿ, ನಾಸ್ತಿಕ, ಗೊತ್ತಿಲ್ಲ, ತಿಳಿಸಲು ನಿರಾಕರಿಸುತ್ತಾರೆ ಮತ್ತು ಇತರೆ ಎಂದು ಇದೆ. 'ಪ್ರಮುಖ 7 ಧರ್ಮಗಳ ಹೊರತಾಗಿ ಇತರೆ ಧರ್ಮಗಳಿದ್ದಲ್ಲಿ, ಅವುಗಳನ್ನು ಇತರೆ ವಿಭಾಗದಲ್ಲಿ ಕೋಡ್ ಸಂಖ್ಯೆ 11ರಲ್ಲಿ ನಮೂದಿಸಬಹುದು' ಎಂದು ಸೂಚಿಸಲಾಗಿದೆ.**

## ❖ ಡಿಸೆಂಬರ್‌ನಲ್ಲಿ ಜಾತಿವಾರು ಸಮೀಕ್ಷೆ ವರದಿ ಸಲ್ಲಿಕೆ: ಸಿ.ಎಂ

**ಸಂದರ್ಭ:** ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಇದೇ 22ರಂದು ಆರಂಭಗೊಂಡು ಅ.7ರವರೆಗೆ ನಡೆಯಲಿದ್ದು, ಡಿಸೆಂಬರ್‌ನಲ್ಲಿ ವರದಿ ಸಲ್ಲಿಕೆಯಾಗಲಿದೆ.

- ಸಮೀಕ್ಷೆಯಲ್ಲಿ 60 ಪ್ರಶ್ನೆಗಳನ್ನು ಒಳಗೊಂಡ ಪ್ರಶ್ನಾವಳಿ ಇರುತ್ತದೆ. ಅದರಲ್ಲಿ ಪ್ರತಿ ಸದಸ್ಯರ ಧರ್ಮ, ಜಾತಿ, ಉಪಜಾತಿ, ವಿದ್ಯಾರ್ಹತೆ, ಕುಲಕಸುಬು ಕೌಶಲ್ಯ, ಆದಾಯ, ಕುಟುಂಬದ ಸ್ಥಿರ ಮತ್ತು ಚರಾಸ್ತಿ ವಿವರಗಳನ್ನು ಸಂಗ್ರಹಿಸ ಲಾಗುವುದು. ಈಗಾಗಲೇ ಯುಎಚ್‌ಐಡಿ ಸ್ಟಿಕ್ಕರ್ ಅಂಟಿಸುವ ಕೆಲಸ ನಡೆದಿದೆ. ರಾಜ್ಯದ 2 ಕೋಟಿ ಮನೆಗಳ ಪೈಕಿ ಈವರೆಗೆ 1.55 ಕೋಟಿ ಮನೆಗಳಿಗೆ ಸ್ಟಿಕ್ಕರ್‌ಗಳನ್ನು ಅಂಟಿಸಲಾಗಿದೆ.
- ಶಿಕ್ಷಕರು ಮನೆಗೆ ಸಮೀಕ್ಷೆ ಬರುವುದಕ್ಕೆ 3 ದಿನಗಳ ಮೊದಲೇ ಆಶಾ ಕಾರ್ಯಕರ್ತೆಯರು ಪ್ರಶ್ನಾವಳಿಗಳನ್ನು ವಿತರಿಸುತ್ತಾರೆ. ಇದರಿಂದ ಮನೆಯ ಸದಸ್ಯರು ಎಲ್ಲ ಪ್ರಶ್ನೆಗಳನ್ನು ಓದಿಕೊಂಡು ಉತ್ತರಿಸಲು ಸಹಾಯಕವಾಗುತ್ತದೆ. ಪ್ರಶ್ನೆಗಳನ್ನು ಓದಲು ಬಾರದಿದ್ದವರು ಬೇರೆಯವರ ಸಹಾಯ ಪಡೆದುಕೊಳ್ಳಬಹುದು. ಒಟ್ಟಿನಲ್ಲಿ ಎಲ್ಲ ಪ್ರಶ್ನೆಗಳಿಗೂ ಉತ್ತರಿಸಬೇಕು. ಅದಕ್ಕಾಗಿ ಪ್ರತಿಯೊಂದು ಕುಟುಂಬಗಳೂ ತಯಾರಿರಬೇಕು. ಆಶಾ ಕಾರ್ಯಕರ್ತೆಯರು ಪ್ರಶ್ನಾವಳಿ ವಿತರಿಸುತ್ತಾರೆ.
- ಒಂದು ವೇಳೆ ಯಾರಿಗಾದರೂ ಸಮೀಕ್ಷೆಯಲ್ಲಿ ಭಾಗವಹಿಸಲು ಆಗದಿದ್ದರೆ ಅಥವಾ ಮನೆಯಲ್ಲಿ ಇಲ್ಲದೇ ಇದ್ದರೆ ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬಹುದು ಮತ್ತು ವೆಬ್‌ಸೈಟ್‌ನಲ್ಲಿ ಸಮೀಕ್ಷೆಯ ಮೂಲಕ ಪ್ರಶ್ನೆಗಳಿಗೆ ಉತ್ತರ ನೀಡಿ ಸಮೀಕ್ಷೆಯಲ್ಲಿ ಭಾಗವಹಿಸಬಹುದು.

ಸಮೀಕ್ಷೆಗೆ ವಿನೂತನ ವಿಧಾನ

ಈ ಸಮೀಕ್ಷೆಯಲ್ಲಿ ಎಲ್ಲಾ ಕುಟುಂಬಗಳು ಪೂರ್ಣವಾಗಿ ಒಳ್ಳಗೊಳ್ಳಬೇಕು ಎಂಬ ಕಾರಣಕ್ಕಾಗಿ ವಿನೂತನ ಸಮೀಕ್ಷಾ ವಿಧಾನ ಅನುಸರಿಸಲಾಗುತ್ತಿದೆ.

- ರಾಜ್ಯದ ಬಹುಪಾಲು ಮನೆಗಳು **ವಸತಿ ಉದ್ದೇಶದ ವಿದ್ಯುತ್ ಸಂಪರ್ಕ** ಹೊಂದಿದ್ದು, ಅವುಗಳಿಗೆ ಆರ್ .ಆರ್ ಸಂಖ್ಯೆ ಹೊಂದಿರುವ ಎಲೆಕ್ಟ್ರಿಕ್ ಮೀಟರ್‌ಗಳು ಇರುತ್ತವೆ. ಈ ಮಾಹಿತಿ ಆಧರಿಸಿ ಮನೆಗಳ ಪಟ್ಟಿಯನ್ನು ತಯಾರಿಸಲಾಗಿದೆ. ಹೀಗಾಗಿ ಎಲ್ಲ ಮನೆಗಳು ಮತ್ತು ಕುಟುಂಬಗಳು ಈ ಜಾಲದಲ್ಲಿ ಬಂದಿವೆ.
- **ವಿದ್ಯುತ್ ಸಂಪರ್ಕ ಹೊಂದಿರದ** ಮನೆಗಳನ್ನೂ ಪ್ರತ್ಯೇಕ ವಿಧಾನದಿಂದ ಸಮೀಕ್ಷೆಗೆ ಒಳಪಡಿಸಲಾಗುವುದು. ವಿದ್ಯುತ್ ಸಂಪರ್ಕವಿಲ್ಲದ ಮನೆಗಳನ್ನು ಜಿಲ್ಲಾಧಿಕಾರಿಗಳ ಮೂಲಕ ಪಿಡಿಒ ಮತ್ತು ಗ್ರಾಮ ಆಡಳಿತಾಧಿಕಾರಿಗಳನ್ನು ಬಳಸಿ ಅಂತಹ ಮನೆಗಳನ್ನು ಜಿಯೋಟ್ಯಾಗ್ ಮಾಡಿ, ಸಮೀಕ್ಷಾ ಬ್ಲಾಕ್‌ಗಳನ್ನು ರಚಿಸಲಾಗಿದೆ. ಈ ಮೂಲಕ 2 ಕೋಟಿ ಕುಟುಂಬಗಳ 7 ಕೋಟಿ ಜನಸಂಖ್ಯೆಯನ್ನು ಸಮೀಕ್ಷೆಗೆ ಒಳಪಡಿಸಲಾಗುವುದು.

Dr. Rajkumar IAS/KAS Academy

'ಗ್ಯಾರಂಟಿ' ಮಾಹಿತಿಯೂ ಸಂಗ್ರಹ

- ಯಾವುದೇ ಕುಟುಂಬ ಸರ್ಕಾರದಿಂದ ಪಡೆದ ಸವಲತ್ತು, ಎಂದರೆ **ಗಂಗಾ ಕಲ್ಯಾಣ, ಭೂಒಡೆತನ, ಸ್ವಾವಲಂಬಿ ಸಾರಥಿ, ಪ್ರೇರಣಾ ಯೋಜನೆ(ಕಿರುಸಾಲ), ಸ್ವಯಂ ಉದ್ಯೋಗ(ನೇರ ಸಾಲ), ಕೈಗಾರಿಕಾ ನಿವೇಶನ, ಕೈಗಾರಿಕೆ ಸ್ಥಾಪಿಸಲು ನೆರವು. ಕೃಷಿ ಸಂಬಂಧಿತ ನೆರವು, ವೃದ್ಧಾಪ್ಯ ವೇತನ, ವಿಧವಾ ವೇತನ, ಅಂಗಲ ವಿಕಲ ವೇತನದ ಜತೆ ಗ್ಯಾರಂಟಿ ಯೋಜನೆಗಳ** ಫಲಾನುಭವಿಗಳು ಮಾಹಿತಿ ನೀಡಬೇಕು. ಇದರಿಂದ ಸರ್ಕಾರದ ಯೋಜನೆಗಳು ಅರ್ಹರಿಗೆ ತಲುಪುತ್ತಿದೆಯೆ ಎಂಬ ಮಾಹಿತಿ ಸಿಗುತ್ತದೆ.

## ❖ ಚಲನಚಿತ್ರಗಳ ಟಿಕೆಟ್ ಗರಿಷ್ಠ ದರ ₹200

**ಸಂದರ್ಭ:** ರಾಜ್ಯದಲ್ಲಿ ಮಲ್ಟಿ ಪ್ಲೆಕ್ಸ್‌ಗಳೂ ಸೇರಿ ಎಲ್ಲ ಚಿತ್ರ ಮಂದಿರಗಳಲ್ಲಿ ಚಲನಚಿತ್ರಗಳ ಟಿಕೆಟ್ ದರವನ್ನು (ತೆರಿಗೆ ಬಿಟ್ಟು) ಗರಿಷ್ಠ ₹200ಕ್ಕೆ ನಿಗದಿಪಡಿಸಿ ಗೃಹ ಇಲಾಖೆ ಅಧಿಸೂಚನೆ ಹೊರಡಿಸಿದೆ.

- ಈ ನಿಯಮ ಜಾರಿಗೆ ಬಂದಿದ್ದು, ಕನ್ನಡ ಸೇರಿ ಎಲ್ಲ ಭಾಷೆಗಳ ಚಲನಚಿತ್ರಗಳಿಗೂ ಈ ಆದೇಶ ಅನ್ವಯವಾಗಲಿದೆ. ಆದರೆ, 75 ಅಥವಾ ಅದಕ್ಕಿಂತ ಕಡಿಮೆ ಆಸನ ಹೊಂದಿರುವ ಪ್ರೀಮಿಯಂ ಸೌಲಭ್ಯ ಗಳನ್ನು ಒಳಗೊಂಡ ಮಲ್ಟಿಪ್ಲೆಕ್ಸ್‌ಗಳಿಗೆ ಈ ನಿಯಮದಿಂದ ವಿನಾಯ್ತಿ ನೀಡಲಾಗಿದೆ.
- **ಯಾವುದೇ ಭಾಷೆಯ ಚಿತ್ರವಾದರೂ ಸರಿ ಗರಿಷ್ಠ ದರ ₹200 ದಾಟುವಂತಿಲ್ಲ. ಟಿಕೆಟ್ ಮೇಲೆ ಶೇ 18ರಷ್ಟು ತೆರಿಗೆ ಇರುತ್ತದೆ.**
- ಚಿತ್ರ ಮಂದಿರದಲ್ಲಿ ಎರಡು ಅಥವಾ ಮೂರು ಕ್ಲಾಸ್‌ಗಳ ಆಸನ ವ್ಯವಸ್ಥೆ ಇದ್ದರೆ ಅವುಗಳ ಬೆಲೆಯೂ ₹150ಕ್ಕಿಂತ ಕಡಿಮೆ ಆಗಲಿದೆ.
- ಮಲ್ಟಿಪ್ಲೆಕ್ಸ್‌ಗಳಲ್ಲಿ ಪರಭಾಷಾ ಚಿತ್ರಗಳ ಟಿಕೆಟ್ ದರದ ಮೇಲೆ ಯಾವುದೇ ನಿಯಂತ್ರಣವಿರಲಿಲ್ಲ. ಕೆಲವು ಚಿತ್ರಗಳ ಟಿಕೆಟ್ ದರ ₹2,000–₹3000 ದಾಟುತ್ತಿತ್ತು.
- **ತಮಿಳುನಾಡು ಮಾದರಿಯಲ್ಲೇ ಕರ್ನಾಟಕದಲ್ಲೂ ಟಿಕೆಟ್ ದರವನ್ನು ನಿಗದಿ ಮಾಡಬೇಕು ಎಂಬುದು ಕನ್ನಡ ಚಲನಚಿತ್ರ ರಂಗದ ಬೇಡಿಕೆಯಾಗಿತ್ತು.**
- ರಾಜೇಂದ್ರ ಸಿಂಗ್ ಬಾಬು ಅವರು ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷರಾಗಿದ್ದಾಗ, ಸರ್ಕಾರಕ್ಕೆ ಈ ಸಂಬಂಧ ಪ್ರಸ್ತಾವನೆ ಸಲ್ಲಿಸಿದ್ದರು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಂದಿನ ಅಧ್ಯಕ್ಷ ಸಾ.ರಾ.ಗೋವಿಂದು ಕೈಜೋಡಿಸಿದ್ದರು.
- 'ತಮಿಳುನಾಡು, ಆಂಧ್ರದಲ್ಲೂ ಟಿಕೆಟ್ ದರ ಕಡಿಮೆ ಇದೆ. ಅಲ್ಲಿ ತೆರಿಗೆಯೂ ಸೇರಿ ಟಿಕೆಟ್ ದರ ₹150ರಿಂದ ₹200ರ ಒಳಗೆ ಇದೆ. ಕರ್ನಾಟಕದಲ್ಲಿ ಮಾತ್ರ ಅತ್ಯಂತ ದುಬಾರಿ ಆಗಿತ್ತು. ಇದರಿಂದ ಕನ್ನಡ ಚಿತ್ರಗಳ ಮೇಲೂ ಪರಿಣಾಮ ಬೀರಿತ್ತು. ಹೊಸ ಅಧಿಸೂಚನೆ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉತ್ತಮ ನಿರ್ಧಾರ ತೆಗೆದುಕೊಂಡಿದ್ದಾರೆ' ಎಂದರು.

## ❖ 'ಶರಾವತಿ ಪಂಪ್ಡ್ ಸ್ಟೋರೇಜ್: 120 ಎಕರೆಯಷ್ಟೇ ಬಳಕೆ'

**ಸಂದರ್ಭ:** 'ಶಿವಮೊಗ್ಗ ಜಿಲ್ಲೆಯಲ್ಲಿ ಶರಾವತಿ ಪಂಪ್ಡ್ ಸ್ಟೋರೇಜ್ ಜಲವಿದ್ಯುತ್ ಯೋಜನೆಗೆ 120 ಎಕರೆಯಷ್ಟೇ ಬಳಕೆಯಾಗಲಿದ್ದು, ಹೆಚ್ಚುವರಿ 2 ಸಾವಿರ ಮೆಗಾವಾಟ್ ವಿದ್ಯುತ್ ಉತ್ಪಾದನೆಯಾಗಲಿದೆ.

- ಯೋಜನೆಗೆ ಕೇಂದ್ರ ಸರ್ಕಾರ ತಾತ್ವಿಕ ಒಪ್ಪಿಗೆ ನೀಡಿದೆ. ಯೋಜನೆಗೆ ಗುರುತಿಸಿರುವ ಪ್ರದೇಶದಲ್ಲಿ ಸರ್ಕಾರದ ಜಾಗವೇ ಇದೆ. 40 ಎಕರೆಯಷ್ಟು ಖಾಸಗಿ ಜಮೀನು ಸ್ವಾಧೀನ ಮಾಡಿಕೊಳ್ಳಬೇಕು.

- **'ಶಿವನಸಮುದ್ರ ಯೋಜನೆ ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಅನುಷ್ಠಾನಗೊಂಡಿತ್ತು.** 'ವಿದ್ಯುತ್ ಉತ್ಪಾದನೆ ಮಾಡಿದರೆ ನೀರಿನ ಸತ್ವ ಹೋಗುತ್ತದೆ, ಆ ನೀರನ್ನು ಕೃಷಿಗೆ ಬಳಸಲು ಆಗುವು ದಿಲ್ಲ' ಎಂದು ಸ್ವಹಿತಾಸಕ್ತಿಯ ಕೆಲವರು ಸುಳ್ಳು ಹಬ್ಬಿಸಿದ್ದರು. ಅಂಥ ಜನ ಎಲ್ಲಾ ಕಾಲದಲ್ಲೂ ಇರುತ್ತಾರೆ' ಎಂದರು.

## ❖ ಚಿಲ್ಲರೆ ಹಣದುಬ್ಬರ ಅಲ್ಪ ಏರಿಕೆ

**ಸಂದರ್ಭ:** ಆಹಾರ ಪದಾರ್ಥಗಳ ಬೆಲೆ ಏರಿಕೆಯಿಂದ ದೇಶದ ಚಿಲ್ಲರೆ ಹಣದುಬ್ಬರವು ಆಗಸ್ಟ ತಿಂಗಳಿನಲ್ಲಿ ಶೇ 2.07ಕ್ಕೆ ಏರಿಕೆಯಾಗಿದೆ ಎಂದು ರಾಷ್ಟ್ರೀಯ ಸಾಂಖ್ಯಿಕ ಕಚೇರಿ (ಎನ್‌ಎಸ್‌ಒ) ತಿಳಿಸಿದೆ.

- ಚಿಲ್ಲರೆ ಹಣದುಬ್ಬರ ಪ್ರಮಾಣವು ಜುಲೈನಲ್ಲಿ ಶೇ 1.61ರಷ್ಟಿತ್ತು. 2024ರ ಆಗಸ್ಟ್‌ನಲ್ಲಿ ಶೇ 3.65ರಷ್ಟಿತ್ತು. 9 ತಿಂಗಳಿನಿಂದ ಇಳಿಕೆ ಕಂಡಿದ್ದ ಹಣ ದುಬ್ಬರವು ಈಗ ಸ್ವಲ್ಪ ಏರಿಕೆಯಾಗಿದೆ. ನವೆಂಬರ್‌ನಲ್ಲಿ ಶೇ 5.48 ದಾಖಲಾಗಿತ್ತು.
- ತರಕಾರಿಗಳು, ಮಾಂಸ, ಮೀನು, ಮೊಟ್ಟೆ, ಎಣ್ಣೆ ಮತ್ತು ವೈಯಕ್ತಿಕ ಬಳಕೆ ವಸ್ತುಗಳ ಬೆಲೆ ಏರಿಕೆಯಿಂದ ಹಣ ದುಬ್ಬರ ಏರಿಕೆಯಾಗಿದೆ ಎಂದು ತಿಳಿಸಿದೆ.
- **ಗ್ರಾಹಕ ಬೆಲೆ ಸೂಚ್ಯಂಕ (ಸಿಪಿಐ) ಆಧಾರಿತ ಚಿಲ್ಲರೆ ಹಣದುಬ್ಬರ ಪ್ರಮಾಣವು ಶೇ 4ರ ಹಂತದಲ್ಲಿ ಇರಬೇಕು, ಅದು ಶೇ 2ಕ್ಕಿಂತ ಕಡಿಮೆ ಆಗಬಾರದು ಎಂಬುದು ಆರ್‌ಬಿಐಗೆ ಕೇಂದ್ರ ಸರ್ಕಾರ ನಿಗದಿ ಮಾಡಿರುವ ಗುರಿ.**
- ದೇಶದ ಗ್ರಾಮೀಣ ಪ್ರದೇಶದಲ್ಲಿ ಹಣದುಬ್ಬರವು ಜುಲೈನಲ್ಲಿ ಶೇ 1.18ರಷ್ಟಿತ್ತು. ಆಗಸ್ಟ್‌ನಲ್ಲಿ ಶೇ 1.69ಕ್ಕೆ ಏರಿಕೆಯಾಗಿದೆ. ಇದೇ ಅವಧಿಯಲ್ಲಿ ನಗರ ಪ್ರದೇಶದಲ್ಲಿ ಶೇ 2.1ರಿಂದ ಶೇ 2.47ಕ್ಕೆ ಹೆಚ್ಚಳವಾಗಿದೆ.
- 'ಆಹಾರ ಮತ್ತು ಪಾನೀಯ ವಿಭಾಗದ ವಸ್ತುಗಳ ದರದಲ್ಲಿನ ಹೆಚ್ಚಳದಿಂದ ಹಣದುಬ್ಬರವು ಆಗಸ್ಟ್‌ನಲ್ಲಿ ಹೆಚ್ಚಾಗಿದೆ' ಎಂದು ಐಸಿಆರ್‌ಎ ಸಂಸ್ಥೆಯ ಮುಖ್ಯ ಅರ್ಥಶಾಸ್ತ್ರಜ್ಞೆ ಅದಿತಿ ನಾಯರ್ ಹೇಳಿದ್ದಾರೆ. ಇತ್ತೀಚೆಗೆ ಸುರಿದ ಹೆಚ್ಚಿನ ಮಳೆ ಮತ್ತು ದೇಶದ ಕೆಲವು ಭಾಗದಲ್ಲಿ ಉಂಟಾದ ಪ್ರವಾಹವು ಬೆಳೆಯ ಇಳುವರಿ ಮೇಲೆ ಪರಿಣಾಮ ಬೀರಬಹುದು. ಇದರಿಂದ ದರವು ಹೆಚ್ಚಳವಾಗಬಹುದು ಎಂದು ತಿಳಿಸಿದ್ದಾರೆ.

**ಕರ್ನಾಟಕಕ್ಕೆ ಎರಡನೇ ಸ್ಥಾನ**

- ಅತಿ ಹೆಚ್ಚು ಹಣದುಬ್ಬರ ಹೊಂದಿರುವ ರಾಜ್ಯಗಳ ಪೈಕಿ ಕರ್ನಾಟಕ ಎರಡನೇ ಸ್ಥಾನದ ಲ್ಲಿದ್ದು, ಶೇ 3.81ರಷ್ಟಿದೆ.
- **ಮೊದಲ ಸ್ಥಾನದಲ್ಲಿ ಕೇರಳ ಶೇ 9.04 ಹೊಂದಿದ್ದರೆ, ಅಸ್ಸಾಂನಲ್ಲಿ ಅತಿ ಕಡಿಮೆ ಹಣದುಬ್ಬರ (–) ಶೇ 0.66 ಇದೆ.**

## ❖ ಎ.ಐನಿಂದ ಕೃಷಿ ಕ್ಷೇತ್ರದಲ್ಲಿ ಕ್ರಾಂತಿ: ಸಚಿವ ನಿತಿನ್ ಗಡ್ಕರಿ

**ಸಂದರ್ಭ:** 'ಕೃಷಿ ವಲಯದಲ್ಲಿ ಕೃತಕ ಬುದ್ಧಿಮತ್ತೆ (ಎ.ಐ) ತಂತ್ರಜ್ಞಾನವು ಕ್ರಾಂತಿಕಾರಕ ಬದಲಾವಣೆ ತರಲಿದ್ದು, ಇದರಿಂದ ರೈತರ ಜೀವನ ಮಟ್ಟ ಸುಧಾರಿಸಲಿದೆ.

- 'ಸದ್ಯ ದೇಶದಲ್ಲಿ 350ರಿಂದ 400 ಕಾರ್ಖಾನೆಗಳು ಎಥೆನಾಲ್ ಉತ್ಪಾದಿಸುತ್ತಿವೆ. ಜೋಳದಿಂದ ಎಥೆನಾಲ್ ಉತ್ಪಾದಿಸುವುದರಿಂದ ರೈತರಿಗೆ ₹45 ಸಾವಿರ ಕೋಟಿಯಷ್ಟು ಆದಾಯ ಸಿಗುತ್ತಿದೆ. ಮೊದಲು ಜೋಳಕ್ಕೆ ಕ್ವಿಂಟಲ್‌ಗೆ ₹1,200 ದರ ಇತ್ತು. ಈಗ ಅದು ₹2,800ಕ್ಕೆ ಏರಿಕೆಯಾಗಿದೆ.

## ❖ ₹882 ಕೋಟಿ ವೆಚ್ಚದಲ್ಲಿ ಸೌರಕೋಶ ಘಟಕ

**ಸಂದರ್ಭ:** 'ಜಪಾನಿನ ಹೊಸಾಡಾ ಹೋಲ್ಡಿಂಗ್ಸ್ ಕಂಪನಿಯು ರಾಜ್ಯದಲ್ಲಿ ಸೌರಕೋಶ ತಯಾರಿಕಾ ಘಟಕವನ್ನು ಸ್ಥಾಪಿಸಲು ₹882 ಕೋಟಿ ಹೂಡಿಕೆ ಮಾಡಲಿದೆ.

- ಬಂಡವಾಳ ಆಕರ್ಷಣೆಗಾಗಿ ಜಪಾನ್ ಪ್ರವಾಸದಲ್ಲಿರುವ ಎಂ.ಬಿ.ಪಾಟೀಲರು ಹೋಸಾಡಾ ಹೋಲ್ಡಿಂಗ್ಸ್ ಅಧ್ಯಕ್ಷ ನಕಾಮುರಾ ಸ್ಯಾನ್ ಅವರ ಭೇಟಿಯ ನಂತರ ಈ ಮಾಹಿತಿ ನೀಡಿದ್ದಾರೆ.
- 'ತೋಂಗ್ ತರ್ ಎನರ್ಜಿ ಸೊಲ್ಯೂಷನ್ಸ್ (ಟಿಟಿಇಎಸ್) ಸಹಯೋಗದಲ್ಲಿ ಈ ಯೋಜನೆ ಕಾರ್ಯಗತವಾಗಲಿದೆ. ಫೆಬ್ರುವರಿಯಲ್ಲಿ ನಡೆದಿದ್ದ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಟಿಟಿಇಎಸ್ ಕಂಪನಿಯು ₹490 ಕೋಟಿ ವೆಚ್ಚದಲ್ಲಿ ಘಟಕ ಆರಂಭಿಸಲು ಒಪ್ಪಂದಕ್ಕೆ ಸಹಿ ಹಾಕಿತ್ತು. ಈಗ ಹೊಸಾಡಾ ಹೋಲ್ಡಿಂಗ್ಸ್ ಸಹಯೋಗದಲ್ಲಿ ಒಟ್ಟು ₹882 ಕೋಟಿ ಹೂಡಿಕೆ ಆಗಲಿದೆ' ಎಂದು ಮಾಹಿತಿ ನೀಡಿದ್ದಾರೆ.
- 'ಸೌರಫಲಕಗಳಲ್ಲಿ ಬಳಸುವ ಸೌರಕೋಶಗಳ ತಯಾರಿಕೆಯಲ್ಲಿ ಇದು ಮಹತ್ವದ ಮೈಲುಗಲ್ಲಾಗಲಿದೆ. ದೇಶದ ಸೌರಕೋಶಗಳ ಬೇಡಿಕೆ ಪೂರೈಸುವಲ್ಲಿ ರಾಜ್ಯಕ್ಕೆ ಮಹತ್ವದ ಸ್ಥಾನ ದೊರೆಯಲಿದೆ. ಈ ಘಟಕದಿಂದ 500 ಉದ್ಯೋಗಗಳು ಸೃಷ್ಟಿಯಾಗಲಿವೆ' ಎಂದಿದ್ದಾರೆ.
- 'ಕ್ರೀಡಾ ಪರಿಕರಗಳ ತಯಾರಿಕಾ ಕಂಪನಿ ಇನಾಬತಾವು ರಾಜ್ಯದಲ್ಲಿ ತನ್ನ ಘಟಕ ಸ್ಥಾಪಿಸಲಿದ್ದು, 2027ರಲ್ಲಿ ಅದು ಕಾರ್ಯಾರಂಭ ಮಾಡುವ ನಿರೀಕ್ಷೆ ಇದೆ. ಡೈ ತಯಾರಿಕಾ ಕಂಪನಿ ಟೆತ್ಸುಜಿಕಾವಾ ರಾಜ್ಯದಲ್ಲಿನ ತನ್ನ ಘಟಕವನ್ನು ವಿಸ್ತರಿಸುವ ಬಗ್ಗೆ ಆಸಕ್ತಿ ತೋರಿಸಿದೆ' ಎಂದು ಹೇಳಿದ್ದಾರೆ.

## ❖ 'ಯುರೋಪ್ ಅಡ್ಡಿ: ಮಾತುಕತೆ ಸ್ಥಗಿತ'

**ಸಂದರ್ಭ:**'ರಷ್ಯಾ–ಉಕ್ರೇನ್ ಸಂಘರ್ಷ ಕೊನೆಗೊಳಿಸಿ, ಶಾಂತಿ ಸ್ಥಾಪಿಸುವ ಮಾತುಕತೆಯೂ ಸ್ಥಗಿತಗೊಂಡಿದ್ದು, ಐರೋಪ್ಯ ದೇಶಗಳು ಈ ಪ್ರಕ್ರಿಯೆಗೆ ಅಡ್ಡಿಪಡಿಸುತ್ತಿವೆ' ಎಂದು ಕ್ರೆಮ್ಲಿನ್ ತಿಳಿಸಿದೆ.

- ಮಾತುಕತೆಗೆ ರಷ್ಯಾವೂ ಈಗಲೂ ಸಿದ್ಧವಿದೆ ಎಂದು ಸ್ಪಷ್ಟಪಡಿಸಿದೆ.
- ರಷ್ಯಾ ಹಾಗೂ ಉಕ್ರೇನ್‌ನ ಸಂಧಾನಕಾರರು ಈ ವರ್ಷದಲ್ಲಿ ಇಸ್ತಾಂಬುಲ್‌ನಲ್ಲಿ ಮೂರು ಸುತ್ತಿನ ಮಾತುಕತೆ ನಡೆಸಿದ್ದರು. ಜುಲೈ 23ರಂದು ನಡೆದ ಕೊನೆಯ ಮಾತುಕತೆಯಲ್ಲಿ ಯುದ್ಧದಲ್ಲಿ ಸಿಕ್ಕಿಬಿದ್ದ ಯುದ್ಧ ಕೈದಿಗಳು ಹಾಗೂ ಮೃತಪಟ್ಟ ಯೋಧರ ದೇಹಗಳ ಹಸ್ತಾಂತರ ಸಂಬಂಧ ಹಲವು ಮಾತುಕತೆಗಳು ನಡೆದಿದ್ದವು.
- ಉಕ್ರೇನ್ 'ವಾಸ್ತವ ಸ್ಥಿತಿಗಳನ್ನು ಒಪ್ಪಿಕೊಳ್ಳುತ್ತಿಲ್ಲ' ಎಂದು ರಷ್ಯಾ ಆರೋಪಿಸಿದೆ. ತನಗೆ ಸೇರಿದ ಜಾಗವನ್ನು ವಶಕ್ಕೆ ಪಡೆಯಲು ರಷ್ಯಾವು ಹೆಚ್ಚು ಆಸಕ್ತಿ ತೋರಿಸುತ್ತಿದೆ ಎಂದು ಉಕ್ರೇನ್ ದೂರಿದೆ.
- ಈ ಮಧ್ಯೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಉಭಯ ರಾಷ್ಟ್ರಗಳ ನಡುವೆ ಕದನ ವಿರಾಮ ಒಪ್ಪಂದ ಏರ್ಪಡಿಸಲು ನಡೆಸಿದ ಪ್ರಯತ್ನಗಳು ಕೂಡ ಫಲ ನೀಡಿಲ್ಲ.
- 'ಮಾತುಕತೆ ಮಾರ್ಗವೂ ಸಿದ್ಧ ಗೊಂಡಿದ್ದು, ಕಾರ್ಯನಿರ್ವಹಿಸುತ್ತಿವೆ. ಆದರೆ, ಯುರೋಪ್ ರಾಷ್ಟ್ರಗಳು ಇದಕ್ಕೆ ಅಡ್ಡಿಯಾಗುತ್ತಿವೆ' ಎಂದು ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ್ ತಿಳಿಸಿದ್ದಾರೆ.

## ❖ ನೇಪಾಳ: ಸುಶೀಲಾ ಕಾರ್ಕಿ ಪ್ರಧಾನಿ

**ಸಂದರ್ಭ:** ನೇಪಾಳದಲ್ಲಿ ಮಧ್ಯಂತರ ಸರ್ಕಾರ ಅಸ್ತಿತ್ವಕ್ಕೆ ಬಂದಿದ್ದು, ಸುಪ್ರೀಂ ಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕಾರ್ಕಿ (73) ಅವರು ನೂತನ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ.

- 'ಜೆನ್–ಝಿ' ಪ್ರತಿಭಟನೆಯಿಂದಾಗಿ ಈ ವಾರದ ಆರಂಭದಲ್ಲಿ ಪ್ರಧಾನಿ ಕೆ.ಪಿ. ಶರ್ಮಾ ಒಲಿ ಅವರ ದಿಢೀರ್ ರಾಜೀನಾಮೆಯ ನಂತರ ನೇಪಾಳದಲ್ಲಿ ತಲೆತೋರಿದ್ದ ರಾಜಕೀಯ ಅನಿಶ್ಚಿತತೆಗೆ ಇದರೊಂದಿಗೆ ತೆರೆಬಿದ್ದಂತಾಗಿದೆ.
- ಸಂಸತ್ತು ವಿಸರ್ಜನೆ: ನೇಪಾಳ ಸಂಸತ್ತನ್ನು ಶುಕ್ರವಾರ ತಡರಾತ್ರಿ ವಿಸರ್ಜಿಸಲಾಯಿತು. 'ಪ್ರಧಾನ ಮಂತ್ರಿಯ ಶಿಫಾರಸಿನ ಮೇರೆಗೆ ಸಂಸತ್ತನ್ನು ವಿಸರ್ಜಿಸಲಾಗಿದೆ. 2026ರ ಮಾರ್ಚ್ 5ರಂದು ಸಾರ್ವತ್ರಿಕ ಚುನಾವಣೆ ನಡೆಯಲಿದೆ' ಎಂದು ಅಧ್ಯಕ್ಷರ ಕಚೇರಿ ತಿಳಿಸಿದೆ.

## ❖ 'ದೇಶದಾದ್ಯಂತ ಪಟಾಕಿ ನಿಷೇಧಿಸಿ'

**ಸಂದರ್ಭ:** ದೆಹಲಿಯಲ್ಲಿ ಮಾತ್ರ ಪಟಾಕಿ ನಿಷೇಧ ಮಾಡಿರುವುದನ್ನು ಪ್ರಶ್ನಿಸಿದ ಸುಪ್ರೀಂ ಕೋರ್ಟ್, ದೇಶದಾದ್ಯಂತ ಈ ಬಗ್ಗೆ ನಿಯಮ ರೂಪಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟಿದೆ.

- 'ಶುದ್ಧ ಗಾಳಿಯನ್ನು ಪಡೆಯುವುದು ದೆಹಲಿ ಜನರ ಹಕ್ಕಾಗಿದ್ದರೆ, ದೇಶದ ಇತರ ನಾಗರಿಕರಗೂ ಆ ಹಕ್ಕು ಇರುತ್ತದೆ' ಎಂದು ಮುಖ್ಯ ನ್ಯಾಯಮೂರ್ತಿ ಬಿ.ಆರ್ ಗವಾಯಿ ಮತ್ತು ನ್ಯಾಯಮೂರ್ತಿ ಕೆ. ವಿನೋದ್ ಚಂದ್ರನ್ ಅವರಿದ್ದ ಪೀಠ ತಿಳಿಸಿದೆ.
- ದೆಹಲಿಯಲ್ಲಿ ಪಟಾಕಿ ನಿಷೇಧ ಕುರಿತ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ, 'ಈ ರೀತಿಯ ನಿಯಮಗಳು ದೇಶದಾದ್ಯಂತ ಇರಬೇಕು. ಇದನ್ನು ಕೇವಲ ದೆಹಲಿಗೆ ಸೀಮಿತಗೊಳಿಸಬಾರದು. ಯಾಕೆಂದರೆ, ಉಳಿದವರೂ ಈ ದೇಶದ ನಾಗರಿಕರು' ಎಂದು ನ್ಯಾಯಪೀಠ ಹೇಳಿದೆ.

## ❖ ಪಕ್ಷಗಳ ನಿಯಂತ್ರಣಕ್ಕೆ ನಿಯಮ: ಆಯೋಗಕ್ಕೆ ನೋಟಿಸ್

**ಸಂದರ್ಭ:** ಜಾತ್ಯತೀತ, ಪಾರದರ್ಶಕ ಮತ್ತು ನ್ಯಾಯವನ್ನು ಉತ್ತೇಜಿಸಲು ರಾಜಕೀಯ ಪಕ್ಷಗಳ ನೋಂದಣಿ ಮತ್ತು ನಿಯಂತ್ರಣಕ್ಕಾಗಿ ನಿಯಮಗಳನ್ನು ರೂಪಿಸುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಗೆ ಸಂಬಂಧಿಸಿದಂತೆ ಚುನಾವಣಾ ಆಯೋಗಕ್ಕೆ ಸುಪ್ರೀಂ ಕೋರ್ಟ್ ನೋಟಿಸ್ ಜಾರಿ ಮಾಡಿದೆ.

- ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಮತ್ತು ಜಾಯ್‌ಮಾಲ್ಯ ಬಾಗ್ಚಿ ಅವರ ಪೀಠವು ಈ ಅರ್ಜಿಯನ್ನು ವಿಚಾರಣೆಗೆ ಪರಿಗಣಿಸಲು ನಿರ್ಧರಿಸಿತು. ಅಲ್ಲದೆ ಅರ್ಜಿಯು ನೋಂದಾಯಿತ ರಾಷ್ಟ್ರೀಯ ರಾಜಕೀಯ ಪಕ್ಷಗಳನ್ನು ಒಳಗೊಳ್ಳುವಂತೆ ಉಲ್ಲೇಖಿಸಲು ಪೀಠವು ಅರ್ಜಿದಾರ ಅಶ್ವಿನಿ ಉಪಾಧ್ಯಾಯ ಅವರಿಗೆ ಹೇಳಿತು.
- ಈ ಅರ್ಜಿ ಕುರಿತು ಪ್ರತಿಕ್ರಿಯಿಸುವಂತೆ ಕೇಂದ್ರ ಸರ್ಕಾರ, ಭಾರತ ಕಾನೂನು ಆಯೋಗಕ್ಕೂ ಪೀಠ ನೋಟಿಸ್ ಜಾರಿ ಮಾಡಿತು.
- **ದೇಶದಲ್ಲಿ ರಾಜಕೀಯ ಪಕ್ಷಗಳಿಗೆ ಯಾವುದೇ ನಿಯಮ ಮತ್ತು ನಿಬಂಧನೆಗಳಿಲ್ಲ. ಇದರಿಂದಾಗಿ ಅನೇಕ ಪ್ರತ್ಯೇಕತಾವಾದಿಗಳು ದೇಣಿಗೆ ಸಂಗ್ರಹಿಸಲು ತಮ್ಮದೇ ಆದ ರಾಜಕೀಯ ಪಕ್ಷಗಳನ್ನು ರಚಿಸಿಕೊಂಡಿದ್ದಾರೆ. ಈ ಪಕ್ಷಗಳ ಕೆಲ ಪದಾಧಿಕಾರಿಗಳು ಪೊಲೀಸರ ರಕ್ಷಣೆಯನ್ನೂ ಪಡೆಯುತ್ತಿದ್ದಾರೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ.**

Dr. Rajkumar IAS/KAS Academy

## ❖ 'ಮಗಳ ವಿವಾಹದ ವೆಚ್ಚ ಭರಿಸುವುದು ತಂದೆಯ ಕರ್ತವ್ಯ'

**ಸಂದರ್ಭ:** ಮಗಳ ವಿವಾಹದ ವೆಚ್ಚ ಭರಿಸುವುದು ತಂದೆಯ ಕರ್ತವ್ಯ ವಾಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ದಂಪತಿಯ ವಿಚ್ಛೇದನಕ್ಕೆ ಸಂಬಂಧಿಸಿದ ಪ್ರಕರಣದ ವಿಚಾರಣೆ ವೇಳೆ ಈ ಅಭಿಪ್ರಾಯ ವ್ಯಕ್ತಪಡಿಸಿದೆ.

- ಮಗಳ ಮದುವೆಯ ಖರ್ಚಿಗಾಗಿ ₹10 ಲಕ್ಷ ನೀಡುವಂತೆ ತಂದೆಗೆ ಸೂಚಿಸಿದ ಪೀಠ, ದಂಪತಿಯ ವಿಚ್ಛೇದನಕ್ಕೆ ಕುಟುಂಬ ನ್ಯಾಯಾಲಯವು ನೀಡಿದ್ದ ಅನುಮತಿಯನ್ನು ಎತ್ತಿಹಿಡಿಯಿತು.
- ವಿಚ್ಛೇದನದ ವಿರುದ್ಧ ಮಹಿಳೆಯೊಬ್ಬರು ಸಲ್ಲಿಸಿದ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠ ನಡೆಸಿತು. 1996ರಲ್ಲಿ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದ ಜೋಡಿಯ ಸಂಬಂಧ ಸಂಪೂರ್ಣ ಬೇರ್ಪಟ್ಟಿರುವುದು ಮತ್ತು ಮಧ್ಯಸ್ಥಿಕೆಯ ಪ್ರಯತ್ನ ವಿಫಲವಾಗಿರುವುದನ್ನು ಪೀಠವು ಗಮನಿಸಿತು.
- 'ಸಂಗಾತಿಯೊಂದಿಗಿನ ಭಿನ್ನಾಭಿಪ್ರಾಯದ ಹೊರತಾಗಿಯೂ ತನ್ನ ಮಗಳ ವಿವಾಹದ ವೆಚ್ಚಗಳನ್ನು ಭರಿಸುವುದು ಪುರುಷನ ಕರ್ತವ್ಯವಾಗಿದೆ. ಆದ್ದರಿಂದ ಈ ಉದ್ದೇಶಕ್ಕಾಗಿ ₹10 ಲಕ್ಷವನ್ನು ನೀಡಬೇಕೆಂದು ಬಯಸುತ್ತೇವೆ' ಎಂದು ಪೀಠ ತಿಳಿಸಿತು.
- ದಂಪತಿಯ ವಿಚ್ಛೇದನಕ್ಕೆ ಅನುಮತಿ ನೀಡಿ ಕುಟುಂಬ ನ್ಯಾಯಾಲಯವು 2019ರಲ್ಲಿ ಹಾಗೂ ದೆಹಲಿ ಹೈಕೋರ್ಟ್ 2023ರಲ್ಲಿ ನೀಡಿದ್ದ ತೀರ್ಪಿನಲ್ಲಿ ಮಧ್ಯ ಪ್ರವೇಶಿಸುವುದಿಲ್ಲ ಎಂದು ಪೀಠ ಸ್ಪಷ್ಟಪಡಿಸಿತು.

## ❖ ಸಭಾಪತಿಯಾಗಿ ರಾಧಾಕೃಷ್ಣನ್ ಪದಗ್ರಹಣ

**ಸಂದರ್ಭ:** ನೂತನ ಉಪರಾಷ್ಟ್ರಪತಿಯಾಗಿ ಪ್ರಮಾಣವಚನ ಸ್ವೀಕರಿಸಿದ ಸಿ.ಪಿ.ರಾಧಾಕೃಷ್ಣನ್ ಅವರು, ರಾಜ್ಯಸಭೆಯ ಸಭಾಪತಿಯಾಗಿ ಪದಗ್ರಹಣ ಮಾಡಿದರು.

- ರಾಜ್ಯಸಭೆ ಸಭಾಪತಿಗಳ ಕಚೇರಿಗೆ ತೆರಳಿದ ರಾಧಾಕೃಷ್ಣನ್ ಅವರು ಮೇಲ್ಮನೆಯ ಚುನಾವಣಾಧಿಕಾರಿ ಕಚೇರಿಯಲ್ಲಿ ಪದಗ್ರಹಣ ದಾಖಲೆಗಳಿಗೆ ಸಹಿ ಮಾಡಿದರು. ಗೃಹ ಇಲಾಖೆಯೂ ಉಪರಾಷ್ಟ್ರಪತಿಯಾಗಿ ರಾಧಾಕೃಷ್ಣನ್ ಅವರ ಪದಗ್ರಹಣ ಸಂಬಂಧ ಪ್ರತ್ಯೇಕ ಅಧಿಸೂಚನೆಯನ್ನೂ ಹೊರಡಿಸಿತು.

-----------------------------------------------ಶುಭವಂದನೆಗಳು -----------------------------------------------

